23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 301 | ನವದೆಹಲಿ | ಬೆಲೆ ₹10 | ಮೇ 7 2026, ಗುರುವಾರ

## ಒಳಪುಟಗಳಲ್ಲಿ

ಫಲಿತಾಂಶದ ಬಳಿಕ ಬಂಗಾಳದಲ್ಲಿ ಹಿಂಸಾಚಾರ ಹೆಚ್ಚಳ - ಪು.4



ಗೌನ್ ಧರಿಸಿದ ವಕೀಲೆಗೆ ನ್ಯಾಯಮೂರ್ತಿ ತರಾಟೆ - ಪು.5

ಕೇಂದ್ರ ವಿತ್ತ ಸಚಿವೆ ನಕಲಿ ವೀಡಿಯೋ ಸೃಷ್ಟಿಸಿ ವೃದ್ಧರಿಗೆ ವಂಚನೆ - ಪು.6

ಶ್ರಮಿಕ ವರ್ಗದಿಂದಲೇ ದೇಶದ ಪ್ರಗತಿ: ಡಾ.ಬೆಲ್ದಾಳೆ - ಪು.7

# ಅತಂತ್ರ ಫಲಿತಾಂಶ: ವಿಜಯ್ ಪಟ್ಟಾಭಿಷೇಕಕ್ಕೆ ತೊಡಕು

## ಸರ್ಕಾರ ರಚನೆಗೆ ಹಕ್ಕು ಮಂಡಿಸಿದ ದಳಪತಿ, ಪೂರ್ಣ ಸಂಖ್ಯೆಯೊಂದಿಗೆ ಬನ್ನಿ ಎಂದ ರಾಜ್ಯಪಾಲ ರಾಜೇಂದ್ರ ಅರ್ಲೇಕರ್

**ಚೆನ್ನೈ, ಮೇ 6: 112 ಶಾಸಕರ ಬೆಂಬಲವಿರುವ ನಟ–ರಾಜಕಾರಣಿ ವಿಜಯ್ ಅವರು ಬುಧವಾರ ರಾಜಭವನಕ್ಕೆ ತೆರಳಿ ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅವರನ್ನು ಭೇಟಿ ಮಾಡಿ ನೂತನ ಸರ್ಕಾರ ರಚನೆಗೆ ಹಕ್ಕು ಮಂಡಿಸಿದ್ದಾರೆ.**

**ಆದರೆ ಅದು ಸಾಕಾಗುವುದಿಲ್ಲ, 118 ಸದಸ್ಯರೊಂದಿಗೆ ಬನ್ನಿ ಎಂದು ರಾಜ್ಯಪಾಲ ರಾಜೇಂದ್ರ ಅರ್ಲೇಕರ್ ವಿಜಯ್ ಹೇಳಿದ್ದು, ಹೊಸ ರೀತಿಯ ರಾಜಕೀಯ ಹೈಡ್ರಾಮಕ್ಕೆ ನಾಂದಿ ಹಾಡುವರೇ ಎಂಬ ಅನುಮಾನಕ್ಕೆ ಎಡೆಮಾಡಿಕೊಟ್ಟಿದೆ.**

ಐವರು ಶಾಸಕರನ್ನು ಹೊಂದಿರುವ ಕಾಂಗ್ರೆಸ್‌ನಿಂದ ಬೆಂಬಲವನ್ನು ಪಡೆದುಕೊಂಡಿದ್ದೇನೆ ಎಂದು ವಿಜಯ್ ಮೌಖಿಕವಾಗಿ ಹೇಳಿದ್ದಾರೆ. ಆದರೆ, ಸಂಖ್ಯಾಬಲವನ್ನು ಹೆಚ್ಚಿಸಲು ಸಮಯ ಕೇಳಿರುವುದಾಗಿ ಮೂಲಗಳು ತಿಳಿಸಿವೆ.

ಭಾರತೀಯ ಸಂವಿಧಾನದ 164(1) ನೇ ವಿಧಿಯು ರಾಜ್ಯಪಾಲರಿಗೆ ಮುಖ್ಯಮಂತ್ರಿಯನ್ನು ನೇಮಿಸುವ ಅಧಿಕಾರವನ್ನು ನೀಡುತ್ತದೆ. ಅತಂತ್ರ ವಿಧಾನಸಭೆಯ ಸಂದರ್ಭದಲ್ಲಿ ಮುಖ್ಯಮಂತ್ರಿ ಕುರ್ಚಿಗೆ ಸರಿಯಾದ ಅಭ್ಯರ್ಥಿಯನ್ನು ನಿರ್ಧರಿಸಲು ಸಂವಿಧಾನವು ರಾಜ್ಯಪಾಲರಿಗೆ ವಿವೇಚನಾ ಅಧಿಕಾರ ನೀಡುತ್ತದೆ. ಅನೇಕ ರಾಜ್ಯಗಳಲ್ಲಿ ರಾಜ್ಯಪಾಲರು ಸಂಖ್ಯಾಬಲ ಕೊರತೆಯಿದ್ದರೂ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿರುವ ಪಕ್ಷದ ನಾಯಕನನ್ನು ಸರ್ಕಾರ ರಚಿಸಲು ಆಹ್ವಾನಿಸಿರುವ ನಿದರ್ಶನಗಳಿವೆ.

ಈ ಹಿಂದೆ 2018 ರಲ್ಲಿ ಕರ್ನಾಟಕದ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಬಿಜೆಪಿ 104 ಸೀಟುಗಳನ್ನು ಗೆಲ್ಲುವ ಮೂಲಕ ಅತ್ಯಂತ ದೊಡ್ಡ ಪಕ್ಷವಾಗಿ ಹೊರಹೊಮ್ಮಿತ್ತು. ಆದರೆ, ಮ್ಯಾಜಿಕ್ ನಂಬರ್ 113 ದಾಟುವಲ್ಲಿ ವಿಫಲವಾಗಿತ್ತು. ಆಗ 80 ಸ್ಥಾನ ಗಳಿಸಿದ್ದ ಕಾಂಗ್ರೆಸ್ 37 ಸ್ಥಾನಗಳನ್ನು ಪಡೆದಿದ್ದ ಜೆಡಿಎಸ್‌ಗೆ ಬೆಂಬಲ ನೀಡಿತ್ತು. ಆದರೆ ಆಗಿನ ರಾಜ್ಯಪಾಲರಾಗಿದ್ದ ವಜೂಭಾಯಿವಾಲಾ, ಬಿಎಸ್ ಯಡಿಯೂರಪ್ಪ ಅವರನ್ನು ಸರ್ಕಾರ ರಚನೆಗೆ ಕರೆದಿದ್ದರು. ಸರ್ಕಾರ ರಚನೆಯಾಗಿ ಮೂರು ದಿನವಾಗಿದ್ದಾಗ ಕೂಡಲೇ



ವಿಶ್ವಾಸಮತ ಯಾಚಿಸುವಂತೆ ಸುಪ್ರೀಂಕೋರ್ಟ್ ಆದೇಶ ನೀಡಿತ್ತು. ಬಿಜೆಪಿಗೆ ಸೂಕ್ತ ಬೆಂಬಲ ಇಲ್ಲದಿದ್ದುರಿಂದ ಬಹುಮತ ತೋರಿಸುವಲ್ಲಿ ವಿಫಲವಾಯಿತು. ಈ ನಿದರ್ಶನವನ್ನು ಗಮನಿಸಿದರೆ ತಮಿಳುನಾಡು ರಾಜ್ಯಪಾಲ ಅರ್ಲೇಕರ್ ಮೊದಲು ವಿಜಯ್ ಅವರನ್ನು ಅಲ್ಪಸಂಖ್ಯಾತ ಸರ್ಕಾರ ರಚಿಸಲು ಆಹ್ವಾನಿಸಬಹುದು. ತದನಂತರ ಬಹುಮತ ಸಾಬೀತುಪಡಿಸಲು ಸೂಚಿಸಬಹುದಾಗಿದೆ.

ವಿಜಯ್ ಅವರ ತಮಿಳಗ ವೆಟ್ರಿ ಕಳಗಂ (ಟಿವಿಕೆ) 234 ಸ್ಥಾನಗಳಲ್ಲಿ 108 ಸ್ಥಾನಗಳನ್ನು ಗೆದ್ದುಕೊಂಡಿದೆ. ಆದರೆ ಬಹುಮತಕ್ಕೆ 10 ಸ್ಥಾನಗಳ ಕೊರತೆಯಿದೆ. ಮಿತ್ರಪಕ್ಷಗಳು ಇನ್ನೂ ಬೆಂಬಲ ಘೋಷಿಸಿಲ್ಲ. ಡಿಎಂಕೆ ಮಿತ್ರಪಕ್ಷವಾಗಿರುವ ವಿದುತಲೈ ಚಿರುತೈಗಲ್ ಕಚ್ಚಿ (ವಿಸಿಕೆ) ಗುರುವಾರ ಬೆಳಗ್ಗೆ 10 ಗಂಟೆಗೆ ಪ್ರಮುಖ ಸಭೆ ನಡೆಸಲಿದೆ. ಬಳಿಕ ತೀರ್ಮಾನ ತೆಗೆದುಕೊಳ್ಳಲಿದೆ ಎನ್ನಲಾಗಿದೆ.

ಎಡಪಕ್ಷಗಳು ಶುಕ್ರವಾರ ತಮ್ಮ ನಿರ್ಧಾರ ತಿಳಿಸುವುದಾಗಿ ಹೇಳಿವೆ. ವಿಸಿಕೆ ಮತ್ತು ಎಡಪಕ್ಷಗಳೆರಡೂ ಡಿಎಂಕೆ ನೇತೃತ್ವದ ಜಾತ್ಯತೀತ ಪ್ರಗತಿಪರ ಒಕ್ಕೂಟದ (ಎಸ್‌ಪಿಎ) ಭಾಗವಾಗಿದೆ. ಹೀಗಾಗಿ ವಿಜಯ್ ಸರ್ಕಾರ ರಚನೆಗೆ ಹಕ್ಕು ಮಂಡಿಸಿದ್ದಾರೆ. ಆದರೆ ಸಿಎಂ ಕುರ್ಚಿ ಪಡೆಯಲು ಇನ್ನೂ ಕಸರತ್ತು ಮಾಡುವಂತಾಗಿದೆ.

### ಇಂದು ಪ್ರಮಾಣವಚನ ಸ್ವೀಕಾರ ಸಾಧ್ಯತೆ ಕಡಿಮೆ?

ಸರ್ಕಾರ ರಚನೆ ವಿಷಯದ ಬಗ್ಗೆ ಟಿವಿಕೆ ಸಂಸ್ಥಾಪಕ ವಿಜಯ್ ಅವರು ಹೊಸ ಪತ್ರ ಬರೆದಿದ್ದಾರೆ ಮತ್ತು ಮೇ 7 ರಂದು ಬೆಳಗ್ಗೆ 11.30 ಕ್ಕೆ ಪ್ರಮಾಣವಚನ ಸ್ವೀಕಾರ ಸಮಾರಂಭವನ್ನು ನಡೆಸುವಂತೆ ರಾಜ್ಯಪಾಲರನ್ನು ವಿನಂತಿಸಿದ್ದಾರೆ ಎಂದು ಟಿವಿಕೆ ಮೂಲ ತಿಳಿಸಿದೆ. ಏತನ್ಮಧ್ಯೆ, ಚೆನ್ನೈನ ನೆಹರೂ ಕ್ರೀಡಾಂಗಣದಲ್ಲಿ ಪ್ರಮಾಣ ವಚನ ಸ್ವೀಕಾರ ಸಮಾರಂಭಕ್ಕೆ ಭರ್ಜರಿ ಸಿದ್ಧತೆಗಳು ನಡೆಯುತ್ತಿದ್ದು, ಸರ್ಕಾರ ರಚನೆ ಹಕ್ಕು ಮಂಡಿಸಿರುವ ತಮಿಳುಗ ವೆಟ್ರಿ ಕಳಗಂ (ಟಿವಿಕೆ) ಮುಖ್ಯಸ್ಥ ವಿಜಯ್ ಗುರುವಾರ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸುವ ಸಾಧ್ಯತೆ ಕಡಿಮೆ ಎಂದು ಬುಧವಾರ ಮೂಲಗಳು ತಿಳಿಸಿವೆ. ಬಹುಮತಕ್ಕೆ ಬೇಕಾದ ಅಂಕಿಗಳ ಸಂಖ್ಯೆಗಳ ಬಗ್ಗೆ ರಾಜ್ಯಪಾಲರಿಗೆ ಇಲ್ಲಿಯವರೆಗೆ ಮನವರಿಕೆಯಾಗಿಲ್ಲ ಎಂಬುದೂ ಪದಗ್ರಹಣ ಮುಂದೂಡಲು ಕಾರಣ ಎನ್ನಲಾಗಿದೆ. 234 ಸದಸ್ಯರ ವಿಧಾನಸಭೆಯಲ್ಲಿ ಟಿವಿಕೆ 108 ಸ್ಥಾನಗಳನ್ನು ಗೆದ್ದಿದೆ ಮತ್ತು ಬಹುಮತಕ್ಕೆ ಹತ್ತು ಸ್ಥಾನಗಳ ಕೊರತೆಯಿದೆ. ವಿಧಾನಸಭಾ ಚುನಾವಣೆಯಲ್ಲಿ ವಿಜಯ್ ಗೆದ್ದ ಎರಡು ಸ್ಥಾನಗಳಲ್ಲಿ ಒಂದರಿಂದ ಕೆಳಗಿಳಿಯುವುದರೊಂದಿಗೆ, ವಿಧಾನಸಭೆಯಲ್ಲಿ ಟಿವಿಕೆಯ ಪರಿಣಾಮಕಾರಿ ಬಲ 107 ಆಗುತ್ತದೆ. ತಮಿಳುನಾಡಿನಲ್ಲಿ ನಡೆದ ಅದ್ಭುತ ವಿಧಾನಸಭಾ ಚುನಾವಣೆಯಲ್ಲಿ ಏಕೈಕ ಅತಿದೊಡ್ಡ ಪಕ್ಷವಾಗಿ ಹೊರಹೊಮ್ಮಿದ ಟಿವಿಕೆ, ಐದು ಕಾಂಗ್ರೆಸ್ ಶಾಸಕರ ಬೆಂಬಲವನ್ನು ಪಡೆದುಕೊಂಡಿದೆ. ಡಿಎಂಕೆ ನೇತೃತ್ವದ ಮೈತ್ರಿಕೂಟದ ಭಾಗವಾಗಿ ಕಾಂಗ್ರೆಸ್ ಚುನಾವಣೆಯಲ್ಲಿ ಸ್ಪರ್ಧಿಸಿತ್ತು ಆದರೆ ಟಿವಿಕೆಗೆ ಬೆಂಬಲ ನೀಡಲು ನಿರ್ಧರಿಸಿದೆ.

## ಮೇ 12ಕ್ಕೆ ಅಸ್ಸಾಂ ಮುಖ್ಯಮಂತ್ರಿಯಾಗಿ ಹಿಮಂತ ಬಿಸ್ವಾ ಶರ್ಮಾ ಪ್ರಮಾಣವಚನ

**ಗೌಹಾತಿ, ಮೇ 6:** ಅಸ್ಸಾಂ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಸತತ ಮೂರನೇ ಬಾರಿಗೆ ಸ್ಪಷ್ಟ ಬಹುಮತದೊಂದಿಗೆ ಅಧಿಕಾರದ ಚುಕ್ಕಾಣಿ ಹಿಡಿದಿದೆ.




ಒಟ್ಟು 126 ವಿಧಾನಸಭಾ ಕ್ಷೇತ್ರಗಳ ಪೈಕಿ ಎನ್‌ಡಿಎ ಭರ್ಜರಿ 102 ಸ್ಥಾನಗಳನ್ನು ಗೆದ್ದು ಪ್ರಾಬಲ್ಯ ಮೆರೆದಿದೆ. ಇದರಲ್ಲಿ ಬಿಜೆಪಿ 82 ಸ್ಥಾನಗಳಲ್ಲಿ ಜಯ ಗಳಿಸಿದ್ದರೆ, ಮಿತ್ರ ಪಕ್ಷಗಳಾದ ಅಸ್ಸಾಂ ಗಣ ಪರಿಷತ್ (ಎಜಿಪಿ) ಮತ್ತು ಬೋಡೋಲ್ಯಾಂಡ್ ಪೀಪಲ್ಸ್ ಫ್ರಂಟ್ (ಬಿಪಿಎಫ್) ತಲಾ 10 ಸ್ಥಾನಗಳನ್ನು ಪಡೆದುಕೊಂಡಿವೆ. ನೂತನ ಸರ್ಕಾರ ರಚನೆಗೆ ಅನುವು ಮಾಡಿಕೊಡುವ ದೃಷ್ಟಿಯಿಂದ ಹಾಲಿ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರು ಬುಧವಾರ ರಾಜ್ಯಪಾಲ ಲಕ್ಷ್ಮಣ್ ಪ್ರಸಾದ್ ಆಚಾರ್ಯ ಅವರಿಗೆ ರಾಜೀನಾಮೆ ಸಲ್ಲಿಸಿದ್ದಾರೆ. ಬಿಜೆಪಿ ಶಾಸಕಾಂಗ ಪಕ್ಷದ ನಾಯಕನ ಆಯ್ಕೆ ಪ್ರಕ್ರಿಯೆ ಪೂರ್ಣಗೊಂಡ ಬಳಿಕ ಮೇ 12ರಂದು ಗುವಾಹಟಿಯಲ್ಲಿ ಮುಖ್ಯಮಂತ್ರಿಯಾಗಿ

### ಪ.ಬಂಗಾಳ: ನಾಳೆ ಬಿಜೆಪಿ ಶಾಸಕಾಂಗ ಪಕ್ಷದ ಮಹತ್ವದ ಸಭೆ

**ಕೋಲ್ಕತ್ತಾ, ಮೇ 6:** ಘರ್ಷಣೆಗಳ ನಡುವೆ ಬಂಗಾಳದಲ್ಲಿ ಸರ್ಕಾರ ರಚನೆ ಮಾಡುವ ನಿಟ್ಟಿನಲ್ಲಿ ಪ್ರಕ್ರಿಯೆ ಆರಂಭಗೊಂಡಿದೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ವೀಕ್ಷಕರಾಗಿ ನೇಮಕವಾಗಿದ್ದಾರೆ. ಇಂದು ಬಿಜೆಪಿ ಶಾಸಕಾಂಗ ಪಕ್ಷದ ಸಭೆ ನಡೆಸಿ ಮುಖ್ಯಮಂತ್ರಿಯ ಆಯ್ಕೆಯಾಗಬೇಕಿತ್ತು ಆದರೆ ಸಭೆಯನ್ನು ಮುಂದೂಡಲಾಗಿದ್ದು ಮೇ 8 ರಂದು ಸಭೆ ನಡೆಯಲಿದ್ದು ಅಂದೇ ಮುಖ್ಯಮಂತ್ರಿಯ ಹೆಸರು ಘೋಷಿಸಿ ಮರುದಿನ ಪ್ರಮಾಣವಚನ ಕಾರ್ಯಕ್ರಮ ನಡೆಸಲು ತಿರ್ಮಾನಿಸಿದೆ.. ಈ ನಡುವೆ ಮುಖ್ಯಮಂತ್ರಿ ಹುದ್ದೆಗೆ ಸುವೇಂದು ಅಧಿಕಾರಿ ಮತ್ತು ದಿಲೀಪ್ ಘೋಷ್ ಹೆಸರು ಹೆಚ್ಚು ಚರ್ಚೆಯಲ್ಲಿದ್ದು ಸುವೇಂದು ಅಧಿಕಾರಿ ಬಹುತೇಕ ಮುಖ್ಯಮಂತ್ರಿಯಾಗಬಹುದು ಎನ್ನಲಾಗುತ್ತಿದೆ.

## ಹೊಸ ಸಿಎಂ ಆಯ್ಕೆ: ಇಂದು ಕೇರಳ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ







**ತಿರುವನಂತಪುರಂ, ಮೇ 6:** ವಿಧಾನಸಭಾ ಚುನಾವಣೆಯಲ್ಲಿ ಭರ್ಜರಿ ಜಯಗಳಿಸಿದ ಬೆನ್ನಲ್ಲೇ ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕನ ಆಯ್ಕೆಗಾಗಿ ಗುರುವಾರ ಬೆಳಗ್ಗೆ 11 ಗಂಟೆಗೆ ಕೆಪಿಸಿಸಿ ಪ್ರಧಾನ ಕಚೇರಿಯಾದ ಇಂದಿರಾ ಭವನದಲ್ಲಿ ಉನ್ನತ ಮಟ್ಟದ ಸಭೆಯನ್ನು ಕರೆಯಲಾಗಿದೆ.

ಶಾಸಕಾಂಗ ಪಕ್ಷದ ನಾಯಕನ ಆಯ್ಕೆಯನ್ನು ಅಧಿಕೃತಗೊಳಿಸಲು ಎಐಸಿಸಿ ವೀಕ್ಷಕರಾಗಿ ಮುಕುಲ್ ವಾಸ್ನಿಕ್ ಮತ್ತು ಅಜಯ್ ಮಾಕನ್ ಅವರು ಭಾಗವಹಿಸಲಿದ್ದಾರೆ. ರಾಷ್ಟ್ರೀಯ ನಾಯಕತ್ವವು ಅವರಿಗೆ ಈ ಹೊಣೆಯನ್ನು ನೀಡಿದೆ.

- ಮುಖ್ಯಮಂತ್ರಿ ರೇಸ್‌ನಲ್ಲಿ ಮೂವರು
- ಮುಂಚೂಣಿಯಲ್ಲಿ ಕೆ.ಸಿ. ವೇಣುಗೋಪಾಲ್

10 ವರ್ಷಗಳ ಬಳಿಕ ಮತ್ತೆ ಅಧಿಕಾರಕ್ಕೆ ಮರಳಿರುವ ಕಾಂಗ್ರೆಸ್, ಮುಂದಿನ ಸಿಎಂ ಆಯ್ಕೆಯ ಕಗ್ಗಂಟಿನಲ್ಲಿದೆ. ಪ್ರಸ್ತುತ ವಿರೋಧ ಪಕ್ಷದ ನಾಯಕ ವಿ.ಡಿ. ಸತೀಶನ್, ಕೆಪಿಸಿಸಿ ಪ್ರಚಾರ ಸಮಿತಿ ಅಧ್ಯಕ್ಷ ರಮೇಶ್ ಚೆನ್ನಿತ್ತಲ ಮತ್ತು ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರ ಹೆಸರುಗಳು ಮುಂಚೂಣಿಯಲ್ಲಿವೆ.

ಕೇಂದ್ರ ವೀಕ್ಷಕರು ಮೊದಲು ನೂತನ ಶಾಸಕರ ಜೊತೆಗೆ ಸಭೆ ನಡೆಸಿದ ಬಳಿಕ, ಮಿತ್ರಪ ಪಕ್ಷಗಳ ಶಾಸಕರ ಜೊತೆ ಮಾತುಕತೆ ನಡೆಸಲಿದ್ದಾರೆ. ಬಳಿಕ ಕಾಂಗ್ರೆಸ್ ಶಾಸಕಾಂಗ ನಾಯಕನ ಆಯ್ಕೆಯನ್ನು ಅಂತಿಮಗೊಳಿಸಿ ಸಭೆಯಲ್ಲಿ ಘೋಷಿಸಲಿದ್ದಾರೆ. ಇದರ ನಂತರ, ವೀಕ್ಷಕರು ಹೈಕಮಾಂಡ್‌ಗೆ ವರದಿ ನೀಡಲಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

ಕಾಂಗ್ರೆಸ್ ಶಾಸಕಾಂಗ ಸಭೆಯ ಜೊತೆಗೆ ಯುಡಿಎಫ್ ಕೂಟದ ಮಿತ್ರರಾದ ಮುಸ್ಲಿಂ ಲೀಗ್, ಕೇರಳ ಕಾಂಗ್ರೆಸ್ (ಜೋಸೆಫ್), ಕೇರಳ ಕಾಂಗ್ರೆಸ್ (ಜಾಕೋಬ್), ಆರ್‌ಎಸ್‌ಪಿ, ಆರ್‌ಎಂಪಿ, ಸಿಎಂಪಿ, ಫಾರ್ವರ್ಡ್ ಬ್ಲಾಕ್, ಜೆಎಸ್‌ಎಸ್, ಕೆಡಿಪಿ, ಕೇರಳ ಪ್ರವಾಸಿ ಸಂಘ, ಜನಾಧಿಪತ್ಯ ರಾಷ್ಟ್ರೀಯ ಸಭಾ ಮತ್ತು ಪಿ.ವಿ. ಅನ್ವರ್ ನೇತೃತ್ವದ ರಾಜಕೀಯ ಘಟಕದ ನಾಯಕರ ಜೊತೆ ಸಮಾಲೋಚನೆ ನಡೆಯಲಿದೆ.

140 ಸದಸ್ಯ ಬಲದ ಕೇರಳ ವಿಧಾನಸಭೆಗೆ ಇತ್ತೀಚೆಗೆ ಮುಗಿದ ಚುನಾವಣೆಯಲ್ಲಿ ಕಾಂಗ್ರೆಸ್ 63 ಸ್ಥಾನಗಳಲ್ಲಿ ಗೆಲುವು ಸಾಧಿಸಿದೆ. ಮಿತ್ರಪಕ್ಷ ಮುಸ್ಲಿಂ ಲೀಗ್ 22 ಸೇರಿ ಯುಡಿಎಫ್ ಕೂಟವು ಒಟ್ಟು 102 ಸ್ಥಾನಗಳನ್ನು ತನ್ನದಾಗಿಸಿಕೊಂಡಿದೆ. ಕೂಟದ ದೊಡ್ಡ ಪಕ್ಷವಾಗಿ ಕಾಂಗ್ರೆಸ್ ಹೊರಹೊಮ್ಮಿದ್ದು ಅದೇ ಪಕ್ಷದಿಂದ ಸಿಎಂ ಆಯ್ಕೆಯಾಗಲಿದ್ದಾರೆ.

ಕಳೆದ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಕೇವಲ 21 ಸ್ಥಾನಗಳಲ್ಲಿ ಮಾತ್ರ ಗೆದ್ದಿತ್ತು. ಆಡಳಿತಾರೂಢ ಎಲ್‌ಡಿಎಫ್ ಕೂಟವು ಕೇವಲ 35 ಸ್ಥಾನಗಳಲ್ಲಿ ಮಾತ್ರ ಗೆದ್ದು ಹೀನಾಯ ಸೋಲು ಅನುಭವಿಸುವುದರ ಜೊತೆ ಅಧಿಕಾರದಿಂದ ನಿರ್ಗಮಿಸಿದೆ. ಕಳೆದ 10 ವರ್ಷಗಳಿಂದ ಎಲ್‌ಡಿಎಫ್ ರಾಜ್ಯದಲ್ಲಿ ಅಧಿಕಾರದಲ್ಲಿತ್ತು.

## ಟಿವಿಕೆ ಸರ್ಕಾರಕ್ಕೆ ಕಾಂಗ್ರೆಸ್ ಷರತ್ತಿನ ಬೆಂಬಲ

**ನವದೆಹಲಿ, ಮೇ 6:** ತಮಿಳುನಾಡಿನ ರಾಜಕಾರಣದಲ್ಲಿ ಮಹತ್ವದ ಬೆಳವಣಿಗೆಯೊಂದು ನಡೆದಿದ್ದು, ಸುದೀರ್ಘ ಕಾಲದ ಡಿಎಂಕೆ ಮೈತ್ರಿಯನ್ನು ಕಡಿದುಕೊಂಡಿರುವ ಕಾಂಗ್ರೆಸ್ ಬುಧವಾರ ನಟ ಹಾಗೂ ರಾಜಕಾರಣಿ ಜೋಸೆಫ್ ವಿಜಯ್ ನೇತೃತ್ವದ ಟಿವಿಕೆ ಪಕ್ಷಕ್ಕೆ ಬೆಂಬಲ ಸೂಚಿಸಿದೆ. ತಮಿಳುನಾಡಿನಲ್ಲಿ ಮುಂದಿನ ಸರ್ಕಾರ ರಚಿಸಲು ಟಿವಿಕೆಗೆ ಬೆಂಬಲ ನೀಡುವುದಾಗಿ ಘೋಷಿಸಿರುವ ಕಾಂಗ್ರೆಸ್, ಈ ಹೊಸ ಮೈತ್ರಿಯು 2029ರ ಲೋಕಸಭಾ ಚುನಾವಣೆಗೂ ಮುಂದುವರಿಯಲಿದೆ ಎಂದು ಸ್ಪಷ್ಟಪಡಿಸಿದೆ.

ಡಿಎಂಕೆ ಜತೆಗಿನ ಸುಧೀರ್ಘ ಕಾಲದ ಮೈತ್ರಿಗೆ ತೆರೆ

ತಮಿಳುನಾಡು ಕಾಂಗ್ರೆಸ್ ಉಸ್ತುವಾರಿ ಗಿರೀಶ್ ಚೋಡಂಕರ್ ಅವರು ಈ ಕುರಿತು ಪ್ರಕಟಣೆ ಹೊರಡಿಸಿದ್ದಾರೆ. ಯಾವುದೇ ಕೋಮುವಾದಿ ಶಕ್ತಿಗಳನ್ನು ಮೈತ್ರಿಕೂಟದಿಂದ ದೂರವಿಡುವ ಷರತ್ತಿನ ಮೇಲೆ ನಾವು ಟಿವಿಕೆಗೆ ಬೆಂಬಲ ನೀಡಲಿದ್ದೇವೆ ಎಂದು ತಿಳಿಸಿದ್ದಾರೆ. ತಮಿಳುನಾಡಿನ ಜನತೆ, ಅದರಲ್ಲೂ ವಿಶೇಷವಾಗಿ ಯುವಕರು, ಸಂವಿಧಾನಿಕ ತತ್ವಗಳನ್ನು ನಂಬುವ ಜಾತ್ಯತೀತ, ಪ್ರಗತಿಪರ ಮತ್ತು ಕಲ್ಯಾಣ ಆಧಾರಿತ ಸರ್ಕಾರಕ್ಕಾಗಿ ಅತ್ಯಂತ ಸ್ಪಷ್ಟ ಮತ್ತು ಬಲವಾದ ಜನಾದೇಶವನ್ನು ನೀಡಿದ್ದಾರೆ ಎಂದು ಬಣ್ಣಿಸಿದ್ದಾರೆ. ತಮಿಳುನಾಡು ಕಾಂಗ್ರೆಸ್ ಸಮಿತಿ (ಟಿಎನ್‌ಸಿಸಿ) ಮತ್ತು ಕಾಂಗ್ರೆಸ್ ಶಾಸಕಾಂಗ ಪಕ್ಷವು (ಸಿಎಲ್‌ಪಿ) ಸರ್ಕಾರ ರಚಿಸಲು ಟಿವಿಕೆಗೆ ಸಂಪೂರ್ಣ ಬೆಂಬಲನೀಡಲು ನಿರ್ಧರಿಸಿವೆ. ರಾಹುಲ್ ಗಾಂಧಿ ಮತ್ತು ವಿಜಯ್ ಅವರು ಜಂಟಿಯಾಗಿ ತಮಿಳುನಾಡಿನ ಜನತೆಯ, ವಿಶೇಷವಾಗಿ ಯುವಕರ ಕನಸುಗಳು ಮತ್ತು ಭರವಸೆಗಳನ್ನು ಈಡೇರಿಸಲು ಹಾಗೂ ಜಾತ್ಯತೀತ ಸರ್ಕಾರಕ್ಕಾಗಿ ನೀಡಿದ ಜನಾದೇಶವನ್ನು ಗೌರವಿಸಲು ಸಂಕಲ್ಪ ಮಾಡಿದ್ದಾರೆ ಎಂದು ತಿಳಿಸಿದ್ದಾರೆ. ಚುನಾವಣೆಗಳನ್ನು ಕಾಂಗ್ರೆಸ್ ಮತ್ತು ಡಿಎಂಕೆ ಒಟ್ಟಾಗಿ ಎದುರಿಸಿದ್ದವು. 2004 ರಲ್ಲಿ ಬಿಜೆಪಿಯನ್ನು ಎದುರಿಸಲು ಸೋನಿಯಾ ಗಾಂಧಿ ಅವರು ಈ ಮೈತ್ರಿಯನ್ನು ರೂಪಿಸಿದ್ದರು. ಈಗ ಆ ಸುದೀರ್ಘ ಮೈತ್ರಿಗೆ ತೆರೆ ಬಿದ್ದಂತಾಗಿದೆ.

## ತಮಿಳುನಾಡಿನಲ್ಲಿ ರಾಜಕೀಯ ಸಂಚಲನ, ಡಿಎಂಕೆ–ಎಡಿಎಂಕೆ ಮೈತ್ರಿ ಸರ್ಕಾರ ರಚನೆ?





**ಚೆನ್ನೈ, ಮೇ 6:** ತಮಿಳುನಾಡಿನಲ್ಲಿ ಸರ್ಕಾರ ರಚಿಸಲು ಮತ್ತು ಮಿತ್ರಪಕ್ಷಗಳನ್ನು ಭದ್ರಪಡಿಸಿಕೊಳ್ಳಲು ತಮಿಳಗ ವೆಟ್ರಿ ಕಳಗಂ (ಟಿವಿಕೆ) ಪರದಾಡುತ್ತಿರುವ ನಡುವೆಯೇ ದ್ರಾವಿಡ ಮುನ್ನೇತ್ರ ಕಳಗಂ (ಡಿಎಂಕೆ) ತನ್ನ ದೀರ್ಘಕಾಲದ ವಿರೋಧಿ ಎಐಎಡಿಎಂಕೆ ಜೊತೆ ಸರ್ಕಾರ ರಚಿಸುವ ಮಾತುಕತೆ ಆರಂಭಿಸಿದೆ ಎನ್ನಲಾಗಿದೆ. ರಾಜ್ಯದ ರಾಜಕೀಯದಲ್ಲಿ ಬದ್ಧ ಎದುರಾಳಿಗಳಾದ ಎರಡು ಪಕ್ಷಗಳ ನಡುವೆ ಮೈತ್ರಿ ಏರ್ಪಡುವ ಅಸಾಧ್ಯ ಎಂದರೂ ಯಾವುದನ್ನೂ ತಳ್ಳಿಹಾಕುವಂತಿಲ್ಲ. ಆದರೆ, ಡಿಎಂಕೆ ಜೊತೆ ಮೈತ್ರಿಯ ಚರ್ಚೆಗಳು ನಡೆದಿವೆ ಎಂದು ಎಐಎಡಿಎಂಕೆ ಮೂಲಗಳು ದೃಢಪಡಿಸಿವೆ, ಆದರೆ ಯಾವುದೇ ಪ್ರಗತಿಯ ಬಗ್ಗೆ ಇನ್ನೂ ಯಾವುದೇ ಅಧಿಕೃತ ಮಾತುಗಳಿಲ್ಲ. ತಮಿಳುನಾಡಿನ ರಾಜಕೀಯದಲ್ಲಿ ಅಭೂತಪೂರ್ವ ಬದಲಾವಣೆಯಾಗುವ ವಿಷಯದಲ್ಲಿ ಡಿಎಂಕೆ ಜೊತೆ ಎಐಎಡಿಎಂಕೆ ಕೈಜೋಡಿಸಲು ಸಿದ್ಧವಿದೆಯೇ ಎಂಬುದು ಈಗ ದೊಡ್ಡಪ್ರಶ್ನೆಯಾಗಿದೆ. ಎಐಎಡಿಎಂಕೆ 47 ಸ್ಥಾನಗಳನ್ನು ಪಡೆದರೆ, ಡಿಎಂಕೆ 59 ಸ್ಥಾನಗಳನ್ನು ಗಳಿಸಿದೆ. ಡಿಎಂಕೆ ಮತ್ತು ಎಐಎಡಿಎಂಕೆ ಕೈಜೋಡಿಸಿದರೂ, ಅವರ ಒಟ್ಟು 106 ಶಾಸಕರು ಆಡಳಿತ ನಡೆಸಲು ಸಾಕಷ್ಟು ಸಂಖ್ಯೆಯ ಕೊರತೆಯನ್ನು ಎದುರಿಸುತ್ತಾರೆ. ಬಹುಮತಕ್ಕೆ ಅಗತ್ಯವಿರುವ ಮ್ಯಾಜಿಕ್ ನಂಬರ್ 118 ಆಗಿದೆ. 1972 ರಲ್ಲಿ ಆಗಿನ ಅಧ್ಯಕ್ಷ ಎಂ. ಕರುಣಾನಿಧಿ ಅವರು ಡಿಎಂಕೆಯಿಂದ ಎಂ.ಜಿ. ರಾಮಚಂದ್ರನ್ ಅವರನ್ನು ಪಕ್ಷದ ಭ್ರಷ್ಟಾಚಾರ ಆರೋಪಗಳ ವಿವಾದಗಳ ನಂತರ ಹೊರಹಾಕಿದ ನಂತರ ಎಐಎಡಿಎಂಕೆ ರಚನೆಯಾಯಿತು. ಈ ವಿಭಜನೆಯು ತಮಿಳುನಾಡಿನ ರಾಜಕೀಯ ಚಿತ್ರಣವೇ ಬದಲಾಗಿ ಎರಡು ದ್ರಾವಿಡ ಪಕ್ಷಗಳ ನಡುವಿನ ದಶಕಗಳ ಕಾಲದ ಪೈಪೋಟಿಗೆ ವೇದಿಕೆಯಾಗಿತ್ತು.

## ಕಾಂಗ್ರೆಸ್ ಸರ್ಕಾರ ಐದು ವರ್ಷ ಪೂರೈಸಲಿದೆ: ಸಿದ್ದರಾಮಯ್ಯ

**ಮೈಸೂರು, ಮೇ 6:** ರಾಜ್ಯದಲ್ಲಿ ನಾಯಕತ್ವ ಬದಲಾಗಲಿದೆ ಎಂಬ ಚರ್ಚೆಗಳಿಗೆ ತೆರೆಎಳೆಯುವಂತೆ ಮಾತನಾಡಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾಂಗ್ರೆಸ್ ಸರ್ಕಾರ ಐದು ವರ್ಷದ ಅವಧಿಯನ್ನು ಪೂರ್ಣಗೊಳಿಸಲಿದೆ ಮುಖ್ಯಮಂತ್ರಿ ಬದಲಾವಣೆ ಬಗ್ಗೆ ಹೈಕಮಾಂಡ್ ತೀರ್ಮಾನಕ್ಕೆ ಬದ್ಧ. ಮುಖ್ಯಮಂತ್ರಿ ಬದಲಾವಣೆ ಮಾಡುವ ಬಗ್ಗೆ ಯಾವುದೇ ಮಾಹಿತಿ ಇಲ್ಲ. ವರಿಷ್ಠರು ಕರೆದರೆ ದೆಹಲಿಗೆ ಹೋಗುತ್ತೇನೆ ಎಂದು ಖಡಕ್ಕಾಗಿ ಹೇಳಿದರು.

ಪಕ್ಷದ ಹೈಕಮಾಂಡ್ ಹೇಳಿದರೆ ಐದು ವರ್ಷ ಅಧಿಕಾರದಲ್ಲಿ ಇರುತ್ತೇನೆ. ಹೈಕಮಾಂಡ್ ಮಾತನ್ನು ಮಾತ್ರ ನಾನು ಕೇಳುವುದು. ಬೇರೆ ಯಾರೇ ಏನೇ ಮಾತನಾಡಿದರೂ ಅದು ಅವರ ವೈಯಕ್ತಿಕ ಎಂದು ನಾಯಕತ್ವ ಬದಲಾವಣೆಯ ವಿಚಾರದ ಚರ್ಚೆಗಳ ಬಗ್ಗೆ ಸಿದ್ದರಾಮಯ್ಯ ಪ್ರತಿಕ್ರಿಯಿಸಿದ್ದಾರೆ.

ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಐದು ವರ್ಷ ಕಾಂಗ್ರೆಸ್ ಸರ್ಕಾರ ಇರುತ್ತದೆ. ಹೈಕಮಾಂಡ್ ನನ್ನನ್ನು ಇರಿ ಎಂದರೆ ಇರುತ್ತೇನೆ. ಎಲ್ಲ ತೀರ್ಮಾನ ಮಾಡುವುದು ಹೈಕಮಾಂಡ್ ಎಂದು ಸ್ಪಷ್ಟಪಡಿಸಿದ ಅವರು, ನೀವು ಎಷ್ಟೇ ಬಾರಿ ನಾಯಕತ್ವ ಬದಲಾವಣೆ ಪ್ರಶ್ನೆ ಕೇಳಿದರೂ ನನ್ನ ಉತ್ತರ ಹೈಕಮಾಂಡ್ ಅಷ್ಟೇ. ಹೈಕಮಾಂಡ್ ಮಾತನ್ನು ಮಾತ್ರ ಕೇಳುತ್ತೇನೆ. ಹೈಕಮಾಂಡ್ ತೀರ್ಮಾನಕ್ಕೆ ಬದ್ಧ ಎಂದು ಪುನರುಚ್ಚರಿಸಿದರು.



ನಾಯಕತ್ವ ಬದಲಾವಣೆ: ಹೈಕಮಾಂಡ್ ತೀರ್ಮಾನಕ್ಕೆ ಬದ್ಧ
ಯಾರು ಏನೇ ಹೇಳಿದರೂ ಅದು ಅವರ ವೈಯಕ್ತಿಕ ಅಭಿಪ್ರಾಯ

ರಾಹುಲ್‌ಗಾಂಧಿ ಅವರು ನನ್ನನ್ನು ಇದುವರೆಗೂ ದೆಹಲಿಗೆ ಬರುವಂತೆ ಹೇಳಿಲ್ಲ. ನಾನು ಕೂಡಾ ರಾಹುಲ್‌ಗಾಂಧಿ ಅವರ ಭೇಟಿಗೆ ಸಮಯ ಕೇಳಿಲ್ಲ. ಅವರು ಕರೆದರೆ ದೆಹಲಿಗೆ ಹೋಗುತ್ತೇನೆ. ಅವರು ಕರೆದಿಲ್ಲ ಎಂದಮೇಲೆ ಸಂಪುಟ ಪುನಾರಚನೆ, ನಾಯಕತ್ವ ಬದಲಾವಣೆ ವಿಚಾರಗಳ ಸಭೆಯ ಅಜೆಂಡಾ ಹೇಗೆ ನಿಗದಿಯಾಗುತ್ತದೆ ಎಂದು ಪ್ರಶ್ನಿಸಿದರು.

ಸದ್ಯಕ್ಕಂತೂ ದೆಹಲಿ ಪ್ರವಾಸ ಇಲ್ಲ ಎಂದು ಹೇಳುವ ಮೂಲಕ ಸದ್ಯ ರಾಜ್ಯ ರಾಜಕೀಯದಲ್ಲಿ ಯಾವ ಬದಲಾವಣೆ ಇಲ್ಲ ಎನ್ನುವ ಸುಳಿವನ್ನು ಮುಖ್ಯಮಂತ್ರಿ ಸಿದ್ಧರಾಮಯ್ಯ ನೀಡಿದರು.

### ಚುನಾವಣಾ ಸಿಬ್ಬಂದಿ, ಜೀವರಾಜ್ ಸೇರಿ ಅಂಚೆ ಮತ ತಿದ್ದಿದ್ದಾರೆ

ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆ ಮತಗಳ ಮರು ಎಣಿಕೆ ಫಲಿತಾಂಶದ ಬಗ್ಗೆ ಪ್ರತಿಕ್ರಿಯಿಸಿದ ಅವರು, ಅಂಚೆ ಮತಗಳನ್ನು ಖುದ್ದು ಬಿಜೆಪಿ ಅಭ್ಯರ್ಥಿ ಜೀವರಾಜ್ ಮತ್ತು ಚುನಾವಣಾ ಸಿಬ್ಬಂದಿ ಸೇರಿಕೊಂಡು ತಿದ್ದಿದ್ದಾರೆ. ಅಂದು ಫಲಿತಾಂಶ ಪ್ರಕಟವಾದಾಗ ಬಿಜೆಪಿ ಸರ್ಕಾರ ಇತ್ತು ಅವರ ನಿರ್ದೇಶನದಂತೆ ಚುನಾವಣಾ ಸಿಬ್ಬಂದಿ ಜೀವರಾಜ್ ಜತೆ ಸೇರಿ ಅಂಚೆ ಮತ ತಿದ್ದಿದ್ದಾರೆ ಎಂದು ಆರೋಪಿಸಿದರು. ಫಲಿತಾಂಶ ಪ್ರಕಟವಾದ ದಿನ ಮತ ಪತ್ರದಲ್ಲಿ ಇಲ್ಲದ ಗೆರೆ ಈಗ ಹೇಗೆ ಬಂತು ನಾವು ಈ ವಿಚಾರದಲ್ಲಿ ಕಾನೂನು ಹೋರಾಟ ಮಾಡುತ್ತೇವೆ ಎಂದು ಹೇಳಿದರು.

## ತಮಿಳುನಾಡಿನ ಹಿತ, ಜಾತ್ಯತೀತ ತತ್ವ ಉಳಿಯಲು ಟಿವಿಕೆಗೆ ಬೆಂಬಲ

**ಬೆಂಗಳೂರು, ಮೇ 6:** ಜಾತ್ಯತೀತ ಶಕ್ತಿ ಉಳಿಯಲು, ತಮಿಳುನಾಡಿನ ಹಿತಕ್ಕಾಗಿ ಕಾಂಗ್ರೆಸ್ ಪಕ್ಷ ಟಿವಿಕೆಗೆ ಬೆಂಬಲ ನೀಡುವ ನಿರ್ಧಾರ ಮಾಡಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು.



ಸದಾಶಿವನಗರದ ನಿವಾಸದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಬುಧವಾರ ಪ್ರತಿಕ್ರಿಯೆ ನೀಡಿ, ಬಿಜೆಪಿಯನ್ನು ಅಧಿಕಾರದಿಂದ ದೂರ ಇಡಬೇಕು. ಜಾತ್ಯತೀತ ಶಕ್ತಿಗಳು ಒಂದಾಗಿ ಇರಬೇಕು ಎಂದು ಈ ತೀರ್ಮಾನ ಮಾಡಲಾಗಿದೆ. ಎಐಡಿಎಂಕೆ, ಬಿಜೆಪಿಯವರು ಎಷ್ಟೇ ಒತ್ತಡ ಹಾಕಿದರು ಟಿವಿಕೆಯವರು ಮೈತ್ರಿ ಮಾಡಿಕೊಳ್ಳಲಿಲ್ಲ. ಜಾತ್ಯತೀತ ಶಕ್ತಿ ಉಳಿಯಲು, ತಮಿಳುನಾಡಿನ ಹಿತಕ್ಕಾಗಿ ಕಾಂಗ್ರೆಸ್ ಪಕ್ಷ ತೀರ್ಮಾನ ಮಾಡಿದೆ ಎಂದರು.

**ಪಕ್ಷದ ತೀರ್ಮಾನದ ಬಗ್ಗೆ ಮಾತನಾಡುವುದಿಲ್ಲ:** ದಾವಣಗೆರೆಯಲ್ಲಿ ಮುಸ್ಲಿಂ ನಾಯಕರ ಅಮಾನತು ವಾಪಸ್ ಪಡೆಯುವ ಸಾಧ್ಯತೆ ಇದೆಯೇ ಎಂದು ಕೇಳಿದಾಗ, ನಾನು ಈ ಬಗ್ಗೆ ಮಾತನಾಡುವುದಿಲ್ಲ. ಪಕ್ಷ ಈ ತೀರ್ಮಾನ ಮಾಡಿದೆ. ಸಿಎಂ ರಾಜಕೀಯ ಕಾರ್ಯದರ್ಶಿಯವರನ್ನು ಕೈಬಿಡಬೇಕಾದರೆ, ಆ ಬಗ್ಗೆ ಮುಖ್ಯಮಂತ್ರಿಯವರು ಮಾತನಾಡಿದ್ದರು. ಮುಖ್ಯಮಂತ್ರಿಗಳಿಗೆ ತಮ್ಮದೇ ಆದ ಮಾಹಿತಿ ಇರುತ್ತದೆ. ಪಕ್ಷದ ಪದಾಧಿಕಾರಿಗಳು ಮಾರ್ಗದರ್ಶನ ಮಾಡಿದ್ದಾರೆ. ಪಕ್ಷ ಅವರಿಗೆ ಕೆಲವು ಜವಾಬ್ದಾರಿಗಳನ್ನು ನೀಡಿತ್ತು. ಅದನ್ನು ಅವರು ಸರಿಯಾಗಿ ನಿಭಾಯಿಸಲಿಲ್ಲ ಅದಕ್ಕೆ ಅವರನ್ನು ಆ ಸ್ಥಾನದಿಂದ ಇಳಿಸಲಾಯಿತು. ಜಬ್ಬಾರ್ ಅವರು ತಾವಾಗಿಯೇ ರಾಜೀನಾಮೆ ನೀಡಿದ್ದರು. ಅದನ್ನು ಸ್ವೀಕಾರ ಮಾಡಿದ್ದೇವೆ ಅಷ್ಟೇ ಎಂದರು.

**ಕರೆದಾಗ ದೆಹಲಿಗೆ ಹೋಗುತ್ತೇವೆ:** ಸಿಎಂ, ಡಿಸಿಎಂ ದೆಹಲಿ ಭೇಟಿ ವಿಚಾರ ಕೇಳಿದಾಗ, "ಹೈಕಮಾಂಡ್ ಕರೆದಾಗ ಹೋಗುತ್ತೇವೆ. ಕರೆಯದೇ ಹೋಗುವುದು ಸರಿಯಲ್ಲ ಎಂದರು.

## ನಿತ್ಯ ಪಂಚಾಂಗ 7.05.2026 ಗುರುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ ಋತು, ಚಾಂದ್ರಮಾನ, ಚೈತ್ರ–ವೈಶಾಖ ಮಾಸ

ವೈಶಾಖ ಬಹುಳ, ಪಂಚಮಿ, ಪೂರ್ವಾಷಾಡ ನಕ್ಷತ್ರ, ರವೀಂದ್ರನಾಥ ಠಾಗೋರ್ ಜಯಂತಿ, ಮದ್ದೂರು ನೃಸಿಂಗ ರಥ, ಕೆ.ಆರ್.ಪೇಟೆ|ಸಿಂಧಘಟ್ಟ ಲಕ್ಷ್ಮೀನಾರಾಯಣ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

## ಜನಾಶೀರ್ವಾದದಿಂದ ಉಪಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಗೆಲುವು

### ಸರ್ಕಾರದ ಯೋಜನೆಗಳು ಜನಮೆಚ್ಚುಗೆಗೆ ಪಾತ್ರವಾಗಿದೆ: ಮುಖ್ಯಮಂತ್ರಿ ಸಿದ್ದರಾಮಯ್ಯ

**ಮೈಸೂರು, ಮೇ 6:** ಕಾಂಗ್ರೆಸ್ ಸರ್ಕಾರದ ಯೋಜನೆಗಳು ಜನಮೆಚ್ಚುಗೆಗೆ ಪಾತ್ರವಾಗಿದ್ದು, ಜನಾಶೀರ್ವಾದದಿಂದ ಉಪಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಅಭೂತಪೂರ್ವ ಗೆಲುವು ಸಾಧಿಸಲು ಸಾಧ್ಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಮೈಸೂರಿನ ವಿಮಾನ ನಿಲ್ದಾಣದಲ್ಲಿ ಬುಧವಾರ ಮಾಧ್ಯಮದವರೊಂದಿಗೆ ಮಾತನಾಡಿ, ದಾವಣಗೆರೆ ಮತ್ತು ಬಾಗಲಕೋಟೆ ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆಲುವು ಸಾಧಿಸಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ರಾಜ್ಯದ ಜನರು ಕಾಂಗ್ರೆಸ್ ಸರ್ಕಾರದ ಯೋಜನೆಗಳನ್ನು ಮೆಚ್ಚಿಕೊಂಡಿರುವುದನ್ನು ಸೂಚಿಸುತ್ತದೆ. ಪ್ರತಿಪಕ್ಷಗಳ ಯಾವುದೇ ತಂತ್ರಗಾರಿಕೆ ನಡೆಯುವುದಿಲ್ಲ. ಅವರು ಕೇವಲ ಕುತಂತ್ರಗಳನ್ನಷ್ಟೇ ಮಾಡುತ್ತಾರೆ ಎಂದರು.

### ಕಾರ್ಯಕರ್ತರು ಶ್ರಮಿಸಿ ಅಭಿಮಾನೋತ್ಸವ ನಡೆಸುತ್ತಿದ್ದಾರೆ

## ಪಕ್ಷ ಬಲವರ್ಧನೆಗೆ ಬಿ.ಎಸ್.ವೈ ಜಿಲ್ಲಾ ಪ್ರವಾಸ



**ಬೆಂಗಳೂರು, ಮೇ.6:** ಪಕ್ಷಾತೀತವಾಗಿ ನೂರಾರು ಸ್ವಾಮೀಜಿಗಳು, ಅನೇಕ ಹಿರಿಯರನ್ನು ಕರೆದು ಮೇ 9ರಂದು ಚಿತ್ರದುರ್ಗದಲ್ಲಿ ಅಭಿಮಾನೋತ್ಸವ ಮಾಡುತ್ತಿದ್ದಾರೆ. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಅಂದು ಬರುತ್ತಿರುವುದು ವಿಶೇಷ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ತಿಳಿಸಿದ್ದಾರೆ.

ಸುದ್ದಿಗಾರರ ಜೊತೆ ಮಾತನಾಡಿ, ಅವರು, ಮುಂದಿನ ದಿನಗಳಲ್ಲಿ ವಾರಕ್ಕೆ ಒಂದು ದಿನ ಒಂದೊಂದು ಜಿಲ್ಲೆಗೆ ತೆರಳಿ ಪಕ್ಷವನ್ನು ಬಲಪಡಿಸುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ನುಡಿದರು. ಕಾರ್ಯಕರ್ತರು ತಮ್ಮ ಮೇಲೆ ಅಭಿಮಾನದೊಂದಿಗೆ ಶ್ರಮಪಟ್ಟು ಈ ಕಾರ್ಯಕ್ರಮ ನಡೆಸುತ್ತಿದ್ದಾರೆ. ಇದು ಅಭೂತಪೂರ್ವ ಕಾರ್ಯಕ್ರಮವಾಗಲಿದೆ ಎಂದು ವಿವರಿಸಿದರು. ಶೃಂಗೇರಿಯ ಜನರಿಗೆ ಅಭಿನಂದನೆ ಸಲ್ಲಿಸುವೆ. ಬರುವಂಥ ದಿನಗಳಲ್ಲಿ ಜೀವರಾಜ್ ಇನ್ನೂ ದೊಡ್ಡ ಶಕ್ತಿಯುತವಾಗಿ ಬೆಳೆಯಲಿ ಎಂದು ಅವರು ಆಶಿಸಿದರು.

## ಜಲಜೀವನ್ ಮಿಷನ್: ವಿವಿಧ ಅಂಶಗಳಿಗೆ ಒಡಂಬಡಿಕೆ



**ನವದೆಹಲಿ, ಮೇ.6:** ಜಲ್ ಜೀವನ್ ಮಿಷನ್ 2.0 ಅಡಿಯಲ್ಲಿ ಕೇಂದ್ರ ಸರ್ಕಾರದ ಜಲಶಕ್ತಿ ಮಂತ್ರಾಲಯ ಹಾಗೂ ಮಿಜೋರಾಂ ಮತ್ತು ಕೇಂದ್ರಾಡಳಿತ ಪ್ರದೇಶ ಲಡಾಖ್ ಜೊತೆ ಒಪ್ಪಂದಕ್ಕೆ ಕೇಂದ್ರ ಸಚಿವ ವಿ.ಸೋಮಣ್ಣ ಸಾಕ್ಷಿಯಾದರು.

ಕೇಂದ್ರ ಸರ್ಕಾರ ಜೆ.ಜೆ.ಎಮ್ 2.0 ಯೋಜನೆಯನ್ನು 2028ರ ಡಿಸೆಂಬರ್‌ರವರೆಗೆ ಮುಂದುವರಿಸಲು ನಿರ್ಧರಿಸಿದ ಹಿನ್ನೆಲೆಯಲ್ಲಿ ಯೋಜನಾ ಅನುಷ್ಠಾನದಲ್ಲಿ ಕಂಡುಬಂದ ನ್ಯೂನತೆಗಳನ್ನು ನಿವಾರಿಸಿ ಯೋಜನೆಯನ್ನು ಸಫಲವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಕೇಂದ್ರ ಕ್ಯಾಬಿನೆಟ್ ನಿರ್ದೇಶನದನ್ವಯ 19 ಅಂಶಗಳನ್ನೊಳಗೊಂಡ ಒಪ್ಪಂದಕ್ಕೆ ದೆಹಲಿಯಲ್ಲಿ ಸಹಿ ಹಾಕಲಾಯಿತು. ಕೇಂದ್ರ ಜಲಶಕ್ತಿ ಖಾತೆ ಸಚಿವ ಸಿ.ಆರ್.ಪಾಟೀಲ್ ವರ್ಚುವಲ್ ವಿಡಿಯೋ ಮೂಲಕ ಪಾಲ್ಗೊಂಡಿದ್ದ ಈ ಕಾರ್ಯಕ್ರಮದಲ್ಲಿ ಮಿಜೋರಾಂನ ಸಿಎಂ ಲಾಲ್ ದುವಾಮ ಮತ್ತು ಲಡಾಕ್‌ನ ಉಪರಾಜ್ಯಪಾಲ ವಿನಯ್ ಕುಮಾರ್ ಸಕ್ಸೇನಾ ಹಾಜರಿದ್ದರು. ಪ್ರಧಾನಮಂತ್ರಿಯವರ ಕನಸಿನ ಯೋಜನೆ ಜಲಜೀವನ್ ಮಿಷನ್‌ನ ಸಫಲ ಅನುಷ್ಠಾನಕ್ಕೆ ಸಹಕಾರ ನೀಡಲು ಕೇಂದ್ರ ಹಾಗೂ ರಾಜ್ಯ ಸರ್ಕಾರ ಒಮ್ಮತದಿಂದ ಶ್ರಮಿಸಬೇಕೆಂದು ನಿರ್ಧರಿಸಲಾಯಿತು.

## ಶಾಸಕರಾಗಿ ಡಿ.ಎನ್.ಜೀವರಾಜ್ ಪ್ರಮಾಣವಚನ ಸ್ವೀಕಾರ



ಬೆಂಗಳೂರು, ಮೇ 6: ಶೃಂಗೇರಿ ಕ್ಷೇತ್ರದ ನೂತನ ಶಾಸಕರಾಗಿ ಡಿ.ಎನ್.ಜೀವರಾಜ್ ಅವರು ಬುಧವಾರ ಪ್ರಮಾಣವಚನ ಸ್ವೀಕರಿಸಿದರು. ಸ್ಪೀಕರ್ ಯು.ಟಿ.ಖಾದರ್ ಅವರು ಜೀವರಾಜ್‌ಗೆ ಪ್ರಮಾಣವಚನ ಬೋಧಿಸಿದರು. ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ್, ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಶಾಸಕ ಮುನಿರಾಜು ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ಭಾಗಿಯಾಗಿದ್ದರು.

ಶೃಂಗೇರಿ ಶಾರದಾಂಬೆ ಮತ್ತು ಭಗವಂತನ ಹೆಸರಿನಲ್ಲಿ ಜೀವರಾಜ್ ಪ್ರಮಾಣವಚನ ಸ್ವೀಕರಿಸಿದರು. ನೂತನ ಬಿಜೆಪಿ ಶಾಸಕನಿಗೆ ಬೊಕ್ಕೆ, ವಿಧಾನಸಭೆ ನಡಾವಳಿಗಳ ಪುಸ್ತಕ ನೀಡಿದ ಸ್ಪೀಕರ್ ಖಾದರ್ ನೀಡಿ ಅಭಿನಂದಿಸಿದರು. ಆರ್.ಅಶೋಕ್ ಅವರು ಹಾರ, ಪೇಟೆ ಹಾಕಿ ಶಾಸಕರನ್ನು ಸನ್ಮಾನಿಸಿದರು.ಶೃಂಗೇರಿ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಶಾಸಕ ರಾಜೇಗೌಡ ಆಯ್ಕೆಯನ್ನು ಪ್ರಶ್ನಿಸಿ ಬಿಜೆಪಿಯ ಜೀವರಾಜ್ ಕೋರ್ಟ್ ಮೆಟ್ಟಿಲೇರಿದ್ದರು. ಕ್ಷೇತ್ರದ ಚುನಾವಣೆಯ ಅಂಚೆ ಮತಗಳ ಮರುಎಣಿಕೆಗೆ ಕೋರ್ಟ್ ಆದೇಶ ಹೊರಡಿಸಿತು. ಮರು ಎಣಿಕೆಯಲ್ಲಿ ಜೀವರಾಜ್ ಅವರಿಗೆ ಬಹುಮತ ಬಂತು. ಕೊನೆಗೆ ಜೀವರಾಜ್ ಅವರಿಗೆ ಚುನಾವಣಾಧಿಕಾರಿಗಳು ಪ್ರಮಾಣಪತ್ರ ನೀಡಿದರು.

## ಡಿಎಂಕೆಗೆ ಕೈಕೊಟ್ಟ ಕಾಂಗ್ರೆಸ್, ಇಂಡಿ ಒಕ್ಕೂಟದ ಪಕ್ಷಗಳು ಪರಾಮರ್ಶೆ ಮಾಡಿಕೊಳ್ಳಲಿ



### ವೋಟ್ ಚೋರಿ ಮಾಡಿದ್ದು ಯಾರೆಂದು ಸ್ಪಷ್ಟವಾಗಿದೆ: ಪ್ರತಿಪಕ್ಷ ನಾಯಕ ಆರ್.ಅಶೋಕ್

ಬೆಂಗಳೂರು, ಮೇ 6: ತಮಿಳುನಾಡಲ್ಲಿ ಡಿಎಂಕೆ ಜೊತೆ ಚುನಾವಣೆ ಎದುರಿಸಿದ ಕಾಂಗ್ರೆಸ್, ಈಗ ಅದೇ ಪಕ್ಷಕ್ಕೆ ಕೈಕೊಟ್ಟಿದೆ. ಇಂಡಿ ಒಕ್ಕೂಟದ ಮಿತ್ರಪಕ್ಷಗಳು ಈ ಬಗ್ಗೆ ಪರಾಮರ್ಶೆ ಮಾಡಿಕೊಳ್ಳಬೇಕಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮಿಳುನಾಡಲ್ಲಿ ಕಾಂಗ್ರೆಸ್‌ನ ಬಣ್ಣ ಬಯಲಾಗಿದೆ. ಕಾಂಗ್ರೆಸ್‌ನ ಸ್ನೇಹ ಮಾಡಿದ ಡಿಎಂಕೆ ನಾಯಕರು ಈಗ ಸಪ್ಪೆ ಮೋರೆ ಹಾಕಿಕೊಂಡಿದ್ದಾರೆ. ಚುನಾವಣೆ ಬಳಿಕ ಒಂದಾಗಿ ಸರ್ಕಾರ ರಚಿಸಬೇಕೆಂದು ತೀರ್ಮಾನವಾಗಿತ್ತು. ಫಲಿತಾಂಶ ಬಂದ ನಂತರ ಕಾಂಗ್ರೆಸ್ ಗೆದ್ದೆತ್ತಿನ ಬಾಲ ಹಿಡಿದಿದೆ. ಯಾವುದೇ ಸಿದ್ಧಾಂತವನ್ನು ಇವರು ಅನುಸರಿಸುತ್ತಿಲ್ಲ. ಇವರನ್ನು ನಂಬಿದ ಡಿಎಂಕೆ ಬೆನ್ನಿಗೆ ಚೂರಿ ಹಾಕಿದ್ದು, ಕಾಂಗ್ರೆಸ್ ಕೈ ಕೊಡುವ ಪಕ್ಷ ಎಂದು ಜನರಿಗೆ ಗೊತ್ತಾಗಿದೆ. ಕಾಂಗ್ರೆಸ್ ಪಕ್ಷ ನಂಬಿಕೆಗೆ ಅರ್ಹವಲ್ಲ ಎಂಬುದು ಸ್ಪಷ್ಟವಾಗಿದೆ. ಇಂಡಿ ಒಕ್ಕೂಟದಲ್ಲಿರುವ ಬೇರೆ ಪಕ್ಷಗಳು ಈ ಬಗ್ಗೆ ಪರಾಮರ್ಶೆ ಮಾಡಿಕೊಳ್ಳಬೇಕಿದೆ. ಕಾಂಗ್ರೆಸ್ ಹೇಗೆ ಕೈಕೊಡುತ್ತದೆ ಎಂದು ಗಮನಿಸಬೇಕಾಗುತ್ತದೆ. ಇಲ್ಲವಾದರೆ ಮಿತ್ರಪಕ್ಷಗಳಿಗೂ ಡಿಎಂಕೆ ಸ್ಥಿತಿಯೇ ಬರಲಿದೆ ಎಂದರು.

ಪ್ರಮಾಣವಚನ ಸಂತಸ ತಂದಿದೆ

ಶಾಸಕ ಡಿ.ಎನ್.ಜೀವರಾಜ್‌ಗೆ ಪ್ರಮಾಣವಚನ ಬೋಧಿಸಲು ಸ್ಪೀಕರ್ ಯು.ಟಿ.ಖಾದರ್ ಒಪ್ಪಿಕೊಂಡಿದ್ದಾರೆ. ಈ ಬಗ್ಗೆ ರಾಜ್ಯಪಾಲರ ಬಳಿ ಹೋದ ನಂತರ ಪ್ರಮಾಣವಚನ ಬೋಧಿಸಲು ಅವಕಾಶ ನೀಡಿದ್ದಾರೆ. ಒಂದು ಬಾರಿ ರಾಜ್ಯಪತ್ರದಲ್ಲಿ ಹೆಸರು ಪ್ರಕಟವಾದ ನಂತರ ಹಾಗೂ ಚುನಾವಣಾ ಆಯೋಗ ಪ್ರಮಾಣಪತ್ರ ನೀಡಿದ ಬಳಿಕ ಪ್ರಮಾಣವಚನ ಬೋಧಿಸಲೇಬೇಕು. ರಾಜ್ಯಪಾಲರು ಅಥವಾ ಅವರು ಸೂಚಿಸಿದ ವ್ಯಕ್ತಿ ಪ್ರಮಾಣವಚನ ಬೋಧಿಸಬಹುದು. ಕೊನೆ ಹಂತದಲ್ಲಿ ಸ್ಪೀಕರ್ ಯು.ಟಿ.ಖಾದರ್ ಅವರೇ ಫಲಿತಾಂಶವನ್ನು ಒಪ್ಪಿಕೊಂಡು ಪ್ರಮಾಣವಚನ ನೀಡುತ್ತಿರುವುದು ಸಂತಸ ತಂದಿದೆ ಎಂದು ಅಶೋಕ್ ಹೇಳಿದರು.

ಫಲಿತಾಂಶಗಳ ಬಗ್ಗೆ ಆಲೋಚಿಸಿ ಮಾತನಾಡಲಿ

ವೋಟ್ ಚೋರಿ ಮಾಡಿರುವುದು ಯಾರೆಂದು ಸ್ಪಷ್ಟವಾಗಿದೆ. ಡಕಾಯಿತಿ ಎಂದು ಆರೋಪ ಮಾಡುವ ಮುಖ್ಯಮಂತ್ರಿ ಸಿದ್ದರಾಮಯ್ಯ ಮೊದಲೇ ಕೋರ್ಟ್‌ಗೆ ಹೋಗಬೇಕಿತ್ತು. ರಾಜೇಗೌಡರು ಗೆದ್ದಾಗ ಚುನಾವಣಾ ಆಯೋಗ ಸರಿ ಇದೆ. ಈಗ ಸರಿ ಇಲ್ಲ ಎನ್ನುತ್ತಾರೆ. ಕೇರಳದಲ್ಲಿ ಇವಿಎಂ ಸರಿ ಇದೆ, ಪಶ್ಚಿಮ ಬಂಗಾಳದಲ್ಲಿ ಸರಿ ಇಲ್ಲ ಎಂದು ರಾಹುಲ್ ಗಾಂಧಿ ಹೇಳುತ್ತಿದ್ದು, ಇವರೆಲ್ಲರಿಗೂ ಬ್ರೈನ್ ಮ್ಯಾಪಿಂಗ್ ಮಾಡಬೇಕಿದೆ. ಇನ್ನಾದರೂ ಚುನಾವಣಾ ಫಲಿತಾಂಶಗಳ ಬಗ್ಗೆ ಆಲೋಚಿಸಿ ಮಾತನಾಡಲಿ ಎಂದು ಅಶೋಕ್ ಹೇಳಿದರು.

ಡಿಕೆಶಿ ಸಿಎಂ ಕನಸು ಭಗ್ನವಾಗಿದೆ

ಮಲ್ಲಿಕಾರ್ಜುನ ಖರ್ಗೆ ಪ್ರವೇಶದ ಬಳಿಕ ಸಿಎಂ ಕುರ್ಚಿ ಬಗ್ಗೆ ಯಾರೂ ಮಾತಾಡುತ್ತಿಲ್ಲ. ಡಿ.ಕೆ.ಶಿವಕುಮಾರ್ ಅವರ ಕನಸು ಭಗ್ನವಾಗಿದೆ. ಕನಕಪುರದ ಬಂಡೆಯಾದ ನಾನು ವಿಧಾನಸೌಧಕ್ಕೆ ಮೆಟ್ಟಿಲಾಗುತ್ತೇನೆ ಎಂದು ಹೇಳಿದ್ದರು. ಕಾಂಗ್ರೆಸ್‌ನ ಹಿರಿಯ ನಾಯಕರು ಈ ಬಂಡೆಯನ್ನು ಶಿಲೆಯಾಗಿ ಕೆತ್ತುತ್ತಲೇ ಇದ್ದಾರೆ. ಇನ್ನೂ ಸಂಪೂರ್ಣವಾಗಿ ಶಿಲೆ ನಿರ್ಮಾಣವಾಗಿಲ್ಲ. ಡಿ.ಕೆ.ಶಿವಕುಮಾರ್ ಮೆಟ್ಟಿಲಾಗಿಯೇ ಇರುತ್ತಾರೆಯೇ ಹೊರತು ಶಿಲೆಯಾಗಲು ಸಾಧ್ಯವಾಗಲೇ ಇಲ್ಲ ಎಂದು ಅಶೋಕ್ ಹೇಳಿದರು.

## ಬಿಜೆಪಿ ಶಾಸಕ ಬಿ.ಪಿ ಹರೀಶ್ ಬಂಧಿಸಿ ಕೋರ್ಟ್‌ಗೆ ಹಾಜರುಪಡಿಸುವಂತೆ ವಾರಂಟ್ ಜಾರಿ

### ಅಭಿನಂದನೆ ಹೇಳಲು ಬಂದಿದ್ದವರ ಮೇಲೆ ಜಾತಿ ನಿಂದನೆ ಆರೋಪ: ವಿಚಾರಣೆಗೆ ಗೈರು

**ಬೆಂಗಳೂರು, ಮೇ 6:** ಶಾಸಕರಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಶುಭಾಶಯ ಕೋರಲು ಬಂದಿದ್ದ ಪರಿಶಿಷ್ಟ ಜಾತಿಯ ಪೌರಕಾರ್ಮಿಕರ ಜಾತಿನಿಂದನೆ ಮಾಡಿದ ಆರೋಪದಲ್ಲಿ ವಿಚಾರಣೆಗೆ ಗೈರಾದ ಹರಿಹರ ಕ್ಷೇತ್ರದ ಬಿಜೆಪಿ ಶಾಸಕ ಬಿ.ಪಿ.ಹರೀಶ್ ಅವರನ್ನು ಬಂಧಿಸಿ ನ್ಯಾಯಾಲಯದ ಮುಂದೆ ಹಾಜರುಪಡಿಸುವಂತೆ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ವಾರೆಂಟ್ ಜಾರಿ ಮಾಡಿದೆ.

ಪ್ರಕರಣದ ವಿಚಾರಣೆ ನಡೆಸಿದ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಸಂತೋಷ್ ಗಜಾನನ ಭಟ್ ಅವರು, ಶಾಸಕರ ವಿರುದ್ಧ ಬಂಧನ ವಾರೆಂಟ್ ಜಾರಿಗೊಳಿಸಿ, ಮುಂದಿನ ವಿಚಾರಣೆಯನ್ನು ಗುರುವಾರಕ್ಕೆ ಮುಂದೂಡಿದ್ದಾರೆ.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಶಾಸಕರಾಗಿ ಆಯ್ಕೆಯಾಗಿದ್ದ ಬಿ.ಪಿ.ಹರೀಶ್ ಅವರನ್ನು ಅಭಿನಂದಿಸಲು 2023ರ ಮೇ 16ರಂದು ಹರಿಹರ ನಗರಸಭೆಯ ಪೌರಕಾರ್ಮಿಕರು ಹಾಗೂ ಮಾದಿಗ ಸಮಾಜದ ಮುಖಂಡರು ಆಗಮಿಸಿದ್ದರು. ಈ ವೇಳೆ ಒಳಮೀಸಲಾತಿ ನೀಡಿದ್ದರೂ ನಿಮ್ಮ ಸಮಾಜದವರು ನಮ್ಮ ಪಕ್ಷವನ್ನು ಬೆಂಬಲಿಸಿಲ್ಲ, ನಿಮಗೆ ಕೃತಜ್ಞತೆಯಿಲ್ಲ ಎಂದು ಜಾತಿಯ ಹೆಸರನ್ನು ಉಲ್ಲೇಖಿಸಿ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದರು ಎಂದು ಆರೋಪಿಸಲಾಗಿತ್ತು. ಅದೇ ದಿನ ಸಮಾಜದ ಮುಖಂಡರೊಂದಿಗೆ ರಾಜಿ ಮಾತುಕತೆ ನಡೆದು ಶಾಸಕರು ಕ್ಷಮೆ ಕೇಳಿದ್ದರಿಂದ ವಿವಾದ ತಣ್ಣಗಾಗಿತ್ತು. ಆದರೆ, ಮರುದಿನ ಅಭಿನಂದನಾ ಕಾರ್ಯಕ್ರಮದ ವೇದಿಕೆಯಲ್ಲಿ ಶಾಸಕ ಹರೀಶ್, "ನಾನು ಆ ರೀತಿ ಹೇಳಿದ್ದು ನಿಜ ಮತ್ತು ಅದು ಸರಿಯಾಗಿಯೇ ಇದೆ" ಎಂದು ತಮ್ಮ ಹೇಳಿಕೆಯನ್ನು ಸಮರ್ಥಿಸಿಕೊಂಡಿದ್ದಾರೆಂದು ಆರೋಪಿಸಿ ಬಹುಜನ ಸಮಾಜ ಪಕ್ಷದ ಜಿಲ್ಲಾ ಘಟಕದ ಅಧ್ಯಕ್ಷ ಡಿ.ಹನುಮಂತಪ್ಪ ಅವರು ಹರಿಹರ ನಗರ ಠಾಣೆಯಲ್ಲಿ ದೂರು ದಾಖಲಿಸಿದ್ದರು.ಈ ದೂರಿನ ಸಂಬಂಧ ಎಫ್‌ಐಆರ್ ದಾಖಲಾಗಿದ್ದು, ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಪ್ರಕರಣದ ವಿಚಾರಣೆ ನಡೆಸುತ್ತಿದೆ.

## ಬೀದರ್‌ನಲ್ಲಿ ರಾಜ್ಯ ಪತ್ರಕರ್ತರ ಅರ್ಥಪೂರ್ಣ ಸಮ್ಮೇಳನ: ಧನ್ಯವಾದ ಸಮರ್ಪಣಾ ಸಮಾರಂಭದಲ್ಲಿ ತಗಡೂರು ಶ್ಲಾಘನೆ



**ಬೆಂಗಳೂರು, ಮೇ 6:** ಬಸವನ ನಾಡು, ಸೂಫಿ ಸಂತರ ಬೀಡು ಬೀದರನಲ್ಲಿ ಎರಡು ದಿನಗಳು ನಡೆದ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನವನ್ನು ಅಚ್ಚುಕಟ್ಟಾಗಿ ಸಂಘಟಿಸಿ, ಯಶಸ್ವಿಗೊಳಿಸಿದ ಹಿನ್ನೆಲೆಯಲ್ಲಿ ಸಮ್ಮೇಳನದ ಯಶಸ್ವಿಗಾಗಿ ಶ್ರಮಿಸಿದವರು ಮತ್ತು ಸಹಕರಿಸಿದವರನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ)ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಸನ್ಮಾನಿಸಿದರು.

ಬೀದರ ಎಸ್‌ಪಿ ಗೆಸ್ಟ್ ಹೌಸ್ ಆವರಣದಲ್ಲಿ ನಡೆದ ಸಮಾರಂಭದಲ್ಲಿ ವಸತಿ, ಆಹಾರ, ಸಾರಿಗೆ, ಪ್ರಚಾರ, ಮೆರವಣಿಗೆ, ನೋಂದಣಿ, ಅತಿಥಿ ಸತ್ಕಾರ, ಸಾಂಸ್ಕೃತಿಕ, ಸ್ಮರಣ ಸಂಚಿಕೆ, ಮಹಿಳಾ ಸಮಿತಿಯಿಂದ ಹಿಡಿದು ವಸ್ತು ಪ್ರದರ್ಶನ, ಛಾಯಾಚಿತ್ರ ಪ್ರದರ್ಶನ ಸಮಿತಿಯ ತನಕ ಎಲ್ಲಾ ಉಪ ಸಮಿತಿಗಳ ಪ್ರಧಾನ ಸಂಚಾಲಕರು, ಸಂಚಾಲಕರು, ಸಹ ಸಂಚಾಲಕರ ಸೇವೆಯನ್ನು ಸ್ಮರಿಸಿ ಸನ್ಮಾನಿಸಲಾಯಿತು. ಸಮ್ಮೇಳನಕ್ಕೆ ಒಂದೊಂದು ಜವಬ್ದಾರಿ ವಹಿಸಿಕೊಂಡು ಸಹಕಾರ ನೀಡಿದವರನ್ನು ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು, ಕಡಿಮೆ ಅವಧಿಯಲ್ಲಿ ಸಮ್ಮೇಳನವನ್ನು ವ್ಯವಸ್ಥಿತವಾಗಿ ಸಂಘಟಿಸಿದ ಬೀದರ್ ಜಿಲ್ಲಾ ಘಟಕ, ಬೀದರ್ ಪತ್ರಕರ್ತರು, ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಡಳಿತ ಮತ್ತು ನಾಗರೀಕರಿಗೆ ಧನ್ಯವಾದ ತಿಳಿಸಿದರು.

ಸಮ್ಮೇಳನದ ಮೆರವಣಿಗೆಯಿಂದ ಹಿಡಿದು ಊಟೋಪಚಾರ ತನಕ, ಸಮ್ಮೇಳನದ ಉದ್ಘಾಟನೆಯಿಂದ ಹಿಡಿದು ಹಲವು ವಿಚಾರ ಗೋಷ್ಠಿಗಳು, ಪ್ರಶಸ್ತಿ ಪ್ರದಾನ ಸಮಾರಂಭ ಮತ್ತು ಸಮಾರೋಪ ತನಕ ಎಲ್ಲವೂ ವ್ಯವಸ್ಥಿತವಾಗಿ, ಅರ್ಥಪೂರ್ಣವಾಗಿ ನಡೆದಿವೆ ಎಂದು ತಿಳಿಸಿದರು.

ಸಮ್ಮೇಳನ ಎನ್ನುವುದು ಒಂದು ಮೆರಗು,ಸೊಬಗು. ಸಮ್ಮೇಳನದ ಆತಿಥ್ಯ ವಹಿಸಿಕೊಂಡಿದ್ದ ಬೀದರ್ ಘಟಕ ಸಮ್ಮೇಳನದ ದಿಬ್ಬಣವನ್ನು ಅಚ್ಚುಕಟ್ಟಾಗಿ, ಹಬ್ಬದ ರೂಪದಲ್ಲಿ ಸ್ವಾಗತಿಸಿ, ಸತ್ಕರಿಸಿ ಬೀಳ್ಕೊಟ್ಟಿರುವುದಕ್ಕೆ ಕೆಯುಡಬ್ಲ್ಯೂಜೆ ಅಭಾರಿಯಾಗಿದೆ ಎಂದು ತಗಡೂರು ಹೇಳಿದರು.

ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ, ಸಚಿವ ರಹೀಂಖಾನ್ ಸೇರಿದಂತೆ ಎಲ್ಲಾ ಶಾಸಕರು ಮತ್ತು ಜನಪ್ರತಿನಿಧಿಗಳು ಮತ್ತು ಜಿಲ್ಲಾಧ್ಯಕ್ಷ ಆನಂದ ದೇವಪ್ಪ ಸೇರಿದಂತೆ ಎಲ್ಲ ತಾಲೂಕು ಸಂಘಗಳಿಗೂ ರಾಜ್ಯ ಸಂಘ ಅಭಾರಿಯಾಗಿದೆ ಎಂದು ಶಿವಾನಂದ್ ಹೇಳಿದರು.

ಬೀದರ್ ಜಿಲ್ಲಾ ಘಟಕ ಅಧ್ಯಕ್ಷ ಆನಂದ ದೇವಪ್ಪ ಮಾತನಾಡಿ, ರಾಜ್ಯ ಸಂಘದ ಅಧ್ಯಕ್ಷರು ನಮ್ಮ ಮೇಲೆ ವಿಶ್ವಾಸವಿಟ್ಟು ಸಮ್ಮೇಳನವನ್ನು ನೀಡಿ, ಸಹಕಾರ ಮಾಡಿದ್ದನ್ನು ಎಂದೂ ಮರೆಯಲು ಸಾಧ್ಯವಿಲ್ಲ. ಹಾಗೆಯೇ ಸಮ್ಮೇಳನಕ್ಕಾಗಿ ದುಡಿದವರಿಗೆ ಹೃದಯಪೂರ್ವಕವಾದ ಧನ್ಯವಾದ ಎಂದು ಹೇಳಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ ರಾಜ್ಯ ಸಂಘದ ಪರವಾಗಿ ಧನ್ಯವಾದ ಸಲ್ಲಿಸಿದರು.

ಕಲಬುರ್ಗಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಾಬುರಾವ್ ಯಡ್ರಾಮಿ, ಸಂಘದ ರಾಜ್ಯ ಸಮಿತಿ ಸದಸ್ಯ ಭವಾನಿಸಿಂಗ್ ಠಾಕೂರ್ ಮತ್ತಿತರರು ಉಪಸ್ಥಿತರಿದ್ದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಗುರುದ್ವಾರದ ಮುಖ್ಯಸ್ಥರು ಸೇರಿದಂತೆ ಹಲವರನ್ನು ಸನ್ಮಾನಿಸಲಾಯಿತು.

ರಾಜ್ಯ ಸಮಿತಿ ಸದಸ್ಯರಾದ ಅಪ್ಪರಾವ್ ಸೌದಿ ಅವರು ಕಾರ್ಯಕ್ರಮ ನಿರೂಪಿಸಿದರು.

ಇದೇ ಸಂದರ್ಭದಲ್ಲಿ ಸಮ್ಮೇಳನವನ್ನು ಯಶಸ್ವಿಗೊಳಿಸಿದ ಬೀದರ್ ಜಿಲ್ಲಾ ಘಟಕ ಅಧ್ಯಕ್ಷ ಆನಂದ ದೇವಪ್ಪ ಅವರನ್ನು ರಾಜ್ಯ ಸಂಘದ ಪರವಾಗಿ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಸನ್ಮಾನಿಸಿದರು.

## ಗ್ಯಾರಂಟಿ ಬಗ್ಗೆ ಅಷ್ಟೊಂದು ವಿಶ್ವಾಸವಿದ್ದಿದ್ದರೆ ಬಾಗಲಕೋಟೆಯಲ್ಲಿ 15 ದಿನ ಬೀಡುಬಿಟ್ಟಿದ್ದೇಕೆ?

### ಮುಖ್ಯಮಂತ್ರಿ ಸಿದ್ದರಾಮಯ್ಯಗೆ ವಿಜಯೇಂದ್ರ ಪ್ರಶ್ನೆ

### ಉಪಚುನಾವಣೆ ಸೋಲಿಗೆ ತಲೆಕೆಡಿಸಿಕೊಳ್ಳುವ ಪ್ರಶ್ನೆಯೇ ಇಲ್ಲ



**ಬೆಂಗಳೂರು ಮೇ 6:** ಮುಖ್ಯಮಂತ್ರಿಗಳು ಗ್ಯಾರಂಟಿಗಳಿಂದ ಬೀಗುತ್ತಿದ್ದಾರೆ. ನಿಮ್ಮ ಗ್ಯಾರಂಟಿಗಳ ಬಗ್ಗೆ ಅಷ್ಟೊಂದು ವಿಶ್ವಾಸ ಇದ್ದರೆ ಸಿಎಂ ಅವರು ಯಾಕೆ 15 ದಿನಗಳ ಕಾಲ ಬಾಗಲಕೋಟೆಗೆ ಬಂದು ಕೂರಬೇಕಾಗಿತ್ತು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಪ್ರಶ್ನಿಸಿದ್ದಾರೆ.

ಚಿತ್ರದುರ್ಗದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಉಪ ಚುನಾವಣೆಯ ಸೋಲಿನಿಂದ ಹತಾಶರಾಗುವ ಪ್ರಶ್ನೆ ಉದ್ಭವಿಸುವುದಿಲ್ಲ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಂಥ ದಿಟ್ಟ ನಾಯಕತ್ವ ದೇಶಕ್ಕೆ ಸಿಕ್ಕಿದೆ. ನಿತಿನ್ ನಬೀನ್ ಜೀ ಅವರು ಒಬ್ಬ ಯುವ ರಾಷ್ಟ್ರೀಯ ಅಧ್ಯಕ್ಷರು ನೇತೃತ್ವ ವಹಿಸಿಕೊಂಡಿದ್ದಾರೆ. ಅಮಿತ್ ಶಾ ಜೀ ಅವರಂಥ ಚುನಾವಣಾ ಚಾಣಕ್ಯ ನಮ್ಮ ಜೊತೆಗಿದ್ದಾರೆ. ಉಪಚುನಾವಣೆ ಸೋಲಿನ ಸಂಬಂಧ ತಲೆಕೆಡಿಸಿಕೊಳ್ಳುವ ಪ್ರಶ್ನೆಯೇ ಇಲ್ಲ ಎಂದು ಪ್ರಶ್ನೆಗೆ ಉತ್ತರ ನೀಡಿದರು.

ಗೃಹಲಕ್ಷ್ಮೀ ಯೋಜನೆ ಇವತ್ತು ಚುನಾವಣಾ ಲಕ್ಷ್ಮೀಯಾಗಿ ಪರಿವರ್ತನೆಯಾಗಿದೆ. ಇವರು ಬಡವರಿಗೆ ಯೋಜನೆಗಳನ್ನು ನೀಡಲಿ. ಇವರೊಬ್ಬರೇ ಯೋಜನೆಗಳನ್ನು ನೀಡಿಲ್ಲ. ಯಡಿಯೂರಪ್ಪನವರು ಹಿಂದೆ ಭಾಗ್ಯಲಕ್ಷ್ಮೀ, ಸಂಧ್ಯಾ ಸುರಕ್ಷಾ, ಬೈಸಿಕಲ್ ಯೋಜನೆಗಳನ್ನು ನೀಡಿದ್ದರು. ಇನ್ನೂ ಹಲವು ಒಳ್ಳೆಯ ಯೋಜನೆ ಕೊಟ್ಟಿದ್ದಾರೆ. ಆದರೆ, ಗೃಹಲಕ್ಷ್ಮೀ ಇವತ್ತು ಚುನಾವಣಾ ಲಕ್ಷ್ಮೀಯಾಗಿರುವುದು ಖಂಡಿತ ಸರಿಯಲ್ಲ ಎಂದು ಆಕ್ಷೇಪಿಸಿದರು.

ಪ್ರತಿ ತಿಂಗಳ ಬದಲು ಅದನ್ನು ತಡೆಹಿಡಿದು ಉಪಚುನಾವಣೆಯಲ್ಲಿ ಮೊನ್ನೆ ಬಿಡುಗಡೆ ಮಾಡಿದ್ದಾರೆ. ಇನ್ನು ಮುಂದಿನ ಕಂತನ್ನು ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆ ಬಂದಾಗಲೇ ಬಿಡುಗಡೆ ಮಾಡಲಿದ್ದಾರೆ ಎಂದು ತಿಳಿಸಿದರು. ಇವರು ಜನರಿಗೆ ಆಮಿಷವೊಡ್ಡುವ ರೀತಿಯಲ್ಲಿ ಯೋಜನೆ ನೀಡುತ್ತಿದ್ದಾರೆ. ಯಡಿಯೂರಪ್ಪನವರು ಮುಖ್ಯಮಂತ್ರಿ ಇದ್ದಾಗ ದೂರದೃಷ್ಟಿಯಿಂದ ಭಾಗ್ಯಲಕ್ಷ್ಮೀ ಯೋಜನೆ ಅನುಷ್ಠಾನಕ್ಕೆ ತಂದಿದ್ದರು. ಈ ಉಪಚುನಾವಣೆ ಸೋಲಿನಿಂದ ಬಿಜೆಪಿ, ಬಿಜೆಪಿ ಕಾರ್ಯಕರ್ತರು ಹೆದರಿಕೊಳ್ಳುವ ಪ್ರಶ್ನೆಯೇ ಇಲ್ಲ. ಇವೆಲ್ಲವನ್ನೂ ಮೀರಿ ಸಂಘಟನೆ ಬಲಪಡಿಸುತ್ತೇವೆ. ಹಿರಿಯರ ಆಶೀರ್ವಾದದಿಂದ ರಾಜ್ಯದಲ್ಲಿ ಮತ್ತೆ ಸರಕಾರ ತರುತ್ತೇವೆ ಎಂದು ವಿಶ್ವಾಸದಿಂದ ನುಡಿದರು.

**ಜನರ ಕ್ಷಮೆ ಕೇಳಲು ಒತ್ತಾಯ**

ಮತಗಳ್ಳತನದ ವಿರುದ್ಧ ರಾಹುಲ್ ಗಾಂಧಿಯವರು ಪ್ರವಾಸ ಮಾಡಿದ್ದರು. ರಾಜ್ಯ ಹೈಕೋರ್ಟಿನ ಆದೇಶದಂತೆ ಶೃಂಗೇರಿಯಲ್ಲಿ ಮರು ಮತ ಎಣಿಕೆ ನಡೆದು ಬಿಜೆಪಿ ಅಭ್ಯರ್ಥಿ ಜೀವರಾಜ್ ಅವರು ಗೆದ್ದಿದ್ದಾರೆ. ರಾಹುಲ್ ಗಾಂಧಿಯವರು ಈಗ ದೇಶದ ಜನರ ಕ್ಷಮೆ ಕೇಳಬೇಕು. ಸಿದ್ದರಾಮಯ್ಯ, ಡಿ.ಕೆ.ಶಿವಕುಮಾರ್ ಅವರು ರಾಜ್ಯದ ಜನರ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದರು.

**ಸ್ಪೀಕರ್ ರಾಜಕಾರಣ ಮೀರಿ ನಡೆದುಕೊಳ್ಳಬೇಕು..**

ಜೀವರಾಜ್‌ಗೆ ಪ್ರಮಾಣವಚನ ಬೋಧಿಸಲು ವಿಳಂಬ ಮಾಡುತ್ತಿರುವ ಸಭಾಧ್ಯಕ್ಷರು ತಮ್ಮ ಸಾಂವಿಧಾನಿಕ ಸ್ಥಾನಕ್ಕೆ ಅಪಚಾರ ಮಾಡುತ್ತಿದ್ದಾರೆ ಎಂದು ವಿಜಯೇಂದ್ರ ಆಕ್ಷೇಪಿಸಿದರು. ಅವರು ರಾಜಕಾರಣ ಮೀರಿ ನಡೆದುಕೊಳ್ಳಲಿ ಎಂದು ಒತ್ತಾಯಿಸಿದರು. ಕಾಂಗ್ರೆಸ್ಸಿನವರು ಪ್ರಜಾಪ್ರಭುತ್ವದ ಕಗ್ಗೊಲೆ ಮಾಡುತ್ತಿದ್ದಾರೆ ಎಂದು ದೂರಿದರು. ಸ್ಪೀಕರ್ ಅವರು ರಾಜಕಾರಣ, ರಾಜಕಾರಣಿಗಳ ಒತ್ತಡಕ್ಕೆ ಮಣಿಯದೇ ನ್ಯಾಯಯುತವಾಗಿ ನಡೆದುಕೊಳ್ಳಲಿ. ಕೂಡಲೇ ಜೀವರಾಜ್ ಅವರಿಗೆ ಪ್ರಮಾಣವಚನ ಬೋಧಿಸಲಿ ಎಂದು ಮನವಿ ಮಾಡಿದರು. ಪರಾಜಿತ ಅಭ್ಯರ್ಥಿ ರಾಜೇಗೌಡರು ಹೈಕೋರ್ಟಿಗೆ ಹೋಗಲು ಸಮಯಾವಕಾಶ ಕೊಡಲು ಕಟ್ಟುಕಥೆ ಹೇಳುತ್ತಿದ್ದಾರೆ ಎಂದು ಆಕ್ಷೇಪಿಸಿದರು.



■ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈಸೂರಿನಲ್ಲಿ ಜರುಗಿದ IAS ಅಧಿಕಾರಿ ಪೂರ್ಣಿಮಾ ಅವರ ಮಗಳ ವಿವಾಹ ಮಹೋತ್ಸವದಲ್ಲಿ ಭಾಗವಹಿಸಿ ನೂತನ ವಧು–ವರನನ್ನು ಆಶೀರ್ವದಿಸಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,‘A’/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಆರ್ಥಿಕ, ಸಾಮಾಜಿಕವಾಗಿ ಸಬಲರಾಗಲು ಶಿಕ್ಷಣ ಅಗತ್ಯ

**ಶಿಕ್ಷಿತರಾಗುವಂತೆ ಭೋವಿ ಸಮುದಾಯಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ**

**ಸಿದ್ಧರಾಮೇಶ್ವರ ಜಯಂತಿ ಉದ್ಘಾಟನೆ**



**ಮೈಸೂರು, ಮೇ 6:** ಆರ್ಥಿಕ ಹಾಗೂ ಸಾಮಾಜಿಕ ಶಕ್ತಿಗಾಗಿ ಶಿಕ್ಷಣ ಅಗತ್ಯವಾಗಿದ್ದು, ಭೋವಿ ಜನಾಂಗದವರು ಶಿಕ್ಷಣಕ್ಕೆ ಒತ್ತು ನೀಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮೈಸೂರು ಜಿಲ್ಲಾಡಳಿತದ ವತಿಯಿಂದ ಮೈಸೂರಿನ ಕಲಾಮಂದಿರದಲ್ಲಿ ಆಯೋಜಿಸಿದ್ದ ಸಿದ್ದರಾಮೇಶ್ವರ ಜಯಂತಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಸಮಸಮಾಜ ನಿರ್ಮಿಸುವ ಸಂಕಲ್ಪವನ್ನು ಸರ್ಕಾರ ಹೊಂದಿದೆ. ಉತ್ಪಾದಿಸಿದ ಸಂಪತ್ತು ಸಮಾನವಾಗಿ ಹಂಚಿಕೆಯಾಗಿಬೇಕು. ರಾಜ್ಯದ ಸರ್ವರಿಗೂ ಸಮಪಾಲು, ಸಮಬಾಳು ಸಿಗಬೇಕೆಂಬುದೇ ಸರ್ಕಾರದ ಉದ್ದೇಶ. ಸಿದ್ದರಾಮೇಶ್ವರರೂ ಸೇರಿದಂತೆ ಸಂತಮಹಾಶಯರು, ಸಮಾಜದಲ್ಲಿ ಜಾತಿವರ್ಗಗಳ ವ್ಯವಸ್ಥೆಗಳು ತೊಲಗಬೇಕು ಎಂದು ಬಯಸಿದ್ದರು. ಬಸವಾದಿ ಶರಣರು 12ನೇ ಶತಮಾನದಲ್ಲಿ ಸಮಾನತೆಯ ಸಿದ್ಧಾಂತವನ್ನು ಬೋಧಿಸಿದ್ದರು. ಶೋಷಣೆಗೊಳಗಾದ ಹಾಗೂ ಅವಕಾಶವಂಚಿತ ಸಮುದಾಯಗಳು ಸಂಘಟಿತರಾಗುವ ಸಮ್ಮೇಳನಗಳು ಉತ್ತಮ ಕಾರ್ಯಗಳಾಗಿವೆ ಎಂದರು.

ಬಸವಜಯಂತಿಯಂದು ನಾನು 2013 ಮೇ 13ರಂದು ನಾನು ಮುಖ್ಯಮಂತ್ರಿಯಾಗಿ ಪದಗ್ರಹಣ ಮಾಡಿದೆ. ಬಸವಣ್ಣನವರು ಬೋಧಿಸಿದಂತೆ ನಾನು ಸಾಮಾಜಿಕ ನ್ಯಾಯದಲ್ಲಿ ನಂಬಿಕೆಯಿರಿಸಿದ್ದೇನೆ. ರಾಜಕೀಯ ಸ್ವಾತಂತ್ರ್ಯವು, ಆರ್ಥಿಕ ಹಾಗೂ ಸಾಮಾಜಿಕ ಸ್ವಾತಂತ್ರ್ಯದ ತಳಹದಿಯ ಮೇಲೆ ನಿಂತಿದೆ. ಶಿಕ್ಷಣ ಪಡೆದಾಗ ಮಾತ್ರ ಸಾಮಾಜಿಕ ಆರ್ಥಿಕ ಶಕ್ತಿ ದೊರಕಲು ಸಾಧ್ಯ ಎಂದರು.

ಆರ್ಥಿಕವಾಗಿ ಶಕ್ತಿಯಿಲ್ಲದವರಿಗೆ ಗ್ಯಾರಂಟಿ ಯೋಜನೆಗಳನ್ನು ಸಮಾನವಾಗಿ ನೀಡಲಾಗಿದೆ. ಮಹಿಳೆಯರಿಗೆ ಶಕ್ತಿ ಹಾಗೂ ಗೃಹಲಕ್ಷ್ಮಿ ಯೋಜನೆಯನ್ನು ಯಾವುದೇ ತಾರತಮ್ಯವಿಲ್ಲದೇ ನೀಡಲಾಗುತ್ತಿದೆ. ನಮ್ಮ ಸರ್ಕಾರ ಭೋವಿ ನಿಗಮವೂ ಸೇರಿದಂತೆ ವಿವಿಧ ಸಮುದಾಯಗಳ ಅಭಿವೃದ್ಧಿ ನಿಗಮಗಳ ಸಾಲವನ್ನು ಮನ್ನಾ ಮಾಡಲಾಗಿದೆ. ಪರಿಶಿಷ್ಟ ಜಾತಿಯ ಸಮುದಾಯಗಳಲ್ಲಿನ ಅಸಮಾನತೆ ಹೋಗಲಾಡಿಸಲು ಐತಿಹಾಸಿಕ ಒಳ ಮೀಸಲಾತಿಯನ್ನು ಜಾರಿಗೊಳಿಸಿದೆ ಎಡಗೈಗೆ 5.25%, ಬಲಗೈಗೆ 5.25%, ಹಾಗೂ ಇತರ ಉಪಜಾತಿಗಳಿಗೆ 4.5% ಹಂಚಿಕೆ ಮಾಡಲಾಗಿದೆ. ಈಗ ಜಾತಿ ಸಮೀಕ್ಷೆ ನಡೆಯುತ್ತಿದ್ದು, ಜಾತಿ ಸಮೀಕ್ಷೆ ವರದಿ ಬಂದ ನಂತರ ಚರ್ಚೆ ಮಾಡೋಣ. ನಮ್ಮ ಸರ್ಕಾರ ಸಾಮಾಜಿಕ ನ್ಯಾಯಕ್ಕೆ ಬದ್ಧವಾಗಿದೆ. ಯಾರಿಗೂ ಅನ್ಯಾಯವಾಗಬಾರದು, ನೂರಕ್ಕೆ ನೂರು ಅಲ್ಲದಿದ್ದರೂ 99% ನ್ಯಾಯ ಒದಗಿಸಲು ಪ್ರಯತ್ನಿಸಲಾಗುವುದು ಎಂದರು.

ಸಮುದಾಯದವರು ಇಟ್ಟಿರುವ ಬೇಡಿಕೆಗಳನ್ನು ಈಡೇರಿಸುವ ಬಗ್ಗೆ ಭರವಸೆ ನೀಡಿದ ಮುಖ್ಯಮಂತ್ರಿಗಳು ಸಮುದಾಯದವರಿಗೆ ಕುಲಪತಿ, ವಿಧಾನ ಪರಿಷತ್ ಸದಸ್ಯ ಸ್ಥಾನ ನೀಡುವ ಬಗ್ಗೆ ಪರಿಶೀಲಿಸಲಾಗುವುದು ಎಂದರು. ಏಳು ಕೋಟಿ ಜನರಿಗೂ ನ್ಯಾಯ ಸಿಗಬೇಕು ಹಾಗೂ ಯಾರೂ ಅವಕಾಶಗಳಿಂದ ವಂಚಿತರಾಗಬಾರದು ಎಂದರು.

ಸಂವಿಧಾನ ರಚನೆಯಾದ ನಂತರ ಸಮಾನತೆಯನ್ನು ಸಾಧಿಸುವತ್ತ ದೇಶ ಸಾಗಿದ್ದು, ಸಂವಿಧಾನ ಹೇಳುವಂತೆಯೇ ನಡೆದುಕೊಳ್ಳುತ್ತೇವೆ ಎಂದರು.ಸ್ವಾತಂತ್ರ್ಯ ಸಮಾನತೆ ಮತ್ತು ಭ್ರಾತೃತ್ವ ಸಂವಿಧಾನದ ಮೂಲ ತತ್ವಗಳು. ಜಡತ್ವದಿಂದ ಕೂಡಿರುವ ಜಾತಿ ವ್ಯವಸ್ಥೆಯನ್ನು ಸುಧಾರಿಸಬೇಕಿದೆ. ಎಲ್ಲಾ ಜಾತಿಗಳನ್ನು ಪ್ರೀತಿಸಿ, ಅವರೂ ನಮ್ಮನ್ನು ಪ್ರೀತಿಸುವಂತೆ ಮಾಡಬೇಕು ಹಾಗೂ ಸಹಿಷ್ಣುತೆಯನ್ನು ರೂಡಿಸಿಕೊಳ್ಳಬೇಕು. ಉತ್ಪಾದನೆಯಲ್ಲಿ ಎಲ್ಲರೂ ಭಾಗವಹಿ ಉತ್ಪನ್ನವನ್ನು ಸಮಾನವಾಗಿ ಹಂಚಿಕೊಳ್ಳಬೇಕು ಎಂದು ಸಿದ್ಧರಾಮೇಶ್ವರರು ನಮಗೆ ಬೋಧಿಸಿದ್ದರು. ಅವರು ನಡೆದ ಹಾದಿಯಲ್ಲಿಯೇ ನಮ್ಮ ಸರ್ಕಾರವೂ ನಡೆಯುತ್ತಿದೆ ಎಂದರು.

# ಹೊಸ ಪೊಲೀಸ್ ಠಾಣೆಗಳ ನಿರ್ಮಾಣಕ್ಕೆ ಕ್ರಮ: ಗೃಹ ಸಚಿವ ಪರಮೇಶ್ವರ್



**ಬೆಂಗಳೂರು, ಮೇ 6:** ರಾಜ್ಯದಲ್ಲಿರುವ ಹಳೇ ಪೊಲೀಸ್ ಠಾಣೆಗಳ ಕಟ್ಟಡಗಳ ಬದಲಿಗೆ ಹೊಸ ಕಟ್ಟಡಗಳನ್ನು ನಿರ್ಮಾಣ ಮಾಡುವ ಉದ್ದೇಶ ಹೊಂದಲಾಗಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಅವರು, ಈಗಾಗಲೇ ಬಹುತೇಕ ಪೊಲೀಸ್ ಠಾಣೆಗಳ ಹಳೆಯ ಕಟ್ಟಡಗಳನ್ನು ಕೆಡವಿ, ಹೊಸದಾಗಿ ನಿರ್ಮಿಸಲಾಗಿದೆ. ಇನ್ನಷ್ಟು ಹಳೆಯ ಕಟ್ಟಡಗಳನ್ನು ಗುರುತಿಸಲಾಗಿದ್ದು, ಅವುಗಳನ್ನು ಕೆಡವಿ ಹೊಸದಾಗಿ ನಿರ್ಮಾಣ ಮಾಡಲಾಗುವುದು. ಇದಕ್ಕಾಗಿ ಅನುದಾನ ಅಗತ್ಯವಿದೆ. ಈ ಸಂಬಂಧ ಆರ್ಥಿಕ ಇಲಾಖೆಯೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಪೊಲೀಸರಿಗೆ ಸುಸಜ್ಜಿತವಾದ ವಸತಿಗೃಹಗಳನ್ನು ಕಲ್ಪಿಸುವ ಕಾರ್ಯಕ್ರಮ ಮುಂದುವರೆದಿದ್ದು, ಶೇಕಡ 40ರಷ್ಟು ವಸತಿ ಗೃಹಗಳ ನಿರ್ಮಾಣವಾಗಿದ್ದು, ಶೇಕಡ 80ರಷ್ಟು ವಸತಿ ಗೃಹಗಳನ್ನು ನಿರ್ಮಿಸುವ ಗುರಿಯನ್ನು ಸರ್ಕಾರ ಹೊಂದಿದೆ. ಈ ನಿಟ್ಟಿನಲ್ಲಿ ಕಾರ್ಯೋನ್ಮುಖ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

# ಐಪಿಎಲ್ ಪಂದ್ಯ ಸ್ಥಳಾಂತರಕ್ಕೆ ಶಾಸಕರ ಉಚಿತ ಟಿಕೆಟ್ ದುರಾಸೆ ಕಾರಣ ನಿಖಿಲ್ ಕುಮಾರಸ್ವಾಮಿ ವಾಗ್ದಾಳಿ



**ಬೆಂಗಳೂರು, ಮೇ 6:** ವಿವಿಐಪಿ ಪಾಸ್‌ಗಳ ಹಪಾಹಪಿ ಹಾಗೂ ಶಾಸಕರ ಉಚಿತ ಟಿಕೆಟ್ ವ್ಯಾಮೋಹದಿಂದಾಗಿ ಬೆಂಗಳೂರಿನಲ್ಲಿ ನಡೆಯಬೇಕಿದ್ದ ಐಪಿಎಲ್ ಫೈನಲ್ ಪಂದ್ಯ ಅಹಮದಾಬಾದ್ ಪಾಲಾಗಿದೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ರಾಜ್ಯ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಸೋಮವಾರ ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿರುವ ಅವರು, ನಮ್ಮ ರಾಜ್ಯದ ನಾಯಕರಿಗೆ ಅಭಿನಂದನೆಗಳು ಕೇವಲ ತಮ್ಮ ವಿವಿಐಪಿ ಪಾಸ್‌ಗಳ ಹಪಾಹಪಿಯಿಂದಾಗಿ, ನಮ್ಮೂರಿನಲ್ಲಿ ನಡೆಯಬೇಕಿದ್ದ ಫೈನಲ್ ಪಂದ್ಯವನ್ನು ಅಹಮದಾಬಾದ್‌ಗೆ ಉಡುಗೊರೆಯಾಗಿ ನೀಡಿದ್ದೀರಿ, ಎಂದು ಅವರು ವ್ಯಂಗ್ಯವಾಡಿದರು.

ನಾನು ಅಂದೇ ಹೇಳಿದ್ದೆ, ಇಂದೂ ಅದನ್ನೇ ಪುನರುಚ್ಚರಿಸುತ್ತಿದ್ದೇನೆ, ಕ್ರೀಡಾಂಗಣವಿರುವುದು ಕ್ರಿಕೆಟ್ ಅಭಿಮಾನಿಗಳಿಗಾಗಿ ಹೊರತು ವಿಐಪಿಗಳಿಗಾಗಿ ಅಲ್ಲ. ನಮ್ಮ ಕೆಲವು ಶಾಸಕರ ಉಚಿತ ಟಿಕೆಟ್ ವ್ಯಾಮೋಹದಿಂದಾಗಿ ಇಂದು ಐಪಿಎಲ್ ಫೈನಲ್ ಬೆಂಗಳೂರಿನಿಂದ ಕೈತಪ್ಪಿ ಹೋಗಿದೆ ಎಂದು ಅವರು ಬೇಸರ ವ್ಯಕ್ತಪಡಿಸಿದರು.

ಬಿಸಿಸಿಐನ ನಿರ್ಧಾರವನ್ನು ಉಲ್ಲೇಖಿಸಿದ ನಿಖಿಲ್ ಕುಮಾರಸ್ವಾಮಿ ಅವರು ಬಿಸಿಸಿಐ ತೆಗೆದುಕೊಂಡಿರುವ ಈ ನಿರ್ಧಾರ ನಮ್ಮ ಸರ್ಕಾರಕ್ಕೆ ಒಂದು ಎಚ್ಚರಿಕೆ ಗಂಟೆಯಾಗಲಿ. ಚಿನ್ನಸ್ವಾಮಿ ಕ್ರೀಡಾಂಗಣವನ್ನು ತಮ್ಮ ವೈಯಕ್ತಿಕ ಟಿಕೆಟ್ ಕೌಂಟರ್ ಮಾಡಿಕೊಂಡವರ ಬೇಜವಾಬ್ದಾರಿ ವರ್ತನೆಯಿಂದಾಗಿ, ಇಂದು ನಾವು ಕೇವಲ ಒಂದು ಪಂದ್ಯವನ್ನಷ್ಟೇ ಅಲ್ಲ, ರಾಷ್ಟ್ರಮಟ್ಟದಲ್ಲಿ ಬೆಂಗಳೂರಿನ ಘನತೆಯನ್ನೂ ಕಳೆದುಕೊಂಡಿದ್ದೇವೆ, ಎಂದು ಆಕ್ರೋಶ ಹೊರಹಾಕಿದರು. ಕ್ರಿಕೆಟ್ ಅಭಿಮಾನಿಗಳ ಭಾವನೆಗೆ ಧಕ್ಕೆ ತಂದಿರುವ ಸರ್ಕಾರದ ನಡೆಯನ್ನು ನಿಖಿಲ್ ಕುಮಾರಸ್ವಾಮಿ ಅವರು ತೀವ್ರವಾಗಿ ಖಂಡಿಸಿದ್ದಾರೆ.

# 23 ಲಕ್ಷಕ್ಕೂ ಹೆಚ್ಚು ಇ-ಖಾತಾ ವಿತರಣೆ: ಡಿಸಿಎಂ ಡಿ.ಕೆ. ಶಿವಕುಮಾರ್ ಟ್ವೀಟ್

**ಸುಲಭ, ಪಾರದರ್ಶಕ ಹಾಗೂ ನಾಗರಿಕಸ್ನೇಹಿ ಆಡಳಿತದತ್ತ ಹೆಜ್ಜೆ**

**ಬೆಂಗಳೂರು, ಮೇ 6:** ನಗರದ ಆಸ್ತಿದಾರರಿಗೆ ಉಪಮುಖ್ಯಮಂತ್ರಿ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವ ಡಿ.ಕೆ ಶಿವಕುಮಾರ್ ಅವರು ಗುಡ್‌ನ್ಯೂಸ್ ಕೊಟ್ಟಿದ್ದಾರೆ.

ಬೆಂಗಳೂರಿನಲ್ಲಿ ಆಸ್ತಿದಾರರು ಇ ಖಾತಾ ಪಡೆದುಕೊಳ್ಳುವುದಕ್ಕೆ ಸಮಸ್ಯೆ ಎದುರಿಸುತ್ತಿದ್ದರು. ಇದೀಗ ಈ ಆಸ್ತಿದಾರರಿಗೆ ಡಿ.ಕೆ ಶಿವಕುಮಾರ್ ಅವರು ಭರ್ಜರಿ ಗುಡ್‌ನ್ಯೂಸ್ ಕೊಟ್ಟಿದ್ದಾರೆ. ಬೆಂಗಳೂರಿನ ಆಸ್ತಿದಾರರ ವಿಚಾರಕ್ಕೆ ಸಂಬಂಧಿಸಿದಂತೆ ಸೋಶಿಯಲ್ ಮೀಡಿಯಾ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಡಿ.ಕೆ ಶಿವಕುಮಾರ್ ಅವರು, ನಮ್ಮ ಬೆಂಗಳೂರು ಈಗ ಮತ್ತಷ್ಟು ಸುಲಭ, ಪಾರದರ್ಶಕವಾದ ಮತ್ತು ನಾಗರಿಕ ಸ್ನೇಹಿ ಆಡಳಿತದತ್ತ ಹೆಜ್ಜೆ ಹಾಕುತ್ತಿದೆ. ಈಗಾಗಲೇ 23 ಲಕ್ಷಕ್ಕೂ ಅಧಿಕ ಇ-ಖಾತಾಗಳನ್ನು ವಿತರಿಸಿ ಐತಿಹಾಸಿಕ ದಾಖಲೆ ಮಾಡಲಾಗಿದೆ. ಪ್ರತಿಯೊಬ್ಬ ನಾಗರಿಕನಿಗೂ ಸುಲಭ ಮತ್ತು ಪಾರದರ್ಶಕ ಕಂದಾಯ ಸೇವೆಗಳನ್ನು ಒದಗಿಸುವುದೇ ನಮ್ಮ ಉದ್ದೇಶವಿದೆ ಎಂದು ಡಿ.ಕೆ ಶಿವಕುಮಾರ್ ಅವರು ಹೇಳಿದ್ದಾರೆ.

ಬೆಂಗಳೂರು ಮಹಾನಗರದಲ್ಲಿ ಆಸ್ತಿದಾರರು ಇ ಖಾತಾ ವಿಚಾರದಲ್ಲಿ ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲಾಗಿದೆ. ಬೆಂಗಳೂರಿನಲ್ಲಿ 23 ಲಕ್ಷಕ್ಕೂ ಹೆಚ್ಚು ಆಸ್ತಿ ಮಾಲೀಕರಿಗೆ ಇ ಖಾತಾ ವಿತರಣೆ ಮಾಡಲಾಗಿದೆ. ಎಸ್‌ಎಂಎಸ್ ಮತ್ತು ವಾಟ್ಸ್ ಆಪ್ ಮೂಲಕ ನೇರವಾಗಿ ನಾಗರಿಕರಿಗೆ ಡಿಜಿಟಲ್ ಪ್ರತಿ ರವಾನೆ ಮಾಡಲಾಗುತ್ತಿದೆ. ಅಲ್ಲದೆ ಒಂದೇ ದಿನದಲ್ಲಿ 13 ಲಕ್ಷ ಇ-ಖಾತಾಗಳನ್ನು ವಿತರಿಸುವ ಮೂಲಕ ಐತಿಹಾಸಿಕ ಮೈಲಿಗಲ್ಲು ಸಾಧಿಸಲಾಗಿದೆ. ಆಸ್ತಿ ದಾಖಲೆಗಳ ಡಿಜಿಟಲ್ ರೂಪಾಂತರಕ್ಕಾಗಿ 2025ರ ರಾಷ್ಟ್ರೀಯ ಆಡಳಿತ ಚಿನ್ನದ ಪ್ರಶಸ್ತಿ ಲಭಿಸಿದೆ ಎಂದು ಡಿ.ಕೆ ಶಿವಕುಮಾರ್ ಹೇಳಿದ್ದಾರೆ.

**ಆಸ್ತಿಗಳ ದಾಖಲೆ ಸುರಕ್ಷಿತ**

ಬೆಂಗಳೂರು ನಗರದ ಪ್ರತಿಯೊಬ್ಬ ಆಸ್ತಿದಾರರ ದಾಖಲೆಗಳು ಸುರಕ್ಷಿತವಾಗಿದೆ ಎಂದು ಗ್ರೇಟರ್ ಬೆಂಗಳೂರು ಪ್ರಾಧಿಕಾರವು ತಿಳಿಸಿದೆ. ಆಸ್ತಿ ವ್ಯವಹಾರಕ್ಕೂ ಮುನ್ನ ನಾಗರಿಕರು ಸುರಕ್ಷಿತವಾಗಿ ಪ್ರಮುಖ ವಿವರಗಳನ್ನು ಇ ಖಾತಾದಲ್ಲಿ ಸೇರಿಸಬಹುದು. ದೃಢೀಕರಿಸಿದ ಮಾಲೀಕತ್ವಕ್ಕಾಗಿ ಮಾಲೀಕರ ಆಧಾರ್ ಕಾರ್ಡ್ – ಕಾನೂನು ನಿಖರತೆಗಾಗಿ ನೋಂದಾಯಿತ ಮಾರಾಟ ಪತ್ರ, ಸರಿಯಾದ ಗುರುತಿಸುವಿಕೆಗಾಗಿ ಆಸ್ತಿ ಫೋಟೋ ಮತ್ತು ಜಿಪಿಎಸ್ ಹಾಗೂ ಯಾವುದೇ ಅಡಚಣೆ ಇಲ್ಲದ ದಾಖಲೆ ಜೋಡಣೆಗಾಗಿ ಬೆಸ್ಕಾಂ ಮೀಟರ್ ಐಡಿ, ಆಸ್ತಿದಾರರಿಗೆ ಇ –ಖಾತಾ ವಿಚಾರದಲ್ಲಿ ಶುಭಸುದ್ದಿ ನೀಡುವುದಾಗಿ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ಹೇಳಿದ್ದಾರೆ. ಆದರೆ ಇದಕ್ಕೆ ನೆಟ್ಟಿಗರಿಂದ ಮಿಶ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ.

## ಶಾಸಕರಿಗೆ ಟಿಕೆಟ್ ವಿತರಣೆಗೂ ಐಪಿಎಲ್ ಫೈನಲ್ ಪಂದ್ಯ ಸ್ಥಳಾಂತರಕ್ಕೂ ಸಂಬಂಧವಿಲ್ಲ: ಡಿ.ಕೆ. ಶಿವಕುಮಾರ್




ಅಹಮದಾಬಾದ್‌ನಲ್ಲಿ ದೊಡ್ಡ ಕ್ರೀಡಾಂಗಣವಿದೆ, ಹೆಚ್ಚು ಜನ ಸೇರುತ್ತಾರೆ ಎಂಬ ಉದ್ದೇಶದಿಂದ ಐಪಿಎಲ್ ಫೈನಲ್ ಪಂದ್ಯವನ್ನು ಸ್ಥಳಾಂತರ ಮಾಡಿರಬೇಕು. ಶಾಸಕರಿಗೆ ಟಿಕೆಟ್ ವಿತರಣೆಗೂ ಅಂತಿಮ ಪಂದ್ಯ ಸ್ಥಳಾಂತರಕ್ಕೂ ಸಂಬಂಧವಿಲ್ಲ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು. ಸದಾಶಿವನಗರದ ನಿವಾಸದ ಬಳಿ ಮಾಧ್ಯಮಗಳ ಪ್ರಶ್ನೆಗಳಿಗೆ ಬುಧವಾರ ಪ್ರತಿಕ್ರಿಯೆ ನೀಡಿ, ಶಾಸಕರಿಗೆ ಐಪಿಎಲ್ ಟಿಕೆಟ್ ಬೇಡಿಕೆ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ನಡೆಯಬೇಕಿದ್ದ ಐಪಿಎಲ್ ಫೈನಲ್ ಪಂದ್ಯವನ್ನು ಅಹಮದಾಬಾದಿಗೆ ಸ್ಥಳಾಂತರಿಸಲಾಗಿದೆ ಎಂಬ ವಿಚಾರವಾಗಿ ಕೇಳಿದಾಗ, ಬೇರೆ ಕಡೆ ಶೇ.50ರಷ್ಟು ಮೀಸಲಿರುತ್ತದೆ. ಬಿಸಿಸಿಐ ಟಿಕೆಟ್ ವಿಚಾರಕ್ಕೆ ಸ್ಥಳಾಂತರ ನಿರ್ಧಾರ ಮಾಡಿದ್ದೇವೆ ಎಂದು ಹೇಳಿಕೆ ನೀಡಿರುವ ಬಗ್ಗೆ ಕೇಳಿದಾಗ, ಅವರು ಈ ರೀತಿ ಹೇಳಿಕೆ ನೀಡಲಿ, ನಾನು ಅದಕ್ಕೆ ಸರಿಯಾದ ಉತ್ತರ ಕೊಡುತ್ತೇನೆ ಎಂದರು.



ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಬುಧವಾರ ನವದೆಹಲಿಯಲ್ಲಿ ವಿಯೆಟ್ನಾಂನ ಉಪ ಪ್ರಧಾನ ಮಂತ್ರಿ ಮತ್ತು ರಾಷ್ಟ್ರೀಯ ರಕ್ಷಣಾ ಸಚಿವ ಜನರಲ್ ಫಾನ್ ವ್ಯಾನ್ ಗಿಯಾಂಗ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು.

# ಕೇರಳದಲ್ಲಿ ಕಾಂಗ್ರೆಸ್ ಸಾಧನೆಗೆ ಸಂತಸ: ಸಚಿವ ಕೃಷ್ಣಬೈರೇಗೌಡ

**ತಮಿಳುನಾಡಿನಲ್ಲಿ ಜನ ಬದಲಾವಣೆ ಬಯಸಿದ್ದು ಸ್ಪಷ್ಟವಾಗಿದೆ**



**ಹಾಸನ, ಮೇ 6:** ಪಂಚರಾಜ್ಯಗಳ ಚುನಾವಣೆ ಫಲಿತಾಂಶ ವಿಚಾರಕ್ಕೆ ಸಂಬಂಧಿಸಿದಂತೆ ಕಂದಾಯ ಸಚಿವ ಮತ್ತು ಜಿಲ್ಲಾಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಹೇಳಿಕೆ ನೀಡಿದ್ದಾರೆ.

ಹಾಸನದಲ್ಲಿ ಈ ಕುರಿತು ಮಾಧ್ಯಮಗಳೊಂದಿಗೆ ಪ್ರತಿಕ್ರಿಯೆ ನೀಡಿದ ಅವರು, ಕೇರಳದಲ್ಲಿ ನೇರ ಸ್ಪರ್ಧೆ ಇದ್ದರೂ ನಿರೀಕ್ಷೆಗೂ ಮೀರಿ ಕಾಂಗ್ರೆಸ್‌ಗೆ ಉತ್ತಮ ಫಲಿತಾಂಶ ಬಂದಿದ್ದು ಸಂತೋಷ ತಂದಿದೆ. ತಮಿಳುನಾಡಿನಲ್ಲಿ ಡಿಎಂಕೆ ಮತ್ತೆ ಅಧಿಕಾರಕ್ಕೆ ಬರುತ್ತದೆ ಎಂಬ ನಿರೀಕ್ಷೆ ಇದ್ದರೂ, ಯುವ ಸಮುದಾಯ ಬದಲಾವಣೆಯನ್ನು ಬಯಸಿರುವುದು ಸ್ಪಷ್ಟವಾಗಿದೆ. ಅಲ್ಲಿನ ಜನರು ರಾಜಕೀಯ ವಿಶ್ಲೇಷಣೆಯಿಗಿಂತ ಸಮಾಜದ ಬದಲಾವಣೆಗೆ ಆದ್ಯತೆ ನೀಡಿದ್ದು, ಹೊಸ ಅಧ್ಯಾಯವನ್ನು ಆರಂಭಿಸಿದ್ದಾರೆ ಎಂದು ಅಭಿಪ್ರಾಯಪಟ್ಟರು. ಪಶ್ಚಿಮ ಬಂಗಾಳದಲ್ಲಿ ಬಿಜೆಪಿಯವರು ಹಲವು ಸಂಸ್ಥೆಗಳ ದುರುಪಯೋಗದ ಮೂಲಕ ಅಧಿಕಾರಕ್ಕೆ ಬಂದಿದ್ದಾರೆ ಎಂದು ಆರೋಪಿಸಿದರು. ಮಮತಾ ಬ್ಯಾನರ್ಜಿ ಅವರಿಗೆ ಅನ್ಯಾಯವಾಗಿ ಹಿಂಸೆ ನೀಡಲಾಗಿದೆ ಎಂದೂ ಹೇಳಿದರು. ಆದರೆ ಜನರ ತೀರ್ಪನ್ನು ಗೌರವಿಸುವುದು ಮುಖ್ಯವಾಗಿದ್ದು, ಅದನ್ನು ಸಮಚಿತ್ತದಿಂದ ಸ್ವೀಕರಿಸುತ್ತೇವೆ. ಒಟ್ಟಾರೆ, ಕೇರಳದ ಫಲಿತಾಂಶ ಕಾಂಗ್ರೆಸ್‌ಗೆ ಸಮಾಧಾನ ಮತ್ತು ಸಂತೋಷ ತಂದಿದೆ ಎಂದು ಹೇಳಿದರು.ಇದೇ ಸಂದರ್ಭದಲ್ಲಿ ಶೃಂಗೇರಿ ಕ್ಷೇತ್ರದ ಮರು ಮತ ಎಣಿಕೆ ವಿಚಾರಕ್ಕೆ ಸಂಬಂಧಿಸಿದಂತೆ ಗಂಭೀರ ಆರೋಪಗಳನ್ನು ಮಾಡಿದ ಅವರು, ಹಿಂದಿನ ಮತ ಎಣಿಕೆಯ ಬಳಿಕ ಕೆಲವು ಅಂಚೆ ಮತಗಳಲ್ಲಿ ತಿದ್ದುಪಡಿ ನಡೆದಿದೆ ಎಂದು ಹೇಳಿದ್ದಾರೆ. ಎಲ್ಲಾ ಪಕ್ಷಗಳ ಏಜೆಂಟ್‌ಗಳು ಒಪ್ಪಿ ಸಹಿ ಹಾಕಿದ ನಂತರವೂ ಮತಗಳಲ್ಲಿ ಬದಲಾವಣೆ ಮಾಡಲಾಗಿದೆ ಎಂಬುದು ಅವರ ಆರೋಪವಾಗಿದೆ.

# ಅರಣ್ಯ ಇಲಾಖೆ ಅಧಿಕಾರಿಯಿಂದ ಸಿಬ್ಬಂದಿ ವರ್ಗಾವಣೆ ಪಟ್ಟಿ ತಯಾರಿ: ತನಿಖೆಗೆ ಆದೇಶಿಸಿದ ಸಚಿವ ಈಶ್ವರ ಖಂಡ್ರೆ

**ಚಾಮರಾಜನಗರ, ಮೇ 6:** ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ವಲಯ ಅರಣ್ಯಾಧಿಕಾರಿಯೊಬ್ಬರು ವರ್ಗಾವಣೆ ಪಟ್ಟಿ ತಯಾರಿಸಿರುವ ಆರೋಪ ಕೇಳಿಬಂದಿದ್ದು, ಈ ಬಗ್ಗೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ತನಿಖೆಗೆ ಆದೇಶಿಸಿದ್ದಾರೆ.

ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಆರ್‌ಎಫ್‌ಓ ಒಬ್ಬರು ಯಾರೂ ಯಾವ ಸ್ಥಳಕ್ಕೆ ವರ್ಗಾವಣೆಯಾಗಬೇಕು ಎಂಬ ಪಟ್ಟಿ ತಯಾರಿಸಿರುವ ಆರೋಪ ಸಾಮಾಜಿಕ ಜಾಲತಾಣದಲ್ಲಿ ಕೇಳಿಬಂದಿದೆ. ಈ ಬಗ್ಗೆ ಸಾಮಾಜಿಕ ಜಾಲತಾಣ ಬಳಕೆದಾರರು ತೀವ್ರ ಆಕ್ಷೇಪ ಹೊರಹಾಕಿದ ಹಿನ್ನೆಲೆ ಸತ್ಯಾಸತ್ಯತೆ ಪರಿಶೀಲಿಸಲು ಎಪಿಸಿಸಿಎಫ್ ನೇತೃತ್ವದ ತಂಡ ರಚಿಸಿ, ವೈರಲ್ ಆಗಿರುವ ವರ್ಗಾವಣೆ ಪಟ್ಟಿಯ ಕೈಬರಹ ಯಾರದ್ದು ಎಂದು ಪತ್ತೆ ಮಾಡಿ ಕುಕೃತ್ಯದ ಮೂಲಕ ಇಲಾಖೆಗೆ ಕೆಟ್ಟ ಹೆಸರು ತರುವವರ ವಿರುದ್ಧ ಕಾನೂನು ಕ್ರಮ ಜರುಗಿಸಲು ಸಚಿವರು ಸೂಚಿಸಿದ್ದಾರೆ.

ಅರಣ್ಯ ಇಲಾಖೆಯಲ್ಲಿ ಪಾರದರ್ಶಕವಾಗಿ ವರ್ಗಾವಣೆ ವ್ಯವಸ್ಥೆ ತರುವ ಸಲುವಾಗಿ ಕೌನ್ಸೆಲಿಂಗ್ ಮೂಲಕ ಟಿಸಿಎಂಎಸ್‌ನಲ್ಲಿ ನಡೆಸಲಾಗುತ್ತದೆ. ಅಧಿಕಾರಿಗಳೇ ಸಿಂಡಿಕೇಟ್ ಮಾಡಿಕೊಂಡು ಅವರೇ ಜಾಗ ಬದಲು ಮಾಡಿಕೊಳ್ಳುತ್ತಾರೆ ಎನ್ನುವುದಾದರೇ ಇದು ಆಡಳಿತ ವ್ಯವಸ್ಥೆಗೆ ಮಾರಕವಾಗುತ್ತದೆ ಎಂದು ಆದೇಶದಲ್ಲಿ ಸಚಿವರು ತಿಳಿಸಿದ್ದಾರೆ.

ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ವಲಯವಾರು ಅಧಿಕಾರಿಗಳನ್ನು ಯಾವ ಸ್ಥಳಕ್ಕೆ ನಿಯುಕ್ತಿಗೊಳಿಸಬೇಕು ಎಂಬ ಕೈಬರಹದ ಪಟ್ಟಿ ಇದಾಗಿದ್ದು, ಇದರಲ್ಲಿ ಬಂಡೀಪುರ ಎಸಿಎಫ್ ಸೇರಿದಂತೆ ಎಲ್ಲ ವಲಯ ಅರಣ್ಯಾಧಿಕಾರಿಗಳು ಯಾವ ವಲಯದಿಂದ ಯಾವ ವಲಯಕ್ಕೆ ಬದಲಾಗಬೇಕು ಎಂಬ ವಿವರಗಳಿವೆ. ಗೋಪಾಲಸ್ವಾಮಿ ಬೆಟ್ಟ ವಲಯ ಅರಣ್ಯಾಧಿಕಾರಿ ಮಲ್ಲೇಶ್ ವಿರುದ್ಧ ನೆಟ್ಟಿಗರು ಆರೋಪ ಮಾಡಿದ್ದು ಇವರೇ ವರ್ಗಾವಣೆ ಪಟ್ಟಿ ತಯಾರು ಮಾಡಿದ್ದಾರೆ ಎಂದು ಆಕ್ಷೇಪ ಹೊರಹಾಕಿದ್ದಾರೆ. ಈ ಬಗ್ಗೆ ಅರಣ್ಯ ಸಚಿವರು ಬುಧವಾರ ಆದೇಶ ಹೊರಡಿಸಿ ಸತ್ಯಾಸತ್ಯತೆ ಮತ್ತು ಕೈಬರಹ ಪರಿಶೀಲಿಸುವಂತೆ ಆದೇಶಿಸಿದ್ದಾರೆ.



ಮೈಸೂರು ರಿಂಗ್ ರಸ್ತೆ ಜಂಕ್ಷನ್ ಸ್ಥಳಕ್ಕೆ ಬುಧವಾರ ಈಶ್ವರ್ ಖಂಡ್ರೆ ಭೇಟಿ ನೀಡಿದರು.

**ಮೇಲ್ಸೇತುವೆ ವೀಕ್ಷಣೆ**

ಮೈಸೂರಿನ ಸಿದ್ದಿಕಿ ನಗರ, ಮಣಿಪಾಲ್ ಆಸ್ಪತ್ರೆ ವೃತ್ತದ ಬಳಿ ರಾ.ಹೆ.275ರಲ್ಲಿ ಉದ್ದೇಶಿತ ಮೇಲ್ಸೇತುವೆ ಸ್ಥಳಕ್ಕೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಖುದ್ದು ಭೇಟಿ ನೀಡಿ ವೀಕ್ಷಿಸಿದರು. ಮೇಲ್ಸೇತುವೆ ಕಾಮಗಾರಿಗೆ ಬನ್ನಿಮಂಟಪ ರಸ್ತೆ, ನಂಜನಗೂಡು ರಸ್ತೆ, ಫೌಂಟನ್ ರಸ್ತೆ, ಹುಣಸೂರು ರಸ್ತೆಗಳ ವಿಭಜಕದೊಳಗೆ ಬೆಳೆಸಲಾಗಿರುವ ಮತ್ತು ಎಡ ಮತ್ತು ಬಲಬದಿಯ ಕೆಲವು ಮರ ಸೇರಿ ಒಟ್ಟು 347 ಮರಗಳು ಅಡ್ಡಿಯಾಗಿದೆ ಎಂದು ಅಂದಾಜಿಸಲಾಗಿದೆ ಎಂದು ಅರಣ್ಯಾಧಿಕಾರಿಗಳು ತಿಳಿಸಿದರು. ಬೀಟೆ, ರೈನ್ ಟ್ರೀ, ಹೊಂಗೆ, ಆಕಾಶ ಮಲ್ಲಿಗೆ, ಗಸಗಸೆ, ಮಹಾಗನಿ, ಮಾವು, ಬೇವು ಸೇರಿದಂತೆ ವಿವಿಧ ಮರಗಳನ್ನು ಕಾಮಗಾರಿಗಾಗಿ ತೆಗೆಯಬೇಕಾಗುತ್ತದೆ. ಹೀಗಾಗಿ ಎಷ್ಟು ಮರಗಳನ್ನು ಉಳಿಸಬಹುದು, ಬೀಟೆ, ಇತ್ಯಾದಿ ಮರಗಳನ್ನು ಸ್ಥಳಾಂತರಿಸಲು ಸಾಧ್ಯವೇ ಎಂಬ ಬಗ್ಗೆ ಪರಿಶೀಲಿಸಿ ವರದಿ ಸಲ್ಲಿಸುವಂತೆ ಸಚಿವರು ಸೂಚಿಸಿದರು.ಈ ಭೇಟಿಯ ವೇಳೆ ಉಪ ಅರಣ್ಯ ಸಂರಕ್ಷಣಾಧಿಕಾರಿ ಪರಮೇಶ್, ಸಾಮಾಜಿಕ ಅರಣ್ಯ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಶಂಕರೇಗೌಡ ಮತ್ತಿತರರು ಹಾಜರಿದ್ದರು.

## ವನ್ಯಜೀವಿ ಪ್ರಾಣಕ್ಕೆ ತೊಂದರೆಯಾಗದಂತೆ ಯೋಜನೆ ರೂಪಿಸಿ

ವನ್ಯಜೀವಿಗಳಿಂದ ಒಂದೂ ಸಾವಾಗದ ರೀತಿಯಲ್ಲಿ ಯೋಜನೆ ರೂಪಿಸಿ ಎಂದು ಅರಣ್ಯಾಧಿಕಾರಿಗಳಿಗೆ ಹೇಳಿರುವೆ. ಇದಕ್ಕೆ ಅನುದಾನದ ಕೊರತೆ ಇಲ್ಲ. ಅನೇಕ ತಜ್ಞರ ಸಲಹೆಗಳನ್ನು ಪರಿಶೀಲಿಸಲಾಗುತ್ತಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಖಾತೆ ಸಚಿವ ಈಶ್ವರ ಬಿ ಖಂಡ್ರೆ ಹೇಳಿದರು. ಕುಶಾಲನಗರ ತಾಲ್ಲೂಕಿನ ದುಬಾರೆಯಲ್ಲಿ ಬುಧವಾರ ಕಾವೇರಿ ನದಿಗೆ ಅಡ್ಡಲಾಗಿ ತೂಗುಸೇತುವೆ ನಿರ್ಮಾಣಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ವನ್ಯಜೀವಿಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿದ್ದು, ಜನರ ಅಮೂಲ್ಯ ಜೀವ, ಬೆಳೆ ಹಾನಿ ತಪ್ಪಿಸಲು ಆಯ್ದ ಪ್ರದೇಶದಲ್ಲಿ, ಆಯ್ದ ವನ್ಯಜೀವಿಗಳ ಸಂತಾನ ನಿಯಂತ್ರಣದ ಸಲಹೆಗಳು ಬಂದಿದ್ದು, ಈ ಬಗ್ಗೆ ಸಾರ್ವಜನಿಕವಾಗಿ ತಜ್ಞರ ಮಟ್ಟದಲ್ಲಿ ಚರ್ಚೆ ಆಗುವ ಅಗತ್ಯವಿದೆ ಎಂದು ತಿಳಿಸಿದರು. ಆನೆ–ಮಾನವ ಸಂಘರ್ಷ ನಿಯಂತ್ರಿಸಲು ತಜ್ಞರ ಸಮಿತಿ ರಚಿಸಲಾಗಿದ್ದು, ಅವರು ವರದಿ ನೀಡಿದ್ದಾರೆ. ಕಾಡಿನಂಚಿನ ಜನರು ಕೂಡ ಈ ಬಗ್ಗೆ ಸಲಹೆ ನೀಡಬೇಕು ಎಂದರು.ರೈಲ್ವೆ ಬ್ಯಾರಿಕೇಡ್, ಆನೆ ಕಂದಕ ನಿರ್ಮಾಣಕ್ಕೆ ಅನುದಾನದ ಕೊರತೆ ಇಲ್ಲ. ಹೆಚ್ಚಿನ ಅನುದಾನ ನೀಡುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದ್ದು, ಆದಷ್ಟು ಶೀಘ್ರ ಹೆಚ್ಚಿನ ಬ್ಯಾರಿಕೇಡ್ ಅಳವಡಿಸಲಾಗುವುದು ಎಂದರು.

# ಕಾಂಗ್ರೆಸ್ ಗೆಲುವಿಗೆ ಶ್ರಮಿಸಿದ ಸಾದಿಕ್ ಪೈಲ್ವಾನ್‌ಗೆ ಸೂಕ್ತ ಸ್ಥಾನಮಾನ ನೀಡುವಂತೆ ಬೇಡಿಕೆ

**ಬೆಂಗಳೂರು, ಮೇ 6–** ರಾಜ್ಯದಲ್ಲಿ ನಡೆದ ಎರಡು ಕ್ಷೇತ್ರಗಳ ಉಪಚುನಾವಣೆಯ ಗೆಲುವಿನ ಕ್ರೆಡಿಟ್ ಪಡೆಯಲು ಕಾಂಗ್ರೆಸ್‌ನಲ್ಲಿ ಪೈಪೋಟಿ ಆರಂಭವಾಗಿದೆ. ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಅಲ್ಪಸಂಖ್ಯಾತರ ಅಭ್ಯರ್ಥಿಗೆ ಟಿಕೆಟ್ ನೀಡದ ಕಾರಣಕ್ಕಾಗಿ ಮುಸ್ಲಿಮರು ತಿರುಗಿಬಿದ್ದಿದ್ದಾರೆ. ಎರಡೂ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಸೋಲು ಕಂಡುತ್ತಾರೆ ಎಂದು ಬಿಂಬಿಸಲಾಗಿತ್ತು. ಇದಕ್ಕೆ ಪೂರಕವಾಗಿ ಕಾಂಗ್ರೆಸ್‌ನಲ್ಲಿ ಅಲ್ಪಸಂಖ್ಯಾತರ ಪರಮೋಚ್ಚ ನಾಯಕ ಎಂದು ಬಿಂಬಿಸಿಕೊಳ್ಳುತ್ತಿರುವ ವಸತಿ ಸಚಿವ ಜಮೀರ್ ಅಹಮದ್ ಖಾನ್ ಆರಂಭದಲ್ಲಿ ಉಪಚುನಾವಣೆಯ ಕ್ಷೇತ್ರಗಳತ್ತ ತಲೆ ಹಾಕದೇ ನಕಾರಾತಕ ಸಂದೇಶ ರವಾನೆಯಾಗಲು ಅವಕಾಶ ಮಾಡಿಕೊಟ್ಟರು. ಕಾಂಗ್ರೆಸ್‌ನಲ್ಲೇ ಇದ್ದ ಬಹಳಷ್ಟು ಅಲ್ಪಸಂಖ್ಯಾತ ನಾಯಕರು ಬಂಡಾಯ ಅಭ್ಯರ್ಥಿಗಳಾಗಿ ನಾಮಪತ್ರ ಸಲ್ಲಿಸಿದ್ದರು. ಅವರಲ್ಲಿ ಸಾದಿಕ್ ಪೈಲ್ವಾನ್ ಪ್ರಮುಖರಾಗಿದ್ದು, ಅವರ ಮನವೊಲಿಸುವಲ್ಲಿ ಶಿವಾಜಿನಗರ ಶಾಸಕ ರಿಜ್ವಾನ್ ಅರ್ಷದ್, ವಿಧಾನ ಪರಿಷತ್ ಸದಸ್ಯ ಸಲೀಂಅಹಮದ್ ಯಶಸ್ವಿಯಾಗಿದ್ದರು. ಸಾದಿಕ್ ಪೈಲ್ವಾನ್ ಚುನಾವಣಾ ಕಣದಿಂದ ನಿವೃತ್ತರಾಗಿ ಕಾಂಗ್ರೆಸ್ ಅಭ್ಯರ್ಥಿಯನ್ನು ಬೆಂಬಲಿಸಿದ್ದರು.

ಮುಸ್ಲಿಮರಿಗೆ ಟಿಕೆಟ್ ನೀಡಬೇಕೆಂದು ಪ್ರತಿಪಾದಿಸಿದ ಮುಖ್ಯಮಂತ್ರಿ ಅವರ ರಾಜಕೀಯ ಕಾರ್ಯದರ್ಶಿ ನಜೀರ್ ಅಹಮದ್, ಕೆಪಿಸಿಸಿ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷರಾಗಿದ್ದ ಅಬ್ದುಲ್ ಜಬ್ಬಾರ್ ಸೇರಿದಂತೆ ಕೆಲವರು ಚುನಾವಣಾ ಪ್ರಚಾರದಿಂದ ದೂರ ಉಳಿದಿದ್ದರು. ಅವರ ಗೈರುಹಾಜರಿ ಕೊರತೆಯನ್ನು ನಿಭಾಯಿಸುವ ನಿಟ್ಟಿನಲ್ಲಿ ರಿಜ್ವಾನ್ ಅರ್ಷದ್, ಸಲೀಂ ಅಹಮದ್ ಮತ್ತು ಸಾದ್ವಿಕ್ ಪೈಲ್ವಾನ್ ಯಶಸ್ವಿಯಾಗಿದ್ದರು.

ಜಮೀರ್ ಅಹಮದ್‌ಖಾನ್ ಆರಂಭದಲ್ಲಿ ಕ್ಷೇತ್ರದಿಂದ ದೂರ ಉಳಿದು, ಕೇರಳ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪರ ಪ್ರಚಾರ ಮಾಡಿದ್ದರು. ಡಿ.ಕೆ.ಶಿವಕುಮಾರ್ ಅವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದರಿಂದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಧ್ಯ ಪ್ರವೇಶಿಸಿ ಎರಡೂ ಕ್ಷೇತ್ರಗಳಲ್ಲಿ ಪ್ರಚಾರ ನಡೆಸುವಂತೆ ಕಟ್ಟಪ್ಪಣೆ ಮಾಡಿದ್ದರು. ಜೊತೆಗೆ ವಿಶೇಷ ವಿಮಾನದ ವ್ಯವಸ್ಥೆ ಮಾಡಿದ್ದರು. ಮತದಾನಕ್ಕೆ ಎರಡು ದಿನ ಬಾಕಿಯಿರುವಾಗ ಜಮೀರ್ ಅಹಮದ್ ಖಾನ್, ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆಯಲ್ಲಿ ಪ್ರಚಾರ ನಡೆಸಿದ್ದರು. ಜಮೀರ್ ಬಣದ ಅಸಹಕಾರದ ನಡುವೆಯೂ ಕಾಂಗ್ರೆಸ್ ಅನ್ನು ಗೆಲ್ಲಿಸಿಕೊಂಡು ಬಂದಿರುವುದಾಗಿ, ಸಲೀಂ ಮತ್ತು ರಿಜ್ವಾನ್ ಬಣ ಬೀಗುತ್ತಿದೆ. ಫಲಿತಾಂಶದಲ್ಲಿ ಅತ್ಯಲ್ಪ ಅಂತರದಲ್ಲಿ ಕಾಂಗ್ರೆಸ್ ಗೆದ್ದಿದ್ದರೂ ಕೂಡ ಗೆಲುವೇ ಆಗಿರುವುದರಿಂದ ಅದರ ಸಂಭ್ರಮಾಚರಣೆ ಜೋರಾಗಿದೆ. ಇಂದು ಸಾದಿಕ್ ಪೈಲ್ವಾನ್‌ರೊಂದಿಗೆ ರಿಜ್ವಾನ್ ಅರ್ಷದ್ ನೇತೃತ್ವ ನಿಯೋಗ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಅಭಿನಂದನೆ ಸಲ್ಲಿಸಿದೆ. ಚುನಾವಣಾ ಕಣದಿಂದ ಹಿಂದೆ ಸರಿದು ಕಾಂಗ್ರೆಸ್ ಗೆಲುವಿಗೆ ಸಹಕರಿಸಿದ ಸಾದಿಕ್ ಪೈಲ್ವಾನ್‌ಗೆ ಸೂಕ್ತಸ್ಥಾನಮಾನ ನೀಡಬೇಕೆಂಬ ಬೇಡಿಕೆ ಸಲ್ಲಿಸಲಾಗಿದೆ. ಚುನಾವಣಾ ಫಲಿತಾಂಶದ ಬಳಿಕ ಜಮೀರ್ ಅಹಮದ್ ಕೇರಳಕ್ಕೆ ತೆರಳಿದ್ದು, ಉಪಚುನಾವಣೆ ಗೆಲುವಿಗೆ ಸಣ್ಣ ಅಭಿನಂದನೆ ಸಲ್ಲಿಸದೇ ಇರುವುದು ಚರ್ಚೆಗೆ ಗ್ರಾಸವಾಗಿದೆ.

# ಅವಳಿ ಸ್ಫೋಟದ ತನಿಖೆ ಆರಂಭ: ಖಲಿಸ್ತಾನ್ ಪರ ಸಂಘಟನೆಯ ನಾಲ್ವರ ಬಂಧನ

## ಅಮೃತ್‌ಸರ್‌ನ ಸೇನಾ ಕಂಟೋನ್ಮೆಂಟ್, ಜಲಂಧರ್‌ನ ಬಿಎಸ್‌ಎಫ್ ಕಚೇರಿ ಬಳಿ ಸ್ಫೋಟ

ಚಂಡೀಗಢ, ಮೇ 6: ಪಂಜಾಬ್‌ನ ಅಮೃತ್‌ಸರ್ ಜಿಲ್ಲೆಯ ಖಾಸಾದಲ್ಲಿರುವ ಸೇನಾ ಕಂಟೋನ್ಮೆಂಟ್ ಪ್ರದೇಶದ ಬಳಿ ಮಂಗಳವಾರ ತಡರಾತ್ರಿ ಸ್ಫೋಟ ಸಂಭವಿಸಿದ್ದು, ಅದಕ್ಕೂ ಕೆಲವೇ ಗಂಟೆಗಳ ಮೊದಲು ಜಲಂಧರ್‌ನ ಗಡಿ ಭದ್ರತಾ ಪಡೆ (ಬಿಎಸ್‌ಎಫ್) ಪಂಜಾಬ್ ಫ್ರಾಂಟಿಯರ್ ಪ್ರಧಾನ ಕಚೇರಿ ಹೊರಗೆಯೂ ಸ್ಫೋಟ ಸಂಭವಿಸಿದೆ.

ಪೊಲೀಸರ ಪ್ರಕಾರ, ಎರಡೂ ಘಟನೆಗಳಲ್ಲಿ ಯಾವುದೇ ಪ್ರಾಣಹಾನಿ ಅಥವಾ ಗಾಯಗಳು ಸಂಭವಿಸಿಲ್ಲ. ಆದರೆ, ಸ್ಫೋಟಗಳ ಹಿನ್ನೆಲೆ ಹಾಗೂ ಉದ್ದೇಶದ ಕುರಿತು ತನಿಖೆ ಮುಂದುವರಿದಿದೆ. ಮೊದಲ ಸ್ಫೋಟವು ಮಂಗಳವಾರ ರಾತ್ರಿ ಸುಮಾರು 8 ಗಂಟೆಗೆ ಜಲಂಧರ್ ನಲ್ಲಿ ಸಂಭವಿಸಿತು. ಅದಾದ ಬಳಿಕ ರಾತ್ರಿ ಸುಮಾರು 11 ಗಂಟೆಗೆ ಅಮೃತ್ ಸರ್‌ದ ಖಾಸಾ ಪ್ರದೇಶದಲ್ಲಿ ಮತ್ತೊಂದು ಸ್ಫೋಟ ನಡೆದಿದೆ.

ಅಮೃತ್‌ಸರ್ ಗ್ರಾಮೀಣ ಹಿರಿಯ ಪೊಲೀಸ್ ವರಿಷ್ಠಾಧಿಕಾರಿ ಸುಹೇಲ್ ಮಿರ್ ಖಾಸಿಮ್ ಮಾತನಾಡಿ, ಖಾಸಾ ರಸ್ತೆಯಲ್ಲಿ ರಾತ್ರಿ 11 ಗಂಟೆ ಸುಮಾರಿಗೆ ಭಾರೀ ಶಬ್ದ ಕೇಳಿಬಂದ ಕುರಿತು ಮಾಹಿತಿ ಲಭಿಸಿತು. ಕೂಡಲೇ ಪೊಲೀಸ್ ತಂಡ ಸ್ಥಳಕ್ಕೆ ಧಾವಿಸಿತು ಎಂದು ತಿಳಿಸಿದ್ದಾರೆ.

ಪ್ರಾಥಮಿಕ ತನಿಖೆಯಲ್ಲಿ ಯಾರೋ ಸ್ಫೋಟಕ ಸಾಧನವನ್ನು ಗಡಿ ಗೋಡೆಯ ಕಡೆಗೆ ಎಸೆದಿರುವ ಸಾಧ್ಯತೆಯಿದೆ ಎಂದು ಅವರು ಹೇಳಿದರು. ಸ್ಫೋಟದ ಪರಿಣಾಮವಾಗಿ ಗಡಿ ಗೋಡೆಯ ಮೇಲಿದ್ದ ಕಬ್ಬಿಣದ ಹಾಳೆಯ ಒಂದು ಭಾಗ ಕೆಳಗೆ ಬಿದ್ದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಘಟನೆಯ ಬಳಿಕ ವಿಧಿವಿಜ್ಞಾನ ತಜ್ಞರ ತಂಡ ಹಾಗೂ ಬಾಂಬ್ ನಿಷ್ಕ್ರಿಯ ದಳ ಸ್ಥಳಕ್ಕೆ ಭೇಟಿ ನೀಡಿ ಮಾದರಿಗಳನ್ನು ಸಂಗ್ರಹಿಸಿತು.

ಅಮೃತಸರ್ ಗ್ರಾಮೀಣ ಪೊಲೀಸ್ ವರಿಷ್ಠಾಧಿಕಾರಿ ಆದಿತ್ಯ ಎಸ್. ವಾರಿಯರ್, ಘಟನೆಯ ಕುರಿತು ಹೆಚ್ಚಿನ ತನಿಖೆ ನಡೆಯುತ್ತಿದೆ ಎಂದು ತಿಳಿಸಿದ್ದಾರೆ. ಸೇನಾ ಅಧಿಕಾರಿಗಳ ತಂಡವೂ ಸ್ಥಳಕ್ಕೆ ಭೇಟಿ ನೀಡಿ ಪರಿಸ್ಥಿತಿಯನ್ನು ಪರಿಶೀಲಿಸಿದ್ದು, ಬಳಿಕ ಪ್ರದೇಶವನ್ನು ಭದ್ರತಾ ವಲಯವಾಗಿ ಘೋಷಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಸುತ್ತಮುತ್ತಲಿನ ಸಿಸಿಟಿವಿ ಕ್ಯಾಮೆರಾಗಳಲ್ಲಿ ಸ್ಫೋಟದ ದೃಶ್ಯ ದಾಖಲಾಗಿದೆ. ಭಾರೀ ಶಬ್ದ ಕೇಳಿ ನಿದ್ದೆಯಿಂದ ಎಚ್ಚರಗೊಂಡು ಮನೆಯ ಹೊರಗೆ ಬಂದಿದ್ದೇವೆ ಎಂದು ಸ್ಥಳೀಯ ಗ್ರಾಮಸ್ಥರು ತಿಳಿಸಿದ್ದಾರೆ.ಇದಕ್ಕೂ ಮೊದಲು ಜಲಂಧರ್ ಜಿಲ್ಲೆಯ ಬಿಎಸ್‌ಎಫ್ ಪಂಜಾಬ್ ಫ್ರಾಂಟಿಯರ್ ಪ್ರಧಾನ ಕಚೇರಿ ಹೊರಗೆ ಮಂಗಳವಾರ ರಾತ್ರಿ ಸ್ಫೋಟ



ಸಂಭವಿಸಿತ್ತು. ಸ್ಫೋಟದ ದೃಶ್ಯಗಳು ಸಿಸಿಟಿವಿಯಲ್ಲಿ ದಾಖಲಾಗಿದ್ದು, ಘಟನೆಯ ನಂತರ ಪ್ರದೇಶ ಹೊಗೆಯಿಂದ ಆವೃತವಾಗಿರುವುದು ಕಂಡುಬಂದಿದೆ. ಸ್ಫೋಟದ ಬಳಿಕ ಅಪರಿಚಿತ ವ್ಯಕ್ತಿಯೊಬ್ಬರು ಸ್ಥಳದಿಂದ ಓಡಿ ಹೋಗುತ್ತಿರುವ ದೃಶ್ಯವೂ ಸೆರೆಯಾಗಿದೆ.

ಸ್ಫೋಟದ ಪರಿಣಾಮ ಒಂದು ಸ್ಕೂಟರ್ ಸಂಪೂರ್ಣ ಹಾನಿಗೊಳಗಾಗಿದ್ದು, ಟ್ರಾಫಿಕ್ ಸಿಗ್ನಲ್ ಕಂಬ ಹಾಗೂ ಸಮೀಪದ ಅಂಗಡಿಯ ಗಾಜುಗಳಿಗೆ ಹಾನಿಯಾಗಿದೆ. ಸ್ಥಳೀಯರ ಪ್ರಕಾರ, ಬಿಎಸ್‌ಎಫ್ ಕಚೇರಿ ಹೊರಗೆ ನಿಲ್ಲಿಸಲಾಗಿದ್ದ ಸ್ಕೂಟರ್ ಭಾರೀ ಶಬ್ದದ ಬಳಿಕ ಬೆಂಕಿಗೆ ಆಹುತಿಯಾಯಿತು. ಸ್ಕೂಟರ್ ಗುರ್‌ಪ್ರೀತ್ ಸಿಂಗ್ ಅವರಿಗೆ ಸೇರಿದ್ದು, ಅವರು ಈ ಪ್ರದೇಶದಲ್ಲಿ ನಿಯಮಿತವಾಗಿ ಪಾರ್ಸೆಲ್ ವಿತರಣೆ ಮಾಡುತ್ತಿದ್ದರು ಎಂದು ತಿಳಿದುಬಂದಿದೆ.

ಗುರ್‌ಪ್ರೀತ್ ಅವರ ಸಂಬಂಧಿಕರೊಬ್ಬರು ಮಾತನಾಡಿ, ಸ್ಕೂಟರ್ ಹತ್ತಿರ ತಲುಪುತ್ತಿದ್ದಂತೆಯೇ ಬೆಂಕಿ ಕಾಣಿಸಿಕೊಂಡಿತು. ತಕ್ಷಣವೇ ಕುಟುಂಬ ಸದಸ್ಯರಿಗೆ ಮಾಹಿತಿ ನೀಡಲಾಯಿತು ಎಂದು ತಿಳಿಸಿದ್ದಾರೆ. ಎಪ್ರಿಲ್ 27ರಂದು ಪಟಿಯಾಲಾದ ಶಂಭು ಪ್ರದೇಶದಲ್ಲಿಯೂ ಸರಕು ಸಾಗಣೆ ಕಾರಿಡಾರ್ ರೈಲು ಹಳಿಯಲ್ಲಿ ಸ್ಫೋಟ ಸಂಭವಿಸಿತ್ತು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪಾಕಿಸ್ತಾನದ ಐಎಸ್‌ಐ ಬೆಂಬಲಿತ ಖಲಿಸ್ತಾನ ಪರ ಉಗ್ರ ಸಂಘಟನೆಯ ನಾಲ್ವರನ್ನು ಪೊಲೀಸರು ಬಂಧಿಸಿದ್ದರು

### ಭದ್ರತಾ ವೈಫಲ್ಯ ಆರೋಪ

ಈ ಅವಳಿ ಸ್ಫೋಟಗಳ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ವಿರುದ್ಧ ವಿರೋಧ ಪಕ್ಷಗಳು ತೀವ್ರ ವಾಗ್ದಾಳಿ ನಡೆಸಿವೆ. ಶಿರೋಮಣಿ ಅಕಾಲಿ ದಳ ಅಧ್ಯಕ್ಷ ಸುಖ್‌ಬೀರ್ ಸಿಂಗ್ ಬಾದಲ್, ಮುಖ್ಯಮಂತ್ರಿ ಭಗವಂತ್ ಮಾನ್ ವಿರುದ್ಧ ಟೀಕಾ ಪ್ರಹಾರ ನಡೆಸಿದರು.

10 ದಿನಗಳಲ್ಲಿ ಮೂರು ಸ್ಫೋಟಗಳು ಮತ್ತು ಒಂದೇ ದಿನದಲ್ಲಿ ಎರಡು ಸ್ಫೋಟಗಳು ಸಂಭವಿಸಿವೆ. ಜಲಂಧರ್ ನ ಬಿಎಸ್‌ಎಫ್ ಕಚೇರಿ ಹಾಗೂ ಅಮೃತ್ ಸರ್ ಸೇನಾ ಪ್ರದೇಶದ ಬಳಿ ನಡೆದ ಘಟನೆಗಳು ಕಾನೂನು ಮತ್ತು ಸುವ್ಯವಸ್ಥೆಯ ಕುಸಿದಿದೆ ಎಂದು ತೋರಿಸುತ್ತವೆ ಎಂದು ಅವರು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಆರೋಪಿಸಿದ್ದಾರೆ.

ಪಂಜಾಬ್ ಕಾಂಗ್ರೆಸ್ ಅಧ್ಯಕ್ಷ ಅಮರಿಂದರ್ ಸಿಂಗ್ ರಾಜಾ ವಾರಿಂಗ್ ಕೂಡ ಸರ್ಕಾರವನ್ನು ಟೀಕಿಸಿ, ಪಂಜಾಬ್ ನಲ್ಲಿ ನಿರಂತರ ಸ್ಫೋಟಗಳು ನಡೆಯುತ್ತಿರುವುದು ತೀವ್ರ ಆತಂಕಕಾರಿ. ರಾಜ್ಯವನ್ನು ಅಸ್ಥಿರಗೊಳಿಸಲು ಯಾರು ಪ್ರಯತ್ನಿಸುತ್ತಿದ್ದಾರೆ ಎಂಬುದನ್ನು ಪತ್ತೆಹಚ್ಚಬೇಕು. ಗುಪ್ತಚರ ಹಾಗೂ ಭದ್ರತಾ ವ್ಯವಸ್ಥೆಯ ವೈಫಲ್ಯಗಳು ಬಹಿರಂಗವಾಗುತ್ತಿವೆ ಎಂದು ಹೇಳಿದ್ದಾರೆ.

# ಫಲಿತಾಂಶದ ಬಳಿಕ ಬಂಗಾಳದಲ್ಲಿ ಹಿಂಸಾಚಾರ ಹೆಚ್ಚಳ

## ಬಿಜೆಪಿ–ಟಿಎಂಸಿ ಕಾರ್ಯಕರ್ತರ ಮಾರಾಮಾರಿ, ಮೂವರ ಸಾವು

**ಕೊಲ್ಕತ್ತಾ, ಮೇ 6:** ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಐತಿಹಾಸಿಕ ಗೆಲುವು ಸಾಧಿಸಿದೆ. ಅಧಿಕಾರ ಕಳೆದುಕೊಂಡ ಟಿಎಂಸಿ ಕಾರ್ಯಕರ್ತರು ರೊಚ್ಚಿಗೆದ್ದಿದ್ದಾರೆ. ಇದರ ಪರಿಣಾಮ ಪಶ್ಚಿಮ ಬಂಗಾಳದಲ್ಲಿ ಚುನಾವಣೋತ್ತರ ಹಿಂಸಾಚಾರಗಳು ಹೆಚ್ಚಾಗುತ್ತಿವೆ. ನಿನ್ನೆ ನಡೆದ ಚುನಾವಣೋತ್ತರ ಹಿಂಸಾಚಾರದ ಪ್ರತ್ಯೇಕ ಘಟನೆಗಳಲ್ಲಿ ಬಿಜೆಪಿ, ತೃಣಮೂಲ ಕಾಂಗ್ರೆಸ್‌ನ ತಲಾ ಒಬ್ಬರು ಕಾರ್ಯಕರ್ತರು ಮೃತಪಟ್ಟಿದ್ದಾರೆ.

ಮಂಗಳವಾರ ರಾತ್ರಿ ನ್ಯೂ ಟೌನ್ ಪ್ರದೇಶದಲ್ಲಿ ವಿಜಯೋತ್ಸವ ಮೆರವಣಿಗೆ ವೇಳೆ ಟಿಎಂಸಿ ಕಾರ್ಯಕರ್ತರು ಥಳಿಸಿದ್ದರಿಂದ ಬಿಜೆಪಿಯ ಮಧು ಮೊಂಡಲ್ ಮೃತಪಟ್ಟಿದ್ದಾರೆ. ವೀರ್‌ಭೂಮ್‌ನ ನಾನೂರ್‌ನಲ್ಲಿ ಟಿಎಂಸಿ ಕಾರ್ಯಕರ್ತ ಅಬಿರ್ ಶೇಖ್ ಮೇಲೆ ಬಿಜೆಪಿ ಕಾರ್ಯಕರ್ತರು ಹಲ್ಲೆ ನಡೆಸಿದ್ದರಿಂದ ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಭಲ್ಲಿಗುಡಿ ಪ್ರದೇಶದಲ್ಲಿ ಬಿಜೆಪಿ ವಿಜಯೋತ್ಸವ ಕಾರ್ಯಕ್ರಮ ಸಾಗುತ್ತಿದ್ದ ವೇಳೆ ಟಿಎಂಸಿ–ಬಿಜೆಪಿ ಕಾರ್ಯಕರ್ತರ ನಡುವೆ ಜಗಳ ಆರಂಭಗೊಂಡಿದ್ದು, ಮೊಂಡಲ್ ಮೇಲೆ ಟಿಎಂಸಿ ಕಾರ್ಯಕರ್ತರು ದಾಳಿ ನಡೆಸಿದರು. ತಕ್ಷಣವೇ ಅವರನ್ನು ಆಸ್ಪತ್ರೆಗೆ ಕರೆದೊಯ್ದರೂ ಮೃತಪಟ್ಟಿದ್ದಾರೆ ಎಂದು ವೈದ್ಯರು ಘೋಷಿಸಿದರು. ಘಟನೆ ಬಳಿಕ ಟಿಎಂಸಿ ಕಾರ್ಯಕರ್ತರ



ಮನೆಗಳ ಮೇಲೆ ಬಿಜೆಪಿ ಕಾರ್ಯಕರ್ತರು ನುಗ್ಗಿ ದಾಳಿ ನಡೆಸಿ, ನಂತರ ರಸ್ತೆ ತಡೆ ನಡೆಸಿದರು. ತಕ್ಷಣವೇ ಸ್ಥಳದಲ್ಲಿ ಕೇಂದ್ರೀಯ ಮೀಸಲು ಪಡೆಯನ್ನು ನಿಯೋಜಿಸಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಮತ್ತೊಂದು ಕಡೆ ನಾನೂರ್ ಪ್ರದೇಶದಲ್ಲಿ ನಡೆದ ಜಗಳದಲ್ಲಿ ಶೇಖ್ ಅವರು ಸ್ಥಳದಲ್ಲಿಯೇ ಮೃತಪಟ್ಟಿದ್ದು, ಟಿಎಂಸಿಯ ಸ್ಥಳೀಯ ಸಮಿತಿ ಸದಸ್ಯರಾಗಿದ್ದರು. ಘಟನೆಯಲ್ಲಿ ಮತ್ತೊಬ್ಬರು ಗಾಯಗೊಂಡಿದ್ದು, ಹೆಚ್ಚಿನ ಪೊಲೀಸರನ್ನು ನಿಯೋಜಿಸಲಾಗಿದೆ. ಫಲಿತಾಂಶದ ದಿನವೇ ಕೋಲ್ಕತ್ತಾದ ಬೆಲೆಘಾಟದಲ್ಲಿ ಗಲಭೆ ಆರಂಭವಾಗಿತ್ತು. ಮೇ 4 ರ ರಾತ್ರಿ ತೃಣಮೂಲ ಕಾಂಗ್ರೆಸ್ ಕಾರ್ಯಕರ್ತ ವಿಶ್ವಜಿತ್ ಪಟ್ನಾಯಕ್ ಹತ್ಯೆಯಾದರು ಇದಕ್ಕೆ ಬಿಜೆಪಿ ಕಾರ್ಯಕರ್ತರು ಕಾರಣ ಎಂದು ಟಿಎಂಸಿ ದೂಷಿಸಿದೆ.

ಮಂಗಳವಾರ ಸಂಜೆ ಕೋಲ್ಕತ್ತಾದ ಟೋಪ್ಸಿಯಾ ಪ್ರದೇಶದಲ್ಲಿ ಅಪರಿಚಿತ ದುಷ್ಕರ್ಮಿಗಳು ಗಲಾಟೆ ಮಾಡಿದ್ದಾರೆ ಎಂದು ಕೋಲ್ಕತ್ತಾ ಪೊಲೀಸರು 'ಎಕ್ಸ್' ನಲ್ಲಿ ಪೋಸ್ಟ್ ಮೂಲಕ ತಿಳಿಸಿದ್ದಾರೆ. ಟೋಪ್ಸಿಯಾ ಮತ್ತು ತಿಲ್ಜಾಲಾದ ಕೆಲವು ಭಾಗಗಳಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಸಮಸ್ಯೆ ಉದ್ಭವಿಸಿತು, ಈ ಸಂದರ್ಭದಲ್ಲಿ ಕೆಲವು ದುಷ್ಕರ್ಮಿಗಳು ಸಾರ್ವಜನಿಕ ಆಸ್ತಿ ಇತ್ಯಾದಿಗಳನ್ನು ಧ್ವಂಸಗೊಳಿಸಿದರು, ಆದರೆ ಪೊಲೀಸರು ಪರಿಸ್ಥಿತಿ ನಿಯಂತ್ರಣಕ್ಕೆ ತಂದಿದ್ದಾರೆ ಎಂದು ಮಾಹಿತಿಯಲ್ಲಿ ಉಲ್ಲೇಖಿಸಿದೆ..

### ಗಲಭೆ ನಿಯಂತ್ರಣಕ್ಕೆ ಕಟ್ಟುನಿಟ್ಟಿನ ನಿರ್ದೇಶನ

ಗಲಭೆ ಹೆಚ್ಚುತ್ತಿರುವ ಬೆನ್ನಲ್ಲೇ ಕೇಂದ್ರ ಚುನಾವಣಾ ಆಯೋಗ ಪಶ್ಚಿಮ ಬಂಗಾಳದ ಮುಖ್ಯ ಕಾರ್ಯದರ್ಶಿ , ಪೊಲೀಸ್ ಮಹಾನಿರ್ದೇಶಕರು ಮತ್ತು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳಿಗೆ ಕಠಿಣ ನಿರ್ದೇಶನ ನೀಡಿದೆ., ರಾಜ್ಯದಲ್ಲಿ ಚುನಾವಣೆಯ ನಂತರದ ಯಾವುದೇ ಹಿಂಸಾಚಾರದ ಘಟನೆಗಳ ಬಗ್ಗೆ 'ಶೂನ್ಯ ಸಹಿಷ್ಣುತೆ'ಯನ್ನು ಖಚಿತಪಡಿಸಿಕೊಳ್ಳುವಂತೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದೆ.

ಹೌರಾದ ಡುಮುರ್ಜಲಾ ಪ್ರದೇಶದಲ್ಲಿರುವ ಟಿಎಂಸಿ ಕಚೇರಿಯನ್ನು ಧ್ವಂಸಗೊಳಿಸಲಾಗಿದೆ ಎಂದು ಹೇಳಲಾಗಿದೆ. ಘಟನೆಯ ದೃಶ್ಯವು ಮುರಿದ ಕಿಟಕಿಗಳು, ಹರಿದ ಪೋಸ್ಟರ್‌ಗಳು ಮತ್ತು ಚದುರಿದ ಪೀಠೋಪಕರಣಗಳನ್ನು ತೋರಿಸುತ್ತದೆ, ಟಿಎಂಸಿ ಧ್ವಜವನ್ನು ರಸ್ತೆಗೆ ಎಸೆಯಲಾಗಿದೆ. ಇದರಿಂದ ಪರಿಸ್ಥಿತಿ ಇನ್ನಷ್ಟು ಉದ್ವಿಗ್ನಗೊಂಡಿದೆ.. ಈ ನಡುವೆ ಹಲವು ಪ್ರದೇಶಗಳಲ್ಲಿ ಕಚ್ಚಾ ಬಾಂಬ್ ಗಳು ಪತ್ತೆಯಾಗಿದ್ದು ಆತಂಕ ಹುಟ್ಟಿಸಿದೆ..





ನವದೆಹಲಿಯಲ್ಲಿ ನಡೆದ ಶಾಲಾ ನಿರ್ವಹಣಾ ಸಮಿತಿ ಮಾರ್ಗಸೂಚಿಗಳು ಬಿಡುಗಡೆ ಸಮಾರಂಭದಲ್ಲಿ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಭಾಗವಹಿಸಿದ್ದರು.

# ಮತಗಳ್ಳತನದಿಂದಾಗಿ ಬಿಜೆಪಿಯ ಜಯ: ರಾಹುಲ್ ಗಾಂಧಿ ಆರೋಪ



ನವದೆಹಲಿ, ಮೇ 6: ಬಿಜೆಪಿಯ ಸಂಸದೀಯ ಬಲದ ಗಮನಾರ್ಹ ಭಾಗವು "ಮತ ಕಳ್ಳತನ" ಮತ್ತು ಪ್ರಜಾಪ್ರಭುತ್ವ ಸಂಸ್ಥೆಗಳ ದುರುಪಯೋಗದ ಫಲಿತಾಂಶವಾಗಿದೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಆರೋಪ ಮಾಡಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಕೇವಲ ವೈಯಕ್ತಿಕ ಸ್ಥಾನಗಳನ್ನು ಗೆಲ್ಲಲು ಮಾತ್ರವಲ್ಲದೆ, ಕೆಲವು ಸಂದರ್ಭಗಳಲ್ಲಿ ಇಡೀ ಸರ್ಕಾರಗಳನ್ನೇ ಕಬಳಿಸಲು ಚುನಾವಣಾ ಅಕ್ರಮಗಳನ್ನು ಎಸಗಲಾಗುತ್ತಿದೆ. ಕೆಲವೊಮ್ಮೆ ಮತ ಕಳ್ಳತನದ ಮೂಲಕವೂ ಸ್ಥಾನಗಳನ್ನು ಕದಿಯಲಾಗುತ್ತದೆ – ಮತ್ತು ಕೆಲವೊಮ್ಮೆ ಇಡೀ ಸರ್ಕಾರಗಳನ್ನೇ ಕದಿಯಲಾಗುತ್ತದೆ ಟೀಕಿಸಿದ್ದಾರೆ.

ಜೆಪಿಯ 240 ಲೋಕಸಭಾ ಸಂಸದರಲ್ಲಿ ಸರಿಸುಮಾರು ಪ್ರತಿ ಆರನೇ ಸಂಸದರು ಮತ ಕಳ್ಳತನದ ಮೂಲಕ ಗೆದ್ದಿದ್ದಾರೆ. ಅಂತಹ ಪ್ರತಿನಿಧಿಗಳನ್ನು ಸುಲಭವಾಗಿ ಗುರುತಿಸಬಹುದು. ಬಿಜೆಪಿಯ ರಾಜಕೀಯ ಪರಿಭಾಷೆಯನ್ನೇ ಬಳಸಿ ತಿರುಗೇಟು ನೀಡಿದ ಅವರು, ಅಂತಹವರನ್ನು "ನುಸುಳುಕೋರರು" ಎಂದು ಕರೆಯಬೇಕೇ ಎಂದು ಪ್ರಶ್ನಿಸಿದರು. ಬಿಜೆಪಿ ಅಧಿಕಾರದಲ್ಲಿರುವ ಹರಿಯಾಣ ರಾಜ್ಯವನ್ನು ಉಲ್ಲೇಖಿಸಿದ ಕಾಂಗ್ರೆಸ್ ನಾಯಕ, "ಅಲ್ಲಿನ ಇಡೀ ಸರ್ಕಾರವೇ ಒಂದು 'ನುಸುಳುಕೋರ'" ಸರ್ಕಾರ ಎಂದು ಹರಿಹಾಯ್ದರು.

ಆಡಳಿತಾರೂಢ ಪಕ್ಷವು ಪ್ರಜಾಪ್ರಭುತ್ವ ಸಂಸ್ಥೆಗಳನ್ನು ದುರ್ಬಲಗೊಳಿಸುತ್ತಿದೆ ಎಂದು ಆರೋಪಿಸಿದ ಗಾಂಧಿ, ಅಧಿಕಾರದಲ್ಲಿರುವವರು ಸಂಸ್ಥೆಗಳನ್ನು ತಮ್ಮ ಜೇಬಿನಲ್ಲಿಟ್ಟುಕೊಂಡಿದ್ದಾರೆ ಮತ್ತು ಮತದಾರರ ಪಟ್ಟಿ ಹಾಗೂ ಚುನಾವಣಾ ಪ್ರಕ್ರಿಯೆಯನ್ನು ಮ್ಯಾನಿಪ್ಯುಲೇಟ್ ಮಾಡುತ್ತಾರೆ ಎಂದು ದೂರಿದ್ದಾರೆ. ಅಂತಹ ವ್ಯಕ್ತಿಗಳೇ ರಿಮೋಟ್ ಕಂಟ್ರೋಲ್ ಮೂಲಕ ನಿಯಂತ್ರಿಸಲ್ಪಡುತ್ತಿದ್ದಾರೆ ಎಂದು ರಾಹುಲ್‌ಗಾಂಧಿ ಟೀಕಿಸಿದರು. ಚುನಾವಣೆಗಳು ನ್ಯಾಯಯುತವಾಗಿ ನಡೆದರೆ ಆಡಳಿತ ಪಕ್ಷದ ಯಶಸ್ಸು ಉಳಿಯುವುದಿಲ್ಲ ಎಂದು ವಾದಿಸಿದ ರಾಹುಲ್ ಗಾಂಧಿ ಅವರು ನಿಜವಾಗಿಯೂ ಸತ್ಯಕ್ಕೆ ಹೆದರುತ್ತಾರೆ. ಏಕೆಂದರೆ ಚುನಾವಣೆಗಳು ನ್ಯಾಯಯುತವಾಗಿ ನಡೆದಿದ್ದರೆ, ಅವರು ಇಂದು 140 ಸ್ಥಾನಗಳನ್ನು ಕೂಡ ಗೆಲ್ಲಲು ಸಾಧ್ಯವಾಗುತ್ತಿರಲಿಲ್ಲ ಎಂದಿದ್ದಾರೆ.




ನವದೆಹಲಿಯಲ್ಲಿ ಕೇಂದ್ರ ಹಣಕಾಸು ಮತ್ತು ಕಾರ್ಪೊರೇಟ್ ವ್ಯವಹಾರಗಳ ಸಚಿವೆ ನಿರ್ಮಲಾ ಸೀತಾರಾಮನ್ ಅವರು ವಿಯೆಟ್ನಾಂ ಹಣಕಾಸು ಸಚಿವ ಎನ್ಗೋ ವ್ಯಾನ್ ಟುವಾನ್ ಅವರನ್ನು ಭೇಟಿಯಾಗಿದ್ದರು.

# ಕಡತ ಎಸೆದ ವಕೀಲ ಬಂಧನ

**ಅಮರಾವತಿ, ಮೇ 6:** ಆಂಧ್ರಪ್ರದೇಶ ಹೈಕೋರ್ಟ್‌ನಲ್ಲಿ ಪ್ರಕರಣವೊಂದರ ವಿಚಾರಣೆ ವೇಳೆ ಯುವ ವಕೀಲರೊಬ್ಬರು ವರ್ತಿಸಿದ ರೀತಿಯಿಂದ ನ್ಯಾಯಮೂರ್ತಿ ಟಿ. ರಾಜಶೇಖರ್ ರಾವ್ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು, ವಕೀಲರನ್ನು ನ್ಯಾಯಾಂಗ ನಿಂದನೆ ಆರೋಪದ ಮೇಲೆ ವಶಕ್ಕೆ ತೆಗೆದುಕೊಳ್ಳುವಂತೆ ಆದೇಶಿಸಿದ್ದಾರೆ. ನ್ಯಾಯಮೂರ್ತಿ ಟಿ. ರಾಜಶೇಖರ್ ರಾವ್ ಅವರ ಪೀಠದ ಮುಂದೆ ಪ್ರಕರಣವೊಂದರ ವಿಚಾರಣೆ ನಡೆಯುತ್ತಿದ್ದಾಗ, ಯುವ ವಕೀಲರು ತಮ್ಮ ವಾದದ ಭರದಲ್ಲಿ ನ್ಯಾಯಪೀಠದ ಮೇಲಿದ್ದ ಕಡತಗಳನ್ನು ಎಸೆದಿದ್ದಾರೆ. ವಕೀಲರ ಈ ಬೇಜವಾಬ್ದಾರಿ ಮತ್ತು ಉದ್ಧಟತನದ ವರ್ತನೆಯು ನ್ಯಾಯಮೂರ್ತಿಗಳನ್ನು ಕೆರಳಿಸಿತು. ವಕೀಲರ ವರ್ತನೆಯಿಂದ ತೀವ್ರ ಅಸಮಾಧಾನಗೊಂಡ ನ್ಯಾಯಮೂರ್ತಿಗಳು, ಇದು ನ್ಯಾಯಾಲಯದ ಘನತೆಗೆ ಧಕ್ಕೆ ತರುವಂತಹ ವರ್ತನೆ ಎಂದು ಖಂಡಿಸಿದರು. ಅಲ್ಲದೆ, ತಕ್ಷಣವೇ ಆ ವಕೀಲರನ್ನು ನ್ಯಾಯಾಂಗ ನಿಂದನೆ ಆರೋಪದ ಮೇಲೆ ಪೊಲೀಸ್ ವಶಕ್ಕೆ ತೆಗೆದುಕೊಳ್ಳುವಂತೆ ಆದೇಶಿಸಿದರು.

# ದೆಹಲಿ ಕಪಿಮುಷ್ಠಿಗೆ ಸಿಲುಕುವರೇ ವಿಜಯ್?



**ನವದೆಹಲಿ, ಮೇ 6:** ತಮಿಳುನಾಡು ರಾಜಕೀಯ ಕಣದಲ್ಲಿ ಕ್ಷಣಕ್ಕೊಂದು ಹೊಸ ತಿರುವುಗಳು ಎದುರಾಗುತ್ತಿದ್ದು, ನಟ ಹಾಗೂ ರಾಜಕಾರಣಿ ಜೋಸೆಫ್ ವಿಜಯ್ ಅವರ ಟಿವಿಕೆ ಪಕ್ಷದ ಮುಂದಿನ ನಡೆ ತೀವ್ರ ಕುತೂಹಲ ಕೆರಳಿಸಿದೆ. ಇತ್ತೀಚಿನ ಮಹತ್ವದ ಬೆಳವಣಿಗೆಯಲ್ಲಿ, ಲೋಕಸಭಾ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ವಿಜಯ್ ಅವರೊಂದಿಗೆ ಮಾತುಕತೆ ನಡೆಸಿರುವುದು ರಾಜ್ಯ ರಾಜಕಾರಣದಲ್ಲಿ ಹೊಸ ಸಂಚಲನ ಮೂಡಿಸಿದೆ. ಚುನಾವಣಾ ಅಖಾಡದ ನಂತರದ ಈ ರಾಜಕೀಯ ಮೇಲಾಟಗಳು ದ್ರಾವಿಡ ನಾಡಿನಲ್ಲಿ ಹೊಸ ಸಮೀಕರಣಗಳಿಗೆ ಹಾಗೂ ಮೈತ್ರಿ ಲೆಕ್ಕಾಚಾರಗಳಿಗೆ ಮುನ್ನುಡಿ ಬರೆದಿವೆ.

ಈ ಕುತೂಹಲಕಾರಿ ವಿದ್ಯಮಾನಗಳ ನಡುವೆಯೇ, ವಿಜಯ್ ನೇತೃತ್ವದ ಪಕ್ಷಕ್ಕೆ ಅಖಿಲ ಭಾರತ ಅಣ್ಣಾ ದ್ರಾವಿಡ ಮುನ್ನೇತ್ರ ಕಳಗಂ ಬೆಂಬಲದ ಹಸ್ತ ಚಾಚಿದೆ. ಮೇಲ್ನೋಟಕ್ಕೆ ಇದು ಕೇವಲ ಎರಡು ಪ್ರಾದೇಶಿಕ ಪಕ್ಷಗಳ ನಡುವಿನ ಹೊಂದಾಣಿಕೆಯಂತೆ ಕಂಡರೂ, ಇದರ ಹಿಂದಿರುವ ರಾಜಕೀಯ ಲೆಕ್ಕಾಚಾರಗಳೇ ಬೇರೆ. ರಾಜಕೀಯ ವಿಶ್ಲೇಷಕರ ಪ್ರಕಾರ, ಒಂದು ವೇಳೆ ವಿಜಯ್ ಅವರು ಎಐಎಡಿಎಂಕೆ ನೀಡುತ್ತಿರುವ ಈ ಬೆಂಬಲವನ್ನು ಸ್ವೀಕರಿಸಿದ್ದೇ ಆದಲ್ಲಿ, ಅವರು ಪರೋಕ್ಷವಾಗಿ ಬಿಜೆಪಿ ನಿಯಂತ್ರಣಕ್ಕೆ ಸಿಲುಕಿದಂತೆಯೇ ಲೆಕ್ಕ. ಪ್ರಸ್ತುತ ನಿರ್ಮಾಣವಾಗಿರುವ ಈ ರಾಜಕೀಯ ಬಿಕ್ಕಟ್ಟು ವಿಜಯ್ ಪಾಲಿಗೆ ಅಕ್ಷರಶಃ ಅಗ್ನಿಪರೀಕ್ಷೆಯ ಸಮಯವಾಗಿದೆ. ತಮ್ಮ ರಾಜಕೀಯ ಪ್ರವೇಶದ ದಿನದಿಂದಲೂ ದೆಹಲಿ ನಾಯಕರ ಹಸ್ತಕ್ಷೇಪ ಹಾಗೂ ಕೇಂದ್ರದ ಆಡಳಿತ ವೈಖರಿಯನ್ನು ವಿಜಯ್ ತೀವ್ರವಾಗಿ ವಿರೋಧಿಸುತ್ತಲೇ ಬಂದಿದ್ದಾರೆ. ರಾಜ್ಯದ ಸ್ವಾಯತ್ತತೆಯ ಪರವಾಗಿ ಸದಾ ಧ್ವನಿಯೆತ್ತಿದ್ದ ಅವರ ಅಸಲಿಯತ್ತನ್ನು ಈಗ ಕಾಲವೇ ಪರೀಕ್ಷೆಗೆ ಒಡ್ಡಿದೆ. ಈ ಸಂದರ್ಭದಲ್ಲಿ ಅವರು ತೆಗೆದುಕೊಳ್ಳುವ ನಿರ್ಧಾರವು, ಅಧಿಕಾರಕ್ಕಾಗಿ ಅವರು ಎಷ್ಟರಮಟ್ಟಿಗೆ ರಾಜಿ ಮಾಡಿಕೊಳ್ಳುತ್ತಾರೆ ಅಥವಾ ತಮ್ಮ ಸೈದ್ಧಾಂತಿಕ ಬದ್ಧತೆಗೆ ಅಂಟಿಕೊಳ್ಳುತ್ತಾರೆ ಎಂಬುದನ್ನು ಒರೆಗೆ ಹಚ್ಚಲಿದೆ. ಈ ಕ್ಲಿಷ್ಟಕರ ಪರಿಸ್ಥಿತಿಯಲ್ಲಿ ಕಾಂಗ್ರೆಸ್ ಪಕ್ಷವು ವಿಜಯ್ ಅವರಿಗೆ ಷರತ್ತುಬದ್ಧ ಬೆಂಬಲದ ವಾಗ್ದಾನವನ್ನು ಮುಂದಿಟ್ಟಿದೆ. ಯಾವುದೇ ಕಾರಣಕ್ಕೂ ನೀವು ಬಿಜೆಪಿ ಅಥವಾ ಅದರ ಮಿತ್ರಪಕ್ಷಗಳ ಬೆಂಬಲವನ್ನು ಕೇಳಬಾರದು ಮತ್ತು ಪಡೆಯಬಾರದು ಎಂಬ ಕಟ್ಟುನಿಟ್ಟಿನ ಷರತ್ತನ್ನು ಕಾಂಗ್ರೆಸ್ ವಿಧಿಸಿದೆ. ಈ ಮೂಲಕ ತಮಿಳುನಾಡಿನಲ್ಲಿ ಬಿಜೆಪಿಯ ಪರೋಕ್ಷ ಪ್ರಭಾವವನ್ನು ತಡೆಯುವ ಕಾರ್ಯತಂತ್ರವನ್ನು ಕಾಂಗ್ರೆಸ್ ಹೆಣೆದಿದ್ದು, ವಿಜಯ್ ಅವರನ್ನು ಜಾತ್ಯತೀತ ಪಾಳಯದಲ್ಲಿಯೇ ಭದ್ರವಾಗಿ ಉಳಿಸಿಕೊಳ್ಳುವ ಗಂಭೀರ ಪ್ರಯತ್ನ ನಡೆಸಿದೆ.

ಟಿವಿಕೆಯು(108) ಕಾಂಗ್ರೆಸ್(5), ಎಡ ಪಕ್ಷಗಳು(4), ವಿಸಿಕೆ(2), ಮುಸ್ಲಿಂ ಲೀಗ್(2) ಪಕ್ಷಗಳ ಬೆಂಬಲ ಪಡೆದರೆ ಬಹುಮತದ ಸಂಖ್ಯೆ 118 ದಾಟಿ 121 ಮುಟ್ಟುತ್ತದೆ.

ಮತ್ತೊಂದೆಡೆ, ಈ ಎಲ್ಲ ಷರತ್ತುಗಳು, ಆಮಿಷಗಳು ಮತ್ತು ಒತ್ತಡಗಳ ನಡುವೆ ವಿಜಯ್ ಅವರು ಪ್ರಸ್ತುತ ಎಡಪಕ್ಷಗಳ ಬೆಂಬಲವನ್ನು ಕೋರಿದ್ದಾರೆ. ತಮ್ಮ ಪಕ್ಷದ ಸೈದ್ಧಾಂತಿಕ ನೆಲೆಗಟ್ಟನ್ನು ಸ್ಪಷ್ಟಪಡಿಸಿಕೊಳ್ಳಲು ಮತ್ತು ಜನಪರ ನಿಲುವನ್ನು ಪ್ರದರ್ಶಿಸಲು ಕಮ್ಯುನಿಸ್ಟ್ ಪಕ್ಷಗಳ ಬೆಂಬಲ ಸೂಕ್ತ ಎಂಬುದನ್ನು ಅರಿತಿರುವ ಅವರು, ಎಡಪಕ್ಷಗಳ ನಾಯಕರೊಂದಿಗೆ ನಿರಂತರ ಸಂಪರ್ಕದಲ್ಲಿದ್ದಾರೆ. ಸೈದ್ಧಾಂತಿಕವಾಗಿ ಬಿಜೆಪಿಯನ್ನು ವಿರೋಧಿಸುವ ನಿಟ್ಟಿನಲ್ಲಿ ಎಡಪಕ್ಷಗಳೊಂದಿಗಿನ ಒಡನಾಟ ಅವರಿಗೆ ಸುರಕ್ಷಿತ ಹೆಜ್ಜೆಯಾಗಿ ತೋರುತ್ತಿದೆ. ಈ ನಡುವೆ, ವಿಜಯ್ ಅವರ ಆಪ್ತ ಸಹಾಯಕರು ಎಐಎಡಿಎಂಕೆ ನಾಯಕ ಎಡಪ್ಪಾಡಿ ಕೆ. ಪಳನಿಸ್ವಾಮಿ (ಇಪಿಎಸ್) ಅವರನ್ನು ಭೇಟಿಯಾಗಿರುವುದು ರಾಜಕೀಯ ವಲಯಗಳಲ್ಲಿ ತೀವ್ರ ಕುತೂಹಲಕ್ಕೆ ಕಾರಣವಾಗಿದೆ. ಮೈತ್ರಿಯ ಕುರಿತು ಮಾತುಕತೆ ನಡೆದು ಟಿವಿಕೆ ಪಕ್ಷಕ್ಕೆ ಎಐಎಡಿಎಂಕೆ ಬೆಂಬಲ ನೀಡುವ ಸಾಧ್ಯತೆಗಳು ದಟ್ಟವಾಗಿವೆಯಾದರೂ, ಆ ಪಕ್ಷದೊಳಗಿನ ಕೆಲವು ನಾಯಕರಲ್ಲಿ ಇದು ಅಸಮಾಧಾನ ಮೂಡಿಸಿದೆ.

# ಸಾಧನಶ್ರೀ ರಾಷ್ಟ್ರ ಪ್ರಶಸ್ತಿ ಮುಡಿಗೇರಿಸಿಕೊಂಡ ಯುವ ಗಾಯಕಿ ರಿಶಾಲ್ ಮೆಲ್ಬಾ ಕ್ರಾಸ್ತಾ

**ಮುಂಬಯಿ, ಮೇ.6:** ಕಥಾ ಬಿಂದು ಪ್ರಕಾಶನ ತನ್ನ ಹತ್ತನೇ ಆವೃತ್ತಿಯ ಕನ್ನಡ ಕಂಪು ಕಾರ್ಯಕ್ರಮವನ್ನು ಕಳೆದ ಭಾನುವಾರ ಮಾಟುಂಗಾ ಪೂರ್ವದ ಭಾವುದಾಜಿ ರಸ್ತೆಯಲ್ಲಿನ ಮೈಸೂರು ಅಸೋಸಿಯೇಶನ್‌ನ ಸಭಾಗೃಹದಲ್ಲಿ ಆಯೋಜಿಸಿದ್ದು, ಮಂಗಳೂರು ಮೂಲತಃ ಯುವ ಗಾಯಕಿ ಕು। ರಿಶಾಲ್ ಮೆಲ್ಬಾ ಕ್ರಾಸ್ತಾ ಅವರಿಗೆ ಪ್ರತಿಷ್ಠಿತ ?ಸಾಧನಶ್ರೀ ರಾಷ್ಟ್ರ ಪ್ರಶಸ್ತಿ ಪ್ರದಾನಿಸಿ ಅಭಿನಂದಿಸಲಾಯಿತು.

ಕಥಾ ಬಿಂದು ಪ್ರಕಾಶನ ಮಂಗಳೂರು ಇದರ ಸಂಚಾಲಕ ಪಿ.ವಿ ಪ್ರದೀಪ್ ಕುಮಾರ್ ಸಾರಥ್ಯದಲ್ಲಿ ನಡೆಸಲ್ಪಟ್ಟ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಬಂಟರ ಸಂಘ ಮುಂಬಯಿ ಅಧ್ಯಕ್ಷ ಪ್ರವೀಣ್ ಭೋಜ ಶೆಟ್ಟಿ, ಅತಿಥಿ ಅಭ್ಯಾಗತರುಗಳಾಗಿ ಬಾಂಬೇ ಬಂಟ್ಸ್ ಎಸೋಸಿಯೇಶನ್ನಿಕಟಪೂರ್ವ ಅಧ್ಯಕ್ಷ ಸಿಎ। ಸುರೇಂದ್ರ ಕೆ.ಶೆಟ್ಟಿ, ಆರ್ಯಭಟ ಪ್ರಶಸ್ತಿ ವಿಜೇತ ಶಂಭು ಸನಿಲ್ ಮತ್ತಿತ ಗಣ್ಯರು 18ನೇ ವಯಸ್ಸಿನಲ್ಲೇ ರಾಷ್ಟ್ರೀಯ ಗೌರವಕ್ಕೆ ಭಾಜನರಾಗಿರುವ ಕು। ರಿಶಾಲ್ ಮೆಲ್ಬಾ ಕ್ರಾಸ್ತಾ ಅವರ ಸಂಗೀತ ಕ್ಷೇತ್ರದ ಅಪ್ರತಿಮ ಸಾಧನೆಯನ್ನು ಪರಿಗಣಿಸಿ ಗೌರವಿಸಿದರು.

ಪ್ರವೀಣ ಬೋಜ ಶೆಟ್ಟಿ ಮಾತನಾಡಿ, ಪ್ರತಿ ವ್ಯಕ್ತಿಯೊಳಗೆ ಅಡಗಿರುವ ಸುಪ್ತ ಪ್ರತಿಭೆಯನ್ನು ಗುರುತಿಸಿ, ಅದನ್ನು ಬೆಳೆಸಿ, ಪೋಷಿಸಿ, ಜನರಿಗೆ ಸಮರ್ಪಿಸುವುದು ಕನ್ನಡ ಕಂಪು ಕಾರ್ಯಕ್ರಮದ ಉದ್ದೇಶ. ಈ ಬಾರಿ ರಿಶೆಲ್ ಮೆಲ್ಬಾ ಕ್ರಾಸ್ತ ಅವರನ್ನು ಇಂತಹ ಪ್ರಶಸ್ತಿಗೆ ಆಯ್ಕೆ ಮಾಡಿದ್ದೇವೆ. ಇವರನ್ನು ಸಾಧನ ಶ್ರೀ ರಾಷ್ಟ್ರ ಪ್ರಶಸ್ತಿ ಗೆ ಆಯ್ಕೆ ಮಾಡಿದ್ದರಿಂದ ಕನ್ನಡದ ಕಂಪು ಇಡೀ ರಾಷ್ಟ್ರಕ್ಕೆ ತಲುಪಿದೆ." ಎಂದು ಹೇಳಿದರು.







"ರಾಷ್ಟ್ರೀಯ ಮಟ್ಟದ ಪ್ರಶಸ್ತಿ ಗೆದ್ದು ಮೆರೆದಿರುವ 18 ವರ್ಷದ ಯುವ ಗಾಯಕಿ ರಿಶಾಲ್ ಅವರ ಸಾಧನೆ ಎಲ್ಲರಲ್ಲೂ ಹೆಮ್ಮೆ ಮತ್ತು ಸಂತೋಷವನ್ನು ಉಂಟುಮಾಡಿದೆ. ವೇದಿಕೆಯಲ್ಲಿ ಮಾತನಾಡಿದ ಗಣ್ಯರು, ಅವರ ಧ್ವನಿಯ ಸೌಂದರ್ಯ, ಸ್ವರದ ನಿಖರತೆ ಮತ್ತು ಭಾವ ವ್ಯಕ್ತಪಡಿಸುವ ಶೈಲಿಯನ್ನು ಮೆಚ್ಚಿಕೊಂಡರು. ಅಷ್ಟು ಕಿರಿಯ ವಯಸ್ಸಿನಲ್ಲಿ ಈ ಮಟ್ಟದ ಸಾಧನೆ ಸಾಧಿಸಿರುವುದು ಅಪರೂಪವಾಗಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಉನ್ನತ ಸಾಧನೆ ಮಾಡುವ ಸಾಮರ್ಥ್ಯ ಅವರಲ್ಲಿದೆ" ಎಂದು ಅಭಿಪ್ರಾಯಪಟ್ಟರು.

ಸಿಎ। ಸುರೇಂದ್ರ ಶೆಟ್ಟಿ ಮಾತನಾಡಿ, ರಿಶಲ್ ಅವರ ಸಾಧನೆ ಎಲ್ಲರಲ್ಲೂ ಹೆಮ್ಮೆ ಮತ್ತು ಸಂತೋಷವನ್ನು ಉಂಟು ಮಾಡುವಂತಹದ್ದು, ಈಕೆಯ ಸಂಗೀತದ ಮೇಲಿನ ಆಸಕ್ತಿ ಮತ್ತು ಪರಿಶ್ರಮವೇ ಈ ಯಶಸ್ಸಿನ ಹಿನ್ನಲೆ" ಎಂದು ಹೇಳಿದರು. "ಪ್ರತಿಯೊಂದು ಹಾಡಿನಲ್ಲೂ ಅವರು ತೋರಿಸುವ ಸಮರ್ಪಣೆ ಮತ್ತು ಅಭ್ಯಾಸವು ಸ್ಪಷ್ಟವಾಗಿ ಕಾಣುತ್ತದೆ. ಈ ರಾಷ್ಟ್ರೀಯ ಪ್ರಶಸ್ತಿ ಕೇವಲ ಒಂದು ಆರಂಭ ಮಾತ್ರವಾಗಿದ್ದು, ಭವಿಷ್ಯದಲ್ಲಿ ಇನ್ನಷ್ಟು ದೊಡ್ಡ ವೇದಿಕೆಗಳಲ್ಲಿ ಅವರ ಪ್ರತಿಭೆ ಅರಳಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ರಿಶಾಲ್ ಮೆಲ್ಬಾ ಕ್ರಾಸ್ತಾ ಅವರು ಯುವ ಪೀಳಿಗೆಗೆ ಪ್ರೇರಣೆಯಾಗಿದ್ದಾರೆ. ಎಳೆಯ ವಯಸ್ಸಿನಲ್ಲೇ ಇಂತಹ ಸಾಧನೆ ಸಾಧಿಸಿರುವುದು ಇತರ ಯುವಕರಿಗೆ ಸ್ಫೂರ್ತಿದಾಯಕವಾಗಿದೆ. ಅವರ ಪ್ರಯತ್ನ, ದೃಢಸಂಕಲ್ಪ ಮತ್ತು ಕಲೆಪ್ರೀತಿ ಮುಂದಿನ ದಿನಗಳಲ್ಲಿ ಅವರಿಗೆ ಇನ್ನಷ್ಟು ಯಶಸ್ಸುಗಳನ್ನು ತಂದುಕೊಡಲಿ" ಎಂದು ಶಂಭು ಸನಿಲ್ ಹಾರೈಸಿದರು.

ರಿಶಲ್ ಮೆಲ್ಬಾ ಕ್ರಾಸ್ತಾ ಅವರ ಯಶಸ್ಸಿನ ಹಿಂದೆ ಅವರ ಕುಟುಂಬದ ಬೆಂಬಲವೂ ಮಹತ್ವದ ಪಾತ್ರವಹಿಸಿದೆ ಎಂಬುದು ಉಲ್ಲೇಖನೀಯ. ರಿಶಲ್ ತಂದೆ ನಾಡಿನ ಹೆಸರಾಂತ ಗಾಯಕ ರೊನಿ ಕ್ರಾಸ್ತಾ ಹಾಗೂ ತಾಯಿ ಮಾತಟಿಲ್ಡಾ ಜೆಸಿಂತಾ ಕ್ರಾಸ್ತಾ ಇವರಿಬ್ಬರೂ ಗಾಯಕರು ಆಗಿದ್ದು, ಬಾಲ್ಯದಿಂದಲೇ ಸಂಗೀತದ ಬಗ್ಗೆ ಆಸಕ್ತಿ ಬೆಳೆಸುವಲ್ಲಿ ಅಪಾರ ಪರಿಶ್ರಮ ವಹಿಸಿದ್ದಾರೆ. ತಮ್ಮ ಪುತ್ರಿಯನ್ನು ಈ ಮಟ್ಟದ ಸಾಧನೆಗೆ ತಲುಪಿಸಲು ಅವರು ನೀಡಿದ ಮಾರ್ಗದರ್ಶನ, ಅಭ್ಯಾಸ ಮತ್ತು ಪ್ರೋತ್ಸಾಹವೇ ಇಂದು ರಿಶಲ್ ಅವರ ಯಶಸ್ಸಿಗೆ ಪ್ರಮುಖ ಆಧಾರವಾಗಿದೆ ಎಂದು ಗಣ್ಯರು ಹಾಗೂ ಪಿ.ವಿ ಪ್ರದೀಪ್ ಕುಮಾರ್ ಅಭಿಪ್ರಾಯಪಟ್ಟರು.

ಮಧುಸೂದನ ಟಿ.ಆರ್., ಡಾ। ಕೊಳ್ಚಪ್ಪೆ ಗೋವಿಂದ ಭಟ್, ಶ್ರೀದೇವಿ ರಾವ್, ಡಾ। ಸತೀಶ್ ಎನ್.ಬಂಗೇರ, ವಾಣಿ ಶೆಟ್ಟಿ ಮತ್ತಿತರ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದು, ರಿಶಾಲ್ ಹಾಡಿನ ಧ್ವನಿಯ ಸೌಂದರ್ಯ, ಸ್ವರದ ನಿಖರತೆ ಹಾಗೂ ಭಾವಾಭಿವ್ಯಕ್ತಿಯ ವಿಶಿಷ್ಟ ಶೈಲಿಯನ್ನು ವಿಶೇಷವಾಗಿ ಮೆಚ್ಚಿಕೊಂಡಿದ್ದು, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಪ್ರತಿಭಾವಂತರನ್ನು ಗುರುತಿಸಿ ಗೌರವಿಸುವ ಉದ್ದೇಶದಿಂದ ಆಯೋಜಿಸಲಾದ ಈ ಕಾರ್ಯಕ್ರಮಕ್ಕೆ ಅನಿತಾ ಶೆಣೈ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

### ವಾಣಿಜ್ಯ ಚಟುವಟಿಕೆಗೆ ಪ್ರವಾಸಿ ವೀಸಾ ಬಳಸುವಂತಿಲ್ಲ: ಹೈಕೋರ್ಟ್ ಸ್ಪಷ್ಟನೆ

## ಸಮಾಜದ ಶಾಂತಿಭಂಗಕ್ಕೆ ಕಾರಣವಾಗುವಂತೆ ವರ್ತಿಸುವಂತಿಲ್ಲ: ಎಚ್ಚರಿಕೆ

**ಬೆಂಗಳೂರು, ಮೇ 6:** ಪ್ರವಾಸಿ ವೀಸಾದ ಮೇಲೆ ದೇಶಕ್ಕೆ ಬರುವ ವಿದೇಶಿ ನಾಗರಿಕರು ಅದನ್ನು ವಾಣಿಜ್ಯ ಚಟುವಟಿಕೆಗಳಿಗೆ ಬಳಸಿಕೊಳ್ಳಲು ಅಥವಾ ಸಮಾಜದ ಶಾಂತಿ ಭಂಗಕ್ಕೆ ಕಾರಣವಾಗುವ ರೀತಿಯಲ್ಲಿ ವರ್ತಿಸಲು ಅನುಮತಿ ಇಲ್ಲ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ.

ಫ್ರಾನ್ಸ್ ಪ್ರಜೆ 54 ವರ್ಷದ ಕ್ರಿಸ್ಟೋಫ್ ಸ್ಟೆಫಾನ್ ಮೊನ್ನಿಯನ್ ಸಲ್ಲಿಸಿದ್ದ ಅರ್ಜಿಯನ್ನು ತಿರಸ್ಕರಿಸಿದ ವೇಳೆ ನ್ಯಾಯಮೂರ್ತಿ ಸಚಿನ್ ಶಂಕರ್ ಮಗದುಮ್ ಈ ಅಭಿಪ್ರಾಯ ವ್ಯಕ್ತಪಡಿಸಿದರು. ಉತ್ತರ ಕನ್ನಡ ಜಿಲ್ಲೆಯ ಹಿಟ್ಟಲಮಕ್ಕಿಯಲ್ಲಿ ಹಲವು ವರ್ಷಗಳಿಂದ ರೆಸ್ಟೋರೆಂಟ್ ನಡೆಸುತ್ತಿದ್ದ ಮೊನ್ನಿಯನ್ ಅವರಿಗೆ ವಿದೇಶಿಗರ ಪ್ರಾದೇಶಿಕ ನೋಂದಣಿ ಅಧಿಕಾರಿ ನೀಡಿದ್ದ ಲೀವ್ ಇಂಡಿಯಾ ನೋಟಿಸ್ ಅವರು ಪ್ರಶ್ನಿಸಿದ್ದರು.

ಕಳೆದ ಮಾರ್ಚ್ 16ರ ಈ ನೊಟೀಸ್ ನ್ನು ವಾಟ್ಸ್ಆಪ್ ಮೂಲಕ ಅವರಿಗೆ ಕಳುಹಿಸಲಾಗಿತ್ತು. ನವೆಂಬರ್ 24, 2026ರವರೆಗೆ ಮಾನ್ಯತೆ ಹೊಂದಿರುವ ಪ್ರವಾಸಿ ವೀಸಾ ಹೊಂದಿರುವ ಕಾನೂನು ಪಾಲಕ ನಾಗರಿಕನಾದ ತಮಗೆ




ಯಾವುದೇ ವಿಚಾರಣೆಗೆ ಅವಕಾಶ ನೀಡದೆ ದೇಶ ತೊರೆಯಲು ಸೂಚಿಸಿರುವುದು ಅಕ್ರಮ ಹಾಗೂ ಏಕಪಕ್ಷೀಯ ಕ್ರಮವಾಗಿದೆ ಎಂದು ಅವರು ವಾದಿಸಿದ್ದರು. ಆದರೆ ನ್ಯಾಯಾಲಯ, ಅರ್ಜಿದಾರರು ತಮ್ಮ ವೀಸಾ ನಿಯಮಗಳನ್ನು ಉಲ್ಲಂಘಿಸಿರುವುದಾಗಿ ಮತ್ತು ಕಾನೂನು ಜಾರಿಗೆ ಸಂಬಂಧಿಸಿದ ಸಂಸ್ಥೆಗಳಿಂದ ಪ್ರತಿಕೂಲ ವರದಿಗಳು ಬಂದಿರುವುದಾಗಿ ಗಮನಿಸಿ, ಅವರಿಗೆ ನ್ಯಾಯಸಮ್ಮತ ಪರಿಹಾರ ನೀಡಲು ಸಾಧ್ಯವಿಲ್ಲ ಎಂದು ಹೇಳಿದೆ.

ಲೀವ್ ಇಂಡಿಯಾ ನೊಟೀಸ್ ಕಾನೂನುಬದ್ಧ ಅಧಿಕಾರದ ಸರಿಯಾದ ಉಪಯೋಗವಾಗಿದ್ದು, ಇದರಲ್ಲಿ ಯಾವುದೇ ಏಕಪಕ್ಷೀಯತೆ ಅಥವಾ ಅಕ್ರಮವಿಲ್ಲ. ಇದು ವಿದೇಶಿ ನಾಗರಿಕರನ್ನು ನಿಯಂತ್ರಿಸುವ ಸಂವಿಧಾನಾತ್ಮಕ ಮತ್ತು ಕಾನೂನು ವ್ಯವಸ್ಥೆಗೆ ಅನುಗುಣವಾಗಿದೆ ಎಂದು ನ್ಯಾಯಾಲಯ ತೀರ್ಪು ನೀಡಿದೆ.ವಿದೇಶಿ ನಾಗರಿಕರು ಭಾರತದಲ್ಲಿ ಉಳಿಯುವ ಹಕ್ಕನ್ನು ಸ್ವಯಂಪ್ರೇರಿತವಾಗಿ ಕೇಳಲು ಸಾಧ್ಯವಿಲ್ಲ. ವೀಸಾ ನಿಯಮಗಳನ್ನು ಉಲ್ಲಂಘಿಸಿ ವಾಣಿಜ್ಯ ಚಟುವಟಿಕೆಗಳಲ್ಲಿ ತೊಡಗಿದರೆ ತಪ್ಪು ಎಂದು ನ್ಯಾಯಾಲಯ ಹೇಳಿದೆ.ದಾಖಲೆಗಳ ಪ್ರಕಾರ, ಅರ್ಜಿದಾರರು ಪ್ರವಾಸಿ ವೀಸಾದ ಮಿತಿಯನ್ನು ಮೀರಿ ರೆಸ್ಟೋರೆಂಟ್ ನಡೆಸುವುದರ ಮೂಲಕ ಅನಧಿಕೃತ ಚಟುವಟಿಕೆಗಳಲ್ಲಿ ತೊಡಗಿದ್ದಷ್ಟೇ ಅಲ್ಲದೆ, ಸ್ಥಳೀಯ ಶಾಂತಿಗೆ ಧಕ್ಕೆ ಉಂಟಾಗಿದೆ ಎಂದು ನ್ಯಾಯಾಲಯ ಹೇಳಿದೆ.



ಸಾರ್ವಜನಿಕ ಮೂತ್ರ ವಿಸರ್ಜನೆಯನ್ನು ನಿಯಂತ್ರಿಸುವ ವಿಶಿಷ್ಟ ಪ್ರಯತ್ನವಾಗಿ, ಮೈಸೂರು ಮಹಾನಗರ ಪಾಲಿಕೆ (ಎಂಸಿಸಿ) ಬೆಂಗಳೂರು–ನೀಲಗಿರಿ ರಸ್ತೆಯ ಪಾದಚಾರಿ ಮಾರ್ಗದ ಉದ್ದಕ್ಕೂ, ಉಪನಗರ ಬಸ್ ನಿಲ್ದಾಣದ ಎದುರಿನ ಗೋಡೆಗಳ ಮೇಲೆ ದೊಡ್ಡ ಪ್ರತಿಫಲಿತ ಕನ್ನಡಿಗಳು ಮತ್ತು ಉಕ್ಕಿನ ಹಾಳೆಗಳನ್ನು ಅಳವಡಿಸಿದೆ.

## ಪ್ರಮಾಣವಚನಕ್ಕೆ ಅವಕಾಶ ನೀಡದ್ದರಿಂದ ರಾಜ್ಯಪಾಲರ ಬಳಿಗೆ ಹೋದೆವು: ಜೀವರಾಜ್ ಸ್ಪಷ್ಟನೆ

**ಬೆಂಗಳೂರು, ಮೇ 6:** ವಿಧಾನಸಭೆಯ ಶಾಸಕನಾಗಿ ಪ್ರಮಾಣ ವಚನ ಸ್ವೀಕಾರಕ್ಕೆ ಅನುಮತಿ ಕೇಳಿದ್ದೆವು. ಆದರೆ ಸ್ಪೀಕರ್ ಯು.ಟಿ ಖಾದರ್ ಅವರು ಅವಕಾಶ ನೀಡಿರಲಿಲ್ಲ. ಆದ್ದರಿಂದ ಮಾನ್ಯ ರಾಜ್ಯಪಾಲರ ಬಳಿ ಹೋಗಿ ದೂರು ನೀಡುವುದು ಅನಿವಾರ್ಯವಾಗಿತ್ತು ಎಂದು ಶೃಂಗೇರಿ ಶಾಸಕ ಡಿ.ಎನ್ ಜೀವರಾಜ್ ಹೇಳಿದ್ದಾರೆ.



ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪ್ರಮಾಣವಚನ ಸ್ವೀಕಾರಕ್ಕೆ ಸ್ಪೀಕರ್ ಅವರು ಸೂಕ್ತ ಸಮಯದಲ್ಲಿ ಅವಕಾಶ ನೀಡಲಿಲ್ಲ. ಪರಿಸ್ಥಿತಿ ಗಂಭೀರವಾದ್ದರಿಂದ ಲೋಕಭವನ ದವರೆಗೆ ಹೋಗಬೇಕಾಯಿತು. ಪ್ರಮಾಣವಚನಕ್ಕೆ ಅವಕಾಶ ನೀಡುವುದು ಹೈವೊಲ್ಟೇಜ್ ರೀತಿ ಪರಿವರ್ತನೆಯಾಗಿತ್ತು.

ಇದೊಂದು ಸರಳವಾಗಿದ್ದು, ಈ ರೀತಿ ಆಗುವುದು ಇಷ್ಟೊಂದು ಅವಶ್ಯಕತೆ ಇರಲಿಲ್ಲ. ಪ್ರಜಾಪ್ರಭುತ್ವದಲ್ಲಿ ಗೆಲುವು ಮತ್ತು ಸೋಲು ಇದ್ದದ್ದೇ. ಆದರೆ ಇಲ್ಲಿ ಗಮನಿಸಬೇಕಾದ ಒಂದು ಬೆಳವಣಿಗೆ ನಡೆದಿದೆ. ಒಂದು ಹೊಸ ಸಂಪ್ರದಾಯ ಸೃಷ್ಟಿ ಯಾಗಿತ್ತು. ಸೋತ ಕೂಡಲೇ ತಮ್ಮದೇ ಸರ್ಕಾರ ಇದೆ ಎಂದು ದೂರು ನೀಡಿ ಎಫ್ಐಆರ್ ಮಾಡಿದರೆ ಹೇಗೆ. ಮುಂದಿನ ದಿನಗಳಲ್ಲಿ ಉಪಚುನಾವಣೆಗೂ ಸ್ಪರ್ಧಿಸುವಂತಿಲ್ಲ ಎಂದಾಗುತ್ತದೆ. ಅಲ್ಲದೆ ಮರು ಮತಎಣಿಕೆಗೂ ಕೇಳೋ ಹಾಗಿಲ್ಲ. ಇಷ್ಟೆಲ್ಲ ಹೋರಾಟ ಮಾಡಿ ಗೆದ್ದವರ ಮನಸ್ಥಿತಿ ಕೆಡಿಸುವ ಸಂಚು ಆಗುತ್ತದೆ. ನಮ್ಮ ಸರ್ಕಾರದಲ್ಲಿ ನಮ್ಮದೇ ಅಧಿಕಾರಿಗಳು ಇದ್ದಾರೆ ಅಂತ ಗೆದ್ದವರ ಮೇಲೆ ಒತ್ತಡ ಹಾಕುವುದು ನಡೆದಿದೆ ಎಂದು ಭಾವಿಸಿದ್ದೇನೆ ಎಂದರು.

ಪ್ರಮಾಣವಚನಕ್ಕೆ ಅವಕಾಶ ನೀಡುತ್ತೇವೆ. ಎರಡು ದಿನ ಬಿಟ್ಟು ಭೇಟಿ ಮಾಡಲಾಗುವುದು ಎಂದು ಸ್ಪೀಕರ್ ಯು.ಟಿ ಖಾದರ್ ಅವರು ನಮಗೆ ತಿಳಿಸಿದ್ದಿದ್ದರೆ ನಾವು ಗೌರವಾನ್ವಿತ ರಾಜ್ಯಪಾಲರ ಬಳಿಗೆ ಹೋಗುತ್ತಿರಲಿಲ್ಲ. ಸ್ಪೀಕರ್ ಅವರು ಬೆಂಗಳೂರಿನಲ್ಲಿ ಲಭ್ಯವಿಲ್ಲದ ಕಾರಣ ಭೇಟಿ ಮಾಡಲು ಆಗಲಿಲ್ಲ. ಪ್ರಮಾಣ ವಚನಕ್ಕೆ ವ್ಯವಸ್ಥೆ ಮಾಡಿ ಎಂದು ವಿಧಾನಸಭೆಯ ಕಾರ್ಯದರ್ಶಿಗಳಿಗೆ ಪತ್ರಕೊಟ್ಟು ಕೇಳಿದ್ದೆ. ಮತ್ತೊಂದು ಕಡೆ ರಾಜ್ಯಪಾಲರೂ ಪ್ರಮಾಣವಚನಕ್ಕೆ ಸಲಹೆ ನೀಡಿರಬಹುದು. ಇದಾದ ನಂತರ ಪ್ರಮಾಣವಚನಕ್ಕೆ ಪತ್ರ ಬಂದಿದೆ ಎಂದರು.

ಮರುಮತ ಎಣಿಕೆ ನಂತರ ಬಿಜೆಪಿ ಗೆಲುವು ಸಾಧಿಸಿದ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ಮಾತನಾಡಿರುವ ರೀತಿ ನನಗೆ ಬಹಳ ಅಶ್ಚರ್ಯ ತಂದಿದೆ. ಇವರಿಬ್ಬರೂ ರಾಜಕೀಯದಲ್ಲಿ ಬಹಳ ವರ್ಷದ ಅನುಭವ ಇರುವವರು. ಯಾಕೆ ಅವರು ಇಷ್ಟೊಂದು ಹಟ ಹಿಡಿದಿದ್ದಾರೆ ಎಂಬುದು ತಿಳಿಯುತ್ತಿಲ್ಲ. ಆ ರೀತಿ ಮಾತನಾಡಬೇಡಿ ಎಂದು ಪದೇ ಪದೇ ಮನವಿ ಮಾಡಿದ್ದೇನೆ. ಸಾಮಾನ್ಯವಾದುದನ್ನು ಯಾಕೆ ಸಂಕೀರ್ಣ ಮಾಡುತ್ತಾರೆ. ಸರ್ಕಾರದ ಮುಖ್ಯಸ್ಥರಾಗಿ ನೀವೂ ನನ್ನ ರಕ್ಷಣೆಗೆ ಬನ್ನಿ ಎಂದು ಹೇಳಿದ್ದೆ ಎಂದರು.

### ಅಂತಿಮ ಹಂತದಲ್ಲಿ ಜಿಬಿಎ ಚುನಾವಣೆ ದಿನಾಂಕ ನಿಗದಿ ಪ್ರಕ್ರಿಯೆ

## ಚುನಾವಣಾ ಆಯೋಗದಿಂದ ನಾಳೆ ಮಹತ್ವದ ಸಭೆ

**ಬೆಂಗಳೂರು, ಮೇ 6:** ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಚುನಾವಣೆಗೆ ಸಂಬಂಧಿಸಿದಂತೆ ಮಹತ್ವದ ಬೆಳವಣಿಗೆ ಕಂಡುಬಂದಿದೆ. ಚುನಾವಣೆಗೆ ದಿನಾಂಕ ನಿಗದಿ ಮಾಡುವ ಪ್ರಕ್ರಿಯೆ ಇದೀಗ ಅಂತಿಮ ಹಂತಕ್ಕೆ ತಲುಪಿದ್ದು, ರಾಜ್ಯ ಚುನಾವಣಾ ಆಯೋಗ ಮೇ 8ರಂದು ಪ್ರಮುಖ ಸಭೆ ಕರೆದಿದೆ.

ಜಿಬಿಎ ಕಾಯ್ದೆಯ ಪ್ರಕರಣ 34(4) ಅನ್ವಯ, ಪ್ರಾಧಿಕಾರದ ಸದಸ್ಯರೊಂದಿಗೆ ಸಮಾಲೋಚನೆ ನಡೆಸಿ ಚುನಾವಣಾ ದಿನಾಂಕ ನಿಗದಿ ಪಡಿಸುವುದು ಅನಿವಾರ್ಯವಾಗಿದೆ. ಈ ಹಿನ್ನೆಲೆಯಲ್ಲಿ, ಮೇ 8ರಂದು ವಿಧಾನಸೌಧದಲ್ಲಿ ಜಿಬಿಎ ಎಲ್ಲಾ ಸದಸ್ಯರ ಸಭೆಯನ್ನು ಆಯೋಜಿಸಲಾಗಿದೆ. ಈಗಾಗಲೇ ವಾರ್ಡ್ ವಿಂಗಡಣೆ, ಮೀಸಲಾತಿ ಹಾಗೂ ಅಂತಿಮ ಮತದಾರರ ಪಟ್ಟಿ ಸಿದ್ಧಗೊಂಡಿದ್ದು, ಚುನಾವಣೆಗೆ ಬೇಕಾದ ಪೂರ್ವ ಸಿದ್ಧತೆಗಳನ್ನು ಆಯೋಗ ಪೂರ್ಣಗೊಳಿಸಿದೆ. ಸಭೆಗೆ ಸಂಬಂಧಿಸಿದ ಮಾಹಿತಿ ಈಗಾಗಲೇ ಜಿಬಿಎ ಸದಸ್ಯರಿಗೆ ನೀಡಲಾಗಿದೆ.

ಒಟ್ಟು 86 ಸದಸ್ಯರನ್ನು ಒಳಗೊಂಡಿರುವ ಜಿಬಿಎ ಸಮಿತಿಯಲ್ಲಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಜಿಬಿಎ ಮುಖ್ಯ ಆಯುಕ್ತರು, ಐದು ನಗರಪಾಲಿಕೆ ಆಯುಕ್ತರು, ಬೆಂಗಳೂರಿನ




28 ವಿಧಾನಸಭಾ ಕ್ಷೇತ್ರಗಳ ಶಾಸಕರು, ಲೋಕಸಭಾ ಸದಸ್ಯರು, ವಿಧಾನಪರಿಷತ್ ಸದಸ್ಯರು ಹಾಗೂ ರಾಜ್ಯಸಭಾ ಸದಸ್ಯರು ಸೇರಿದಂತೆ ಇತರೆ ಅಧಿಕಾರಿಗಳು. ಶಾಸಕರು ಸೇರಿದ್ದಾರೆ.

ಸಭೆಯಲ್ಲಿ ಸದಸ್ಯರ ಸಲಹೆ ಮತ್ತು ಮನವಿಗಳನ್ನು ಸ್ವೀಕರಿಸಿದ ನಂತರ, ಚುನಾವಣಾ ದಿನಾಂಕವನ್ನು ಅಂತಿಮಗೊಳಿಸುವ ಸಾಧ್ಯತೆ ಇದೆ. ಜಿಬಿಎ ಚುನಾವಣೆಗೆ ಸಂಬಂಧಿಸಿದ ಮುಂದಿನ ದಿಕ್ಕು ಈ ಸಭೆಯಲ್ಲೇ ನಿರ್ಧಾರವಾಗುವ ನಿರೀಕ್ಷೆ ಇದೆ.ಇನ್ನೂ ಚುನಾವಣೆ ಅಯೋಗ ಈಗಾಗಲೇ ಜೂನ್ ತಿಂಗಳಲ್ಲಿ ಎರಡು ದಿನಾಂಕವನ್ನು ನಿಗಧಿ ಮಾಡಿದ್ದು. ಸಭೆಯಲ್ಲಿ ದಿನಾಂಕ ನಿಗಧಿ ಬಗ್ಗೆ ಮಾಹಿತಿ ಪಡೆಯಲ್ಲಿದೆ

ಒಟ್ಟಿನಲ್ಲಿ, ಮೇ 8ರಂದು ನಡೆಯಲಿರುವ ಈ ಸಭೆಯನ್ನು ಜಿಬಿಎ ಚುನಾವಣೆಯ ದಿಕ್ಕು ತೋರಿಸುವ ಮಹತ್ವದ ಹೆಜ್ಜೆ ಎಂದು ಹೇಳಬಹುದು. ಜಿಬಿಎ ಚುನಾವಣೆಗೆ ದಿನಾಂಕ ಅದೇ ದಿನ ನಿಗದಿಯಾಗುವ ಸಾಧ್ಯತೆಯಿದೆ. ಈಗಾಗಲೇ ಸರ್ಕಾರಕ್ಕೆ 66 ಕೋಟಿ ಚುನಾವಣಾ ವೆಚ್ಚದ ಬಗ್ಗೆ ಮಾಹಿತಿ ನೀಡಲಾಗಿದೆ.ಸುಮಾರು 6 ಸಾವಿರ ಸಿಬ್ಬಂದಿಗಳು ಚುನಾವಣೆ ಕೆಲಸ ಕಾರ್ಯಕ್ಕೆ ನೇಮಿಸಲು ಸಿದ್ಧತೆ ನಡೆಸಿದ್ದರೆ. ಒಂದು ವೇಳೆ ಸಭೆಯಲ್ಲಿ ಚುನಾವಣೆಗೆ ಹಸಿರು ನಿಶಾನೆ ನೀಡಿದರೆ ಮೇ ಮೂರನೇ ವಾರ ಚುನಾವಣೆ ಅಯೋಗ ಜಿಬಿಎ ಚುನಾವಣೆಗೆ ದಿನಾಂಕ ನಿಗಧಿ ಮಾಡಿ ನೋಟಿಫಿಕೇಷನ್ ಹೊರಾಡಿಸಲಿದೆ ಎಂಬ ಮಾಹಿತಿ ಅಧಿಕಾರಿಗಳು ನೀಡಿದ್ದಾರೆ.

### ಸಭೆಯ ಪ್ರಮುಖ ಅಂಶಗಳು

1. ವಾರ್ಡುವಾರು ಮತದಾನ ಕೇಂದ್ರದ ಪಟ್ಟಿಯನ್ನು ಆಯೋಗದ ಅನುಮೋದನೆ ಪಡೆದು ಪ್ರಚರ ಪಡಿಸಿರುವ ಪ್ರಸ್ತಾವನೆ ಬಗ್ಗೆ
2. ಚುನಾವಣಾಧಿಕಾರಿ ಮತ್ತು ಸಹಾಯಕ ಚುನಾವಣಾಧಿಕಾರಿಗಳ ನೇಮಕಾತಿ ಅಧಿಸೂಚನೆ ಹೊರಡಿಸಿರುವ ಕುರಿತು.
3. ಮತಗಟ್ಟೆ ಸಿಬ್ಬಂದಿ ನೇಮಕ ಮಾಡುವ ಬಗ್ಗೆ
4. ಮತಗಟ್ಟೆ ಸಿಬ್ಬಂದಿಗಳ ತರಬೇತಿ ಬಗ್ಗೆ
5. ಮತಪೆಟ್ಟಿಗೆಗಳ ಎತ್ತುವಳಿ, ಸಾಗಾಣಿಕೆ, ಸಂಗ್ರಹಣೆ ಸಂಬಂಧ ನೋಡಲ್ ಅಧಿಕಾರಿಗಳನ್ನು ನೇಮಕ ಮಾಡಿರುವ ಕುರಿತು.
6. ಮಸ್ಟರಿಂಗ್, ಡಿ–ಮಸ್ಟರಿಂಗ್ ಮತ್ತು ಮತ ಎಣಿಕೆ ಕೇಂದ್ರಗಳನ್ನು ಸ್ಥಾಪಿಸುವ ಕುರಿತು
7. ಭದ್ರತಾ ಕೊಠಡಿ (Strong Room) ವ್ಯವಸ್ಥೆ
8. ಸಾರ್ವಜನಿಕ ಸ್ಥಳಗಳಲ್ಲಿ ಪೋಸ್ಟರ್ ಮತ್ತು ಹೋರ್ಡಿಂಗ್ ಹಾಕುವುದನ್ನು ನಿಷೇಧಿಸುವ ಕುರಿತು.
10. ಚುನಾವಣಾ ಪ್ರಚಾರಕ್ಕಾಗಿ ಸಭೆ ನಡೆಸಲು ರಾಜಕೀಯ ಪಕ್ಷಗಳಿಗೆ ಅನುಮತಿ ನೀಡುವ ಕುರಿತು.
11. ಸಾರ್ವಜನಿಕ ಆಸ್ತಿ–ಪಾಸ್ತಿ ವಿರೂಪಗೊಳಿಸದಿರುವ ಕುರಿತು.

## ಗೌನ್ ಧರಿಸಿದ ವಕೀಲೆಗೆ ನ್ಯಾಯಮೂರ್ತಿ ತರಾಟೆ

**ಬೆಂಗಳೂರು, ಮೇ 6:** ಗೌನ್ ಧರಿಸದೇ ನ್ಯಾಯಾಲಯದ ಮುಂದೆ ಕಿರಿಯ ವಕೀಲೆಯೊಬ್ಬರನ್ನು ಕರ್ನಾಟಕ ಹೈಕೋರ್ಟ್‌ನ ನ್ಯಾಯಮೂರ್ತಿ ವಿ ಶ್ರೀಶಾನಂದ ತರಾಟೆ ತೆಗೆದುಕೊಂಡ ಪ್ರಸಂಗ ಮಂಗಳವಾರ ನಡೆದಿದೆ.

ತಮ್ಮ ಕಕ್ಷಿದಾರರೊಬ್ಬರಿಗೆ ನಿರೀಕ್ಷಣಾ ಜಾಮೀನು ಕೋರಿರುವ ಅರ್ಜಿಯನ್ನು ತುರ್ತಾಗಿ ವಿಚಾರಣೆ ನಡೆಸುವಂತೆ ನ್ಯಾ. ಶ್ರೀಶಾನಂದ ಅವರ ಪೀಠದ ಮುಂದೆ ಮೆಮೊ ಸಲ್ಲಿಸಲು ಕಿರಿಯ ವಕೀಲೆ ಮುಂದಾದರು.

ಈ ಹಂತದಲ್ಲಿ ಪೀಠವು ಗೌನ್ ಧರಿಸಿದಿರುವುದನ್ನು ಉಲ್ಲೇಖಿಸಿ ನಿಮ್ಮ ಗೌನ್ ಎಲ್ಲಿ, ಅದೇ ಇಲ್ಲ, ಗೌನ್ ಇಲ್ಲದೇ ನ್ಯಾಯಾಲಯದ



ಮುಂದೆ ಬರಲು ನಿಮಗೆ ಎಷ್ಟು ಧೈರ್ಯ ಎಂದು ಕಿಡಿಕಾರಿತು. ಮುಂದುವರಿದು ಪೀಠವು ನಿಮ್ಮ ಹಿರಿಯ ವಕೀಲರು ಯಾರು, (ಮೆಮೊ) ಈಸ್ಕೊಂಡು ರಿಜೆಕ್ಟ್ ಮಾಡಿ ಅದನ್ನು. ಏನು ನಿಮ್ಮ ಕತೆ, ಗೌನ್ ಇಲ್ಲದೇ ನ್ಯಾಯಾಲಯದ ಮುಂದೆ ಬರಲು ಎಷ್ಟು ಧೈರ್ಯ ನಿಮಗೆ, ಕೋರ್ಟ್ ಅಂದರೆ ತಮಾಷೆ ಎಂದು ಕೊಂಡಿದ್ದೀರಾ, ಏನು ಕ್ಷಮೆ, ನಿಮ್ಮ ಗೌನ್ ಎಲ್ಲಿ, ಆಫೀಸಿನಲ್ಲೇ ಬಿಟ್ಟು ಬಂದ್ರಾ ಎಂದು ಕಿಡಿಕಾರಿತು.

ಕೊನೆಗೆ ಯಾವಾಗ ನೋಂದಣಿ ಯಾಗಿದ್ದೀರಿ. ಮೂರು–ನಾಲ್ಕು ವರ್ಷವಾಗಿದೆ. ಆದರೂ ಇದೇ ಚೇಷ್ಟೆ ಅವರ ಹೆಸರು ತೆಗೆದುಕೊಂಡು, ಅವರ ನೋಂದಣಿ ರದ್ದು ಮಾಡಲು ವಕೀಲರ ಪರಿಷತ್‌ಗೆ ಹೇಳಿ ಎಂದು ಕೋರ್ಟ್ ಅಧಿಕಾರಿಯನ್ನು ಕುರಿತು ಹೇಳಿತು. ಕೊನೆಗೆ ವಕೀಲೆಯು ಬೇಷರತ್ ಕ್ಷಮೆ ಕೋರಿದ್ದನ್ನು ಪರಿಗಣಿಸಿ ಪೀಠವು ಅವರ ತುರ್ತು ವಿಚಾರಣೆಗೆ ಕೋರಿದ್ದ ಮೆಮೊವನ್ನು ಆಧರಿಸಿ ಅರ್ಜಿಯ ವಿಚಾರಣೆಯನ್ನು ಮೇ 7ಕ್ಕೆ ನಿಗದಿಪಡಿಸಲು ನಿರ್ದೇಶಿಸಿತು.

## ಮೂವರು ಐಪಿಎಸ್ ಅಧಿಕಾರಿಗಳ ವರ್ಗಾವಣೆ

**ಬೆಂಗಳೂರು, ಮೇ 6:** ರಾಜ್ಯ ಸರ್ಕಾರವು ಪೊಲೀಸ್ ಇಲಾಖೆಯಲ್ಲಿ ಪ್ರಮುಖ ವರ್ಗಾವಣೆ ಪ್ರಕ್ರಿಯೆ ನಡೆಸಿದ್ದು, ಮೂವರು ಹಿರಿಯ ಐಪಿಎಸ್ ಅಧಿಕಾರಿಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ನೂತನ ಹುದ್ದೆಗಳಿಗೆ ನೇಮಿಸಿ ಆದೇಶ ಹೊರಡಿಸಿದೆ.

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಆಕಂಖ) ಈ ಕುರಿತು ಅಧಿಸೂಚನೆ ಹೊರಡಿಸಿದ್ದು, ವರ್ಗಾವಣೆಗೊಂಡ ಅಧಿಕಾರಿಗಳ ವಿವರ ಹೀಗಿದೆ: ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ವಿಭಾಗದ ಐಜಿಪಿ ಸಂದೀಪ್ ಪಾಟೀಲ್ ಅವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಉತ್ತರ ವಲಯದ (ಬೆಳಗಾವಿ) ಐಜಿಪಿ ಆಗಿ ವರ್ಗಾವಣೆ ಮಾಡಲಾಗಿದೆ. ಡಾ. ಚೇತನ್ ಸಿಂಗ್ ರಾಥೋರ್ ಅವರ ವರ್ಗಾವಣೆಯಿಂದ ತೆರವಾಗಿದ್ದ ಸ್ಥಾನಕ್ಕೆ ಇವರನ್ನು ನೇಮಿಸಲಾಗಿದೆ.

ಬೆಳಗಾವಿ ಉತ್ತರ ವಲಯದ ಐಜಿಪಿ ಆಗಿದ್ದ ಡಾ. ಚೇತನ್ ಸಿಂಗ್ ರಾಥೋರ್ ಅವರನ್ನು ಸಿಐಡಿ ವಿಭಾಗದ ಆರ್ಥಿಕ ಅಪರಾಧಗಳ ವಿಭಾಗದ ಐಜಿಪಿ ನೇಮಕ ಮಾಡಲಾಗಿದೆ. ಸ್ಥಳ ನಿರೀಕ್ಷೆಯಲ್ಲಿದ್ದ ಅನುಪಮ್ ಅಗರ್‌ವಾಲ್ ಅವರನ್ನು ಕರ್ನಾಟಕ ರಾಜ್ಯ ಮೀಸಲು ಪೊಲೀಸ್ ವಿಭಾಗದ ಐಜಿಪಿ ಆಗಿ ನೇಮಕ ಮಾಡಲಾಗಿದೆ. ಸರ್ಕಾರವು ಈ ವರ್ಗಾವಣೆಗಳ ಜೊತೆಗೆ 'ಐಜಿಪಿ ಕೆಎಸ್‌ಆರ್‌ಪಿ' ಹುದ್ದೆಯನ್ನು 'ಐಜಿಪಿ ಪೊಲೀಸ್ ಕಂಪ್ಯೂಟರ್ ವಿಂಗ್' ಹುದ್ದೆಗೆ ಸಮಾನವಾದ ಅಂತಸ್ತು ಮತ್ತು ಜವಾಬ್ದಾರಿಯ ಹುದ್ದೆ ಎಂದು ಘೋಷಿಸಿದೆ. ರಾಜ್ಯಪಾಲರ ಆದೇಶದ ಮೇರೆಗೆ ಸರ್ಕಾರದ ಅಧೀನ ಕಾರ್ಯದರ್ಶಿ ಸಂಜಯ್ ಬಿ.ಎಸ್. ಈ ಆದೇಶ ಹೊರಡಿಸಿದ್ದಾರೆ.

## ಏಪ್ರಿಲ್‌ನಲ್ಲಿ 11,428.98 ಕೋಟಿ ರೂ. ವಾಣಿಜ್ಯ ತೆರಿಗೆ ಸಂಗ್ರಹ

**ಬೆಂಗಳೂರು, ಮೇ 6:** ಪ್ರಸಕ್ತ ಆರ್ಥಿಕ ಸಾಲಿನ ಮೊದಲ ತಿಂಗಳಲ್ಲಿ ದಾಖಲೆ ಪ್ರಮಾಣದ ವಾಣಿಜ್ಯ ತೆರಿಗೆಗಳ ಸಂಗ್ರಹವಾಗಿದೆ. ಕಳೆದ ಏಪ್ರಿಲ್ ತಿಂಗಳಲ್ಲಿ 11,428.98 ಕೋಟಿ ರೂ. ಸಂಗ್ರಹವಾಗಿದೆ. ವಾಣಿಜ್ಯ ತೆರಿಗೆಗಳ ಇಲಾಖೆ ಮಾಹಿತಿ ಪ್ರಕಾರ ಏಪ್ರಿಲ್‌ನಲ್ಲಿ 8,947.72 ಕೋಟಿ ರೂ. ಸರಕು ಸೇವಾ ತೆರಿಗೆ, 2,262.72 ಕೋಟಿ ರೂ. ಕರ್ನಾಟಕ ಮಾರಾಟ ತೆರಿಗೆ ಹಾಗೂ 218.54 ಕೋಟಿ ರೂ. ವೃತ್ತಿ ತೆರಿಗೆ ಸೇರಿದಂತೆ ಒಟ್ಟು 11,428.98 ಕೋಟಿ ರೂ. ಸಂಗ್ರಹಿಸಲಾಗಿದೆ. 2025ರ ಏಪ್ರಿಲ್‌ನಲ್ಲಿ ಈ ಮೂರು ತೆರಿಗೆಗಳು ಸೇರಿ 8552.38 ಕೋಟಿ ರೂ. ಮಾತ್ರ ಸಂಗ್ರಹಿಸಲಾಗಿತ್ತು. ಅಂದರೆ ಕಳೆದ ವರ್ಷಕ್ಕಿಂತ ಈ ವರ್ಷ ಒಂದೇ ತಿಂಗಳಲ್ಲಿ 2,876.594 ಕೋಟಿ ರೂ. ಹೆಚ್ಚಿಗೆ ಸಂಗ್ರಹ ಮಾಡಲಾಗಿದೆ.

ಕಳೆದ ಆರ್ಥಿಕ ಸಾಲಿನ ಯಾವ ತಿಂಗಳಲ್ಲೂ ಈ ಪ್ರಮಾಣ ತೆರಿಗೆಯ ಸಂಗ್ರಹವಾಗಿರಲಿಲ್ಲ. ಕಳೆದ ಫೆಬ್ರವರಿಯಲ್ಲಿ 10,261.32 ಕೋಟಿ ರೂ. ಮತ್ತು ಮಾರ್ಚ್‌ನಲ್ಲಿ 10,322.40 ಕೋಟಿ ರೂ. ಸಂಗ್ರಹವಾಗಿತ್ತು. ಏಪ್ರಿಲ್‌ನಲ್ಲಿ ಅದಕ್ಕಿಂತಲೂ ಹೆಚ್ಚು ಸಂಗ್ರಹವಾಗಿದೆ. ಬಹುಶಃ ಇದು ಇದುವರೆಗಿನ ದಾಖಲೆ ಪ್ರಮಾಣದ ತೆರಿಗೆಯ ಸಂಗ್ರಹವಾದಂತಾಗಿದೆ.

2025–26 ಸಾಲಿನಲ್ಲಿ ಒಟ್ಟಾರೆ 1,10,813.30 ಕೋಟಿ ರೂ. ವಾಣಿಜ್ಯ ತೆರಿಗೆಗಳ ಸಂಗ್ರಹವಾಗಿತ್ತು. 2026–207ನೇ ಆರ್ಥಿಕ ಸಾಲಿನ ಮೊದಲ ತಿಂಗಳಲ್ಲಿ ದಾಖಲಾರ್ಹ ಪ್ರಮಾಣದಲ್ಲಿ ತೆರಿಗೆಗಳ ಸಂಗ್ರಹವಾಗಿದ್ದು, ಇದೇ ರೀತಿ ಮುಂದುವರೆದರೆ, ಆರ್ಥಿಕ ವರ್ಷಾಂತ್ಯಕ್ಕೆ ಕಳೆದ ಸಾಲಿಗಿಂತಲೂ ಅಧಿಕ ಪ್ರಮಾಣದಲ್ಲಿ ತೆರಿಗೆಗಳ ಸಂಗ್ರಹವಾಗಲಿದೆ.

## ಮೇ 9ರವರೆಗೆ ಗುಡುಗುಸಹಿತ ಭಾರಿ ಮಳೆ: ಹವಾಮಾನ ಇಲಾಖೆ ಮುನ್ಸೂಚನೆ

**ಬೆಂಗಳೂರು, ಮೇ 6:** ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮೇ 9ರವರೆಗೆ ಗುಡುಗು ಸಹಿತ ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ವಿಶೇಷವಾಗಿ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಗಾಳಿಯ ವೇಗ ಹೆಚ್ಚಿರಲಿದ್ದು, ಹೈ ಅಲರ್ಟ್ ಘೋಷಿಸಲಾಗಿದೆ.

ದಕ್ಷಿಣ ಬಂಗಾಳಕೊಲ್ಲಿ ಮತ್ತು ಹಿಂದೂ ಮಹಾಸಾಗರದಲ್ಲಿ ವಾಯುಭಾರ ಕುಸಿತದ ಲಕ್ಷಣಗಳು ಕಂಡುಬಂದಿವೆ. ಇದು ಮುಂಗಾರು ಮಳೆಯ ವೇಳಾಪಟ್ಟಿಯ ಮೇಲೆ ಪರಿಣಾಮ ಬೀರಬಹುದು.

ಚಾಮರಾಜನಗರ, ಮೈಸೂರು ಮತ್ತು ಕೊಡಗು ಜಿಲ್ಲೆಗಳ ಒಂದೆರಡು ಕಡೆಗಳಲ್ಲಿ ಗುಡುಗು ಸಹಿತ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಈ ವೇಳೆ ಗಂಟೆಗೆ 40–50 ಕಿ.ಮೀ. ವೇಗದಲ್ಲಿ ಬಲವಾದ ಗಾಳಿ ಬೀಸಲಿದೆ. ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಹಾಸನ, ಚಿಕ್ಕಮಗಳೂರು, ಕೋಲಾರ ಮತ್ತು ತುಮಕೂರು ಜಿಲ್ಲೆಗಳ ಕೆಲವು ಸ್ಥಳಗಳಲ್ಲಿ ಗುಡುಗು ಸಹಿತ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ. ಇಲ್ಲಿಯೂ ಸಹ 40–50 ಕಿ.ಮೀ ವೇಗದ ಗಾಳಿ ಬೀಸುವ ಸಾಧ್ಯತೆಯಿದೆ ಎಂದು ಹವಾಮಾನ ತಜ್ಞರು ಹೇಳಿದ್ದಾರೆ.



ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ ಮತ್ತು ಕಾಸರಗೋಡು ಪ್ರದೇಶಗಳಲ್ಲಿ ಸಣ್ಣ ವ್ಯಾಪ್ತಿಯ ತುಂತುರು ಮಳೆಯ ಸಾಧ್ಯತೆ ಇದೆ. ಉತ್ತರ ಕನ್ನಡ ಮತ್ತು ಉತ್ತರ ಒಳನಾಡು ಜಿಲ್ಲೆಗಳಲ್ಲಿ ಬಿಸಿಲು ಮತ್ತು ಮೋಡ ಮಿಶ್ರಿತ ವಾತಾವರಣವಿರುತ್ತದೆ. ದಕ್ಷಿಣ ಕನ್ನಡ ಮತ್ತು ಉಡುಪಿಯ ಒಂದೆರಡು ಕಡೆಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದ್ದರೆ, ಉತ್ತರ ಕನ್ನಡ ಜಿಲ್ಲೆಯಲ್ಲಿ ಹಗುರ ಮಳೆಯಾಗುವ ಮುನ್ಸೂಚನೆಯಿದೆ. ಬೀದರ್, ಕಲಬುರಗಿ, ಯಾದಗಿರಿ, ಕೊಪ್ಪಳ, ಬೆಳಗಾವಿ, ಧಾರವಾಡ, ಗದಗ, ಹಾವೇರಿ ಮತ್ತು ರಾಯಚೂರು ಜಿಲ್ಲೆಗಳಲ್ಲಿ ಗಂಟೆಗೆ 30–40 ಕಿ.ಮೀ. ವೇಗದ ಗಾಳಿಯೊಂದಿಗೆ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ.

ಸದ್ಯ ಮಧ್ಯಪ್ರದೇಶದಿಂದ ಮನ್ನಾರ್ ಕೊಲ್ಲಿಯವರೆಗೆ ಒಂದು ಟ್ರಫ್ (ತೇವಾಂಶ ಭರಿತ ಸುಳಿ) ನಿರ್ಮಾಣವಾಗಿದೆ. ಇದು ವಿದರ್ಭ, ಮರಾಠವಾಡ, ಕರ್ನಾಟಕದ ಒಳನಾಡು ಮತ್ತು ತಮಿಳುನಾಡು ಮೂಲಕ ಹಾದುಹೋಗುತ್ತಿದ್ದು, ಸಮುದ್ರ ಮಟ್ಟದಿಂದ 1.5 ಕಿ.ಮೀ. ಎತ್ತರದಲ್ಲಿ ಸಕ್ರಿಯವಾಗಿದೆ.ಈ ಹವಾಮಾನ ವೈಪರೀತ್ಯಗಳೇ ರಾಜ್ಯದ ಕೆಲವು ಭಾಗಗಳಲ್ಲಿ ಮಳೆ ಹಾಗೂ ಇನ್ನು ಕೆಲವು ಭಾಗಗಳಲ್ಲಿ ತೀವ್ರ ಶಾಖದ ಅಲೆಗೆ ಕಾರಣವಾಗಿವೆ. ಮುಂದಿನ ಐದು ದಿನಗಳ ಕಾಲ ರಾಜ್ಯದಾದ್ಯಂತ ಗರಿಷ್ಠ ತಾಪಮಾನದಲ್ಲಿ ಯಾವುದೇ ಬದಲಾವಣೆಗಳು ಕಂಡುಬರುವುದಿಲ್ಲ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಸದ್ಯಕ್ಕೆ ಸಮುದ್ರದಲ್ಲಿ ಯಾವುದೇ ಅಪಾಯದ ಮುನ್ಸೂಚನೆ ಇಲ್ಲದ ಕಾರಣ ಮೀನುಗಾರರಿಗೆ ಯಾವುದೇ ಎಚ್ಚರಿಕೆಯನ್ನು ನೀಡಲಾಗಿಲ್ಲ. ಇನ್ನು ಬೆಂಗಳೂರು ಮತ್ತು ಅದರ ಸುತ್ತಮುತ್ತಲಿನ ಹವಾಮಾನವು ಮೇ 7ರ ಬೆಳಿಗ್ಗೆಯವರೆಗೆ ಭಾಗಶಃ ಮೋಡ ಕವಿದ ವಾತಾವರಣದಿಂದ ಕೂಡಿರಲಿದೆ.

ಸಂಜೆ ಅಥವಾ ರಾತ್ರಿಯ ವೇಳೆಗೆ ಮೋಡಗಳು ದಟ್ಟವಾಗುವ ಸಾಧ್ಯತೆಯಿದ್ದು, ನಗರದ ಕೆಲವು ಕಡೆಗಳಲ್ಲಿ ಗುಡುಗು ಸಹಿತ ಹಗುರ ಮಳೆಯಾಗುವ ನಿರೀಕ್ಷೆಯಿದೆ. ಈ ಮಳೆಯ ಸಮಯದಲ್ಲಿ ಗಂಟೆಗೆ ಸುಮಾರು 30 ರಿಂದ 40 ಕಿ.ಮೀ. ವೇಗದಲ್ಲಿ ಬಲವಾದ ಗಾಳಿ ಬೀಸುವ ಸಾಧ್ಯತೆಯಿದೆ ಎಂದು ತಿಳಿಸಿದೆ.

### ಜಿಬಿಎ ಚುನಾವಣೆಯಲ್ಲಿ ಟಿವಿಕೆ ಸ್ಪರ್ಧೆ ಸಾಧ್ಯತೆ?

## ಕರ್ನಾಟಕದಲ್ಲೂ ಟಿವಿಕೆ ಅಸ್ತಿತ್ವಕ್ಕೆ ತರಲು ವಿಜಯ್ ಅಭಿಮಾನಿಗಳೂ, ಕೆಲ ತಮಿಳುಭಾಷಿಕ ನಾಯಕರ ಚರ್ಚೆ

**ಬೆಂಗಳೂರು, ಮೇ 6:** ತಮಿಳುನಾಡಿನಲ್ಲಿ ನಟ ವಿಜಯ್ ನೇತೃತ್ವದ ಟಿವಿಕೆ ಪಕ್ಷ ಹೊಸ ರಾಜಕೀಯ ಶಕ್ತಿಯಾಗಿ ಹೊರಹೊಮ್ಮಿದ ಬೆನ್ನಲ್ಲೇ ಟಿವಿಕೆ ಪಕ್ಷವನ್ನು ಮತ್ತಷ್ಟು ಬಲಪಡಿಸಿ ಕರ್ನಾಟಕ ಸೇರಿದಂತೆ ನೆರೆ ರಾಜ್ಯದಲ್ಲೂ ಪಕ್ಷವನ್ನು ಅಸ್ತಿತ್ವಕ್ಕೆ ತರುವ ಬಗ್ಗೆ ಚರ್ಚೆಗಳು ನಡೆದಿವೆ.

ತಮಿಳುನಾಡು ವಿಧಾನಸಭಾ ಚುನಾವಣೆಯಲ್ಲಿ ಟಿವಿಕೆ ಅಲೆ ಬೀಸಿ ಸರ್ಕಾರ ರಚನೆಗೆ ಮುಂದಾಗಿರುವಾಗಲೇ ಬೆಂಗಳೂರಿನ ಜಿಬಿಎ ಚುನಾವಣೆಯಲ್ಲೂ ಟಿವಿಕೆ ಪಕ್ಷದಿಂದ ಕಣಕ್ಕಿಳಿಯಲು ಕೆಲವರು ಮುಂದಾಗಿದ್ದು, ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಟಿವಿಕೆ ಪಕ್ಷ ತಲೆಎತ್ತುವ ಸಾಧ್ಯತೆಗಳು ಹೆಚ್ಚಿವೆ.

ತಮಿಳುನಾಡಿನ ವಿಧಾನಸಭಾ




ಚುನಾವಣೆಯಲ್ಲಿ ಟಿವಿಕೆ ಪಕ್ಷದ ಗೆಲುವಿನ ಹಿಂದೆ ಬೆಂಗಳೂರು ನಗರದಲ್ಲಿರುವ ತಮಿಳು ಭಾಷಿಕರು ಹಾಗೂ ವಿಜಯ್ ಅಭಿಮಾನಿಗಳ ಪಾತ್ರವು ಮಹತ್ವದ್ದಾಗಿದ್ದು, ತಮಿಳು ಭಾಷಿಕರು ಹೆಚ್ಚಿರುವ ಗಾಂಧಿನಗರ,

ಶಿವಾಜಿನಗರ, ಹಲಸೂರು, ಚಾಮರಾಜಪೇಟೆ, ಬಿಟಿಎಂ ಲೇಔಟ್, ಸಿ.ವಿ. ರಾಮನ್ ನಗರ, ಪುಲಿಕೇಶಿ ನಗರ, ಸೇರಿದಂತೆ ಹಲವೆಡೆ ಮುಂದಿನ ಜಿಬಿಎ ಚುನಾವಣೆಯಲ್ಲಿ ಟವಿಕೆ ಯಿಂದ ಅಭ್ಯರ್ಥಿಗಳನ್ನು ಕಣಕ್ಕಿಳಿಸಲು ಬೆಂಗಳೂರಿನಲ್ಲಿರುವ ವಿಜಯ್ ಅಭಿಮಾನಿಗಳು ಹಾಗೂ ಕೆಲ ತಮಿಳು ಭಾಷಿಕ ನಾಯಕರು ಚರ್ಚೆ ನಡೆಸಿದ್ದಾರೆ.

ಬೆಂಗಳೂರು ನಗರದಲ್ಲಿ ನಟ ವಿಜಯ್ ಅವರಿಗೆ ದೊಡ್ಡ ಬಳಗ ಅಭಿಮಾನಿ ಬಳಗವಿದ್ದು ಇದರ ಲಾಭ ಪಡೆದು ಜಿಬಿಎ ಚುನಾವಣೆಯಲ್ಲಿ ಸ್ಪರ್ಧಿಸಿ ಗೆಲ್ಲುವ ಲೆಕ್ಕಾಚಾರವನ್ನು ಕೆಲ ನಾಯಕರು ಹೊಂದಿದ್ದು ತಮಿಳುಭಾಷಿಕರು ಹೆಚ್ಚಿರುವ ಕಡೆ ಟಿವಿಕೆ ಪಕ್ಷದಿಂದ ಸ್ಪರ್ಧಿಸಿದರೆ ಜಿಬಿಎ ಚುನಾವಣೆಯಲ್ಲಿ ಗೆಲುವು ಸುಲಭವಾಗುತ್ತದೆ ಎಂದು ಅರಿತಿರುವ ಕೆಲ ಸ್ಥಳೀಯ ನಾಯಕರು ಟಿವಿಕೆ ಪಕ್ಷವನ್ನು ರಾಜ್ಯದಲ್ಲಿ ಹುಟ್ಟುಹಾಕಲು ಉತ್ಸುಕತೆ ತೋರಿದ್ದಾರೆ. ಸ್ಥಳೀಯ ತಮಿಳುನಾಯಕರ ಈ ಉತ್ಸಾಹಕ್ಕೆ ನಟ ವಿಜಯ್ ಯಾವ ರೀತಿ ಸ್ಪಂದಿಸುತ್ತಾರೆ. ರಾಜ್ಯದಲ್ಲಿ ಟಿವಿಕೆ ಸ್ಥಾಪನೆಗೆ ಅವರು ಅಸ್ತು ಎನ್ನುತಾರೆಯೇ ಎಂಬುದು ಕುತೂಹಲ ಮೂಡಿಸಿದೆ.

ರಾಜ್ಯದಲ್ಲೂ ಟಿವಿಕೆ ಪಕ್ಷ ಸ್ಥಾಪನೆಯಾದರೆ ಜಿಬಿಎ ಚುನಾವಣೆಯಲ್ಲಿ ಕೆಲ ಕ್ಷೇತ್ರಗಳಲ್ಲಿ ಕಾಂಗ್ರೆಸ್, ಹಾಗೂ ಬಿಜೆಪಿ ಹೊಡೆತ ಬೀಳುವ ಸಾಧ್ಯತೆಯೂ ಇದೆ.

## ಮೊದಲ ಬಾರಿಗೆ ಪ್ರತ್ಯೇಕವಾಗಿ ಮಾವು, ಹಲಸಿನ ಮೇಳ ಆಯೋಜಿಸಲು ನಿರ್ಧಾರ

**ಬೆಂಗಳೂರು, ಮೇ.6:** ಬೆಂಗಳೂರಿನ ಮಾವು ಮತ್ತು ಹಲಸಿನ ಹಣ್ಣಿನ ಪ್ರಿಯರಿಗೆ ಈ ಬಾರಿ ಡಬಲ್ ಧಮಾಕಾ ಕಾಯುತ್ತಿದೆ. ನಗರದ ಕಬ್ಬನ್ ಪಾರ್ಕ್ ಮತ್ತು ಲಾಲ್‌ಬಾಗ್‌ನಲ್ಲಿ ಈ ವರ್ಷ ಮೊದಲ ಬಾರಿಗೆ ಎರಡು ಪ್ರತ್ಯೇಕ ಮಾವು ಮತ್ತು ಹಲಸಿನ ಮೇಳಗಳನ್ನು ಆಯೋಜಿಸಲು ನಿರ್ಧರಿಸಲಾಗಿದೆ.

ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮದ ವತಿಯಿಂದ ಕಬ್ಬನ್ ಪಾರ್ಕ್‌ನಲ್ಲಿ ಇದೇ ಮೇ 8ರಿಂದ ಮೇ 17ರವರೆಗೆ ಮೊದಲ ಹಂತದಲ್ಲಿ ಮಾವು–ಹಲಸು ಮೇಳ ನಡೆಯಲಿದೆ. ಈ ಬಗ್ಗೆ ಕರ್ನಾಟಕ ರಾಜ್ಯ ಮಾವು ಅಭಿವೃದ್ಧಿ ಮತ್ತು ಮಾರುಕಟ್ಟೆ ನಿಗಮದ ವ್ಯವಸ್ಥಾಪಕ ನಿರ್ದೇಶಕ ಟಿ.ಆರ್.ವೇದಮೂರ್ತಿ ಅವರು ಮಾಹಿತಿ ನೀಡಿ, ಮೇ 8ರಿಂದ 18ರವರೆಗೆ ಕಬ್ಬನ್ ಪಾರ್ಕ್‌ನಲ್ಲಿ ಮೇಳ ನಡೆಯಲಿದ್ದು, ಧಾರವಾಡ, ಮಂಡ್ಯ, ಮೈಸೂರು ಹಾಗೂ ದಕ್ಷಿಣ ಕರ್ನಾಟಕದ ರೈತರಿಗೆ ಇದು ಅನುಕೂಲವಾಗಲಿದೆ ಎಂದು ಹೇಳಿದ್ದಾರೆ.

ಈ ಮೇಳದಲ್ಲಿ ಸುಮಾರು 70ಕ್ಕೂ ಹೆಚ್ಚು ಸ್ಟಾಲ್‌ಗಳನ್ನು ಸ್ಥಾಪಿಸಲಾಗಿದ್ದು, ಕಾರ್ಬೈಡ್ ರಹಿತ ಮತ್ತು ಸಾವಯವ ಮಾವು–ಹಲಸುಗಳನ್ನು ರೈತರು ನೇರವಾಗಿ ಮಾರಾಟ ಮಾಡಲಿದ್ದಾರೆ. ರೈತರಿಗೆ ಉತ್ತಮ ಬೆಲೆ ಸಿಗದಿರುವ ಬಗ್ಗೆ ಆತಂಕ ವ್ಯಕ್ತವಾದ ಹಿನ್ನೆಲೆಯಲ್ಲಿ ಈ ಮೇಳವನ್ನು



ಆಯೋಜಿಸಲಾಗಿದೆ. ಇನ್ನೊಂದು ಮೇಳವನ್ನು ಲಾಲ್‌ಬಾಗ್‌ನಲ್ಲಿ ಇದೇ ತಿಂಗಳಲ್ಲಿ ನಡೆಸುವ ಯೋಜನೆಯಿದ್ದು, 100ಕ್ಕೂ ಹೆಚ್ಚು ಮಳಿಗೆಗಳನ್ನು ಹಾಕಲು ಸಿದ್ಧತೆ ನಡೆಯುತ್ತಿದೆ. ದಿನಾಂಕವನ್ನು ಶೀಘ್ರದಲ್ಲೇ ಅಂತಿಮಗೊಳಿಸಲಾಗುವುದು ಎಂದು ಹೇಳಿದ್ದಾರೆ. ಈ ಬಾರಿ ತೀವ್ರ ಬಿಸಿಲು ಮತ್ತು ವಾತಾವರಣದ ತೇವಾಂಶ ಕೊರತೆಯಿಂದಾಗಿ ಹಣ್ಣುಗಳು ಹೆಚ್ಚಾಗಿ ಬೀಳುವ ಸಮಸ್ಯೆ ಎದುರಾಗಿದೆ. ಇದರಿಂದ ಉತ್ಪಾದನೆ ಮತ್ತು ಗುಣಮಟ್ಟದ ಮೇಲೆ ಪರಿಣಾಮ ಬಿದ್ದಿದೆ. ಕಳೆದ ವರ್ಷ ಸುಮಾರು 15 ಲಕ್ಷ ಟನ್ ಉತ್ಪಾದನೆ ಇದ್ದರೆ, ಈ ಬಾರಿ 10 ಲಕ್ಷ ಟನ್ ಮಾತ್ರ ನಿರೀಕ್ಷಿಸಲಾಗಿದೆ. ಹಿಂದಿನ ವರ್ಷ ಸುಮಾರು 1,000 ಟನ್ ಹಣ್ಣುಗಳನ್ನು ರಫ್ತು ಮಾಡಲಾಗಿದ್ದರೆ, ಈ ಬಾರಿ ಇದುವರೆಗೆ 50ರಿಂದ 100 ಟನ್ ಮಾತ್ರ ರಫ್ತು ಸಾಧ್ಯವಾಗಿದೆ ಎಂದು ಮಾಹಿತಿ ನೀಡಿದ್ದಾರೆ.



ಇತ್ತೀಚೆಗೆ ಮಳೆ ಮತ್ತು ಗಾಳಿಯಿಂದ ವಿದ್ಯುತ್ ತಂತಿಗಳು ಹಾನಿಗೊಳಗಾಗಿದ್ದು, ಬುಧವಾರ ಬೆಂಗಳೂರಿನ ಮತ್ತಿಕೆರೆಯಲ್ಲಿ ಬೆಸ್ಕಾಂ ಸಿಬ್ಬಂದಿ ದುರಸ್ತಿ ಕಾರ್ಯಕ್ಕೆ ಹಾಜರಾದರು.

## ಮಾತೃಭಾಷೆ ಕಲಿಕೆಯಿಂದ ಮಾತ್ರ ಸಂಸ್ಕೃತಿ ಉಳಿವು: ದತ್ತಾತ್ರೇಯ ಪಾಟೀಲ್ ರೇವೂರ್

**ಕಲಬುರಗಿ, ಮೇ.6:** ಯಾವುದೇ ಭಾಷೆ, ಸಂಸ್ಕೃತಿ ಉಳಿಸಿ ಬೆಳೆಸಬೇಕಾದರೆ, ಮಾತೃಭಾಷಾ ಕಲಿಕೆಯಿಂದ ಮಾತ್ರ ಸಾಧ್ಯ. ಆದ್ದರಿಂದ ಬೇರೆ ಯವುದೇ ಭಾಷೆಗಳು ನಮ್ಮ ಕಲಿಕೆಗೆ ಮತ್ತು ಉದ್ಯೋಗಕ್ಕೆ ಮಾತ್ರ ಮೀಸಲಿಟ್ಟು, ಮಾತೃ ಭಾಷೆಯ ಕಲಿಕೆಯ ಮೂಲಕ ನಮ್ಮ ಸಂಸ್ಕೃತಿಯನ್ನು ಉಳಿಸಲು ಎಲ್ಲರೂ ಕೈಜೋಡಿಸಬೇಕು. ಕನ್ನಡ ಸಾಹಿತ್ಯ ಪರಿಷತ್ತಿನಂಥ ಸಂಸ್ಥೆ ಶತಮಾನಗಳ ಕಾಲ ಕನ್ನಡ ಸೇವೆ ಮಾಡುತ್ತ ಬಂದಿರುವುದರಿಂದಲೇ ನಾಡಿನಲ್ಲಿ ಇನ್ನೂ ಕನ್ನಡ ಭಾಷೆ ಮತ್ತು ಸಂಸ್ಕೃತಿ ಉಳಿಯಲು ಸಾಧ್ಯವಾಗಿದೆ ಎಂದು ಮಾಜಿ ಶಾಸಕ ದತ್ತಾತ್ರೇಯ ಪಾಟೀಲ ರೇವೂರ ಹೇಳಿದರು.




ನಗರದ ಕನ್ನಡ ಭವನದ ಸುವರ್ಣ ಸಭಾ ಭವನದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಏರ್ಪಡಿಸಿದ ಕನ್ನಡ ಸಾಹಿತ್ಯ ಪರಿಷತ್ತಿನ 112ನೇ ಸಂಸ್ಥಾಪನಾ ದಿನಾಚರಣೆ ಹಾಗೂ ಪುಸ್ತಕ ಪ್ರದರ್ಶನ ಹಾಗೂ ಸತ್ಕಾರ ಸಂಭ್ರಮಕ್ಕೆ ಚಾಲನೆ ನೀಡಿದ ಮಾತನಾಡಿದ ಅವರು, ಈ ಭಾಗದ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕು ಹಾಗೂ ಇಂದು ಭಾಷಾ ಕಲಿಕೆಯಿಂದ ಜ್ಞಾನ ಸಂಪತ್ತು ಹೆಚ್ಚಿಸಿಕೊಳ್ಳಬಹುದು ಮತ್ತು ನಮ್ಮ ಕಲ್ಯಾಣ ಕರ್ನಾಟಕ ಭಾಗದ ಸಮಸ್ಯೆಗಳಿಗೆ ರಾಜ್ಯ ಸರಕಾರ ಸ್ಪಂದಿಸಿ ಪರಿಹಾರಕ್ಕಾಗಿ ಒತ್ತು ನೀಡಬೇಕು ಎಂದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ ಮಾತನಾಡಿ, ಹೆತ್ತ ತಾಯಿಗೆ ಕೊಡುವ ಪ್ರೀತಿ ಗೌರವಗಳು ನಮ್ಮ ಕನ್ನಡ ಭಾಷೆಗೂ ಕೊಡಬೇಕು. ನಾವೆಲ್ಲ ಕನ್ನಡದ ಕಟ್ಟಾಭಿಮಾನಿಗಳಾಗಬೇಕು. ನಿರಂತರವಾಗಿ ಪತ್ರಿಕೆ ಓದುವ, ಬರೆಯುವ ಮೂಲಕ ಭಾಷೆ ಉಳಿಸಿ ಬೆಳೆಸಬೇಕಾಗಿದೆ. ಸ್ವಾತಂತ್ರ್ಯ ಪೂರ್ವದಿಂದಲೇ ನಾವು ನಾಡು-ನುಡಿ ಕಟ್ಟಲು ಪ್ರಾತಿನಿಧಿಕ ಸಂಸ್ಥೆಯೊಂದು ಅಂದಿನ ಹಿರಿಯರು ಸ್ಥಾಪನೆ ಮಾಡಿದರು. ಅದಕ್ಕಾಗಿ ನಾವೆಲ್ಲ ಸಾಂಸ್ಕೃತಿಕ ಶ್ರೀಮಂತಿಕೆ ಹೆಚ್ಚಿಸಿ ಕೊಳ್ಳಬೇಕಾಗಿದೆ. ರಾಜ್ಯ ಸರಕಾರ ತೊಗರಿ ನಾಡಿನತ್ತ ಗಮನ ಹರಿಸಬೇಕಾಗಿದೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಟಿ.ವಿಜಯಕುಮಾರ ಪಾಟೀಲ, 112ನೇ ವರ್ಷಗಳ ಇತಿಹಾಸದಲ್ಲಿ ಪರಿಷತ್ತಿನ ಕಾರ್ಯಗಳು ಈ ನಾಡಿನ ಅಸ್ಮಿತೆಯಂತೆ ಬೆಳಕು ಚೆಲ್ಲಿವೆ. ಕೇವಲ ಸಾಹಿತಿಗಳಿಗೆ ಸೀಮಿತಗೊಳಿಸದೇ ಜನ ಸಾಮಾನ್ಯರ ಪರಿಷತ್‌ನ್ನಾಗಿ ರೂಪಿಸಲಾಗಿದೆ. ಈ ನೆಲವನ್ನು ಪ್ರೀತಿಸಿ ಗೌರವಿಸಿದವರಿಗೆ ಪರಿಷತ್ತು ನಿರಂತರವಾಗಿ ವೇದಿಕೆ ಕಲ್ಪಿಸಿ ಕೊಡಲಾಗುತ್ತಿದೆ. ಯಾವುದೇ ರೀತಿಯಲ್ಲಿ ಕಸಾಪದ ಘನತೆಗೆ ಚ್ಯುತಿ ಬರದಂತೆ ಗೌರವ ಎತ್ತಿಹಿಡಿದಿದ್ದೇವೆ. ರಾಜ್ಯದಲ್ಲಿಯೇ ಮಾದರಿ ಪರಿಷತ್ ಆಗಿ ಕಟ್ಟಿ ಬೆಳೆಸಲಾಗುತ್ತಿದೆ. ಈ ನಮ್ಮ ಕಾರ್ಯಗಳೇ ಮುಂಬರುವ ದಿನಗಳಲ್ಲಿ ಶ್ರೀರಕ್ಷೆ ಆಗಲಿವೆ ಎಂದರು.

## ಕರ್ತವ್ಯದ ಕಾಲುದಾರಿ ಕೀರ್ತಿಯ ಹೆದ್ದಾರಿ: ಶ್ರೀ ರಂಭಾಪುರಿ ಜಗದ್ಗುರುಗಳು

**ಶಿವಮೊಗ್ಗ ಮೇ-6:** ಮನುಷ್ಯನ ಜೀವನ ಪುಸ್ತಕದಲ್ಲಿ ಮೊದಲ ಪುಟ ಜನನವಾದರೆ ಕೊನೆಯ ಪುಟ ಮರಣವಾಗಿರುತ್ತದೆ. ಈ ಮಧ್ಯದ ಪುಟಗಳನ್ನು ಸಾರ್ಥಕ ಜೀವನದಿಂದ ಪೂರ್ಣಗೊಳಿಸಿದಾಗ ಆದರ್ಶದ ಬದುಕು ನಡೆಸಲು ಸಾಧ್ಯವಾಗುತ್ತದೆ. ಕರ್ತವ್ಯದ ಕಾಲು ದಾರಿ ಕೀರ್ತಿಯ ಹೆದ್ದಾರಿಯಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.



ಅವರು ಬುಧವಾರ ವೀರಶೈವ ಕಲ್ಯಾಣ ಮಂಟಪದಲ್ಲಿ ಜರುಗಿದ ಲಿಂ.ವೇ. ಟಿ.ವಿ.ಈಶ್ವರಯ್ಯನವರ ಗುರುಲಿಂಗ ಜಂಗಮಾರಾಧನೆ ಹಾಗೂ ಶ್ರದ್ಧಾಂಜಲಿ ಸಭೆಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಟಿ.ವಿ.ಈಶ್ವರಯ್ಯನವರು ತಮ್ಮ ಜೀವಿತಾವಧಿಯಲ್ಲಿ ಹಲವಾರು ಸಂಘ ಸಂಸ್ಥೆಗಳನ್ನು ಹುಟ್ಟು ಹಾಕಿ ಸಕ್ರಿಯವಾಗಿ ಸಮಾಜ ಮುಖಿಯಾಗಿ ಧರ್ಮ ಮುಖಿಯಾಗಿ ಕಾರ್ಯ ನಿರ್ವಹಿಸಿದರು. ಪಂಚ ಪೀಠಗಳ ಅಭಿಮಾನಿಯಾಗಿ, ಸಮಾಜದಲ್ಲಿ ಹಲವಾರು ರಚನಾತ್ಮಕ ಸಾಮಾಜಿಕ ಧಾರ್ಮಿಕ ಕಾರ್ಯಗಳ ರೂವಾರಿ ಯಾಗಿದ್ದರು. ಶ್ರೀ ಜಗದ್ಗುರು ರಂಭಾಪುರಿ ಪೀಠದೊಡನೆ ಅವಿನಾ ಭಾವ ಸಂಬಂಧ ಹೊಂದಿದವರಾ ಗಿದ್ದರು. ಈಶ್ವರಯ್ಯ ಸಹೋದರರು ಶಿವಮೊಗ್ಗೆಯ ಅತ್ಯಮೂಲ್ಯ ನಿವೇಶನವನ್ನು ಶ್ರೀ ರಂಭಾಪುರಿ ಪೀಠಕ್ಕೆ ನೀಡಿದ್ದುದನ್ನು ಮರೆಯು ವಂತಿಲ್ಲ. ಈ ನಿವೇಶನದಲ್ಲಿ ಈಗಾಗಲೇ ಶ್ರೀ ರಂಭಾಪುರೀಶ ನಿವಾಸ ನಿರ್ಮಾಣಗೊಂಡಿದ್ದು ಈಶ್ವರಯ್ಯನವರ ಆಶಯದಂತೆ ಶೈಕ್ಷಣಿಕ ಸಂಸ್ಥೆ ಯೊಂದನ್ನು ಹುಟ್ಟು ಹಾಕುವ ನಿಟ್ಟಿನಲ್ಲಿ ಈಗಾಗಲೇ ಕೆಲಸ ನಡೆದಿದೆ. ಅವರ ಆದರ್ಶದ ದಾರಿ ಇಂದಿನ ಪೀಳಿಗೆಗೆ ಮಾರ್ಗದರ್ಶಿಯಾಗಿದೆ. ಅವರ ಮಾಡಿದ ಸತ್ಕಾರ್ಯಗಳು ಸಮಾಜಕ್ಕೆ ದಿಕ್ಸೂಚಿಯಾಗಿವೆ. ಶಿವಮೊಗ್ಗ ನಗರಕ್ಕೆ ಅವರ ಸೇವೆಯನ್ನು ಪರಿಗಣಿಸಿ ನಗರಸಭೆಯವರು ಒಂದು ಬಡಾವಣೆ ಅಥವಾ ರಸ್ತೆಗೆ ಟಿ.ವಿ.ಈಶ್ವರಯ್ಯನವರ ಹೆಸರನ್ನು ನಾಮಕರಣ ಮಾಡಬೇಕು ಎಂದರು. ಇದೇ ಸಂದರ್ಭದಲ್ಲಿ ಎನ್.ಜೆ.ವೀರಣ್ಣ ಇವರ ಅಗಲಿಕೆಗೆ ಸಂತಾಪ ವ್ಯಕ್ತಪಡಿಸಿದರು.

ನೇತೃತ್ವ ವಹಿಸಿದ ಬಿಳಕಿ ಹಿರೇಮಠದ ರಾಚೋಟೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಟಿ.ವಿ. ಈಶ್ವರಯ್ಯನವರಲ್ಲಿದ್ದ ಜೀವನದ ಉತ್ಸಾಹ ಮಾದರಿಯಾಗಿತ್ತು. ಶಿಸ್ತಿನ ಸಿಪಾಯಿಯಾಗಿ ಪೂಜಾ ನಿಷ್ಠರಾಗಿದ್ದ ಅವರು ಕೊಡುಗೈ ದಾನಗಳೆಂದು ಕರೆಸಿಕೊಂಡಿದ್ದರು. ಅವರ ಶಿಸ್ತಿನ ಜೀವನಕ್ಕೆ ಅವರ ಧರ್ಮಪತ್ನಿ ಲಿಂ.ಜಯಮ್ಮನವರ ಕೊಡುಗೆ ಮಹತ್ವವಾದದ್ದು. ಶ್ರೀ ರಂಭಾಪುರಿ ಪೀಠಕ್ಕೆ ಸಿರಿಗೆರೆ ಮಠಕ್ಕೆ ಅವರು ನೀಡಿದ ಭೂದಾನ ಮರೆಯುವಂತಿಲ್ಲ ಎಂದರು.

ಎಡೆಯೂರು ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಟಿ.ವಿ.ಈಶ್ವರಯ್ಯನವರ ಕೆಲಸ ಕಾರ್ಯಗಳನ್ನು ದಾಖಲಿಸುವಂತೆ ಕೃತಿಯೊಂದು ಹೊರ ಬರಲಿ ಎಂದರು. ರಟ್ಟೀಹಳ್ಳಿ ಶಿವಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಸೇವೆ ಎಂಬುದು ಮೌಲ್ಯಯುತ ವಾದದ್ದು. ಕಷ್ಟದಲ್ಲಿ ಬೆಳೆದ ಈಶ್ವರಯ್ಯನವರು ಹಲವಾರು ಸತ್ಕಾರ್ಯಗಳ ಮೂಲಕ ಶಿವಮೊಗ್ಗದ ಆಸ್ತಿಯಾಗಿದ್ದರು. ಅವರ ಜೀವನ ಮೌಲ್ಯಗಳನ್ನು ಅಳವಡಿಸಿಕೊಂಡು ಹೆಜ್ಜೆ ಇಟ್ಟಾಗ ಅವರ ಮಕ್ಕಳ ಬದುಕು ಸಾರ್ಥಕಗೊಳ್ಳುತ್ತದೆ ಎಂದರು.

### ಒಂದು ವರ್ಷದಲ್ಲಿ ಬರೋಬ್ಬರಿ 55 ಬಾಲಕಿಯರಿಗೆ ಗರ್ಭಿಣಿ ಸ್ಕ್ಯಾನಿಂಗ್

## ಮಂಡ್ಯದಲ್ಲಿ ಜಾಗೃತ ದಳ ದಾಳಿ ವೇಳೆ ಪತ್ತೆ: 16 ಸಾವಿರ ಮಹಿಳೆಯರ ಪೈಕಿ 55 ಮಂದಿ ಅಪ್ರಾಪ್ತರು

**ಮಂಡ್ಯ, ಮೇ 6:** ಜಿಲ್ಲೆಯಲ್ಲಿ ಭ್ರೂಣಹತ್ಯೆ ಮತ್ತು ಲಿಂಗ ಪತ್ತೆಯಂತಹ ಪ್ರಕರಣಗಳ ಬೆನ್ನಲ್ಲೇ ಇದೀಗ ಮತ್ತೊಂದು ಸ್ಫೋಟಕ ಸತ್ಯ ಬಯಲಾಗಿದೆ. ನಗರದ ಪ್ರತಿಷ್ಠಿತ ಡಯಾಗ್ನೋಸ್ಟಿಕ್ ಸೆಂಟರ್ ಒಂದರ ಮೇಲೆ ಜಾಗೃತ ದಳದ ಅಧಿಕಾರಿಗಳು ದಾಳಿ ನಡೆಸಿದಾಗ, ಕಳೆದ ಒಂದು ವರ್ಷದಲ್ಲಿ ಬರೋಬ್ಬರಿ 55 ಬಾಲಕಿಯರಿಗೆ ಗರ್ಭಿಣಿ ಸ್ಕ್ಯಾನಿಂಗ್ ಮಾಡಿರುವುದು ಪತ್ತೆಯಾಗಿದೆ. ಈ ಆಘಾತಕಾರಿ ಬೆಳವಣಿಗೆಯಿಂದ ಜಿಲ್ಲಾಡಳಿತ ಮತ್ತು ಆರೋಗ್ಯ ಇಲಾಖೆ ಬೆಚ್ಚಿಬಿದ್ದಿದೆ.

ಉಪ ಲೋಕಾಯುಕ್ತರ ಕಟ್ಟುನಿಟ್ಟಿನ ಆದೇಶದ ಬೆನ್ನಲ್ಲೇ ಎಚ್ಚೆತ್ತುಕೊಂಡ ತಾಲೂಕು ಮಟ್ಟದ ಜಾಗೃತ ದಳದ ಅಧಿಕಾರಿಗಳು ಮಂಗಳವಾರ ನಗರದ ಖಾಸಗಿ ಸ್ಕ್ಯಾನಿಂಗ್ ಸೆಂಟರ್‌ಗಳ ಮೇಲೆ ಮಿಂಚಿನ ದಾಳಿ ನಡೆಸಿದರು. ತಹಸೀಲ್ದಾರ್ ವಿಶ್ವನಾಥ್ ಮತ್ತು ತಾಲೂಕು ಆರೋಗ್ಯಾಧಿಕಾರಿಗಳ ತಂಡವು ಮಂಡ್ಯ ಡಯಾಗ್ನೋಸ್ಟಿಕ್ ಸೆಂಟರ್‌ನಲ್ಲಿ ದಾಖಲೆಗಳನ್ನು ಪರಿಶೀಲಿಸಿದಾಗ ಈ ಗಂಭೀರ ವಿಚಾರ ಬೆಳಕಿಗೆ ಬಂದಿದೆ. ಕಳೆದ ಒಂದು ವರ್ಷದಲ್ಲಿ ಇಲ್ಲಿ ಸುಮಾರು 16 ಸಾವಿರ ಗರ್ಭಿಣಿಯರ ಸ್ಕ್ಯಾನಿಂಗ್ ಮಾಡಲಾಗಿದ್ದು, ಅದರಲ್ಲಿ 55 ಮಂದಿ 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಬಾಲಕಿಯರಾಗಿದ್ದಾರೆ. ಅಪ್ರಾಪ್ತ ಬಾಲಕಿಯರು ಗರ್ಭಿಣಿಯರಾಗಿ ಸ್ಕ್ಯಾನಿಂಗ್‌ಗೆ ಬಂದಾಗ ಆ ಮಾಹಿತಿಯನ್ನು ತಕ್ಷಣವೇ ಸಂಬಂಧಪಟ್ಟ ಇಲಾಖೆ ಅಥವಾ ಪೊಲೀಸರಿಗೆ ನೀಡುವುದು ಕಡ್ಡಾಯ. ಒಂದು ವೇಳೆ ಬಾಲಕಿಯರು ವಿವಾಹವಾಗಿದ್ದರೂ ಸಹ, ಅಂತಹ ಪ್ರಕರಣಗಳು ಪೋಕ್ಸೋ ಕಾಯ್ದೆಯ ಅಡಿಯಲ್ಲಿ ಬರುತ್ತವೆ. ಆದರೆ ಈ ಡಯಾಗ್ನೋಸ್ಟಿಕ್ ಸೆಂಟರ್‌ನವರು ಕಾನೂನಿನ ಪ್ರಕಾರ ಮಾಹಿತಿ ನೀಡಿದ್ದಾರೆಯೇ ಅಥವಾ ಈ ಸತ್ಯವನ್ನು ಮುಚ್ಚಿಟ್ಟಿದ್ದಾರೆಯೇ ಎಂಬ ಬಗ್ಗೆ ಅಧಿಕಾರಿಗಳು ಈಗ ತೀವ್ರ ತನಿಖೆ ನಡೆಸುತ್ತಿದ್ದಾರೆ.

**ಮಾಹಿತಿ ನೀಡದಿದ್ದರೆ ಕಾನೂನು ಕ್ರಮ ಅನಿವಾರ್ಯ:** ದಾಳಿಯ ನೇತೃತ್ವ ವಹಿಸಿದ್ದ ನೋಡಲ್ ಅಧಿಕಾರಿ ಡಾ. ಕೆ. ಸೋಮಶೇಖರ್ ಅವರು ಮಾತನಾಡಿ, ಸ್ಕ್ಯಾನಿಂಗ್ ಸೆಂಟರ್‌ನ ರಿಜಿಸ್ಟರ್ ಮತ್ತು ದಾಖಲೆಗಳನ್ನು ಪರಾಮರ್ಶಿಸಲಾ ಗುತ್ತಿದೆ. ಬಾಲ ಗರ್ಭಿಣಿಯರ ಬಗ್ಗೆ ಮಾಹಿತಿ ನೀಡದಿದ್ದರೆ ಕಾನೂನು ಕ್ರಮ ಅನಿವಾರ್ಯ ಎಂದು ಎಚ್ಚರಿಸಿದ್ದಾರೆ.

ಜೊತೆಗೆ ಲಿಂಗಪತ್ತೆ ಮತ್ತು ಭ್ರೂಣ ಹತ್ಯೆಯಂತಹ ಕಾನೂನುಬಾಹಿರ ಕೃತ್ಯಗಳಲ್ಲಿ ತೊಡಗಬಾರದು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ಈ ಪ್ರಕರಣವು ಮಂಡ್ಯ ಜಿಲ್ಲೆಯಲ್ಲಿ ಅಪ್ರಾಪ್ತ ಬಾಲಕಿಯರ ಮೇಲೆ ನಡೆಯುತ್ತಿರುವ ದೌರ್ಜನ್ಯ ಅಥವಾ ಬಾಲ್ಯವಿವಾಹ ದಂತಹ ಗಂಭೀರ ಸಾಮಾಜಿಕ ಸಮಸ್ಯೆಗಳತ್ತ ಬೆರಳು ಮಾಡಿದೆ.

## ಪಿಡಿಓ ಆತ್ಮಹತ್ಯೆ ಪ್ರಕರಣದ ತನಿಖೆಗೆ ಸರ್ಕಾರಕ್ಕೆ ಮನವಿ

**ಗದಗ, ಮೇ 6:** ಜಿಲ್ಲೆಯ ರೋಣ ತಾಲೂಕಿನ ಅಸೂಟಿ ಗ್ರಾಮ ಪಂಚಾಯತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಪಿಡಿಓ ಮುಕ್ತುಮ್ ಹುಸೇನ್ ಅವರ ಆತ್ಮಹತ್ಯೆ ಪ್ರಕರಣವನ್ನು ಸಮಗ್ರ ಹಾಗೂ ನಿಷ್ಪಕ್ಷಪಾತವಾಗಿ ತನಿಖೆ ನಡೆಸಬೇಕು ಎಂದು ಆಗ್ರಹಿಸಿ ರಾಜ್ಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಸಂಘದ ಸದಸ್ಯರು ಹಾಗೂ ಆರ್.ಡಿ.ಪಿ.ಆರ್ ವೃಂದ ಸಂಘಗಳ ಪದಾಧಿಕಾರಿಗಳು ಮಾನ್ಯ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.



ಈ ಸಂದರ್ಭದಲ್ಲಿ ಸಂಘದ ಜಿಲ್ಲಾ ಅಧ್ಯಕ್ಷರಾದ ರಿಯಾಜ್ ಕೆ. ಮಾತನಾಡಿ, ಪಿಡಿಒಗಳ ಮೇಲೆ ದಿನದಿಂದ ದಿನಕ್ಕೆ ಕೆಲಸದ ಒತ್ತಡ ಹೆಚ್ಚುತ್ತಿದ್ದು, ಮೇಲಧಿಕಾರಿಗಳ ಅನಾವಶ್ಯಕ ಹಸ್ತಕ್ಷೇಪ ಹಾಗೂ ಆಡಳಿತಾತ್ಮಕ ಒತ್ತಡದಿಂದ ಅಧಿಕಾರಿಗಳು ಮಾನಸಿಕವಾಗಿ ಕುಗ್ಗುತ್ತಿದ್ದಾರೆ ಎಂದು ಆತಂಕ ವ್ಯಕ್ತಪಡಿಸಿದರು. ಇದೇ ರೀತಿಯ ಒತ್ತಡಗಳು ಮುಕ್ತುಮ್ ಹುಸೇನ ಅವರ ಆತ್ಮಹತ್ಯೆಗೆ ಕಾರಣ ವಾಗಿರಬಹುದೆಂಬ ಅನುಮಾನ ವ್ಯಕ್ತಪಡಿಸಿದ ಅವರು, ಪ್ರಕರಣವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ಸಂಪೂರ್ಣ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಘಟನೆಗೆ ಕಾರಣರಾದವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಮೃತರ ಕುಟುಂಬಕ್ಕೆ ತಕ್ಷಣ ನ್ಯಾಯ ಒದಗಿಸಿ ಸಮರ್ಪಕ ಪರಿಹಾರ ಧನ ನೀಡಬೇಕು. ಜೊತೆಗೆ ಕುಟುಂಬದ ಒಬ್ಬರಿಗೆ ಸರ್ಕಾರಿ ಉದ್ಯೋಗ ನೀಡುವ ಮೂಲಕ ಆರ್ಥಿಕ ಭದ್ರತೆ ಕಲ್ಪಿಸಬೇಕು ಎಂದು ಮನವಿ ಮಾಡಿದರು.

ಪಿಡಿಓಗಳ ಮೇಲೆ ಇರುವ ಅತಿಯಾದ ಕೆಲಸದ ಒತ್ತಡವನ್ನು ಕಡಿಮೆ ಮಾಡುವ ಕ್ರಮಗಳನ್ನು ಸರ್ಕಾರ ಜಾರಿಗೆ ತರಬೇಕು. ಕೆಲಸದ ಸಮಯ, ಹೊಣೆಗಾರಿಕೆ ಹಾಗೂ ಆಡಳಿತಾತ್ಮಕ ನಿಯಮಗಳಿಗೆ ಸ್ಪಷ್ಟ ಮಾರ್ಗಸೂಚಿಗಳನ್ನು ರೂಪಿಸಬೇಕು. ಜೊತೆಗೆ ಪಿಡಿಓಗಳಿಗೆ ಭದ್ರತೆ ಹಾಗೂ ಮಾನಸಿಕ ಬೆಂಬಲ ವ್ಯವಸ್ಥೆ ಕಲ್ಪಿಸಬೇಕು ಎಂದು ಆಗ್ರಹಿಸಿದರು. ಮೇಲಧಿಕಾರಿಗಳ ಅನಾವಶ್ಯಕ ಹಸ್ತಕ್ಷೇಪವನ್ನು ನಿಯಂತ್ರಿಸಿ ಪಿಡಿಓಗಳಿಗೆ ಸೇವಾ ಸ್ವಾಯತ್ತತೆ ನೀಡುವ ಮೂಲಕ ಉತ್ತಮ ಕಾರ್ಯ ವಾತಾವರಣ ನಿರ್ಮಿಸಬೇಕೆಂದು ಸಂಘದ ಮುಖಂಡರು ಸರ್ಕಾರವನ್ನು ಒತ್ತಾಯಿಸಿದರು.

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಪಿಡಿಓಗಳ ಸೇವಾ ಪರಿಸ್ಥಿತಿಯನ್ನು ಸುಧಾರಿಸಲು ಸರ್ಕಾರ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ ಅವರು, ನ್ಯಾಯಕ್ಕಾಗಿ ಹೋರಾಟ ಮುಂದುವರಿಸುವುದಾಗಿ ತಿಳಿಸಿದರು.

## ಮೋದಿ ಬಂಪರ್ ಕೊಡುಗೆ ಗುಂತಕಲ್ ವಾಡಿ ಮಧ್ಯೆ ಇನ್ನೆರಡು ರೈಲು ಹಳಿ ನಿರ್ಮಾಣಕ್ಕೆ ಕೇಂದ್ರ ಒಪ್ಪಿಗೆಗೆ ಹರ್ಷ: ಡಾ. ಉಮೇಶ್ ಜಾಧವ್

**ಕಲಬುರಗಿ, ಮೇ.6:** : ಗುಂತಕಲ್ -ವಾಡಿ ನಡುವೆ 230 ಕಿ.ಮೀ ಉದ್ದದ ಎರಡು ಮತ್ತು ಮೂರನೇ ನೂತನ ರೈಲು ಹಳಿ ನಿರ್ಮಾಣಕ್ಕೆ ಕೇಂದ್ರ ಸಚಿವ ಸಂಪುಟ ಒಪ್ಪಿಗೆ ನೀಡಿ ಮೋದಿ ಈ ಭಾಗಕ್ಕೆ ಬಾರಿ ಕೊಡುಗೆ ನೀಡಿದ್ದಾರೆ ಎಂದು ಮಾಜಿ ಲೋಕಸಭಾ ಸದಸ್ಯರಾದ ಡಾ. ಉಮೇಶ್ ಜಾಧವ್ ಅಭಿನಂದನೆ ಸಲ್ಲಿಸಿದ್ದಾರೆ.



ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ರೈಲು ಸಂಚಾರದ ಹಳಿಗಳ ಬಲಪಡಿಸುವಿಕೆ ಯೋಜನೆ ಯಡಿಯಲ್ಲಿ ಮೂರು ಮತ್ತು ನಾಲ್ಕನೆಯ ರೈಲು ಹಳಿ ಮಾರ್ಗವನ್ನು ನಿರ್ಮಾಣ ಮಾಡಲು ಮಂಜೂರಾತಿ ನೀಡಿರುವುದರಿಂದ ಅಭಿವೃದ್ಧಿಗೆ ಪೂರಕವಾಗಲಿದೆ. ವಿಕಾಸದ ಸಂಕಲ್ಪ ಹೊಂದಿದ ಪ್ರಧಾನಮಂತ್ರಿ ಮೋದಿ ಅವರು ಕರ್ನಾಟಕ, ತೆಲಂಗಾಣ, ಆಂಧ್ರಕ್ಕೆ ಪ್ರಯೋಜನವಾಗುವ ನೂತನ ಹಳಿ ನಿರ್ಮಾಣ ಕಾರ್ಯದಿಂದ ಈ ಭಾಗಕ್ಕೆ ದೊಡ್ಡ ಕೊಡುಗೆಯಾಗಲಿದೆ ಎಂದರು.

ನೂತನ ರೈಲು ಹಳಿ ನಿರ್ಮಾಣ ಗೊಂಡರೆ ವಾರ್ಷಿಕವಾಗಿ 17.4 ದಶಲಕ್ಷ ಟನ್ ಸರಕು ಸಾಗಣೆಗೆ ನೆರವಾಗಲಿದೆ.1.4 ಕೋಟಿ ಗಿಡಗಳನ್ನು ನೆಡುವ ಮೂಲಕ ಸುಮಾರು 36ಕೋಟಿ ಕಿಲೋದಷ್ಟು ಕಾರ್ಬನ್ ಡೈ ಆಕ್ಸೈಡ್ ಕಡಿಮೆಯಾಗಿ ಪರಿಸರಕ್ಕೆ ಪೂರಕವಾಗಲಿದೆ. ಜೊತೆಗೆ 156 ಲಕ್ಷ ಮಾನವ ಸಂಪನ್ಮೂಲ ಉದ್ಯೋಗ ಸೃಷ್ಟಿಯಾಗಲಿದೆ ಎಂದು ಜಾಧವ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೇಂದ್ರ ವಿತ್ತ ಸಚಿವೆ ನಕಲಿ ವೀಡಿಯೋ ಸೃಷ್ಟಿಸಿ ವೃದ್ಧರಿಗೆ ವಂಚನೆ

**ಬೆಳಗಾವಿ, ಮೇ 6:** ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರ ನಕಲಿ ವಿಡಿಯೋ ಸೃಷ್ಟಿಸಿ ಹಿರಿಯ ನಾಗರಿಕ ರೊಬ್ಬರಿಗೆ ಲಕ್ಷಾಂತರ ರೂಪಾಯಿ ಸೈಬರ್ ವಂಚನೆ ಮಾಡಿರುವ ಪ್ರಕರಣ ನಗರದಲ್ಲಿ ಬೆಳಕಿಗೆ ಬಂದಿದೆ. ನಗರದ ವಂಟಮೂರಿ ಕಾಲೋನಿಯ ಪ್ರಕಾಶ ಗುಬ್ಬಿ (76) ವಂಚನೆಗೆ ಒಳಗಾದವರು.

ಕೊಲ್ಹಾಪುರ ಮೂಲದ ಆದರ್ಶ ಆನಂದ ಹಾಗೂ ಮಹಾರಾಷ್ಟ್ರದ ಬುಲ್ಢಾಣಾ ಮೂಲದ ದಾಮೋದರ ವಿರುದ್ಧ ಸೈಬರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸಾಮಾಜಿಕ ಜಾಲತಾಣಗಳಲ್ಲಿ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಷೇರು ಮಾರುಕಟ್ಟೆಯಲ್ಲಿ ಹಣ ಹೂಡಿಕೆ ಮಾಡಿ ಭಾರಿ ಲಾಭ ಪಡೆಯಿರಿ ಅಂತಾ ಮಾತನಾಡಿರುವ ಜಾಹೀರಾತು ವಿಡಿಯೋ ನೋಡಿ ಮರುಳಾಗಿ, ಹಣ ಹೂಡಿಕೆ ಮಾಡಿ ಸುಮಾರು 7.9 ಲಕ್ಷ ರೂ. ಹಣವನ್ನು ಪ್ರಕಾಶ ಗುಬ್ಬಿ ಅವರು ಕಳೆದು ಕೊಂಡಿದ್ದಾರೆ.

ಈ ಪ್ರಕರಣ ಕುರಿತು ಮಾಧ್ಯಮ ಗಳ ಜೊತೆಗೆ ಮಾತನಾಡಿದ ನಗರ ಪೊಲೀಸ್ ಆಯುಕ್ತ ಭೂಷಣ ಬೊರಸೆ, ಹಿಂದಿನ ವರ್ಷ ನವೆಂಬರ್ ತಿಂಗಳಲ್ಲಿ ಪ್ರಕಾಶ ಗುಬ್ಬಿ ಅವರು ಯೂಟ್ಯೂಬ್‌ನಲ್ಲಿ ಒಂದು ವಿಡಿಯೋ ನೋಡಿದ್ದಾರೆ. ಅದರಲ್ಲಿ ದೇಶದ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಒಂದು ಹಣ ಹೂಡಿಕೆ ಯೋಜನೆಗೆ ಜಾಹೀರಾತು ಮಾಡಿರು ವುದನ್ನು ತೋರಿಸಿದ್ದಾರೆ. ವಿಡಿಯೋ ಕೆಳಗೆ ಡಿಸ್ಕ್ರಿಪ್ಷನ್ ನಲ್ಲಿ ಹಾಕಿದ್ದ ಲಿಂಕ್ ಓಪನ್ ಮಾಡಿ, ತಮ್ಮ ವಿವರವನ್ನು ಪ್ರಕಾಶ ಅವರು ಹಾಕಿದ್ದಾರೆ. ನಂತರ 044 ನಂಬರ್ ನಿಂದ ಶುರುವಾಗುವ ಮೊಬೈಲ್ ನಂಬರ್ ನಿಂದ ಆದರ್ಶ ಆನಂದ ಎಂಬ ವ್ಯಕ್ತಿ ಪ್ರಕಾಶ ಗುಬ್ಬಿ ಅವರಿಗೆ ಕಾಲ್ ಮಾಡಿ, ಹಣ ಹೂಡಿಕೆ ಮಾಡಿಸಿದ್ದಾನೆ. ಆ ಬಳಿಕ ನಿಮಗೆ 65 ಸಾವಿರ ಡಾಲರ್ ಲಾಭ ಆಗಿದೆ ಎಂದಿದ್ದಾನೆ. ಈ ದುಡ್ಡು ವಿಥ್ ಡ್ರಾ ಮಾಡಬೇಕು ಎಂದರೆ 4 ಲಕ್ಷ ರೂ. ಕಸ್ಟಮ್ ಫೀಸ್ ತುಂಬಬೇಕು ಅಂತಾ ಹೇಳಿದ್ದಾನೆ. ಮತ್ತೆ 2 ಲಕ್ಷ ತುಂಬಿಸಿಕೊಂಡು, ಹೀಗೆ ಒಟ್ಟು 7.9 ಲಕ್ಷ ರೂ. ಹಣ ಮೋಸ ಮಾಡಿದ್ದಾನೆ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡು, ತನಿಖೆ ಕೈಗೊಂಡಿ ದ್ದೇವೆ ಎಂದು ವಿವರಿಸಿದರು.



ಕಳೆದ ವರ್ಷದ ನವೆಂಬರ್ ತಿಂಗಳಿನಿಂದ ಈ ವರ್ಷದ ಫೆಬ್ರುವರಿವರೆಗೆ ಮೋಸ ಆಗಿದೆ. ಈಗ ಮೇ ತಿಂಗಳಲ್ಲಿ ಮೋಸಕ್ಕೆ ಒಳಗಾದ ಪ್ರಕಾಶ ಗುಬ್ಬಿ ದೂರು ದಾಖಲಿಸಿದ್ದಾರೆ. ಮ್ಯೂಲ್ ಅಕೌಂಟ್ ಮೂಲಕ ಆರೋಪಿಗಳು ಹಣ ವರ್ಗಾಯಿಸಿಕೊಂಡಿದ್ದಾರೆ. ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಮಾತಾಡಿದಂತೆ ಎಐ ಮೂಲಕ ಡೀಪ್ ಫೇಕ್ ವಿಡಿಯೋ ಸೃಷ್ಟಿಸಿ ಮೋಸ ಮಾಡಲಾಗಿದೆ ಎಂದು ಮಾಹಿತಿ ನೀಡಿದರು. ಯಾರೋ ಫೋನ್ ಮಾಡಿ ಹಣ ಹೂಡಿಕೆ ಮಾಡುವಂತೆ ಹೇಳಿದರೆ ಅದಕ್ಕೆ ಸ್ಪಂದಿಸಬೇಡಿ. ಯೂಟ್ಯೂಬ್ ನಲ್ಲಿ ಬರುವ ಇಂಥ ವಿಡಿಯೋಗಳನ್ನು ಸಾರ್ವಜನಿಕರು ಯಾವುದೇ ಕಾರಣಕ್ಕೂ ನಂಬಬಾರದು. ಸೈಬರ್ ವಂಚನೆಯಲ್ಲಿ ಹಣ ಹೂಡಿಕೆ ಹಗರಣಗಳೇ ಹೆಚ್ಚು ಕಂಡುಬರುತ್ತಿವೆ. ಸರ್ಕಾರಿ ಬ್ಯಾಂಕ್‌ಗಳಿಗಿಂತ ಹೆಚ್ಚು ಹಣ ಕೊಡುತ್ತೇವೆ ಅಂತಾ ಯಾವುದಾದರೂ ಖಾಸಗಿ ಬ್ಯಾಂಕ್, ವ್ಯಕ್ತಿಗಳು ಹೇಳಿದರೆ ಆ ಬಗ್ಗೆ ಎಚ್ಚರ ವಹಿಸಬೇಕು. ಹೆಚ್ಚಿನ ಹಣದ ಆಸೆಗೆ ಬಿದ್ದು ಮೋಸ ಹೋಗಬೇಡಿ ಎಂದು ಸಾರ್ವಜನಿಕರಿಗೆ ಪೊಲೀಸ್ ಕಮಿಷನರ್ ಕಿವಿಮಾತು ಹೇಳಿದರು.

### ಇತಿಹಾಸಾಸಕ್ತರಲ್ಲಿ ವಿಶೇಷ ಕುತೂಹಲ

## ಹಂಪಾದೇವನಹಳ್ಳಿ: ವಿಜಯನಗರ ಕಾಲದ ಶಾಸನ ಪತ್ತೆ

**ಕಂಪ್ಲಿ ಮೇ 06.** ತಾಲೂಕಿನ ಹಂಪಾದೇವನಹಳ್ಳಿ ಗ್ರಾಮದಲ್ಲಿ ಐತಿಹಾಸಿಕ ವಿಜಯನಗರ ಸಾಮ್ರಾಜ್ಯದ ಶ್ರೀಕೃಷ್ಣದೇವರಾಯನಿಗೆ ಸಂಬಂಧಿಸಿದ ಶಾಸನ ಪತ್ತೆಯಾಗಿದೆ.

ಹಂಪಾದೇವನಹಳ್ಳಿಯ ಪಶ್ಚಿಮ ದಿಕ್ಕಿಗೆ 200 ಮೀಟರ್ ಅಂತರದ ನಾರಿಹಳ್ಳ ಹರಿಯುವಾ ಹಳ್ಳ ದಂಡೆ ಮೇಲೆ ಅಪ್ರಕಟಿತ ಶಾಸನ ಕಂಡುಬಂದಿದೆ. ವಿಜಯನಗರ ಸಾಮ್ರಾಜ್ಯದ ಕಾಲಕ್ಕೆ ಸೇರಿದ ಸುಮಾರು16ನೇ ಶತಮಾನದ ಅಪರೂಪದ ಶಾಸನ ಪತ್ತೆಯಾಗಿದೆ. ಇದು ಇತಿಹಾಸಾಸಕ್ತರಲ್ಲಿ ವಿಶೇಷ ಕುತೂಹಲ ಮೂಡಿಸಿದೆ.



ಕೊಪ್ಪಳ ತಾಲೂಕಿನ ಹಿಟ್ನಾಳ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಇತಿಹಾಸ ಉಪನ್ಯಾಸಕರಾದ ಕೆ ಅಂಜಿನಯ್ಯ (ಜೀರಿಗನೂರು ಗ್ರಾಮ) ಅವರು ಈ ಮಹತ್ವದ ಶಾಸನವನ್ನು ಶೋಧನೆ ಮಾಡಿ ಪತ್ತೆ ಮಾಡಿದ್ದಾರೆ ಹಾಗೂ ಈ ಶಾಸನದ ಸಾಲುಗಳನ್ನು ಇವರು ಪ್ರಾಥಮಿಕ ಹಂತದಲ್ಲಿ ಓದಿ ಅರ್ಥೈಸಿದ್ದಾರೆ ಮತ್ತು ಹಂಪಾದೇವನಹಳ್ಳಿ ಇತಿಹಾಸದ ಹಿರಿಮೆ ಗರಿಮೆ ಮುಡಿಸಿದ್ದಾರೆ.

ಲಿಪಿ ಮತ್ತು ಭಾಷೆ , ಕಲ್ಲನ್ನು ಗಮನಿಸಿದರೆ ಇದು 16ನೆಯ ಶತಮಾನದ್ದು ಅಂದರೆ ವಿಜಯನಗರ ಸಾಮ್ರಾಜ್ಯದ ಕಾಲದ್ದು ಎಂದು ಭಾವಿಸಲಾಗಿದೆ ಹಾಗೂ ಕನ್ನಡ ಭಾಷೆ ಮತ್ತು ಕನ್ನಡ ಲಿಪಿ ಹೊಂದಿರುವ ಶಾಸನವಾಗಿದೆ. ಈ ಶಾಸನದ ತಿಳಿಯಲು ಭಾರತೀಯ ಪುರಾತತ್ವ ಸರ್ವೇಕ್ಷಣೆ ಇಲಾಖೆಯ ಶಾಸನ ತಜ್ಞರಾದ ಡಾ.ನಾಗರಾಜಪ್ಪ ಅವರು ಮತ್ತು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸಂಡೂರಿನ ಸಹಾಯಕ ಪ್ರಾಧ್ಯಾಪಕರಾದ ತಳವಾರ ನರಸಿಂಹ ಅವರು ಈ ಶಾಸನ ಪಾಠವನ್ನು ಓದಿ ಅರ್ಥೈಸಿ ಕೊಟ್ಟಿದ್ದಾರೆ. ಈ ಶಾಸನದಲ್ಲಿ ಬರೆದಿರುವ ಮೂರು ಸಾಲುಗಳ ಉಲ್ಲೇಖ

"ಶ್ರೀ ಕೃಷ್ಣರಾಯ ಪುರವೆಂ
ದು ಪ್ರತಿ ನಾಮವಾದ ಹಂಪಾ
ದೇವಿ ಹಳಿಯ ಹೊಲಮೆರೆ" ಎಂದು ಉಲ್ಲೇಖವಿದೆ.

ಈಗಾಗಲೇ ಉಲ್ಲೇಖಗೊಂಡಿರುವ ಶ್ರೀಕೃಷ್ಣ ದೇವರಾಯನ ಹಂಪಾದೇವನಹಳ್ಳಿ ಶಾಸನದ ಪ್ರಕಾರ ಶಾಲಿವಾಹನ ಶಕವರ್ಷ 1433ನೆಯ ಪ್ರಜಾಪತಿ, ಚೈತ್ರ, ಶು.13 ಬುಧವಾರ (ಕ್ರಿ.ಶ. 12-3-1511)ದಂದು ಕೃಷ್ಣರಾಯನು ನಾನಾ ಗೋತ್ರದ ಮಹಾಜನಗಳಿಗೆ ನಾರಿಸೀಮೆಯ ಹಂಪಾದೇವಹಳ್ಳಿಯನ್ನು ಕೃಷ್ಣರಾಯಪುರವೆಂದು ಮರು ನಾಮಕರಣ ಮಾಡಿ ದಾನ ನೀಡಿರುವ ಹಂಪಾದೇವನಹಳ್ಳಿ ಶಾಸನದಲ್ಲಿ ಉಲ್ಲೇಖವಾಗಿದೆ ಹಾಗೂ ನಾರಿ ಹಳ್ಳ ದಂಡೆಯ ಮೇಲೆ ವಿಷ್ಣುವಿನ ಅಗ್ರಹಾರವನ್ನು ನಿರ್ಮಿಸಿದ್ದಾನೆ ಮತ್ತು ಈ ಶಾಸನಕ್ಕೂ ಮತ್ತು ನೂತನ ಪತ್ತೆ ಮಾಡಿದ ಶಾಸನಕ್ಕೂ ಸಂಬಂಧವಿದೆ.

ಹಂಪಾದೇವನಹಳ್ಳಿ ಗ್ರಾಮದ ಯುವಕರಾದ ಕರಿಬಸವ, ಉಮೇಶ್, ಪ್ರವೀಣ್ ಅವರು ಈ ಶಾಸನ ಪತ್ತೆ ಹಚ್ಚಲು ಹಾಗೂ ಗುರುತಿಸುವುದರಲ್ಲಿ ಸಂರಕ್ಷಣೆ ಸಹಾಯಕರಾಗಿ ಕೈಜೋಡಿಸಿದ್ದಾರೆ.

### ನಾಯಿ ಕಡಿತಕ್ಕೊಳಗಾದ ಬಾಲಕನನ್ನು ಭೇಟಿ ಮಾಡಿದ ಜಿಲ್ಲಾಧಿಕಾರಿ ಡಾ. ಆನಂದ ಕೆ.

## ಬೀದಿನಾಯಿ ಹಾವಳಿ ತಡೆಗೆ ಪಾಲಿಕೆ ಅಧಿಕಾರಿಗಳಿಗೆ ಡಿ.ಸಿ ಸೂಚನೆ

**ವಿಜಯಪುರ, ಮೇ.6:** ಮಹಾನಗರ ಪಾಲಿಕೆ ವ್ಯಾಪ್ತಿಯ ವಾರ್ಡ ಸಂ 35ರ ಫೇವರಚಂದ ಕಾಲೊನಿಯ ರಾಜಕುಮಾರ ಲೇಔಟ್ ನಲ್ಲಿ ನಾಯಿ ಕಡಿತಕ್ಕೊಳಗಾಗಿ ನಗರದ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಮಗುವನ್ನು ಭೇಟಿಮಾಡಿದ ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಮಗುವಿನ ಆರೋಗ್ಯ ವಿಚಾರಿಸಿ, ಸೂಕ್ತ ಚಿಕಿತ್ಸೆ ನೀಡಲು ವೈದ್ಯರಿಗೆ ಸೂಚಿಸಿದರು.



## ರಾಯಚೂರು ಕೇಂದ್ರ ಬಸ್ ನಿಲ್ದಾಣ ಅವ್ಯವಸ್ಥೆಯ ಆಗರ: ತಕ್ಷಣ ಬೇಕಿದೆ ಸಮರ್ಪಕ ಕಾಯಕಲ್ಪ

**ರಾಯಚೂರು, ಮೇ. 6:** ಪ್ರಯಾಣಿಕರಿಗೆ ಅಗತ್ಯವಿರುವಷ್ಟು ಆಸನಗಳಿಲ್ಲ, ಪಾರ್ಕಿಂಗ್ ವ್ಯವಸ್ಥೆ ಸಮರ್ಪಕವಾಗಿಲ್ಲ, ನಿಲ್ದಾಣದ ಎದುರಿನ ಶೌಚಾಲಯದ ದುರ್ನಾತ, ಶುದ್ಧ ಕುಡಿಯುವ ನೀರಿನ ಕೊರತೆ.... ಹೀಗೆ ವಿವಿಧ ಸಮಸ್ಯೆಗಳಿಂದ ರಾಯಚೂರು ನಗರದ ಕೇಂದ್ರ ಬಸ್‌ನಿಲ್ದಾಣ ಬಳಲುತ್ತಿದೆ.



ಬಸ್‌ನಿಲ್ದಾಣದ ಮುಂಭಾಗದಲ್ಲಿಯೇ ದ್ವಿಚಕ್ರ ವಾಹನಗಳನ್ನು ಪಾರ್ಕಿಂಗ್ ಮಾಡಲಾ ಗುತ್ತಿದೆ. ಇನ್ನು ಖಾಸಗಿ ಕ್ರೂಸರ್ ಜೀಪ್, ಆಟೊಗಳು ಸಹ ಪ್ರಯಾಣಿಕರನ್ನು ನಿಲ್ದಾಣದ ಎದುರಲ್ಲೇ ನಿಂತು ಹತ್ತಿಸಿಕೊಂಡು ಹೋಗುತ್ತಿವೆ. ನಿಲ್ದಾಣದ ಆವರಣದಲ್ಲಿ ಕಸ, ಪ್ಲಾಸ್ಟಿಕ್, ಅಡಿಕೆ-ಎಲೆ-ಗುಟ್ಕಾ ತಿಂದು ಉಗುಳಿರುವ ಕಲೆಗಳು, ದುರ್ನಾತ ಬೀರುವ ಶೌಚಾಲಯಗಳು, ಸುರಕ್ಷತೆಯಿಲ್ಲದ ಮಹಿಳಾ ಕೊಠಡಿಗಳು, ಅಮಲಿನಲ್ಲಿ ಎಲ್ಲೆಂದರಲ್ಲಿ ಮಲಗುವ ಮದ್ಯ ವ್ಯಸನಿಗಳು ಇದು ನಿಲ್ದಾಣದ ಆಡಳಿತ ವ್ಯವಸ್ಥೆಯನ್ನು ಬಿಂಬಿಸುತ್ತಿದೆ. ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆ 'ಶಕ್ತಿ' ಜಾರಿಯಾದಾಗಿನಿಂದ ಮಹಿಳಾ ಪ್ರಯಾಣಿಕರ ಸಂಖ್ಯೆ ಹೆಚ್ಚಾಗಿದೆ. ಮಹಿಳೆಯರೇ ಹೆಚ್ಚಿನ ಸಂಖ್ಯೆಯಲ್ಲಿ ಬಸ್‌ಗಳಲ್ಲಿ ಸಂಚರಿಸುತ್ತಿದ್ದಾರೆ. ನಿಲ್ದಾಣಗಳಲ್ಲಿ ಮಹಿಳಾ ಪ್ರಯಾಣಿಕರು ಕುಳಿತುಕೊಳ್ಳಲು ಪ್ರತ್ಯೇಕ ಕೊಠಡಿಗಳಿವೆ. ಕೆಲ ಕಿಡಿಗೇಡಿಗಳು ಕೊಠಡಿಗೆ ನುಗ್ಗಿ, ಮಹಿಳೆಯರನ್ನು ಚುಡಾಯಿಸುವುದು ಇಲ್ಲಿ ಸಾಮಾನ್ಯ. ಇಲ್ಲಿ ಕಳ್ಳತನ ನಡೆದರೂ ಕೇಳುವವರಿಲ್ಲ ಎಂದು ಪ್ರಯಾಣಿಕರು ಆರೋಪಿಸಿದ್ದಾರೆ.

ನಿಲ್ದಾಣಗಳಲ್ಲಿರುವ ವಾಣಿಜ್ಯ ಮಳಿಗೆಗಳನ್ನು ಬಾಡಿಗೆಗೆ ನೀಡಲಾಗಿದೆ. ತಿಂಡಿ-ತಿನಿಸು ಹಾಗೂ ಇತರೆ ವಸ್ತುಗಳನ್ನು ಮಾರಾಟ ಮಾಡುವ ವ್ಯಾಪಾರಿಗಳು, ನಿಗದಿತ ದರಕ್ಕಿಂತ ಹೆಚ್ಚಿನ ದರ ವಸೂಲಿ ಮಾಡುತ್ತಿದ್ದಾರೆ. ಇದನ್ನು ಪ್ರಶ್ನಿಸಿದರೆ, ನಮ್ಮ ಬಾಡಿಗೆ ಹೆಚ್ಚು. ಅದಕ್ಕೆ ದರವೂ ಹೆಚ್ಚು. ಸಂಸ್ಥೆಯ ಅಧಿಕಾರಿಗಳಿಗೆ ದೂರು ಕೊಡುವುದಿದ್ದರೆ ಕೊಡಿ ಎಂದು ಉಡಾಫೆ ಉತ್ತರ ನೀಡುತ್ತಾರೆ. ಹೆಚ್ಚಿನ ದರ ವಸೂಲಿ ಮಾಡುವ ವ್ಯಾಪಾರಿಗಳ ವಿರುದ್ಧ ಕ್ರಮಕೈಗೊಳ್ಳಬೇಕು ಎಂದು ಪ್ರಯಾಣಿಕರಾದ ಸೋಮನಾಥ, ಶಿವುಕುಮಾರ ಒತ್ತಾಯಿಸುತ್ತಾರೆ.

ಸಂಬಂಧಪಟ್ಟ ಅಧಿಕಾರಿಗಳು, ಜನಪ್ರತಿನಿಧಿ ಗಳು ವಿಶೇಷ ಆಸಕ್ತಿ, ಕಾಳಜಿ ವಹಿಸಿ ಬಸ್ ನಿಲ್ದಾಣದಲ್ಲಿ ಪ್ರಯಾಣಿಕರಿಗೆ ಸರಿಯಾದ ವ್ಯವಸ್ಥೆ ಮಾಡಬೇಕು. ಹಿರಿಯ ನಾಗರಿಕರಿಗೆ, ಶಾಲಾ, ಕಾಲೇಜುಗಳ ವಿದ್ಯಾರ್ಥಿಗಳು ಕುಳಿತು ಕೊಳ್ಳಲು ಸರಿಯಾದ ವ್ಯವಸ್ಥೆ ಮಾಡಬೇಕು ಎಂದು ಪ್ರಯಾಣಿಕರಾದ ಬಸವರಾಜ, ರಾಮಪ್ಪ, ದೇವಮ್ಮ, ಪದ್ಮಾ ಮನವಿ ಮಾಡಿದ್ದಾರೆ.

### ಅಮಿತ್‌ಶಾ ಸೇರಿ ವಿವಿಧ ಮಠಾಧೀಶರು, ಗಣ್ಯರು ಭಾಗಿ

## ಬಿಎಸ್‌ವೈ ಅಭಿಮಾನೋತ್ಸವದ ಸಮಯದಲ್ಲಿ ಬದಲಾವಣೆ: ಮೇ 9ರಂದು ಬೆಳಗ್ಗೆ 9ರ ಬದಲು ಮಧ್ಯಾಹ್ನ 2 ಗಂಟೆಗೆ ಸಮಾರಂಭ

**ಚಿತ್ರದುರ್ಗ, ಮೇ 6:** ಮೇ 9ರಂದು ಬೆಳಿಗ್ಗೆ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರ ಅಭಿಮಾನೋತ್ಸವ ಕಾರ್ಯಕ್ರಮವು ಬೆಳಗ್ಗೆ ಬದಲಿಗೆ ಮಧ್ಯಾಹ್ನ 2 ಗಂಟೆಯಿಂದ 5 ಗಂಟೆವರೆಗೆ ನಡೆಯಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ.





ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಮೊದಲು ಕಾರ್ಯಕ್ರಮವನ್ನು ಬೆಳಿಗ್ಗೆ 12 ಗಂಟೆಯಿಂದ ನಡೆಸಲು ಉದ್ದೇಶಿಸಿತ್ತು. ಕೆಲವು ಕಾರಣಗಳಿಂದ ಸಮಯದಲ್ಲಿ ಬದಲಾವಣೆಯಾಗಿದೆ. ಈಗ ನಿಗದಿಯಾಗಿರುವಂತೆ ಬಿಎಸ್‌ವೈ ಅಭಿಮಾನೋತ್ಸವವು ಬೆಳಗ್ಗೆಯ ಬದಲಾಗಿ ಮಧ್ಯಾಹ್ನ 2 ಗಂಟೆಯಿಂದ 5 ಗಂಟೆಯವರೆಗೆ ನಡೆಯಲಿದೆ. 3.45ರ ವೇಳೆಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಆಗಮಿಸಲಿದ್ದಾರೆ ಎಂದು ಹೇಳಿದರು.

ಅಪ್ರತಿಮ ಹೋರಾಟಗಾರ, ರೈತ ನಾಯಕ ಬಿ.ಎಸ್.ಯಡಿಯೂರಪ್ಪ ಅವರ ರಾಜಕೀಯ ಜೀವನದ 50 ವರ್ಷಗಳ ಪಯಣ ಪೂರೈಸಿದ ಸಂದರ್ಭದಲ್ಲಿ ಬಿ.ಎಸ್.ವೈ ಅವರ ಅಭಿಮಾನೋತ್ಸವವನ್ನು ನಡೆಸಲಾಗುತ್ತಿದೆ. ಈ ಸಂಬಂಧ ವ್ಯಾಪಕ ಸಿದ್ಧತೆ ನಡೆದಿದೆ. 10 ಲಕ್ಷಕ್ಕೂ ಹೆಚ್ಚು ಅಭಿಮಾನಿಗಳು ಬರಲಿದ್ದಾರೆ ಎಂದರು. ಪ್ರತಿ ಜಿಲ್ಲೆಗೆ ಹೋಗಿ ಸ್ವಾಮೀಜಿಗಳಿಗೆ ಆಮಂತ್ರಣ ಪತ್ರ ನೀಡಲು ಯೋಜಿಸಿದ್ದೆವು. ಸಮಯದ ಅಭಾವದಿಂದ ಎಲ್ಲರ ಭೇಟಿ ಸಾಧ್ಯವಾಗಿಲ್ಲ. ನಾಡಿನ ಎಲ್ಲ ಹರಗುರು ಚರಮೂರ್ತಿಗಳು, ಮಠಾಧೀಶರು, ಸ್ವಾಮೀಜಿಗಳು 9ರಂದು ಐತಿಹಾಸಿಕ ಅಭಿಮಾನೋತ್ಸವದಲ್ಲಿ ಪಾಲ್ಗೊಳ್ಳಬೇಕು ಎಂದು ವಿನಂತಿಸಿದರು. ಎಲ್ಲ ಸಮಾಜದ ಗುರುಗಳು ಬಂದು ಆಶೀರ್ವದಿಸಬೇಕೆಂದು ಮನವಿ ಮಾಡಿದರು. ಅಭಿಮಾನಿಗಳು ಆಗಮಿಸಲು 10 ಸಾವಿರ ಬಸ್ಸುಗಳನ್ನು ಬುಕಿಂಗ್ ಮಾಡಲಾಗಿದೆ. 45ರಿಂದ 50 ಸಾವಿರ ಕಾರು ಮತ್ತಿತರ ಚತುಶ್ಚಕ್ರ ವಾಹನಗಳು ಬರಲಿವೆ. ನಮ ನಿರೀಕ್ಷೆಗೂ ಮೀರಿ ಸ್ಪಂದನೆ ಲಭಿಸುತ್ತಿದೆ. ಸ್ವಾಮೀಜಿಗಳು, ದೊಡ್ಡ ಸಂಖ್ಯೆಯಲ್ಲಿ ಅಭಿಮಾನಿಗಳು ಬರಲಿದ್ದಾರೆ ಎಂದು ವಿಶ್ವಾಸವ್ಯಕ್ತಪಡಿಸಿದರು. ಮಾಜಿ ಡಿಸಿಎಂ ಮತ್ತು ಸಂಸದ ಗೋವಿಂದ ಕಾರಜೋಳ ಅವರು ಮಾತನಾಡಿ, ಬಿ.ಎಸ್.ಯಡಿಯೂರಪ್ಪ ಅವರ 50 ವರ್ಷಗಳ ಸಮಾಜಸೇವೆ, ಜೀವನಚರಿತ್ರೆಯನ್ನು ನಾವು ಐತಿಹಾಸಿಕ ನಗರ ಚಿತ್ರದುರ್ಗದಲ್ಲಿ ಒಂದು ಸಾಂಸ್ಕೃತಿಕ ಹಬ್ಬದ ರೀತಿಯಲ್ಲಿ ಆಚರಿಸಲು ನಿರ್ಧರಿಸಿದ್ದೇವೆ. ಅವರ ಜೀವನಚರಿತ್ರೆ ಮತ್ತು ಸದನದಲ್ಲಿ ಯಡಿಯೂರಪ್ಪನವರು ಎಂಬ ಸಂಬಂಧ ಕೆಂದಾವರೆ– ಕಮಲದಲ್ಲಿ ಅರಳಿದ ಹೂ, ಸದನದಲ್ಲಿ ಶಿಕಾರಿ ಎಂಬ 2 ಗ್ರಂಥಗಳನ್ನು ಅಂದು ಬಿಡುಗಡೆ ಮಾಡಲಾಗುವುದು ಎಂದರು.

8ರಂದು ಸಂಜೆ ಯಡಿಯೂರಪ್ಪನವರ ಪುರಪ್ರವೇಶ ನಡೆಯಲಿದೆ. ಇದನ್ನು ನಾಡಿನ ಸಾಂಸ್ಕೃತಿಕ ಹಬ್ಬದ ರೀತಿಯಲ್ಲಿ ಮಾಡಲು ತಯಾರಿ ಮಾಡಿದ್ದೇವೆ. 24 ಜಾನಪದ ಕಲಾತಂಡಗಳು ಮೆರವಣಿಗೆಯಲ್ಲಿ ಭಾಗವಹಿಸಲಿವೆ. ಎಲ್ಲರೂ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ಮನವಿ ಮಾಡಿದರು.



ಪಂಚರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ಪಕ್ಷದ ಗೆಲುವನ್ನು ಆಚರಿಸಲು ಚಿಕ್ಕಮಗಳೂರಿನಲ್ಲಿ ಬಿಜೆಪಿ ಕಾರ್ಯಕರ್ತರು ಬುಧವಾರ ಬೈಕ್ ರ‍್ಯಾಲಿ ನಡೆಸಿದರು.

## ಶ್ರಮಿಕ ವರ್ಗದಿಂದಲೇ ದೇಶದ ಪ್ರಗತಿ: ಡಾ.ಬೆಲ್ದಾಳೆ



**ಬೀದರ್, ಮೇ. 6:** ಕರುನಾಡು ಕಟ್ಟಡ ಹಾಗೂ ಇತರೆ ನಿರ್ಮಾಣ ಕಾರ್ಮಿಕರ ಮತ್ತು ಗಿಲಾವ್ ಕಾರ್ಮಿಕರ ಸಂಘದ ವತಿಯಿಂದ ವಿಶ್ವ ಕಾರ್ಮಿಕರ ದಿನವನ್ನು ನಗರದ ಜಿಲ್ಲಾ ರಂಗಮಂದಿರದಲ್ಲಿ ಆಚರಿಸಲಾಯಿತು.

ಶಾಸಕ ಡಾ. ಶೈಲೇಂದ್ರ ಕೆ. ಬೆಲ್ದಾಳೆ ಉದ್ಘಾಟಿಸಿ, 'ಶ್ರಮಿಕ ವರ್ಗದಿಂದಲೇ ಈ ದೇಶ ಪ್ರಗತಿಪಥದತ್ತ ನಡೆಯುತ್ತಿದೆ. ಅವರಿಗೆ ಗೌರವ ಸಲ್ಲಿಸುವುದು ಪ್ರತಿಯೊಬ್ಬರ ಕರ್ತವ್ಯ' ಎಂದು ಹೇಳಿದರು.

ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಕಲಬುರಗಿ ವಿಭಾಗೀಯ ಸಂಚಾಲಕ ಉಮೇಶಕುಮಾರ ಸೊರಳ್ಳಿಕರ, ಜಿಲ್ಲಾ ಕಾರ್ಮಿಕ ಅಧಿಕಾರಿ ಮಹೇಶ್, ಶಿವರಾಜ್ ತಡಪಳ್ಳಿ ಮತ್ತಿತರರು ಇದ್ದರು. ಸುನೀಲ್ ಕಡ್ಡೆ, ಶೇಷಪ್ಪ ಚಿಟ್ಟಾ, ಶಿವಾಜಿ ಮಾನಕರೆ ಅವರು ಕ್ರಾಂತಿ ಗೀತೆಗಳನ್ನು ಹಾಡಿದರು. ರಘುಪ್ರಿಯಾ ಹಾಸ್ಯ ಕಾರ್ಯಕ್ರಮ ನಡೆಸಿಕೊಟ್ಟರು. 50 ಕಾರ್ಮಿಕರು ಹಾಗೂ ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಉತ್ತಮ ಸಾಧನೆ ತೋರಿದ 100 ಕಾರ್ಮಿಕರ ಮಕ್ಕಳನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಕಾರ್ಮಿಕ ನಿರೀಕ್ಷಕಿ ಸುವರ್ಣಾ, ಮುಖಂಡರಾದ ಶಿವಕುಮಾರ ನೀಲಿಕಟ್ಟೆ, ಗುತ್ತೇದಾರ ಪ್ರಕಾಶ ಭಾವಿಕಟ್ಟಿ, ಗಾಲಿಬಾ ಹಶ್ಮಿ, ಅನ್ವುನ್ ವಾಲಿ, ಶ್ರೀಕಾಂತ್ ಭವಾನಿ, ರಘುಪ್ರಿಯಾ, ಬಸವರಾಜ ಜಡಗೆ, ಅವಿನಾಶ್ ಬುದೇರಕರ, ಮಹೇಶ್ ಗೋರನಾಳಕರ್, ನರಸಿಂಗ್, ತುಕಾರಾಮ್ ಗೌರೆ, ಸಿರಾಜೋದ್ದಿನ್,ಕರುನಾಡು ಕಟ್ಟಡ ಹಾಗೂ ಇತರೆ ನಿರ್ಮಾಣ ಗಿಲಾವ್ ಕಾರ್ಮಿಕರ ಸಂಘದ ರವಿಕುಮಾರ್ ಅಮಲಾಪುರ್, ನರಸಿಂಗ್ ಚಿದ್ರಿ, ಅಶೋಕ್, ಪ್ರವೀಣ, ರಮೇಶ್ ಅಮಲಾಪುರ್, ಸಾಧಕಲಿ, ಅನಿಲ್ ನೇಳಗೆ, ಭೀಮಶ್ಯಾ ತುಳಸಿರಾಮ್ ಚಿಟ್ಟಾ, ಭೀಮಾಶ ಮೀರಾಗಂಜ್, ಲಕ್ಷ್ಮಣ ಶಹಾಪುರ, ಮಹೇಶ್ ಮೈಲಾರೆ, ರೂಬಿನ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು. ರವಿಕುಮಾರ್ ಅಮಲಾಪುರ್ ಅಧ್ಯಕ್ಷತೆ ವಹಿಸಿದ್ದರು. ಸಾಹಿತಿ ಸುಬ್ಬಣ್ಣ ಕರಕನಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿದರು.

## ಅಧಿಕ ತಾಪಮಾನದ ನಡುವೆಯೂ ಗೋಕರ್ಣಕ್ಕೆ ಆಗಮಿಸುವ ಪ್ರವಾಸಿಗರ ದಂಡು




**ಗೋಕರ್ಣ, ಮೇ. 6:** ಅಧಿಕ ತಾಪಮಾನದ ನಡುವೆಯೂ ರಜೆಯಿಂದಾಗಿ ಗೋಕರ್ಣದತ್ತ ಪ್ರವಾಸಿಗರು ತಂಡೋಪತಂಡವಾಗಿ ಆಗಮಿಸುತ್ತಿದ್ದಾರೆ. ಬಹುತೇಕರು ಇಲ್ಲಿಯ ಬೀಚ್‌ಗಳಲ್ಲಿ ಸಮಯ ಕಳೆಯುವುದು ಹಾಗೇ ಬೋಟ್‌ನಲ್ಲಿ ತೆರಳಿ ಮೋಜು ಮಾಡುತ್ತಿದ್ದಾರೆ.

ತೀವ್ರ ಸೆಕೆಯಿಂದಾಗಿ ಮೈತುಂಬಾ ಬೆವರುವಂತಾಗಿದೆ. ಹೀಗಾಗಿ ಪ್ರವಾಸಿ ಬೋಟ್ ಮೂಲಕ ನದಿ ಹಾಗೂ ಸಮುದ್ರಗಳಿಗೆ ತೆರಳಿ ಅಲ್ಲಿ ಈಜಾಡುವುದು ಮಾಡುತ್ತಿದ್ದಾರೆ. ಹಾಗೇ ಎಳ ನೀರು, ತಂಪು ಪಾನೀಯ, ಕಲ್ಲಂಗಡಿ ಹಣ್ಣು ಸೇರಿದಂತೆ ವಿವಿಧ ಪಾನೀಯಗಳನ್ನು ಸೇವಿಸುತ್ತಿದ್ದಾರೆ. ದಶಕಗಳಲ್ಲಿ ಈ ವರ್ಷವೇ ಅತ್ಯಧಿಕ ತಾಪಮಾನ ಏರಿಕೆ ಕಂಡುಬಂದಿದೆ. ತಾಪಮಾನದಿಂದ ಬಳಲಿ ಬೆಂಡಾದ ಮನೆಯವರು ಈಗ ಏಸಿ ಮೊರೆ ಹೋಗಿದ್ದಾರೆ. ಇನ್ನು ಪ್ರವಾಸಿಗರು ಕೂಡ ವಸತಿಯನ್ನು ಎಸಿ ರೂಮನ್ನೇ ಆಯ್ಕೆ ಮಾಡಿಕೊಳ್ಳುತ್ತಿದ್ದಾರೆ. ಅಷ್ಟರಮಟ್ಟಿಗೆ ತಾಪಮಾನ ಏರಿಕೆಯಾಗಿದೆ. ಇನ್ನು ಭಕ್ತರು ಕೂಡ ಹೆಚ್ಚಿನ ಸಂಖ್ಯೆಯಲ್ಲಿ ಕಂಡುಬರುತ್ತಿದ್ದು ಸುಡುಬಿಸಿಲನ್ನು ಲೆಕ್ಕಿಸದೇ ದೇವರ ದರ್ಶನಕ್ಕೆ ಆಗಮಿಸುತ್ತಿದ್ದಾರೆ.

ಇನ್ನು ಕೆಲವರು ಇಲ್ಲಿಯ ತಾಪಮಾನವನ್ನು ತಿಳಿದು ಕರಾವಳಿಯತ್ತ ಬರದೇ ಬೇರೆ ಕಡೆ ಪ್ರವಾಸವನ್ನು ಕೈಗೊಂಡಿದ್ದಾರೆ. ಅಷ್ಟರಮಟ್ಟಿಗೆ ಇಲ್ಲಿ ಪ್ರವಾಸಿಗರನ್ನು ತಾಪಮಾನ ಕಾಡುತ್ತಿದೆ. ಇಲ್ಲಿ ಬಾಡಿಗೆಗೆ ಸಿಗುವ ದ್ವಿಚಕ್ರ ವಾಹನವನ್ನು ಪಡೆದು ಚಿಕ್ಕಪುಟ್ಟ ದಾರಿಯಿದ್ದರೂ ಆರಾಮಾಗಿ ಪ್ರವಾಸಿಗರು ಸಂಚರಿಸುತ್ತಿದ್ದಾರೆ. ಹಾಗೇ ಗಂಗಾವಳಿ–ಮಂಜಗುಣಿ ಸೇತುವೆ ನಿರ್ಮಾಣಗೊಂಡಿದ್ದರಿಂದಾಗಿ ಪ್ರವಾಸಿಗರಿಗೆ ಇನ್ನು ಅನುಕೂಲ ಉಂಟಾಗಿದೆ.

## ಸಾಹಿತಿ ಪ್ರೊ.ಎಸ್.ಜಿ.ಸಿದ್ಧರಾಮಯ್ಯಗೆ ಕಾಯಕಯೋಗಿ ಸಿದ್ಧರಾಮೇಶ್ವರ ಪ್ರಶಸ್ತಿ ಪ್ರದಾನ

**ಮೈಸೂರು, ಮೇ 6:** ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮೈಸೂರು ಜಿಲ್ಲಾಡಳಿತದ ವತಿಯಿಂದ ಮೈಸೂರಿನ ಕಲಾ ಮಂದಿರದಲ್ಲಿ ಆಯೋಜಿಸಿದ್ದ ಸಿದ್ಧರಾಮೇಶ್ವರ ಜಯಂತಿಯನ್ನು ಉದ್ಘಾಟಿಸಿ, ಹಿರಿಯ ಸಾಹಿತಿ ಪ್ರೊ.ಎಸ್.ಜಿ.ಸಿದ್ಧರಾಮಯ್ಯ ಅವರಿಗೆ 2025–26ನೇ ಸಾಲಿನ ಕಾಯಕಯೋಗಿ ಸಿದ್ಧ ರಾಮೇಶ್ವರ ಪ್ರಶಸ್ತಿ ನೀಡಿ ಗೌರವಿಸಿ, ಬಳಿಕ ಸಿದ್ಧರಾಮೇಶ್ವರರ ಕುರಿತು ಬರೆದಿರುವ 'ಸಿದ್ಧರಾಮ ಬೆಳ್ಳಿ ಕಿರಣ' ಪುಸ್ತಕವನ್ನು ಸಿಎಂ ಸಿದ್ದ ರಾಮಯ್ಯ ಲೋಕಾರ್ಪಣೆಗೊಳಿಸಿದರು.



ಭೋವಿ ಗುರುಪೀಠದ ಸಿದ್ಧರಾಮೇಶ್ವರ ಸ್ವಾಮೀಜಿಯವರ ಸಾನ್ನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ್.ಎಸ್. ತಂಗಡಗಿ, ಪಶುಸಂಗೋಪನೆ ಸಚಿವ ವೆಂಕಟೇಶ್, ಶಾಸಕರಾದ ಹರೀಶ್ ಗೌಡ, ಅನಿಲ್ ಚಿಕ್ಕ ಮಾದು, ವಿಧಾನ ಪರಿಷತ್ ಸದಸ್ಯರಾದ ಡಾ.ಯತೀಂದ್ರ ಸಿದ್ಧರಾಮಯ್ಯ, ಡಾ.ತಿಮ್ಮಯ್ಯ, ಭೋವಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ರಾಮಪ್ಪ, ಮೃಗಾಲಯ ಪ್ರಾಧಿಕಾರದ ಅಧ್ಯಕ್ಷ ಎನ್. ರಂಗಸ್ವಾಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಾರ್ಯದರ್ಶಿ ಯಾದ ಜೆ.ಮಂಜುನಾಥ್, ನಿರ್ದೇಶಕರಾದ ಮಂಜುನಾಥ್ ಸ್ವಾಮಿ, ಜಿಲ್ಲಾಧಿಕಾರಿ ಲಕ್ಷ್ಮೀಕಾಂತ್ ರೆಡ್ಡಿ ಹಾಗೂ ಇನ್ನಿತರೆ ಗಣ್ಯರು ಹಾಜರಿದ್ದರು.

### ಜು.15ರೊಳಗೆ ಕಡಂದಲೆ 400 ಕೆವಿ ವಿದ್ಯುತ್ ಉಪಕೇಂದ್ರ ಕಾಮಗಾರಿ ಪೂರ್ಣ

## ದ.ಕನ್ನಡ, ಉಡುಪಿ ಸೇರಿ ಕರಾವಳಿ ಜಿಲ್ಲೆಗಳಿಗೆ ತಡೆರಹಿತ ವಿದ್ಯುತ್ ಪೂರೈಕೆಗೆ ಕ್ರಮ: ಡಾ. ರಾಮ್ ಪ್ರಸಾತ್ ಮನೋಹರ್

**ಮಂಗಳೂರು, ಮೇ 6:** ದಕ್ಷಿಣ ಕನ್ನಡ ಹಾಗೂ ಉಡುಪಿ ಸೇರಿದಂತೆ ಕರಾವಳಿ ಭಾಗದ ಜಿಲ್ಲೆಗಳಿಗೆ ತಡೆರಹಿತ, ಉತ್ತಮ ಗುಣಮಟ್ಟದ ವಿದ್ಯುತ್ ಸೌಲಭ್ಯ ಒದಗಿಸುವ 'ಕಡಂದಲೆ 400 ಕೆವಿ ವಿದ್ಯುತ್ ಉಪಕೇಂದ್ರ' ಕಾಮಗಾರಿಯನ್ನು ಜುಲೈ 15ರ ಒಳಗಾಗಿ ಪೂರ್ಣಗೊಳಿಸಲಾಗುವುದು ಎಂದು ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ಡಾ. ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ.



ಭೂವ್ಯಾಜ್ಯದ ಕಾರಣದಿಂದಾಗಿ ಕಳೆದ ಮೂರು ವರ್ಷಗಳಿಂದ ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದರೆ ತಾಲ್ಲೂಕಿನ ಕಡಂದಲೆ ಗ್ರಾಮದಲ್ಲಿ 400 ಕೆವಿ ಲೈನ್ ಕಾಮಗಾರಿ ಸ್ಥಗಿತಗೊಂಡಿತ್ತು. ಇಂಧನ ಸಚಿವರಾದ ಕೆ.ಜೆ. ಜಾರ್ಜ್ ಹಾಗೂ ಇಂಧನ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ಅವರ ಸತತ ಪ್ರಯತ್ನದಿಂದಾಗಿ ಈ ಎಲ್ಲಾ ಅಡೆತಡೆಗಳನ್ನು ಯಶಸ್ವಿಯಾಗಿ ನಿವಾರಿಸಲಾಗಿದೆ ಎಂದು ತಿಳಿಸಿದ್ದಾರೆ.

ಸಚಿವರ ನಿರ್ದೇಶನದ ಮೇರೆಗೆ ಬುಧವಾರ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪ್ರಗತಿ ಪರಿಶೀಲಿಸಿ ಮಾತನಾಡಿದ ಅವರು, ಮಂಗಳೂರು ರಾಜ್ಯದ ಪ್ರಮುಖ ಕೈಗಾರಿಕಾ ಕೇಂದ್ರವಾಗಿದ್ದು, ತಡೆರಹಿತ ವಿದ್ಯುತ್ ಪೂರೈಕೆ ಅತ್ಯಗತ್ಯವಾಗಿದೆ. ಸಚಿವರ ನಿರ್ದೇಶನದಂತೆ ಮುಂಬರುವ ಮುಂಗಾರಿನೊಳಗೆ ಈ ಯೋಜನೆಯನ್ನು ಮುಕ್ತಾಯಗೊಳಿಸಿ ವಿದ್ಯುತ್ ಪ್ರಸರಣ ಕಾರ್ಯ ಆರಂಭಿಸಲಾಗುವುದು" ಎಂದು ತಿಳಿಸಿದರು.

ಪ್ರಮುಖ ಕೈಗಾರಿಕಾ ಹಬ್‌ಗಳಾಗಿರುವ ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಿಗೆ ನಿರಂತರ ವಿದ್ಯುತ್ ಒದಗಿಸುವ ಪ್ರಮುಖ ಯೋಜನೆ ಇದಾಗಿದೆ. ಮಳೆಗಾಲದಲ್ಲಿ ಎದುರಾಗುತ್ತಿದ್ದ ವೋಲ್ಟೇಜ್ ವ್ಯತ್ಯಯ ಮತ್ತು ಕಡಿಮೆ ವೋಲ್ಟೇಜ್ ಸಮಸ್ಯೆಗೆ ಈ ಉಪಕೇಂದ್ರ ಶಾಶ್ವತ ಮುಕ್ತಿ ನೀಡಲಿದೆ. ಅಲ್ಲದೆ, ಯಾವುದೇ ಒಂದು ಸ್ಟೇಷನ್ ವ್ಯಾಪ್ತಿಯಲ್ಲಿ ತಾಂತ್ರಿಕ ದೋಷ ಉಂಟಾದಾಗ, ಈ ಉಪಕೇಂದ್ರದ ಮೂಲಕ ಪರ್ಯಾಯವಾಗಿ ಲೋಡ್ ತೆಗೆದುಕೊಂಡು ತಕ್ಷಣವೇ ವಿದ್ಯುತ್ ಮರುಸಂಪರ್ಕ ಕಲ್ಪಿಸುವುದು ಸುಲಭವಾಗಲಿದೆ. ಇದರಿಂದ ಕರಾವಳಿಯ ಪ್ರಮುಖ ಜಿಲ್ಲೆಗಳಿಗೆ ಗುಣಮಟ್ಟದ ವಿದ್ಯುತ್ ಲಭ್ಯವಾಗಲಿದೆ", ಎಂದು ಹೇಳಿದ್ದಾರೆ.

ಕಾಮಗಾರಿಯನ್ನು ತ್ವರಿತವಾಗಿ ಮುಕ್ತಾಯಗೊಳಿಸುವ ನಿಟ್ಟಿನಲ್ಲಿ, ಹಾಲಿ ಇರುವ 400 ಕೆವಿ ಯುಪಿಸಿಎಲ್–ಹೆಬ್ಬನಹಳ್ಳಿ) ಪ್ರಸರಣ ಮಾರ್ಗದ ಮೇಲೆ ದಿ:6.52026ರಿಂದ 24.5.26 ರವರೆಗೆ ಮಾರ್ಗ ಮುಕ್ತತೆಯನ್ನು ಪಡೆಯಲು ನಿಗಮವು ನಿರ್ಧರಿಸಿದೆ. ಈ ಮಾರ್ಗ ಮುಕ್ತತೆಯ ಅವಧಿಯಲ್ಲಿ, ವಿದ್ಯುತ್ ಬೇಡಿಕೆಗೆ ಅನುಗುಣವಾಗಿ ಪ್ರಸರಣ ಮಾರ್ಗದ ಮೇಲಿನ ಒತ್ತಡ ನಿಭಾಯಿಸಿ ಪರ್ಯಾಯ ವಿದ್ಯುತ್ ಪೂರೈಸಲು ಕ್ರಮ ಕೈಗೊಳ್ಳಲಾಗಿದೆ. ಆದಾಗ್ಯೂ, ತಾಂತ್ರಿಕವಾಗಿ ಅನಿವಾರ್ಯವಾದರೆ ಮಾತ್ರ ಸೀಮಿತ ಅವಧಿಗೆ) ವಿದ್ಯುತ್ ಕಡಿತ ಮಾಡಬೇಕಾದ ಸನ್ನಿವೇಶ ಉಂಟಾಗಬಹುದು. ಮಂಗಳೂರಿನ ದೀರ್ಘಕಾಲೀನ ವಿದ್ಯುತ್ ಭದ್ರತೆಯ ಹಿತದೃಷ್ಟಿಯಿಂದ ನಡೆಯುತ್ತಿರುವ ಈ ಅಭಿವೃದ್ಧಿ ಕಾರ್ಯಕ್ಕೆ ಸಾರ್ವಜನಿಕರು ಹಾಗೂ ಗ್ರಾಹಕರು ಎಂದಿನಂತೆ ಸಹಕಾರ ನೀಡಬೇಕು" ಎಂದು ಡಾ. ರಾಮ್ ಪ್ರಸಾತ್ ಮನೋಹರ್ ಮನವಿ ಮಾಡಿದ್ದಾರೆ.

"ಕರಾವಳಿ ಭಾಗದ ಕೈಗಾರಿಕಾ ಬೆಳವಣಿಗೆ ಮತ್ತು ಸಾರ್ವಜನಿಕರ ಹಿತದೃಷ್ಟಿಯಿಂದ ನಿರಂತರ ವಿದ್ಯುತ್ ಪೂರೈಕೆ ನಮ್ಮ ಸರ್ಕಾರದ ಪ್ರಮುಖ ಆದ್ಯತೆಯಾಗಿದೆ. ಕೆಲವು ಕಾನೂನು ತೊಡಕುಗಳಿಂದ 400 ಕೆ.ವಿ ಲೈನ್ ಎಳೆಯುವ ಕಾರ್ಯದಲ್ಲಿ ವಿಳಂಬವಾಗಿತ್ತು. ಈ ಯೋಜನೆಯ ಅಡೆತಡೆಗಳನ್ನು ನಿವಾರಿಸಲು ಇಲಾಖೆ ವಿಶೇಷ ಮುತುವರ್ಜಿ ವಹಿಸಿದೆ. ಕಡಂದಲೆ ಉಪಕೇಂದ್ರವು ಮಂಗಳೂರು ಮತ್ತು ಉಡುಪಿ ಭಾಗಕ್ಕೆ ಅತ್ಯುತ್ತಮ ಗುಣಮಟ್ಟದ ವಿದ್ಯುತ್ ಸೌಲಭ್ಯವನ್ನು ಖಚಿತಪಡಿಸಲಿದೆ ಎಂದಿದ್ದಾರೆ.

## ಮನವಿಗೆ ಸ್ಪಂದಿಸಿ ಕಂಟೋನ್‌ಮೆಂಟ್, ರೈಲ್ವೆ ಗೇಟ್ ಬಳಿ ಗ್ರೀನ್‌ಮ್ಯಾಟ್ ಅಳವಡಿಸಿದ ಎಂ.ರಾಜೇಶ್ವರಿ

**ಬಳ್ಳಾರಿ, ಮೇ. 06:** ನಗರದಲ್ಲಿನ ಕಂಟೋನ್ಮೆಂಟ್ ಪ್ರದೇಶದ ರೈಲ್ವೆ ಗೇಟ್ ಬಳಿ ಬೇಸಿಗೆಯ ಬಿಸಿಲಿನ ತಾಪಮಾನ ಹೆಚ್ಚಾಗಿರುವ ಪ್ರಯುಕ್ತ ಪ್ರತಿ ಸಲ ರೈಲ್ವೆ ಗೇಟ್ ಮುಚ್ಚಿದಾಗ ಈ ಉರಿಬಿಸಿನಲ್ಲಿ ಟೂ ವೀಲರ್ ಮತ್ತು ಇತರ ವಾಹನಗಳವರು ಉರಿ ಬಿಸಿಲಿನಲ್ಲಿ ನಿಲ್ಲುತ್ತಿರುವುದನ್ನು ಗಮನಿಸಿ ನಗರದ ದುರ್ಗಮ್ಮ ಗುಡಿ ಸರ್ಕಲ್, ಸಂಗಮ್ ಸರ್ಕಲ್‌ನಲ್ಲಿ ಅಳವಡಿಸಿರುವಂತೆ ಇಲ್ಲಿಯೂ ಸಹ ಹಸಿರು ಪರದೆಯನ್ನು ಅಳವಡಿಸಲು ಮನವಿ ಮಾಡಿದ್ದರು.



ಇದಕ್ಕೆ ಸ್ಪಂದಿಸಿದ ಮಾಜಿ ಮಹಾಪೌರರು ಹಾಗೂ ಪಾಲಿಕೆ ಸದಸ್ಯೆ ಎಂ. ರಾಜೇಶ್ವರಿ ಸುಬ್ಬರಾಯುಡು ಪಾಲಿಕೆ ಅಧಿಕಾರಿಗಳಿಗೆ ಮನವಿ ಮಾಡಿದ್ದರು. ವರ ಮನವಿಗೆ ಸ್ಪಂದಿಸಿದ ಅಧಿಕಾರಿಗಳು ತುರ್ತಾಗಿ ಗ್ರೀನ್ ಮ್ಯಾಟ್ ಅಳವಡಿಕೆಗೆ ಕ್ರಮ ಕೈಗೊಂಡು ಪೂರ್ಣಗೊಳಿಸಿದ್ದು. ಇದರಿಂದ ವಾಹನ ಸವಾರರಿಗೆ ನೆರಳಿನ ವ್ಯವಸ್ಥೆಯಾಗಿದೆ. ಮಾಜಿ ಮೇಯರ್ ರಾಜೇಶ್ವರಿ ಅವರು ಕಾಳಜಿಗೆ ವಾಹನ ಸವಾರರು, ಸ್ಥಾನಿಕರು ಪ್ರಶಂಸೆಯನ್ನು ವ್ಯಕ್ತಪಡಿಸಿದ್ದಾರೆ

## 'ಬೆಂಕಿ ಬಿಸಿಲಾಗ ಹ್ಯಾಂಗ್ ಕೆಲ್ಸಾ ಮಾಡೋದು'



**ಬೀದರ್, ಮೇ. 6:** 'ಮನ್ಯಾಗ ಕೂಡ್ಲಾಕ್ ಆಗ್ತಾ ಇಲ್ರಿ, ಈ ಬೆಂಕಿ ಬಿಸಿಲಾಗ ಹ್ಯಾಂಗ್ ಕೆಲ್ಸ ಮಾಡೋದು?. ಆದರೆ ಹೊಟ್ಟಿ ಪಡು ಕೇಳ್ಬೇಕಲ್ಲ. ಮನೆಯಲ್ಲಿ ಹೆಂಡತಿ ಮಕ್ಕಳಿದ್ದಾರೆ. ಅವರ ಹೊಟ್ಟೆ ತುಂಬಿಸಲು ಈ ಬಿಸಿಲಲ್ಲಿ ಕೆಲ್ಸಾ ಮಡಲೇಬೇಕಲ್ರೀ...' ಹೀಗೆಂದವರು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ (ಮನರೇಗಾ) ಕೂಲಿ ಕಾರ್ಮಿಕರು.

ಬೀದರ್ ತಾಲ್ಲೂಕಿನ ಕಮಠಾಣ ಗ್ರಾಮದಲ್ಲಿ ಉದ್ಯೋಗ ಖಾತ್ರಿ ಯೋಜನೆಯಡಿ ನಾಲಾ ಬದು ನಿರ್ಮಿಸುವ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆ.

ಬೆಳಿಗ್ಗೆ ಸ್ಥಳಕ್ಕೆ ಭೇಟಿ ನೀಡಿದಾಗ, ಇನ್ನೂ ಕೂಲಿ ಕಾರ್ಮಿಕರ ಡಿಜಿಟಲ್ ಹಾಜರಾತಿ ಪ್ರಕ್ರಿಯೆಯೇ ಕೊನೆಗೊಂಡಿರಲಿಲ್ಲ. ಕೆಲವು ಮಹಿಳೆಯರು ರಸ್ತೆಬದಿ ಮರದಡಿಯ ನೆರಳಿನಲ್ಲಿ ಕುಳಿತುಕೊಂಡರೆ, ಮತ್ತೆ ಕೆಲವರು ಡಿಜಿಟಲ್ ಹಾಜರಾತಿಗಾಗಿ ಸರತಿ ಸಾಲಿನಲ್ಲಿ ನಿಂತುಕೊಂಡಿದ್ದರು.

ಬಿರು ಬೇಸಿಗೆಯ ಕಡು ಬಿಸಿಲಿದ್ದರೂ ಹಾಜರಾತಿ ಪಡೆಯಲು ನಿರ್ದಿಷ್ಟ ಸ್ಥಳವೇ ಗುರುತಿಸಿರಲಿಲ್ಲ. ಆದಕಾರಣ ರಸ್ತೆ ಬದಿಯಲ್ಲಿಯೇ ನಿಂತುಕೊಂಡು ಕಾರ್ಮಿಕರ ಹಾಜರಾತಿ ಪಡೆಯಲಾಗುತ್ತಿತ್ತು.

'ನ್ಯಾಷನಲ್ ಮೊಬೈಲ್ ಮಾನಿಟರಿಂಗ್ ಸಿಸ್ಟಂ' (ಎನ್‌ಎಂಎಂಎಸ್) ಮೂಲಕ ಡಿಜಿಟಲ್ ಹಾಜರಾತಿ ಪಡೆಯಲಾ ಗುತ್ತಿದ್ದು, ಅದರಲ್ಲಿ ತಾಂತ್ರಿಕ ಸಮಸ್ಯೆ ಕಾಣಿಸಿಕೊಂಡು ಸಾಕಷ್ಟು ವಿಳಂಬವಾಗಿತ್ತು. ಇದು ನಿತ್ಯದ ಗೋಳೆಂದು ಕಾರ್ಮಿಕರು ಹೇಳಿದರು.

## ಕೃಷಿ ಉತ್ಪನ್ನ ಮಾರುಕಟ್ಟೆ, ಜಾಗದ ಕೊರತೆ: ಒಂದು ದಿನ ಖರೀದಿ ಸ್ಥಗಿತ

**ರಾಯಚೂರು, ಮೇ. 6:** ಹದಿನೈದು ದಿನಗಳ ಅವಧಿಯಲ್ಲಿ ಕರ್ನಾಟಕದಿಂದ ಒಂದೇ ಒಂದು ಚೀಲ ಇಲ್ಲಿಯ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮಾರುಕಟ್ಟೆಗೆ ಭತ್ತ ಬಂದಿಲ್ಲ. ಆದರೆ, ಪಕ್ಕದ ತೆಲಂಗಾಣ, ಆಂಧ್ರ ಪ್ರದೇಶದಿಂದ ಭಾರಿ ಪ್ರಮಾಣದಲ್ಲಿ ಭತ್ತ ಆವಕವಾಗಿದೆ. ಎಪಿಎಂಸಿಯ ಸಂಪೂರ್ಣ ಆವರಣ ಭತ್ತದ ಚೀಲಗಳಿಂದ ತುಂಬಿದ್ದು, ಜಾಗದ ವ್ಯವಸ್ಥೆಗಾಗಿ ಒಂದು ದಿನದ ಮಟ್ಟಿಗೆ ಭತ್ತ ಖರೀದಿ ಸ್ಥಗಿತಗೊಳಿಸಲಾಗಿದೆ.



ರಾಯಚೂರು ಎಪಿಎಂಸಿಗೆ ಇಂದು ಒಂದೇ ದಿನದಲ್ಲಿ 63,746 ಚೀಲ ಸಣ್ಣ ಭತ್ತ ಬಂದಿದೆ. ಏಪ್ರಿಲ್ 23ರಂದು 62,109 ಚೀಲ, ಏಪ್ರಿಲ್ 27ರಂದು 61,197 ಚೀಲ, ಏ. 30ರಂದು 63,120 ಚೀಲ, ಏ. 2ರಂದು 65,855 ಚೀಲ ಸಣ್ಣ ಭತ್ತ ನೆರೆಯ ರಾಜ್ಯಗಳಿಂದಲೇ ಬಂದಿದೆ.

ಎಪಿಎಂಸಿ ಅಧಿಕಾರಿಗಳು ನಿತ್ಯ ಟೆಂಡರ್ ಕರೆದು ಎತ್ತುವಳಿ ಮಾಡುತ್ತಿದ್ದರೂ ಜಾಗದ ಕೊರತೆ ಉಂಟಾಗುತ್ತಿದೆ. ಇಲ್ಲಿರುವ ಎಲ್ಲ ಗೋದಾಮುಗಳು ತುಂಬಿವೆ. ಶೆಡ್‌ಗಳಲ್ಲಿ ಹಾಗೂ ರಸ್ತೆಯ ಮೇಲೆ ಸಾವಿರಾರು ಚೀಲಗಳನ್ನು ಸಂಗ್ರಹಿಸಿ ಇಡಲಾಗಿದೆ. ಭತ್ತ ಹೊತ್ತ ಲಾರಿಗಳು ರಸ್ತೆ ಬದಿಯಲ್ಲಿ ಸಾಲಾಗಿ ನಿಂತಿವೆ.

ಮಂಗಳವಾರ ಭತ್ತ ಪ್ರತಿ ಕ್ವಿಂಟಲ್‌ಗೆ ಕನಿಷ್ಠ 1,998, ಗರಿಷ್ಠ 2,626, ಮಾದರಿ ಭತ್ತ 2,392ಕ್ಕೆ ಮಾರಾಟವಾಗಿದೆ. ಭತ್ತ ಬೆಳೆದ ರೈತರಿಗೆ ಉತ್ತಮ ಬೆಲೆ ಸಿಗುವ ಕಾರಣ ನೆರೆಯ ರಾಜ್ಯಗಳ ರೈತರು ರಾಯಚೂರಿಗೆ ಬಂದು ಮಾರಾಟ ಮಾಡಲು ಹೆಚ್ಚು ಆಸಕ್ತಿ ತೋರಿಸುತ್ತಿದ್ದಾರೆ' ಎಂದು ನೆರೆಯ ತೆಲಂಗಾಣದ ರೈತ ಆಂಜನೇಯಲು ಹೇಳುತ್ತಾರೆ.

ಜಿಲ್ಲೆಯಿಂದ ಒಂದೂ ಚೀಲ ಭತ್ತ ಬಂದಿಲ್ಲ: ಸೋಮವಾರ ಒಂದೇ ದಿನ ನೆರೆಯ ತೆಲಂಗಾಣ ಹಾಗೂ ಆಂಧ್ರ ಪ್ರದೇಶದಿಂದ 63746 ಚೀಲ ಭತ್ತ ರಾಯಚೂರು ಎಪಿಎಂಸಿಗೆ ಬಂದಿದೆ. 15 ದಿನಗಳಿಂದ ಕರ್ನಾಟಕದ ರಾಜ್ಯದ ಯಾವುದೇ ಮೂಲೆಯಿಂದಲೂ ಭತ್ತ ಬಂದಿಲ್ಲ' ಎನ್ನುತ್ತಾರೆ ಎಪಿಎಂಸಿ ಕಾರ್ಯದರ್ಶಿ ಆದಪ್ಪ.

20 ದಿನಗಳಿಂದ ನಿತ್ಯ ಸರಾಸರಿ 60 ಸಾವಿರದಿಂದ 63 ಸಾವಿರ ಭತ್ತದ ಚೀಲಗಳು ಬರುತ್ತಿವೆ. ಜಾಗದ ಕೊರತೆಯಿಂದ ಮಂಗಳವಾರ ಒಂದು ದಿನ ಭತ್ತ ಖರೀದಿ ಸ್ಥಗಿತಗೊಳಿಸಲಾಗಿದೆ. ಬುಧವಾರ ಖರೀದಿ ಪ್ರಕ್ರಿಯೆ ಎಂದಿನಂತೆ ಮುಂದುವರಿದಿದೆ.

ರಾಯಚೂರಲ್ಲಿ ಒಳ್ಳೆಯ ಸೌಲಭ್ಯವಿರುವುದರಿಂದ ಹಾಗೂ ರೈತರಿಗೆ ತಕ್ಷಣ ಹಣ ಪಾವತಿಯಾಗುವ ಕಾರಣ ನೆರೆಯ ರಾಜ್ಯಗಳ ರೈತರು ಭತ್ತ ಮಾರಾಟಕ್ಕೆ ನಮ್ಮಲ್ಲಿಗೆ ಬರುತ್ತಿದ್ದಾರೆ ಎಂದು ತಿಳಿಸಿದ್ದಾರೆ.

## ಬೆಳೆ ವಿಮಾ ಕಂಪನಿಯಿಂದ ಬಡ್ಡಿ ಸಮೇತ ವಿಮೆ ಹಣ ವಸೂಲು...!

**ಕಲಬುರಗಿ, ಮೇ. 6:** ಸಂಪೂರ್ಣ ಬೆಳೆ ಹಾನಿಯಾಗಿದ್ದು, ಬೆಳೆವಿಮೆ ಮಾಡಿಸಿದರೂ ಬೆಳೆವಿಮೆ ಮಂಜೂ ರಾಗದ ಕಾರಣ ರೈತ ಮಹಿಳೆಯೊಬ್ಬರು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಮೊರೆ ಹೋಗಿದ್ದು, ಬಡ್ಡಿ ಸಮೇತ ಬೆಳೆವಿಮೆ ಮೊತ್ತ ಒದಗಿಸಲು ಆಯೋಗವು ಆದೇಶಿಸಿದೆ.



ಜಿಲ್ಲೆಯ ಕಮಲಾಪುರ ತಾಲ್ಲೂಕಿನಲ್ಲಿರುವ ಗೋಣಗಿ ಗ್ರಾಮದ ರೈತ ಮಹಿಳೆ ಶೀಲಾದೇವಿ ಶಿವರಾಜ ಪಾಟೀಲ ಅವರು, 2023–2024ನೇ ಸಾಲಿನಲ್ಲಿ ತಮ್ಮ ಜಮೀನಿನಲ್ಲಿ ಬೆಳೆದ ತೊಗರಿ ಹಾಗೂ ಸೋಯಾ ಬೀನ್ ಬೆಳೆ ಸಂಪೂರ್ಣ ನಾಶವಾಗಿತ್ತು. ಆ ಸಂದರ್ಭದಲ್ಲಿ ಯುನಿವರ್ಸಲ್ ಸೋಂಪೊ ಜನರಲ್ ಇನ್ಶೂರೆನ್ಸ್ ಕಂಪನಿಯಲ್ಲಿ ಬೆಳೆ ವಿಮೆ ಮಾಡಿಸಿದ್ದರು. 8 ಎಕರೆ ಸೋಯಾಬಿನ್ ಬೆಳೆಗೆ 2,590, 4.22 ಎಕರೆ ತೊಗರಿ ಬೆಳೆಗೆ 1,251 ಬೆಳೆ ವಿಮೆ ಕಂತುಗಳನ್ನು 2022ರ ಜುಲೈ 22ರಂದು ಭರಿಸಿದ್ದರು. ಆ ವರ್ಷ ಸುರಿದ ಭಾರಿ ಮಳೆಯಿಂದ ಸೋಯಾಬಿನ್ ನಷ್ಟವಾಯಿತು. ನಂತರ ತೇವಾಂಶ ಕೊರತೆಯಿಂದ ತೊಗರಿ ಬೆಳೆ ಕೂಡ ನಾಶವಾಗಿತ್ತು.

ಬೆಳೆ ವಿಮೆ ಮಂಜೂರು ಮಾಡದ ವಿಮೆ ಕಂಪನಿ ವಿರುದ್ಧ ಕಲಬುರಗಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ ಶೀಲಾದೇವಿ ದಾವೆ ಹೂಡಿದ್ದರು. ತೊಗರಿ ಬೆಳೆಗೆ 1,29,504, ಸೋಯಾಬೀನ್ ಬೆಳೆಗೆ 62,594 ಮೊತ್ತವನ್ನು ಆದೇಶದ ದಿನಾಂಕದಿಂದ ದೂರುದಾರರಿಗೆ ಮೊತ್ತ ತಲುಪುವವರೆಗೆ ವಾರ್ಷಿಕ ಶೇ 9ರ ಬಡ್ಡಿಯೊಂದಿಗೆ ಪಾವತಿಸಬೇಕು. ಅಲ್ಲದೆ ಮೊಕದ್ದಮೆಯ ವೆಚ್ಚ 10 ಸಾವಿರ ಹಣ ಪಾವತಿಸುವಂತೆ ಆಯೋಗ ಆದೇಶಿಸಿತ್ತು. ಆಯೋಗದ ಅಧ್ಯಕ್ಷೆ ಮಾಲತಿ ಗುರಣ ಅವರು ಏ.28ರಂದು ಶೀಲಾದೇವಿ ಅವರಿಗೆ 2,19,387 ಮೊತ್ತದ ಚೆಕ್ ಒದಗಿಸಿದ್ದಾರೆ. ಶೀಲಾದೇವಿ ಪರವಾಗಿ ವಕೀಲ ವಿಜಯಕುಮಾರ ರಾಠೋಡ ವಾದ ಮಂಡಿಸಿದ್ದರು.


ರೈತ ಮಹಿಳೆ ವಿಮಾ ಕಂಪನಿ ಯವರಿಗೆ ಮೊಬೈಲ್ ಕರೆ ಮಾಡಿ ಎರಡು ಬಾರಿ ದೂರು ದಾಖಲಿಸಿದ್ದರು. ಎರಡು ಬಾರಿ ಲೀಗಲ್ ನೋಟಿಸ್ ನೀಡಲಾಗಿತ್ತು. ಯಾವುದಕ್ಕೂ ಸ್ಪಂದಿಸದಿರುವುದಕ್ಕೆ ಗ್ರಾಹಕರ ಆಯೋಗದಲ್ಲಿ ಅವರು ದಾವೆ ಹೂಡಿದ್ದರು. ಕೊನೆಗೆ ಬಡ್ಡಿ ಸಮೇತ ತಮ್ಮ ವಿಮೆ ಹಣ ಪಡೆಯುವಲ್ಲಿ ಶೀಲಾದೇವಿ ಯಶಸ್ವಿಯಾಗಿದ್ದಾರೆ.

# 2030ರ ವೇಳೆಗೆ 25 ಶತಕೋಟಿ ಡಾಲರ್ ವ್ಯಾಪಾರ ಗುರಿ: ಪ್ರಧಾನಿ ಮೋದಿ

## ಭಾರತ-ವಿಯೆಟ್ನಾಂ ನಡುವೆ 18 ಪ್ರಮುಖ ಫಲಿತಾಂಶಗಳ ಅನಾವರಣ, 13 ಒಪ್ಪಂದಗಳ ಮಹತ್ವಾಕಾಂಕ್ಷೆಯ ಯೋಜನೆಗೆ ಸಹಿ

**ನವದೆಹಲಿ, ಮೇ 6:** ಭಾರತ ಮತ್ತು ವಿಯೆಟ್ನಾಂ ನಡುವಿನ ಸಂಬಂಧವನ್ನು ವರ್ಧಿತ ಸಮಗ್ರ ವ್ಯೂಹಾತ್ಮಕ ಪಾಲುದಾರಿಕೆಗೆ ಏರಿಸುವುದು ಮತ್ತು 2020ರ ವೇಳೆಗೆ ವ್ಯಾಪಾರವನ್ನು 25 ಶತಕೋಟಿ ಡಾಲರ್‌ಗೆ ಹೆಚ್ಚಿಸುವ ಮಹತ್ವಾಕಾಂಕ್ಷೆಯ ಯೋಜನೆಯಾಗಿದೆ ಎಂದು ಪ್ರಧಾನಿ ಮೋದಿ ಹೇಳಿದರು.

ಪ್ರಧಾನಿ ನರೇಂದ್ರ ಮೋದಿ ಮತ್ತು ವಿಯೆಟ್ನಾಂ ಅಧ್ಯಕ್ಷ ತೋ ಲಾಮ್ ನಡುವೆ ಬುಧವಾರ ಮಾತುಕತೆ ನಡೆದು 18 ಪ್ರಮುಖ ಫಲಿತಾಂಶಗಳನ್ನು ಪ್ರಕಟಿಸಲಾಗಿದೆ. ಇದರಲ್ಲಿ ನಿರ್ಣಾಯಕ ಖನಿಜಗಳು, ಅಪರೂಪದ ಭೂಮಿಯ ಮೂಲಧಾತುಗಳು (rare earths), ಇಂಧನ ಭದ್ರತೆ, ರಕ್ಷಣೆ ಮತ್ತು ಡಿಜಿಟಲ್ ತಂತ್ರಜ್ಞಾನಗಳಂತಹ ಆಯಕಟ್ಟಿನ ವಲಯಗಳಲ್ಲಿ ಸಹಕಾರದ ವಿಸ್ತರಣೆ, ಹಣಕಾಸು, ಆರೋಗ್ಯ, ಶಿಕ್ಷಣ ಮತ್ತು ಸಂಸ್ಕೃತಿಯಲ್ಲಿಯೂ ಪರಸ್ಪರ ತೊಡಗಿಸಿಕೊಳ್ಳಲು ನಿರ್ಧರಿಸಲಾಗಿದೆ.



ಮಾತುಕತೆ ನಂತರ ಜಂಟಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ಮೋದಿ, ಭವಿಷ್ಯದ ಆರ್ಥಿಕ ಬೆಳವಣಿಗೆಗೆ ಪೂರಕವಾದ ಪ್ರಮುಖ ವಲಯಗಳಲ್ಲಿ ಉಭಯ ದೇಶಗಳು ಸಹಯೋಗವನ್ನು ಹೆಚ್ಚಿಸಲಿವೆ ಮತ್ತು 2030ರ ವೇಳೆಗೆ ದ್ವಿಪಕ್ಷೀಯ ವ್ಯಾಪಾರದಲ್ಲಿ 25 ಶತಕೋಟಿ ಡಾಲರ್ ಗುರಿಯನ್ನು ತಲುಪಲಿವೆ ಎಂದು ಹೇಳಿದರು.

ಈ ಭೇಟಿಯು ದ್ವಿಪಕ್ಷೀಯ ಬಾಂಧವ್ಯವನ್ನು "ವರ್ಧಿತ ಸಮಗ್ರ ವ್ಯೂಹಾತ್ಮಕ ಪಾಲುದಾರಿಕೆ"ಗೆ ಏರಿಸುವ ಮೂಲಕ ಸಂಬಂಧದ ವ್ಯಾಪ್ತಿ ಮತ್ತು ಆಳವನ್ನು ಹೆಚ್ಚಿಸಿದೆ. ವಿಯೆಟ್ನಾಂ 'ಇಂಡೋ-ಪೆಸಿಫಿಕ್ ಸಾಗರಗಳ ಉಪಕ್ರಮ'ಕ್ಕೆ ಸೇರಲು ಒಪ್ಪಿಕೊಂಡಿದ್ದು, ಇದು ಪ್ರಾದೇಶಿಕ ಕಡಲ ಸಹಕಾರದಲ್ಲಿ ಉಭಯ ದೇಶಗಳ ನಡುವಿನ ಒಮ್ಮತವನ್ನು ಎತ್ತಿ ತೋರಿಸುತ್ತದೆ.

ಡಿಜಿಟಲ್ ತಂತ್ರಜ್ಞಾನಗಳು, ಔಷಧ ನಿಯಂತ್ರಣ, ಪ್ರವಾಸೋದ್ಯಮ, ಸಂಸ್ಕೃತಿ, ಶಿಕ್ಷಣ, ಸಾರ್ವಜನಿಕ ಲೆಕ್ಕಪರಿಶೋಧನಾ ವ್ಯವಸ್ಥೆಗಳು ಮತ್ತು ಹಣಕಾಸು ಸಹಕಾರ ಸೇರಿದಂತೆ ವಿವಿಧ ವಲಯಗಳಲ್ಲಿ ಒಟ್ಟು 13 ತಿಳುವಳಿಕಾ ಒಪ್ಪಂದಗಳಿಗೆ ಸಹಿ ಹಾಕಲಾಯಿತು.

### ಪ್ರಮುಖ ಒಪ್ಪಂದಗಳು

- ಅಪರೂಪದ ಮೂಲಧಾತುಗಳು: ಭಾರತದ ಐಆರ್‌ಇಎಲ್ ಮತ್ತು ವಿಯೆಟ್ನಾಂನ ಐಟಿಆರ್‌ಆರ್‌ಇ ನಡುವೆ ಅಪರೂಪದ ಭೂಮಿಯ ಮೂಲಧಾತುಗಳ ಕ್ಷೇತ್ರದಲ್ಲಿ ಸಹಕಾರ ವಿಸ್ತರಿಸಲು ಒಪ್ಪಂದ
- ಭಾರತೀಯ ರಿಸರ್ವ್ ಬ್ಯಾಂಕ್ ಮತ್ತು ವಿಯೆಟ್ನಾಂ ಸ್ಟೇಟ್ ಬ್ಯಾಂಕ್ ನಡುವೆ ಡಿಜಿಟಲ್ ಪಾವತಿ ಮತ್ತು ನಾವೀನ್ಯತೆಗಾಗಿ ಒಪ್ಪಂದ ಏರ್ಪಟ್ಟಿದೆ. ಎನ್‌ಪಿಸಿಐ ಮತ್ತು ವಿಯೆಟ್ನಾಂನ ನ್ಯಾಪಾಸ್ ನಡುವಿನ ಒಪ್ಪಂದವು ಕ್ರಾಸ್ ಬಾರ್ಡರ್ ಕ್ಯೂಆರ್ ಕೋಡ್ ಮೂಲಕ ಸುಲಭ ಪಾವತಿಗೆ ಅವಕಾಶ ನೀಡಲಿದೆ
- ಆರೋಗ್ಯ ಮತ್ತು ಶಿಕ್ಷಣ: ಔಷಧಗಳು, ವೈದ್ಯಕೀಯ ಉಪಕರಣಗಳ ನಿಯಂತ್ರಣದಲ್ಲಿ ಸಹಕಾರ ಹಾಗೂ ನಲಂದಾ ವಿಶ್ವವಿದ್ಯಾಲಯದ ಮೂಲಕ ಸಾಮರ್ಥ್ಯ ವೃದ್ಧಿ ಮತ್ತು ಭಾರತೀಯ ಅಧ್ಯಯನ ಕಾರ್ಯಕ್ರಮಗಳಿಗೆ ಚಾಲನೆ ನೀಡಲು ನಿರ್ಧಾರ
- ಬೃಹನ್ಮುಂಬೈ ಮಹಾನಗರ ಪಾಲಿಕೆ ಮತ್ತು ಹೋ ಚಿ ಮಿನ್ ಸಿಟಿ ಪೀಪಲ್ಸ್ ಕಮಿಟಿ ನಡುವೆ ನಗರ ನಿರ್ವಹಣೆ ಮತ್ತು ಆರ್ಥಿಕ ಅಭಿವೃದ್ಧಿಯ ಕುರಿತು ಒಪ್ಪಂದ
- ಕೃಷಿ ಉತ್ಪನ್ನಗಳ ವ್ಯಾಪಾರಕ್ಕೆ ಉತ್ತೇಜನ ನೀಡಲಾಗುತ್ತಿದ್ದು, ಭಾರತೀಯ ದ್ರಾಕ್ಷಿಗಳನ್ನು ವಿಯೆಟ್ನಾಂಗೆ ಮತ್ತು ವಿಯೆಟ್ನಾಂನ 'ಡುರಿಯನ್' ಹಣ್ಣನ್ನು ಭಾರತಕ್ಕೆ ರಫ್ತು ಮಾಡಲು ಕ್ರಮ ಇದಲ್ಲದೆ, ಪ್ರವಾಸೋದ್ಯಮ ಮತ್ತು ಸಾಂಸ್ಕೃತಿಕ ವಿನಿಮಯವನ್ನು ಉತ್ತೇಜಿಸಲು ವಿಯೆಟ್ನಾಂನ ಯುನೆಸ್ಕೋ ವಿಶ್ವ ಪರಂಪರೆಯ ತಾಣವಾದ 'ಮೈ ಸನ್' (ಒಥಿ ಖಠಟ) ನಲ್ಲಿ 'ಸೈಟ್ ಇಂಟರ್ಪ್ರಿಟೇಶನ್ ಸೆಂಟರ್' ಸ್ಥಾಪಿಸಲು ಎರಡೂ ಕಡೆ ಒಪ್ಪಿಗೆ ಸೂಚಿಸಲಾಗಿದೆ.

# ಅಮೆರಿಕದಲ್ಲಿ 20.5 ಶತಕೋಟಿ ಡಾಲರ್ ಹೂಡಿಕೆಗೆ ಭಾರತೀಯ ಕಂಪನಿಗಳ ಘೋಷಣೆ

**ನವದೆಹಲಿ, ಮೇ 6:** ಮೇರಿಲ್ಯಾಂಡ್‌ನಲ್ಲಿ ನಡೆದ Select USA ಹೂಡಿಕೆ ಶೃಂಗಸಭೆ 2026ರಲ್ಲಿ ಪ್ರಮುಖ ಭಾರತೀಯ ಕಂಪನಿಗಳು ಅಮೆರಿಕಾದಲ್ಲಿ ದಾಖಲೆಯ 20.5 ಶತಕೋಟಿ ಅಮೆರಿಕನ್ ಡಾಲರ್ ಹೂಡಿಕೆ ಮಾಡುವುದಾಗಿ ಘೋಷಿಸಿವೆ. ಇದು ಈ ವೇದಿಕೆಯಲ್ಲಿ ಭಾರತದ ಇದುವರೆಗಿನ ಅತಿದೊಡ್ಡ ಹೂಡಿಕೆಯಾಗಿದ್ದು, ಉಭಯ ದೇಶಗಳ ನಡುವಿನ ಆಳವಾದ ಆರ್ಥಿಕ ಸಂಬಂಧಗಳನ್ನು ಎತ್ತಿ ತೋರಿಸುತ್ತದೆ.



ಈ ಹೂಡಿಕೆಗಳು ಔಷಧ (ಫಾರ್ಮಾಸ್ಯುಟಿಕಲ್ಸ್), ಸುಧಾರಿತ ಉತ್ಪಾದನೆ, ಇಂಧನ ಮೂಲಸೌಕರ್ಯ ಮತ್ತು ಉದಯೋನ್ಮುಖ ತಂತ್ರಜ್ಞಾನಗಳಂತಹ ಪ್ರಮುಖ ವಲಯಗಳನ್ನು ಒಳಗೊಂಡಿವೆ. ಇದು ಎರಡೂ ದೇಶಗಳಲ್ಲಿ ಸಾವಿರಾರು ಉದ್ಯೋಗಗಳನ್ನು ಸೃಷ್ಟಿಸುವ ನಿರೀಕ್ಷೆಯಿದೆ ಮತ್ತು ಅಮೆರಿಕಾದಲ್ಲಿ ಉತ್ಪಾದನೆ ಹಾಗೂ ಜಂಟಿ ನಾವೀನ್ಯತೆ ಸಾಮರ್ಥ್ಯವನ್ನು ವಿಸ್ತರಿಸಲಿದೆ.

ಒಟ್ಟು ಹೂಡಿಕೆಯಲ್ಲಿ ಸಿಂಹಪಾಲು ಎಂದರೆ 19.1 ಶತಕೋಟಿ ಡಾಲರ್‌ಗಿಂತಲೂ ಹೆಚ್ಚು ಮೊತ್ತವು ಭಾರತದ ಔಷಧ ವಲಯದಿಂದ ಬಂದಿದೆ. ಇದು ಅಮೆರಿಕಾದಲ್ಲಿ ಉತ್ಪಾದನಾ ವಿಸ್ತರಣೆ, ಸಂಶೋಧನೆ ಮತ್ತು ಅಭಿವೃದ್ಧಿ ಹಾಗೂ ಹೊಸ ಸೌಲಭ್ಯಗಳನ್ನು ಗುರಿಯಾಗಿಸಿಕೊಂಡಿದೆ. ಉಕ್ಕು, ಸಂಪರ್ಕ ಮತ್ತು ಇಂಧನ ಪೂರೈಕೆ ಸರಪಳಿಗಳಲ್ಲಿನ ಹೆಚ್ಚುವರಿ ಹೂಡಿಕೆಗಳು ಕೈಗಾರಿಕಾ ಸಾಮರ್ಥ್ಯವನ್ನು ಬಲಪಡಿಸುವ ಮತ್ತು ಸ್ಥಿತಿಸ್ಥಾಪಕ ಪೂರೈಕೆ ಜಾಲಗಳನ್ನು ನಿರ್ಮಿಸುವ ಗುರಿಯನ್ನು ಹೊಂದಿವೆ.

ಪ್ರತ್ಯೇಕವಾಗಿ, 12 ಭಾರತೀಯ ಕಂಪನಿಗಳು ವಿವಿಧ ಅಮೆರಿಕನ್ ರಾಜ್ಯಗಳಲ್ಲಿ 1.1 ಶತಕೋಟಿ ಡಾಲರ್‌ಗಿಂತಲೂ ಹೆಚ್ಚು ಮೊತ್ತದ ಗ್ರೀನ್‌ಫೀಲ್ಡ್ ಮತ್ತು ವಿಸ್ತರಣಾ ಯೋಜನೆಗಳನ್ನು ಘೋಷಿಸಿವೆ. ಇವು ಉತ್ಪಾದನೆ, ತಂತ್ರಜ್ಞಾನ ಮತ್ತು ಎಂಜಿನಿಯರಿಂಗ್ ಕ್ಷೇತ್ರಗಳಲ್ಲಿ ಉದ್ಯೋಗಗಳನ್ನು ಬೆಂಬಲಿಸಲಿವೆ. ಈ ಒಟ್ಟಾರೆ ಘೋಷಣೆಗಳು ಖಜಟಜಥಿಣಗಖಂ ನಲ್ಲಿ ಈ ಹಿಂದಿನ ಎಲ್ಲಾ ಭಾರತೀಯ ಹೂಡಿಕೆಗಳನ್ನು ಮೀರಿಸಿವೆ ಮತ್ತು ಈ ವರ್ಷದ ಶೃಂಗಸಭೆಯಲ್ಲಿ ಯಾವುದೇ ದೇಶ ಮಾಡಿದ ಅತಿ ಹೆಚ್ಚು ಹೂಡಿಕೆಯಾಗಿದೆ.


**ಹೂಡಿಕೆ ದ್ವಿಗುಣಗೊಳಿಸುವ ಗುರಿಗೆ ಪೂರಕ:** ನವದೆಹಲಿಯಲ್ಲಿ ನಡೆದ SelectUSA ಆರಂಭಿಕ ಸಮಾರಂಭದಲ್ಲಿ ಮಾತನಾಡಿದ ಭಾರತಕ್ಕೆ ಅಮೆರಿಕಾದ ರಾಯಭಾರಿ ಸೆರ್ಗಿಯೋ ಗೋರ್, ಈ ಹೂಡಿಕೆಗಳು 2030ರ ವೇಳೆಗೆ ದ್ವಿಪಕ್ಷೀಯ ವ್ಯಾಪಾರವನ್ನು 500 ಶತಕೋಟಿ ಡಾಲರ್‌ಗೆ ದ್ವಿಗುಣಗೊಳಿಸುವ ಗುರಿಗೆ ಪೂರಕವಾಗಿದೆ ಎಂದು ಹೇಳಿದರು. "ನ್ಯಾಯಯುತ, ಸಮತೋಲಿತ ಮತ್ತು ಪರಸ್ಪರ ಪ್ರಯೋಜನಕಾರಿ ವ್ಯಾಪಾರವು ವಿಶ್ವದರ್ಜೆಯ ಹೂಡಿಕೆ ಮತ್ತು ಹಂಚಿಕೆಯ ಆರ್ಥಿಕ ಲಾಭಗಳಿಗೆ ಕಾರಣವಾಗುತ್ತಿದೆ" ಎಂದು ಅವರು ಒತ್ತಿಹೇಳಿದರು. ಅಮೆರಿಕಾದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೋ ಅವರು ಅಧಿಕಾರ ವಹಿಸಿಕೊಂಡ ನಂತರ ಮೊದಲ ಬಾರಿಗೆ ಭಾರತಕ್ಕೆ ಭೇಟಿ ನೀಡಲಿರುವ ಸಂದರ್ಭದಲ್ಲೇ ಈ ಬೆಳವಣಿಗೆಗಳು ನಡೆದಿವೆ. ಈ ಭೇಟಿಯು ವ್ಯೂಹಾತ್ಮಕ ಸಹಕಾರವನ್ನು ಹೆಚ್ಚಿಸುವತ್ತ ಗಮನಹರಿಸುವ ನಿರೀಕ್ಷೆಯಿದೆ, ಇದರಲ್ಲಿ ಭಾರತ ಆಯೋಜಿಸಲಿರುವ ಸಚಿವ ಮಟ್ಟದ ಕ್ವಾಡ್ ಸಭೆಯೂ ಸೇರಿದೆ.

ನವದೆಹಲಿಯೊಂದಿಗೆ ಸಂಬಂಧವನ್ನು ಬಲಪಡಿಸಲು ವಾಷಿಂಗ್ಟನ್ ಬದ್ಧವಾಗಿದೆ ಎಂದು ರಾಯಭಾರಿ ಗೋರ್ ಹೈಲೈಟ್ ಮಾಡಿದರು. ಉಭಯ ದೇಶಗಳ ಪಾಲುದಾರಿಕೆಯು "ಅದ್ಭುತ ಹಂತದಲ್ಲಿದೆ" ಎಂದು ಬಣ್ಣಿಸಿದರು.

# ಅಮೆರಿಕದೊಂದಿಗೆ ನ್ಯಾಯಯುತ ಶಾಂತಿ ಒಪ್ಪಂದಕ್ಕೆ ಇರಾನ್ ಆಶಯ: ಅಬ್ಬಾಸ್ ಅರಾಘ್ಚಿ

## ಚೀನಾ ತನ್ನ ಆಪ್ತಮಿತ್ರ ಎಂದು ಬಣ್ಣಿಸಿದ ಇರಾನ್ ವಿದೇಶಾಂಗ ಸಚಿವ

**ಬೀಜಿಂಗ್, ಮೇ 6:** ಅಮೆರಿಕದೊಂದಿಗಿನ ಶಾಂತಿ ಒಪ್ಪಂದವು "ನ್ಯಾಯಯುತ ಮತ್ತು ಸಮಗ್ರ"ವಾಗಿದ್ದರೆ ಮಾತ್ರ ಅದನ್ನು ಅಂಗೀಕರಿಸುವುದಾಗಿ ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಾಘ್ಚಿ ಹೇಳಿದ್ದಾರೆ.



ಚೀನಾ ವಿದೇಶಾಂಗ ಸಚಿವ ವಾಂಗ್ ಯಿ ಅವರೊಂದಿಗೆ ಬುಧವಾರ ಮಾತುಕತೆ ವೇಳೆ ಈಬಗ್ಗೆ ಹೇಳಿಕೆ ನೀಡಿದ್ದಾರೆ.

ಹಾರ್ಮುಜ್ ಜಲಸಂಧಿಯನ್ನು ಮರುಪ್ರಾರಂಭಿಸುವ ಗುರಿಯನ್ನು ಹೊಂದಿದ್ದ ನೌಕಾ ಕಾರ್ಯಾಚರಣೆ "ಪ್ರಾಜೆಕ್ಟ್ ಫ್ರೀಡಂ" ಅನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಸ್ಥಗಿತಗೊಳಿಸಿದ ನಂತರ ಅರಾಘ್ಚಿ ಅವರ ಈ ಹೇಳಿಕೆ ಬಂದಿದೆ. ಇರಾನ್ ಜೊತೆಗಿನ ಮಾತುಕತೆಯಲ್ಲಿ "ಅದ್ಭುತ ಪ್ರಗತಿ" ಕಂಡುಬಂದಿರುವುದೇ ಈ ತಾತ್ಕಾಲಿಕ ತಡೆಗೆ ಕಾರಣ ಎಂದು ಟ್ರಂಪ್ ಉಲ್ಲೇಖಿಸಿದ್ದಾರೆ, ಆದರೆ ಹೆಚ್ಚಿನ ವಿವರಗಳನ್ನು ನೀಡಿಲ್ಲ.

"ನಾವು ಕೇವಲ ನ್ಯಾಯಯುತ ಮತ್ತು ಸಮಗ್ರ ಒಪ್ಪಂದವನ್ನು ಮಾತ್ರ ಸ್ವೀಕರಿಸುತ್ತೇವೆ" ಎಂದಿರುವ ಅರಾಘ್ಚಿ ಅವರು, ಇರಾನ್ ವಿರುದ್ಧದ ಅಮೆರಿಕ ಮತ್ತು ಇಸ್ರೇಲ್ ಕ್ರಮಗಳನ್ನು ಖಂಡಿಸುವ ಚೀನಾದ ನಿಲುವನ್ನು ಶ್ಲಾಘಿಸಿದ್ದು, ಚೀನಾವನ್ನು ತನ್ನ ಆಪ್ತಮಿತ್ರ ಎಂದು ಬಣ್ಣಿಸಿದ್ದಾರೆ.

ಪ್ರಸ್ತುತ ಸಂದರ್ಭದಲ್ಲಿ ಉಭಯ ದೇಶಗಳ ನಡುವಿನ ಸಹಕಾರವು ಮತ್ತಷ್ಟು ಬಲಗೊಳ್ಳಲಿದೆ. ನಮ್ಮ ವಿರುದ್ಧ ಸಾರಲಾದ ಯುದ್ಧವು ಸ್ಪಷ್ಟವಾದ ಆಕ್ರಮಣಕಾರಿ ಕೃತ್ಯ ಮತ್ತು ಅಂತರರಾಷ್ಟ್ರೀಯ ಕಾನೂನಿನ ಉಲ್ಲಂಘನೆಯಾಗಿದೆ. ಮಾತುಕತೆಗಳಲ್ಲಿ ನಮ್ಮ ಕಾನೂನುಬದ್ಧ ಹಕ್ಕುಗಳು ಮತ್ತು ಹಿತಾಸಕ್ತಿಗಳನ್ನು ರಕ್ಷಿಸಲು ನಾವು ಶಕ್ತಿಮೀರಿ ಪ್ರಯತ್ನಿಸುತ್ತೇವೆ ಎಂದಿದ್ದಾರೆ.

**ಟ್ರಂಪ್ ಭೇಟಿಗೂ ಮುನ್ನ ಮಹತ್ವದ ಭೇಟಿ**

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಮೇ 15ರಂದು ಚೀನಾಕ್ಕೆ ಭೇಟಿ ನೀಡಲಿರುವ ಹಿನ್ನೆಲೆಯಲ್ಲಿ ಅರಾಗ್ಚಿ ಮತ್ತು ವಾಂಗ್ ಯಿ ನಡುವಿನ ಈ ಭೇಟಿಯು ಹೆಚ್ಚಿನ ಮಹತ್ವ ಪಡೆದಿದೆ. ಅಮೆರಿಕದೊಂದಿಗಿನ ಸಂಘರ್ಷಕ್ಕೆ ಪರಿಹಾರ ಕಂಡುಕೊಳ್ಳಲು ಮತ್ತು ಇರಾನ್‌ಗೆ ಬೆಂಬಲ ಕ್ರೋಢೀಕರಿಸಲು ಅರಾಘ್ಚಿ ಅವರು ಕೈಗೊಂಡಿರುವ ರಾಜತಾಂತ್ರಿಕ ಪ್ರವಾಸದ ಭಾಗವಾಗಿ ಈ ಭೇಟಿ ನಡೆದಿದೆ. ಚೀನಾವು ಈ ಬಿಕ್ಕಟ್ಟಿನಲ್ಲಿ ಪ್ರಮುಖ ಆದರೆ ಪರೋಕ್ಷ ಪಾತ್ರವನ್ನು ವಹಿಸಿದೆ. ಇರಾನ್‌ನ ಅತಿದೊಡ್ಡ ತೈಲ ಆಮದುದಾರ ರಾಷ್ಟ್ರವಾಗಿರುವ ಚೀನಾ, ಟೆಹ್ರಾನ್‌ಗೆ ಆರ್ಥಿಕ ಜೀವನಾಡಿ ಒದಗಿಸುವುದರ ಜೊತೆಗೆ ಸಂಘರ್ಷದ ಮಧ್ಯಸ್ಥಿಕೆಗೂ ಪ್ರಯತ್ನಿಸುತ್ತಿದೆ.

ಮತ್ತೊಂದೆಡೆ, ಚೀನಾ ವಿದೇಶಾಂಗ ಸಚಿವ ವಾಂಗ್ ಯಿ ಈ ಪ್ರದೇಶದಲ್ಲಿ ಸಂಪೂರ್ಣ ಕದನ ವಿರಾಮ ಸ್ಥಾಪಿಸುವ ತುರ್ತು ಅಗತ್ಯವನ್ನು ಒತ್ತಿಹೇಳಿದರು. "ಉದ್ವಿಗ್ನತೆಯನ್ನು ಕಡಿಮೆ ಮಾಡಲು ನಮ್ಮ ಪ್ರಯತ್ನಗಳನ್ನು ಮುಂದುವರಿಸಲು ನಾವು ಸಿದ್ಧರಿದ್ದೇವೆ. ಸಂಪೂರ್ಣ ಕದನ ವಿರಾಮ ಸ್ಥಾಪಿಸುವುದು ಅನಿವಾರ್ಯವಾಗಿದೆ," ಎಂದು ಅವರು ಹೇಳಿದರು.

ಇರಾನ್ ಮತ್ತು ಚೀನಾ ನಡುವಿನ ಸಂಬಂಧವು 2021 ರಲ್ಲಿ ಸಹಿ ಹಾಕಲಾದ 25 ವರ್ಷಗಳ ವ್ಯೂಹಾತ್ಮಕ ಪಾಲುದಾರಿಕೆ ಒಪ್ಪಂದದ ಆಧಾರದ ಮೇಲೆ ಮತ್ತಷ್ಟು ಬೆಳೆಯಲಿದೆ ಎಂದು ಅರಾಗ್ಚಿ ವಿಶ್ವಾಸ ವ್ಯಕ್ತಪಡಿಸಿದರು. ಅದೇ ಸಮಯದಲ್ಲಿ, ಹಾರ್ಮುಜ್ ಜಲಸಂಧಿಯನ್ನು ಮರುಪ್ರಾರಂಭಿಸಲು ಇರಾನ್ ಮೇಲೆ ಪ್ರಭಾವ ಬೀರಲು ಟ್ರಂಪ್ ಆಡಳಿತವು ಬೀಜಿಂಗ್ ಮೇಲೆ ಒತ್ತಡ ಹೇರುತ್ತಿದೆ ಎಂದು ವರದಿಯಾಗಿದೆ.

# ಇರಾನ್ ಜೊತೆ ಒಪ್ಪಂದದತ್ತ ಶ್ವೇತಭವನ ಪರಮಾಣು ಮಾತುಕತೆಗೆ ಮುನ್ನುಡಿ

**ವಾಷಿಂಗ್ಟನ್, ಮೇ 6:** ಇರಾನ್ ಜೊತೆಗಿನ ಯುದ್ಧವನ್ನು ಅಂತ್ಯಗೊಳಿಸುವ ಮತ್ತು ವಿಶಾಲವಾದ ಪರಮಾಣು ಮಾತುಕತೆಗಳಿಗೆ ದಾರಿ ಮಾಡಿಕೊಡುವ ನಿಟ್ಟಿನಲ್ಲಿ ಒಂದು ಪುಟದ ಅಲ್ಪಾವಧಿಯ ತಿಳಿವಳಿಕಾ ಒಪ್ಪಂದವನ್ನು ರೂಪಿಸಲು ಅಮೆರಿಕದ ಶ್ವೇತಭವನವು ಸಜ್ಜಾಗುತ್ತಿದೆ. ಅಮೆರಿಕದ ಅಧಿಕಾರಿಗಳು ಮತ್ತು ಈ ಚರ್ಚೆಗಳ ಬಗ್ಗೆ ವರದಿಯೊಂದು ತಿಳಿಸಿದೆ.

ಅಧಿಕಾರಿಗಳ ಪ್ರಕಾರ, ಮುಂದಿನ 48 ಗಂಟೆಗಳು ಬಹಳ ನಿರ್ಣಾಯಕವಾಗಿದ್ದು, ಪರಿಹರಿಸಲಾಗದ ಕೆಲವು ಅಂಶಗಳ ಬಗ್ಗೆ ಇರಾನ್ ನೀಡುವ ಪ್ರತಿಕ್ರಿಯೆಗಾಗಿ ವಾಷಿಂಗ್ಟನ್ ಕಾಯುತ್ತಿದೆ. ಇದುವರೆಗೆ ಏನೂ ಅಂತಿಮಗೊಂಡಿಲ್ಲವಾದರೂ, ಸಂಘರ್ಷ ಪ್ರಾರಂಭವಾದಾಗಿನಿಂದ ಉಭಯ ದೇಶಗಳ ನಡುವೆ ಒಪ್ಪಂದ ಏರ್ಪಡಲು ಕಂಡುಬಂದಿರುವ ಅತ್ಯಂತ ಸಕಾರಾತ್ಮಕ ಬೆಳವಣಿಗೆ ಇದಾಗಿದೆ ಎಂದು ಮೂಲಗಳು ತಿಳಿಸಿವೆ.

**ಕರಡು ಒಪ್ಪಂದದ ಪ್ರಮುಖ ಅಂಶಗಳು:**

ಇರಾನ್ ತನ್ನ ಯುರೇನಿಯಂ ಪುಷ್ಟೀಕರಣ ಪ್ರಕ್ರಿಯೆಯನ್ನು ದೀರ್ಘಕಾಲದವರೆಗೆ ಸ್ಥಗಿತಗೊಳಿಸಲು ಒಪ್ಪಿಕೊಳ್ಳಲಿದೆ. ಪ್ರತಿಯಾಗಿ ಅಮೆರಿಕವು ಇರಾನ್ ಮೇಲಿನ ನಿರ್ಬಂಧಗಳನ್ನು ಸಡಿಲಗೊಳಿಸಲಿದೆ ಮತ್ತು ಫ್ರೀಜ್ ಮಾಡಲಾದ ಶತಕೋಟಿ ಡಾಲರ್ ಮೊತ್ತದ ಇರಾನಿನ ಹಣವನ್ನು ಬಿಡುಗಡೆ ಮಾಡಲಿದೆ.

*ಕಳೆದ ಕೆಲವು ವಾರಗಳಿಂದ ತೀವ್ರ ಅಡಚಣೆ ಎದುರಿಸುತ್ತಿರುವ 'ಹಾರ್ಮುಜ್ ಜಲಸಂಧಿ'ಯಲ್ಲಿನ ಹಡಗು ಸಂಚಾರದ ಮೇಲಿನ ನಿರ್ಬಂಧಗಳನ್ನು ಎರಡೂ ದೇಶಗಳು ತೆಗೆದುಹಾಕಲಿವೆ.

ಪ್ರಸ್ತಾವಿತ 14-ಅಂಶಗಳ ಈ ಒಪ್ಪಂದದ ಕರಡನ್ನು ಟ್ರಂಪ್ ಅವರ ದೂತರಾದ ಸ್ಟೀವ್ ವಿಟ್ಕಾಫ್ ಮತ್ತು ಜೇರೆಡ್ ಕುಶ್ನರ್ ಅವರು ಇರಾನ್ ಅಧಿಕಾರಿಗಳೊಂದಿಗೆ ನೇರವಾಗಿ ಮತ್ತು ಮಧ್ಯಸ್ಥಗಾರರ ಮೂಲಕ ಮಾತುಕತೆ ನಡೆಸುತ್ತಿದ್ದಾರೆ. ಈ ಒಪ್ಪಂದವು ಪ್ರಸ್ತುತ ನಡೆಯುತ್ತಿರುವ ಯುದ್ಧವನ್ನು ಅಧಿಕೃತವಾಗಿ ಕೊನೆಗೊಳಿಸಲಿದೆ ಮತ್ತು 30 ದಿನಗಳ ಕಾಲ ಮಾತುಕತೆಯ ಅವಧಿಯನ್ನು ನಿಗದಿಪಡಿಸಲಿದೆ. ಈ ಅವಧಿಯಲ್ಲಿ ಇಸ್ಲಾಮಾಬಾದ್ ಅಥವಾ ಜಿನೀವಾದಲ್ಲಿ ಮಾತುಕತೆಗಳು ನಡೆಯುವ ಸಾಧ್ಯತೆಯಿದೆ.

ಯುರೇನಿಯಂ ಪುಷ್ಟೀಕರಣ ಸ್ಥಗಿತದ ಅವಧಿಯ ಬಗ್ಗೆ ಉಭಯ ದೇಶಗಳ ನಡುವೆ ಭಿನ್ನಾಭಿಪ್ರಾಯವಿದೆ. ಅಮೆರಿಕವು 20 ವರ್ಷಗಳ ಅವಧಿಗೆ ಒತ್ತಾಯಿಸುತ್ತಿದ್ದರೆ, ಇರಾನ್ 5 ವರ್ಷಗಳ ಪ್ರಸ್ತಾಪ ಮುಂದಿಟ್ಟಿದೆ. ಪ್ರಸ್ತುತ 12ರಿಂದ 15 ವರ್ಷಗಳ ಅವಧಿಯ ಬಗ್ಗೆ ಚರ್ಚೆ ನಡೆಯುತ್ತಿದೆ. ಅಲ್ಲದೆ, ಇರಾನ್ ಎಂದಿಗೂ ಪರಮಾಣು ಶಸ್ತ್ರಾಸ್ತ್ರಗಳನ್ನು ಹೊಂದುವುದಿಲ್ಲ ಮತ್ತು ತನ್ನ ಯುರೇನಿಯಂ ಅನ್ನು ಕೇವಲ ನಾಗರಿಕ ಉದ್ದೇಶಗಳಿಗಾಗಿ (ಗರಿಷ್ಠ 3.67 ಪ್ರತಿಶತ) ಬಳಸುವುದಾಗಿ ಒಪ್ಪಿಕೊಳ್ಳಬೇಕಿದೆ.

# ಹೊಸಶಕ್ತಿ ಸಮತೋಲನ ವ್ಯವಸ್ಥೆಯಡಿ ಹಾರ್ಮುಜ್ ಜಲಸಂಧಿಯ ಸಂಚಾರ

**ಟೆಹ್ರಾನ್, ಮೇ 6:** ಹಾರ್ಮುಜ್ ಜಲಸಂಧಿಯಲ್ಲಿನ ಹಡಗು ಸಂಚಾರವನ್ನು ಇನ್ನು ಮುಂದೆ ಹೊಸ ವ್ಯವಸ್ಥೆಯಡಿ ನಿರ್ವಹಿಸಲಾಗುವುದು. ಇದು ಈ ಪ್ರದೇಶದ "ಹೊಸ ಶಕ್ತಿ ಸಮತೋಲನ ಮತ್ತು ಭದ್ರತಾ ಪರಿಗಣನೆಗಳನ್ನು ಪ್ರತಿಬಿಂಬಿಸಲಿದೆ". ಈ ನಿರ್ಣಾಯಕ ಜಲಮಾರ್ಗವನ್ನು ನಿಯಂತ್ರಿಸುವಲ್ಲಿ ನೆರೆಯ ರಾಷ್ಟ್ರಗಳಾದ ಇರಾನ್ ಮತ್ತು ಓಮನ್ ಪ್ರಮುಖ ಪಾತ್ರ ವಹಿಸಲಿವೆ ಎಂದು ಇರಾನ್‌ನ ಸರ್ಕಾರಿ ಸುದ್ದಿ ಸಂಸ್ಥೆ ತಿಳಿಸಿದೆ.


ಇರ್ನಾ ವರದಿಯ ಪ್ರಕಾರ, ಪಶ್ಚಿಮ ಏಷ್ಯಾದ ಯುದ್ಧಪೀಡಿತ ಪರಿಸ್ಥಿತಿ ಸ್ಥಿರಗೊಂಡ ನಂತರ ಸಮುದ್ರ ಸಂಚಾರವನ್ನು ನಿರ್ವಹಿಸಲು, ಸುರಕ್ಷಿತ ಸಂಚಾರ ಖಚಿತಪಡಿಸಲು ಮತ್ತು ಹಡಗುಗಳ ಸಂಚಾರಕ್ಕಾಗಿ ಸಂಯೋಜಿತ ಪ್ರೋಟೋಕಾಲ್‌ಗಳನ್ನು ಪರಿಚಯಿಸಲು ಜಂಟಿ ಕಾರ್ಯವಿಧಾನಗಳ ಬಗ್ಗೆ ಟೆಹ್ರಾನ್ ಮತ್ತು ಮಸ್ಕತ್ ಅಧಿಕಾರಿಗಳು ಈಗಾಗಲೇ ಚರ್ಚಿಸಿದ್ದಾರೆ.

ಈ ನಿರ್ವಹಣಾ ವ್ಯವಸ್ಥೆಯ ಪ್ರಸ್ತಾವನೆಗಳನ್ನು ಹಡಗು ಸಂಚಾರದ ಭದ್ರತೆ ಮತ್ತು ಸಂಘಟನೆಯನ್ನು ಸುಧಾರಿಸುವ ಪ್ರಯತ್ನಗಳೆಂದು ಇರಾನ್ ಮಾಧ್ಯಮಗಳು ಬಿಂಬಿಸಿವೆ. ಫೆಬ್ರವರಿ 28 ರಂದು ಇಸ್ಲಾಮಿಕ್ ರಿಪಬ್ಲಿಕ್ ವಿರುದ್ಧ ಅಮೆರಿಕ ಮತ್ತು ಇಸ್ರೇಲ್ ಜಂಟಿ ದಾಳಿ ನಡೆಸುವ ಮೊದಲು ಈ ಜಲಮಾರ್ಗದಲ್ಲಿ ಸಂಚಾರವು ಸಂಪೂರ್ಣವಾಗಿ ಮುಕ್ತವಾಗಿತ್ತು.

ವರದಿಯ ಪ್ರಕಾರ, ಇರಾನ್ ಹಾರ್ಮುಜ್ ಜಲಸಂಧಿಯನ್ನು ತನ್ನ ರಾಷ್ಟ್ರೀಯ ಭದ್ರತೆಗೆ ಆಯಕಟ್ಟಿನ ರೀತಿಯಲ್ಲಿ ಸಂಬಂಧಿಸಿದೆ ಎಂದು ಪರಿಗಣಿಸುತ್ತದೆ. ಆದ್ದರಿಂದ, ಈ ಜಲಮಾರ್ಗಕ್ಕಾಗಿ ಯಾವುದೇ ದೀರ್ಘಕಾಲೀನ ಆಡಳಿತ ಯೋಜನೆಗಳು ಅಥವಾ ಹೊಸ ಕಾರ್ಯಾಚರಣೆಯ ರಚನೆಯನ್ನು ಪ್ರಾದೇಶಿಕ ಮಾತುಕತೆಯ ಮೂಲಕ, ವಿಶೇಷವಾಗಿ ನೆರೆಯ ಕರಾವಳಿ ರಾಜ್ಯಗಳೊಂದಿಗೆ ಚರ್ಚಿಸಿ ನಿರ್ಧರಿಸಬೇಕು ಎಂದು ಇರಾನ್ ಅಭಿಪ್ರಾಯಪಟ್ಟಿದೆ.

# ಪ್ರಾಜೆಕ್ಟ್ ಫ್ರೀಡಂ ತಾತ್ಕಾಲಿಕ ಸ್ಥಗಿತ ಅಮೆರಿಕ ಅಧ್ಯಕ್ಷ ಟ್ರಂಪ್ ಘೋಷಣೆ

**ವಾಷಿಂಗ್ಟನ್, ಮೇ 6:** ಇರಾನ್ ವಿಧಿಸಿರುವ ದಿಗ್ಬಂಧನವನ್ನು ಬದಿಗಿಟ್ಟು ಹಾರ್ಮುಜ್ ಜಲಸಂಧಿಯ ಮೂಲಕ ವಾಣಿಜ್ಯ ಹಡಗುಗಳಿಗೆ ದಾರಿ ಮಾಡಿಕೊಡುವ ಹೊಸ ಮಿಲಿಟರಿ ಕಾರ್ಯಾಚರಣೆ ಪ್ರಾಜೆಕ್ಟ್ ಫ್ರೀಡಂ ಅನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿರುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮಂಗಳವಾರ ತಡರಾತ್ರಿ ತಿಳಿಸಿದ್ದಾರೆ. ಇರಾನ್ ಅಧಿಕಾರಿಗಳೊಂದಿಗೆ ವಾಷಿಂಗ್ಟನ್ ಒಪ್ಪಂದ ಮಾಡಿಕೊಳ್ಳಲು ಸಾಧ್ಯವೇ ಎಂದು ಪರಿಶೀಲಿಸಲು ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಹೇಳಿದ್ದಾರೆ.



ತಮ್ಮ 'ಟ್ರೂತ್ ಸೋಶಿಯಲ್' ಜಾಲತಾಣದಲ್ಲಿ ಈ ಬಗ್ಗೆ ಘೋಷಿಸಿದ ಟ್ರಂಪ್, ವಾಷಿಂಗ್ಟನ್ ಮತ್ತು ಟೆಹ್ರಾನ್ ನಡುವೆ "ಸಂಪೂರ್ಣ ಮತ್ತು ಅಂತಿಮ ಒಪ್ಪಂದದತ್ತ ಉತ್ತಮ ಪ್ರಗತಿ" ಕಂಡುಬರುತ್ತಿರುವ ಹಿನ್ನೆಲೆಯಲ್ಲಿ "ಅಲ್ಪ ಅವಧಿಗೆ" ಈ ಕಾರ್ಯಾಚರಣೆಯನ್ನು ತಡೆಹಿಡಿಯಲಾಗಿದೆ ಎಂದು ತಿಳಿಸಿದ್ದಾರೆ. ಅಮೆರಿಕ ಮತ್ತು ಇರಾನ್ ನಡುವೆ ಮಧ್ಯಸ್ಥಿಕೆ ವಹಿಸುತ್ತಿರುವ ಪಾಕಿಸ್ತಾನದ ಮನವಿಯ ಮೇರೆಗೆ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಅವರು ಹೇಳಿದರು. ಪ್ರಾಜೆಕ್ಟ್ ಫ್ರೀಡಂ ಅನ್ನು ಸ್ಥಗಿತಗೊಳಿಸಿದ ಹೊರತಾಗಿಯೂ, ಇರಾನ್ ಬಂದರುಗಳ ಮೇಲೆ ಅಮೆರಿಕ ನೌಕಾಪಡೆಯು ವಿಧಿಸಿರುವ ದಿಗ್ಬಂಧನವು ಬದಲಾಗದೆ ಮುಂದುವರಿಯಲಿದೆ ಎಂದು ಟ್ರಂಪ್ ಸ್ಪಷ್ಟಪಡಿಸಿದರು.

ಪ್ರಾಜೆಕ್ಟ್ ಫ್ರೀಡಂ ಅನ್ನು ಟ್ರಂಪ್ ಭಾನುವಾರ ತಡರಾತ್ರಿ ಅನಾವರಣಗೊಳಿಸಿದ್ದರು ಮತ್ತು ಇದು ಸೋಮವಾರ ಬೆಳಗ್ಗೆಯಿಂದ ಜಾರಿಗೆ ಬಂದಿತ್ತು. ವಿಶ್ವದ ತೈಲದ ಐದನೇ ಒಂದು ಭಾಗವನ್ನು ಸಾಗಿಸುವ 21 ಮೈಲಿ ಅಗಲದ ಹಾರ್ಮುಜ್ ಜಲಸಂಧಿಯಲ್ಲಿ ವಾಣಿಜ್ಯ ಹಡಗುಗಳ ಸಂಚಾರಕ್ಕೆ ಸಹಾಯ ಮಾಡುವುದು ಈ ಯೋಜನೆಯ ಉದ್ದೇಶವಾಗಿತ್ತು.

ಫೆಬ್ರವರಿ 28 ರಿಂದ ಇರಾನ್ ವಿರುದ್ಧ ಅಮೆರಿಕ ಮತ್ತು ಇಸ್ರೇಲ್ ಜಂಟಿ ದಾಳಿ ಆರಂಭಿಸಿದಾಗಿನಿಂದ, ಇರಾನ್ ತನ್ನ ನಿಲುವನ್ನು ಕಠಿಣಗೊಳಿಸಿದೆ ಮತ್ತು ಹಡಗು ಸಂಚಾರವು ಕುಸಿದಿದೆ, ಇದರಿಂದಾಗಿ ಜಾಗತಿಕ ತೈಲ ಬೆಲೆಗಳು ಗಗನಕ್ಕೇರಿವೆ.

ಕಾರ್ಯಾಚರಣೆ ಆರಂಭವಾದ ಬೆನ್ನಲ್ಲೇ ಅಮೆರಿಕದ ಸಶಸ್ತ್ರ ಪಡೆಗಳು ಎರಡು ಅಮೆರಿಕನ್ ಧ್ವಜ ಹೊಂದಿರುವ ಹಡಗುಗಳು ಜಲಸಂಧಿಯನ್ನು ದಾಟಲು ಸಹಾಯ ಮಾಡಿದ್ದವು ಎಂದು ಸೆಂಟ್ಕಾಮ್ ತಿಳಿಸಿದೆ. ಪರ್ಷಿಯನ್ ಕೊಲ್ಲಿಯಲ್ಲಿ ಸಿಲುಕಿರುವ ಇತರ ಹಡಗು ಸಂಸ್ಥೆಗಳನ್ನು ಸಂಪರ್ಕಿಸಿರುವ ಮಿಲಿಟರಿಯು, ಅವರನ್ನು ಸಂಘರ್ಷದಲ್ಲಿ "ತಟಸ್ಥ ಮತ್ತು ನಿರಪರಾಧಿಗಳು" ಎಂದು ಬಣ್ಣಿಸಿದೆ.

ಇರಾನ್ ಅಧಿಕಾರಿಗಳು ಈ 'ಪ್ರಾಜೆಕ್ಟ್ ಫ್ರೀಡಂ' ಅನ್ನು ತೀವ್ರವಾಗಿ ಟೀಕಿಸಿದ್ದು, ಇದನ್ನು "ಪ್ರಾಜೆಕ್ಟ್ ಡೆಡ್ಲಾಕ್" ಎಂದು ವ್ಯಂಗ್ಯವಾಡಿದ್ದಾರೆ. ಅಲ್ಲದೆ, ಇದು ಕದನ ವಿರಾಮದ ಉಲ್ಲಂಘನೆಯಾಗಿದೆ ಎಂದು ಹೇಳಿರುವ ಇರಾನ್, ತಮ್ಮ ಅನುಮತಿಯಿಲ್ಲದೆ ಜಲಸಂಧಿಯನ್ನು ದಾಟಲು ಪ್ರಯತ್ನಿಸುವ ಯಾವುದೇ ಹಡಗನ್ನು ಗುರಿಯಾಗಿಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.


ಆದರೆ, ಅಮೆರಿಕದ ಅಧಿಕಾರಿಗಳ ಪ್ರಕಾರ ಕದನ ವಿರಾಮವು ಇನ್ನೂ ಜಾರಿಯಲ್ಲಿದೆ. ರಕ್ಷಣಾ ಕಾರ್ಯದರ್ಶಿ ಪೀಟ್ ಹೆಗ್ಸೆತ್ ಈ ಬಗ್ಗೆ ಮಾತನಾಡಿ, "ಕದನ ವಿರಾಮವು ಮುಗಿದಿಲ್ಲ" ಎಂದು ಹೇಳಿದ್ದರೆ, ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೋ ಅವರು ಪ್ರಾಜೆಕ್ಟ್ ಫ್ರೀಡಂ ಸಂಪೂರ್ಣವಾಗಿ "ರಕ್ಷಣಾತ್ಮಕ ಕಾರ್ಯಾಚರಣೆ" ಎಂದು ತಿಳಿಸಿದ್ದಾರೆ.

# ಕ್ಷಿಪಣಿ ಬಳಕೆ ಕುರಿತು ಜಪಾನ್‌ಗೆ ಚೀನಾ ಎಚ್ಚರಿಕೆ; ಮರುಸೇನಾಕರಣದ ಬಗ್ಗೆ ಕಳವಳ

**ಬೀಜಿಂಗ್, ಮೇ 6:** ಜಂಟಿ ಕಡಲ ವ್ಯಾಯಾಮದ ವೇಳೆ ಜಪಾನ್ 'ಟೈಪ್ 88' ಕ್ಷಿಪಣಿಗಳನ್ನು ಉಡಾವಣೆ ಮಾಡಿದ್ದನ್ನು ಚೀನಾ ತೀವ್ರವಾಗಿ ಟೀಕಿಸಿದೆ. ಟೋಕಿಯೊದ ಈ ಕ್ರಮಗಳು ಯುದ್ಧೋತ್ತರ ಭದ್ರತಾ ನೀತಿಯಿಂದ ಅಪಾಯಕಾರಿ ಪಲ್ಲಟವನ್ನು ಸೂಚಿಸುತ್ತಿವೆ ಎಂದು ಎಚ್ಚರಿಸಿದೆ.

ಪತ್ರಿಕಾಗೋಷ್ಠಿಯಲ್ಲಿ ಬುಧವಾರ ಮಾತನಾಡಿದ ವಿದೇಶಾಂಗ ಸಚಿವಾಲಯದ ವಕ್ತಾರ ಲಿನ್ ಜಿಯಾನ್, ಜಪಾನ್ ಅನ್ನು "ಆಕ್ರಮಣಕಾರಿ ರಾಷ್ಟ್ರ" ಎಂದು ಕರೆದರು. "ಜಪಾನ್ ತನ್ನ ಐತಿಹಾಸಿಕ ಅಪರಾಧಗಳ ಬಗ್ಗೆ ಆಳವಾಗಿ ಪಶ್ಚಾತ್ತಾಪ ಪಡುವಲ್ಲಿ ವಿಫಲವಾಗಿದೆ. ಭದ್ರತಾ ಸಹಕಾರದ ನೆಪದಲ್ಲಿ ಅದು ವಿದೇಶಗಳಿಗೆ ಮಿಲಿಟರಿ ಪಡೆಗಳನ್ನು ಕಳುಹಿಸಿದೆ ಮತ್ತು ಆಕ್ರಮಣಕಾರಿ ಕ್ಷಿಪಣಿಗಳನ್ನು ಉಡಾವಣೆ ಮಾಡಿದೆ ಎಂದು ಹೇಳಿದರು.

ಜಪಾನ್‌ನ ಈ ಕ್ರಮವು ಅಲ್ಲಿನ ಬಲಪಂಥೀಯ ಶಕ್ತಿಗಳು ಜಪಾನ್ ಅನ್ನು ವೇಗವಾಗಿ ಮರುಸೇನಾಕರಣ ಮಾಡಲು ಪ್ರಯತ್ನಿಸುತ್ತಿರುವುದನ್ನು ಪ್ರತಿಬಿಂಬಿಸುತ್ತದೆ. ಜಂಟಿ ಸಮರಾಭ್ಯಾಸದ ಸಮಯದಲ್ಲಿ ಜಪಾನ್ ಆಕ್ರಮಣಕಾರಿ ಕ್ಷಿಪಣಿಗಳನ್ನು ಹಾರಿಸಿದ್ದು ಅದರ ರಕ್ಷಣಾತ್ಮಕ ನೀತಿಯ ಉಲ್ಲಂಘನೆಯಾಗಿದೆ ಮತ್ತು ಬೆಳೆಯುತ್ತಿರುವ ಮಿಲಿಟರೀಕರಣದ ಬಗ್ಗೆ ಗಂಭೀರ ಕಳವಳವನ್ನು ಉಂಟುಮಾಡಿದೆ. ಈ ಕ್ರಮವನ್ನು ಅವರು "ನವ-ಸೇನಾ ಸಿದ್ಧಾಂತ"ದ ಪುನರುತ್ಥಾನ ಎಂದು ಬಣ್ಣಿಸಿದ ಲಿನ್ ಜಿಯಾನ್ ಬಣ್ಣಿಸಿದರು ಮತ್ತು ಇಂತಹ ಬೆಳವಣಿಗೆಗಳು ಪ್ರಾದೇಶಿಕ ಶಾಂತಿ ಮತ್ತು ಸ್ಥಿರತೆಯನ್ನು ಹಾಳುಮಾಡಬಹುದು ಎಂದು ಎಚ್ಚರಿಸಿದರು.



"ಜಪಾನ್ ತನ್ನ ಮಿಲಿಟರಿ ಆಕ್ರಮಣದ ಇತಿಹಾಸವನ್ನು ಆಳವಾಗಿ ಮೆಲುಕು ಹಾಕಬೇಕು, ತನ್ನ ಬದ್ಧತೆಗಳನ್ನು ಗೌರವಿಸಬೇಕು ಮತ್ತು ಮಿಲಿಟರಿ ಹಾಗೂ ಭದ್ರತಾ ಕ್ಷೇತ್ರಗಳಲ್ಲಿ ವಿವೇಕದಿಂದ ವರ್ತಿಸಬೇಕು," ಎಂದು ಅವರು ಒತ್ತಾಯಿಸಿದರು.

ಐತಿಹಾಸಿಕ ಸಂದರ್ಭವನ್ನು ಉಲ್ಲೇಖಿಸಿದ ಲಿನ್, ಏಷ್ಯಾದಲ್ಲಿ ತನ್ನ ಹಿಂದಿನ ಆಕ್ರಮಣಕಾರಿ ನಡವಳಿಕೆಯನ್ನು ಜಪಾನ್ ಇನ್ನೂ ಸಂಪೂರ್ಣವಾಗಿ ಒಪ್ಪಿಕೊಂಡಿಲ್ಲ ಎಂದು ಹೇಳಿದರು. ಟೋಕಿಯೊ ತನ್ನ ಇತಿಹಾಸವನ್ನು ಪ್ರತಿಬಿಂಬಿಸಲು, ತನ್ನ ಬದ್ಧತೆಗಳಿಗೆ ಬದ್ಧವಾಗಿರಲು ಮತ್ತು ಮಿಲಿಟರಿ ವಿಷಯಗಳಲ್ಲಿ ಸಂಯಮ ಕಾಯ್ದುಕೊಳ್ಳಲು ಅವರು ಆಗ್ರಹಿಸಿದರು.

ಬುಧವಾರ ಅಮೆರಿಕ, ಆಸ್ಟ್ರೇಲಿಯಾ ಮತ್ತು ಫಿಲಿಪ್ಪೀನ್ಸ್ ಪಡೆಗಳೊಂದಿಗೆ ನಡೆದ ಜಂಟಿ ಕಡಲ ವ್ಯಾಯಾಮದಲ್ಲಿ ಜಪಾನ್‌ನ ಆತ್ಮರಕ್ಷಣಾ ಪಡೆಗಳು 'ಟೈಪ್ 88' ಹಡಗು ವಿರೋಧಿ ಕ್ಷಿಪಣಿಯನ್ನು ಹಾರಿಸಿದ್ದವು. ಇದು ದಕ್ಷಿಣ ಚೀನಾ ಸಮುದ್ರಕ್ಕೆ ಮುಖಮಾಡಿರುವ ನೀರಿನಲ್ಲಿ ಫಿಲಿಪೈನ್ಸ್ ನೌಕಾಪಡೆಯ ನಿವೃತ್ತ ಹಡಗಿಗೆ ಯಶಸ್ವಿಯಾಗಿ ಅಪ್ಪಳಿಸಿತ್ತು. ಮಿಲಿಟರಿ ರಫ್ತು ಮೇಲಿನ ನಿರ್ಬಂಧಗಳನ್ನು ರದ್ದುಗೊಳಿಸುವ ಜಪಾನ್ ನಿರ್ಧಾರದ ನಂತರ, ಮನಿಲಾ ಮತ್ತು ಟೋಕಿಯೊ ನಡುವೆ ಸಂಭಾವ್ಯ ರಕ್ಷಣಾ ಸಲಕರಣೆಗಳ ವರ್ಗಾವಣೆಯ ಕುರಿತು ಮಾತುಕತೆ ಆರಂಭವಾಗಿರುವ ಬೆನ್ನಲ್ಲೇ ಈ ಸಮರಾಭ್ಯಾಸ ನಡೆದಿದೆ.

ಪ್ರತ್ಯೇಕವಾಗಿ, ರಷ್ಯಾಕ್ಕೆ ಡ್ರೋನ್ ಘಟಕಗಳನ್ನು ಪೂರೈಸಿದ ಆರೋಪದ ಮೇಲೆ ಚೀನಾ ಮೂಲದ ಎರಡು ಸಂಸ್ಥೆಗಳು ಸೇರಿದಂತೆ ವಿವಿಧ ಘಟಕಗಳ ಮೇಲೆ ಯುನೈಟೆಡ್ ಕಿಂಗ್ಡಮ್ ಇತ್ತೀಚೆಗೆ ಹೇರಿರುವ ನಿರ್ಬಂಧಗಳನ್ನು ಚೀನಾ ಟೀಕಿಸಿದೆ. ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಅಧಿಕಾರವಿಲ್ಲದ ಏಕಪಕ್ಷೀಯ ನಿರ್ಬಂಧಗಳನ್ನು ಬೀಜಿಂಗ್ ವಿರೋಧಿಸುತ್ತದೆ ಮತ್ತು ಈ ಬಗ್ಗೆ ಲಂಡನ್ನೊಂದಿಗೆ ಅಧಿಕೃತ ಪ್ರತಿಭಟನೆ ದಾಖಲಿಸಿದೆ ಎಂದು ಲಿನ್ ಹೇಳಿದರು. ಚೀನಾವು ಉಭಯ-ಬಳಕೆಯ ರಫ್ತುಗಳ ಮೇಲೆ ಕಟ್ಟುನಿಟ್ಟಾದ ನಿಯಂತ್ರಣವನ್ನು ಹೊಂದಿದೆ ಮತ್ತು ಚೀನಾ-ರಷ್ಯಾ ನಡುವಿನ ಸಾಮಾನ್ಯ ಆರ್ಥಿಕ ಸಹಕಾರಕ್ಕೆ ಅಡ್ಡಿಪಡಿಸಬಾರದು ಎಂದು ಅವರು ಪುನರುಚ್ಚರಿಸಿದರು. ತನ್ನ ಕಂಪನಿಗಳ ಕಾನೂನುಬದ್ಧ ಹಕ್ಕುಗಳು ಮತ್ತು ಹಿತಾಸಕ್ತಿಗಳನ್ನು ರಕ್ಷಿಸಲು ಬೀಜಿಂಗ್ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುತ್ತದೆ ಎಂದು ಅವರು ತಿಳಿಸಿದರು.